ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 28 ಶುಕ್ರವಾರ 2023

ಸಂಪುಟ: 44 | ಸಂಚಿಕೆ: 13 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕಾಂಗ್ರೆಸ್ಸೇ ಗ್ಯಾರಂಟಿ ಇಲ್ಲ

- ಅಸ್ತಿತ್ವ ಕಳೆದುಕೊಳ್ಳುತ್ತಿರುವ 'ಕೈ' ಕೊನೆ ಅಸ್ತ್ರ 'ಗ್ಯಾರಂಟಿಗಳು'; ಪ್ರಧಾನಿ ಮೋದಿ ಎಚ್ಚರಿಕೆ ಸಂದೇಶ
- ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದ 50 ಲಕ್ಷ ಬಿಜೆಪಿ ಕಾರ್ಯಕರ್ತರೊಂದಿಗೆ ಸಂವಾದ
- ಡಬಲ್ ಇಂಜಿನ್ ಸರ್ಕಾರದಿಂದ ಕರ್ನಾಟಕದಲ್ಲಿ ಸಾಕಷ್ಟು ಅಭಿವೃದ್ಧಿ ಲಾಭ





ಪ್ರಧಾನಮಂತ್ರಿ ನರೇಂದ್ರ ಮೋದಿ ರಾಜ್ಯದ 50 ಲಕ್ಷ ಬಿಜೆಪಿ ಕಾರ್ಯಕರ್ತರೊಂದಿಗೆ ವರ್ಚುವಲ್ ಸಂವಾದ ನಡೆಸಿದರು. ಮೈಸೂರಿನ ಕುವೆಂಪುನಗರದ ಸಾಮ್ರಾಟ್ ಕಲ್ಯಾಣಮಂಟಪದಲ್ಲಿ ನಡೆದಂತಹ ಈ ಸಂಬಂಧಿತ ಕಾರ್ಯಕ್ರಮದಲ್ಲಿ ಬೂತ್ ಮಟ್ಟದ ಕಾರ್ಯಕರ್ತರು, ಬಿಜೆಪಿ ಅಭ್ಯರ್ಥಿಗಳು, ಶಾಸಕರು ಮತ್ತು ಮುಖಂಡರು ಪಾಲ್ಗೊಂಡು ಪ್ರಧಾನಿಯವರ ವಿಜಯದ ಮಂತ್ರವನ್ನು ಆಲಿಸಿದರು.

ಬೆಂಗಳೂರು, ಏ.27(ಕೆಎಂಶಿ)–ಕಾಂಗ್ರೆಸ್ ಪಕ್ಷ ತನ್ನ ಅಸ್ತಿತ್ವವನ್ನೇ ಕಳೆದುಕೊಳ್ಳುತ್ತಿದ್ದು, ಅದು ಕೊಡುವ ಗ್ಯಾರಂಟಿಗಳಿಗೆ ಯಾವ ಬೆಲೆ ಇದೆ ಎಂದು ಪ್ರಧಾನಿ ನರೇಂದ್ರ ಮೋದಿ ಲೇವಡಿ ಮಾಡಿದ್ದಾರೆ.

ಕರ್ನಾಟಕ ವಿಧಾನಸಭಾ ಚುನಾವಣಾ ಹಿನ್ನೆಲೆಯಲ್ಲಿ ಉಚಿತ ಕೊಡುಗೆಗಳ ಮೇಲೆ ವಾಗ್ದಾಳಿ ನಡೆಸಿ, ಈ ಕೊಡುಗೆಗಳು ದೇಶದ ಭವಿಷ್ಯವನ್ನು ಹಾಳು ಮಾಡುತ್ತವೆ. ಮುಂದಿನ ಪೀಳಿಗೆಗೆ ಮಾರಕ ಎಂದು ಜರಿದರು. ವಿಧಾನಸಭಾ ಚುನಾವಣಾ ಹಿನ್ನೆಲೆಯಲ್ಲಿ ರಾಜ್ಯದ 50 ಲಕ್ಷ ಬಿಜೆಪಿ ಕಾರ್ಯಕರ್ತರ ಜೊತೆಗೆ ವರ್ಚುವಲ್ ಸಂವಾದ ನಡೆಸಿದ ಮೋದಿ ಅವರು, ಕಾಂಗ್ರೆಸ್ ಹಲವು ಗ್ಯಾರಂಟಿಗಳನ್ನು ಘೋಷಣೆ ಮಾಡಿದೆ. ಆದರೆ ಅವು ಈಡೇರುವುದಿಲ್ಲ ಎಂದರು. ಉಚಿತ ಯೋಜನೆಗಳನ್ನು ನೀಡುವುದರ ಮೂಲಕ ರಾಜಕಾರಣಿಗಳು ಜೇಬು ತುಂಬಿಕೊಳ್ಳುವ ಕೆಲಸ ಮಾಡುತ್ತಾರೆ. ಇವು ಭ್ರಷ್ಟಾಚಾರಕ್ಕೆ ದಾರಿ ಮಾಡಿಕೊಡುತ್ತದೆ. ಈ ಉಚಿತ ಯೋಜನೆಗಳ ಮೂಲಕ ರಾಷ್ಟ್ರದ ಯುವ ಸಮೂಹದ ಭವಿಷ್ಯವನ್ನು ಹಾಳು ಮಾಡುತ್ತಾರೆ. ಈ ಬಗ್ಗೆ ಅವರಿಗೆ ಚಿಂತೆಯೇ ಇಲ್ಲ ಎಂದು ತರಾಟೆಗೆ ತೆಗೆದುಕೊಂಡರು.

ಸಂವಾದ ಸಂದರ್ಭದಲ್ಲಿ ಕಾರ್ಯಕರ್ತರ ಪ್ರಶ್ನೆಗಳಿಗೆ ಸಾವಧಾನದಿಂದ ಉತ್ತರಿಸಿ, ಡಬಲ್ ಇಂಜಿನ್ ಸರ್ಕಾರದ ಉಪಯೋಗವನ್ನು ಎಳೆ ಎಳೆಯಾಗಿ ಬಿಡಿಸಿಟ್ಟು ಕಾಂಗ್ರೆಸ್‌ಗೆ ಅಧಿಕಾರ ನೀಡಿದರೆ, ಏನಾಗುತ್ತದೆ ಎಂದು ರಾಜ್ಯದ ಜನರಿಗೆ ವಿವರಿಸಿದರು. ಬಿಜೆಪಿ ಎಂದೂ ಶಾರ್ಟ್‌ಕಟ್ ಹಾದಿಯಲ್ಲಿ ಸಾಗುವುದಿಲ್ಲ. ನಮಗೆ ರಾಷ್ಟ್ರದ ಭವಿಷ್ಯ ಮುಖ್ಯ. ನಮ್ಮ ಕನಸು ದೇಶದ ಭವ್ಯ ಭವಿಷ್ಯ. ನಾವು ಮುಂದಿನ ● 9ನೇ ಪುಟಕ್ಕೆ

ಕಾಂಗ್ರೆಸ್ 5ನೇ ಗ್ಯಾರಂಟಿ: ಬಸ್‌ಗಳಲ್ಲಿ ನಾರಿಯರಿಗೆ ಉಚಿತ ಪ್ರಯಾಣ





ಮಂಗಳೂರು, ಏ.27–ಈ ಬಾರಿಯ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷದ ಐದನೇ ಗ್ಯಾರಂಟಿ ಯೋಜನೆ ಘೋಷಣೆ ಮಾಡಿದ್ದು, ಸಾರ್ವಜನಿಕ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸುವುದಾಗಿ ತಿಳಿಸಿದೆ. ಮಂಗಳೂರಿನಲ್ಲಿ ಗುರುವಾರ ನಡೆದ ಕಾಂಗ್ರೆಸ್ ಪ್ರಚಾರ ಸಮಾವೇಶದಲ್ಲಿ ರಾಹುಲ್ ಗಾಂಧಿ 5ನೇ ಗ್ಯಾರಂಟಿಯನ್ನು ಘೋಷಣೆ ಮಾಡಿದರು. ಬಳಿಕ ಮಾತನಾಡಿದ ರಾಹುಲ್ ಗಾಂಧಿ, ಮೋದಿಯವರೇ ನಮ್ಮ ಗ್ಯಾರಂಟಿ ಯೋಜನೆಗಳು ಜಾರಿಯಾಗುವುದಿಲ್ಲ ಎಂದು ಹೇಳಿದ್ದೀರಿ. ಈ ಸಂದರ್ಭದಲ್ಲಿ ನಿಮಗೆ ಒಂದು ಸವಾಲು ಹಾಕುತ್ತಿದ್ದೇನೆ. ನಮ್ಮ ಸರ್ಕಾರ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದ್ದು, ನಾವು ನಮ್ಮ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುತ್ತೇವೆ. ನಾವು ಈ ಯೋಜನೆಗಳನ್ನು ಜಾರಿ ಮಾಡಿದ ನಂತರ ನೀವು ದೇಶದಲ್ಲಿ ಈ ಯೋಜನೆಗಳನ್ನು ಜಾರಿ ಮಾಡಲು ಸಿದ್ಧರಿದ್ದೀರಾ ಎಂದು ಸವಾಲು ಹಾಕಿದ್ದಾರೆ. ಮೊದಲ ನಾಲ್ಕೂ ಗ್ಯಾರಂಟಿ ಯೋಜನೆ ಸೇರಿ ಈ ಐದೂ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ● 9ನೇ ಪುಟಕ್ಕೆ

ನಾಳೆ, ನಾಡಿದ್ದು ರಾಜ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಚಾರ ಅಬ್ಬರ

ಭಾನುವಾರ ಮೈಸೂರು ರಾಜಮಾರ್ಗದಲ್ಲಿ ಮೋದಿ ರೋಡ್ ಶೋ



ಬೆಂಗಳೂರು, ಏ.27(ಕೆಎಂಶಿ)– ಪ್ರಧಾನಿ ನರೇಂದ್ರಮೋದಿಯವರು ಇದೇ ಶನಿವಾರ ಮತ್ತು ಭಾನುವಾರ (ಏ.29, 30) ರಾಜ್ಯದಲ್ಲಿ ಚುನಾವಣಾ ಪ್ರಚಾರ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಬಿಜೆಪಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಪ್ರಧಾನಿಯವರು ಏ.29ರಂದು ಬೆಳಗ್ಗೆ 9 ಗಂಟೆಗೆ ಬೀದರ್ ಜಿಲ್ಲೆ ಹುಮ್ನಾಬಾದ್‌ನಲ್ಲಿ, ಮಧ್ಯಾಹ್ನ 1 ಗಂಟೆಗೆ ವಿಜಯಪುರದಲ್ಲಿ, 3ಕ್ಕೆ ಬೆಳಗಾವಿ ಜಿಲ್ಲೆ ಕುಡುಚಿಯಲ್ಲಿ ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಅಂದು ಸಂಜೆ ಬೆಂಗಳೂರಿನಲ್ಲಿ ಮಾಗಡಿ ರಸ್ತೆಯ ನೈಸ್ ರೋಡ್‌ನಿಂದ ಸುಮನಹಳ್ಳಿವರೆಗೆ ಸುಮಾರು 4.5 ಕಿ.ಮೀ. ದೂರ ರೋಡ್ ಶೋ ನಡೆಸಲಿದ್ದಾರೆ. ರೋಡ್ ಶೋಗೆ ಸುಮಾರು 450 ಬ್ಲಾಕ್‌ಗಳನ್ನು ಸಂಯೋಜಿಸಲಾಗಿದೆ ಎಂದು ತಿಳಿಸಿದರು. ಏ.30ರಂದು ಪ್ರಧಾನಿಯವರು ಬೆಳಿಗ್ಗೆ 11.30ಕ್ಕೆ ಕೋಲಾರದಲ್ಲಿ, ಸಂಜೆ 4 ಗಂಟೆಗೆ ಹಾಸನ ಜಿಲ್ಲೆ ಬೇಲೂರಿನಲ್ಲಿ ಚುನಾವಣಾ ಪ್ರಚಾರ ಸಭೆಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ ಮೈಸೂರಿನಲ್ಲಿ ಜೆಎಸ್‌ಎಸ್ ವಿದ್ಯಾಪೀಠ ವೃತ್ತದಿಂದ ಬನ್ನಿಮಂಟಪ ವೃತ್ತದವರೆಗೆ ಸುಮಾರು ನಾಲ್ಕೂವರೆ ಕಿ.ಮೀ. ದೂರ ರೋಡ್ ಶೋ ನಡೆಸಲಿದ್ದಾರೆ ಎಂದು ತಿಳಿಸಿದರು. ನರೇಂದ್ರಮೋದಿಯವರು ಇಂದು ರಾಜ್ಯದ 67 ಲಕ್ಷದ 900 ಕಾರ್ಯಕರ್ತರೊಂದಿಗೆ ವರ್ಚುವಲ್ ಮೂಲಕ ನೇರ ಸಂವಾದ ನಡೆಸಿ ಕಾರ್ಯಕರ್ತರಲ್ಲಿ ಹುರುಪು, ಉತ್ಸಾಹ ತುಂಬಿ ಪ್ರೇರಣೆ ನೀಡಿದ್ದಾರೆ ಎಂದು ● 9ನೇ ಪುಟಕ್ಕೆ

ಭಾನುವಾರ ಚನ್ನಪಟ್ಟಣಕ್ಕೆ ಪ್ರಧಾನಿ ಮೋದಿ ಭೇಟಿ

ಐದು ಗಂಟೆ ಎಕ್ಸ್‌ಪ್ರೆಸ್ ವೇ ಬಂದ್

ಬೆಳಗ್ಗೆ 11ರಿಂದ ಸಂಜೆ 4ರವರೆಗೆ ವಾಹನ ಸಂಚಾರಕ್ಕೆ ಬದಲಿ ವ್ಯವಸ್ಥೆ



ಮಂಡ್ಯ, ಏ.27(ಮೋಹನ್ ರಾಜ್)– ಸಾರ್ವತ್ರಿಕ ವಿಧಾನಸಭಾ ಚುನಾವಣಾ ಪ್ರಚಾರಕ್ಕಾಗಿ ಏಪ್ರಿಲ್ 30ರ ಭಾನುವಾರ ರಾಮನಗರ ಜಿಲ್ಲೆಯ ಚನ್ನಪಟ್ಟಣಕ್ಕೆ ಪ್ರಧಾನಿ ಮೋದಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅಂದು ಬೆಂಗಳೂರು– ಮೈಸೂರು ಎಕ್ಸ್‌ಪ್ರೆಸ್ ವೇ ಬಂದ್ ಆಗಲಿದ್ದು, ಬದಲಿ ಮಾರ್ಗದ ಸಂಚಾರ ವ್ಯವಸ್ಥೆ ಮಾಡಿ ಮಂಡ್ಯ ಜಿಲ್ಲಾಧಿಕಾರಿ ಗೋಪಾಲಕೃಷ್ಣ ಆದೇಶ ಹೊರಡಿಸಿದ್ದಾರೆ. ಚನ್ನಪಟ್ಟಣದ ಮತ್ತೀಕೆರೆ–ಶೆಟ್ಟಹಳ್ಳಿಯಲ್ಲಿ ಪ್ರಧಾನಿ ಮೋದಿ ಸಾರ್ವಜನಿಕ ಸಭೆ ನಡೆಯುವುದರಿಂದ ಅಂದು ಬೆಳಗ್ಗೆ 11 ರಿಂದ ಸಂಜೆ 4 ಗಂಟೆವರೆಗೆ ಚನ್ನಪಟ್ಟಣ ● 9ನೇ ಪುಟಕ್ಕೆ

ವರ್ಷಕ್ಕೆ ಐದು ಸಿಲಿಂಡರ್ ಉಚಿತ; ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲು

ಭರಪೂರ ಕೊಡುಗೆಯ ಜೆಡಿಎಸ್ ಜನತಾ ಪ್ರಣಾಳಿಕೆ ಬಿಡುಗಡೆ



ಬೆಂಗಳೂರು, ಏ.27(ಕೆಎಂಶಿ)– ಮಹತ್ವಾಕಾಂಕ್ಷೆಯ ಪಂಚರತ್ನ ಯೋಜನೆಗಳ ಜಾರಿ, ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳು ಕ್ಷಿಪ್ರಗತಿಯಲ್ಲಿ ಅನುಷ್ಠಾನ ಸೇರಿದಂತೆ ಹಲವಾರು ಪ್ರಮುಖ ಘೋಷಣೆಗಳನ್ನು ಮಾಡಿರುವ ಜೆಡಿಎಸ್ ಪಕ್ಷವು, ಜನತೆಗೆ ಸಾಮಾಜಿಕ ಭದ್ರತೆ ನೀಡುವ ಹಿನ್ನೆಲೆಯಲ್ಲಿ ಅನೇಕ ಜನಾನುರಾಗಿ ಕಾರ್ಯಕ್ರಮಗಳನ್ನು ರೂಪಿಸಿದೆ.

ರಾಜ್ಯ ವಿಧಾನಸಭೆ ಚುನಾವಣೆಯ ಜೆಡಿಎಸ್ ಜನತಾ ಪ್ರಣಾಳಿಕೆಯನ್ನು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಪಕ್ಷದ ರಾಜ್ಯಾಧ್ಯಕ್ಷ ಸಿ.ಎಂ. ಇಬ್ರಾಹಿಂ, ಪ್ರಣಾಳಿಕೆ ರಚನೆ ಸಮಿತಿ ಅಧ್ಯಕ್ಷ ಬಿ.ಎಂ. ಫಾರೂಕ್ ಹಾಗೂ ಸಮಿತಿ ಸದಸ್ಯರಾದ ಕೆ.ಎ.ತಿಪ್ಪೇಸ್ವಾಮಿ ಅವರು ಜೆಪಿ ಭವನದಲ್ಲಿ ಇಂದು ಬಿಡುಗಡೆ ಮಾಡಿದರು. ವರ್ಷಕ್ಕೆ 5 ಸಿಲಿಂಡರ್ ಉಚಿತ, ಸ್ತ್ರೀಶಕ್ತಿ ಸಾಲ ಮನ್ನಾ, ಕನ್ನಡಕ್ಕೆ ಅಗ್ರ ಮನ್ನಣೆ, ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರ ಉದ್ಯೋಗಕ್ಕೆ ಮೀಸಲು, ವಕೀಲರ ರಕ್ಷಣೆಗೆ ಕಾಯಿದೆ, ರಾಜ್ಯದಲ್ಲಿ ನಿಮ್ಹಾನ್ಸ್ ಮಾದರಿ ಆಸ್ಪತ್ರೆ, ಬೋನ್ ಮ್ಯಾರೊ ಸೇರಿ ದುಬಾರಿ ಕಾಯಿಲೆಗಳಿಗೆ 25 ಲಕ್ಷ ರೂ.ವರೆಗೆ ಪರಿಹಾರ, ನ್ಯಾ.ಸಾಚರ್ ವರದಿ ಜಾರಿಗೆ ಕ್ರಮ, ಪೊಲೀಸರ ವೇತನ ತಾರತಮ್ಯ ನಿವಾರಣೆ, ವಿಕಲಚೇತನರ ಪಿಂಚಣಿ 2500, ಹಿರಿಯ ಪಿಂಚಣಿ 5000 ರೂ.ಗಳಿಗೆ ಏರಿಕೆ ಸೇರಿದಂತೆ ಹಲವು ಪ್ರಮುಖ ಭರವಸೆಗಳನ್ನು ಪಕ್ಷ ಪ್ರಣಾಳಿಕೆಯಲ್ಲಿ ನೀಡಿದೆ.

ಅಲ್ಲದೆ, ಪಂಚರತ್ನ ಯೋಜನೆಗಳಾದ ಎಲ್ಲರಿಗೂ ಸಮಾನ ಆರೋಗ್ಯ ಸೌಲಭ್ಯ ಸಮಾನ ಶಿಕ್ಷಣ ಕೊಡುವ ಶಿಕ್ಷಣವೇ ಆಧುನಿಕ ಶಕ್ತಿ, ಕೃಷಿಗೆ ಆಧುನಿಕ ಕಾಯಕಲ್ಪ ನೀಡುವ ರೈತ ಚೈತನ್ಯ, ಉಚಿತ ಮನೆ ನೀಡುವ ವಸತಿ ಆಸರೆ, ಯುವಕರು ಹಾಗೂ ಮಹಿಳೆಯರ ಸಾಮಾಜಿಕ ಭದ್ರತೆ, ಆರ್ಥಿಕ ಸಬಲೀಕರಣಕ್ಕೆ ರೂಪಿಸಲಾಗಿರುವ ಯುವನವ ಮಾರ್ಗ – ಮಹಿಳಾ ಸಬಲೀಕರಣ ಯೋಜನೆಗಳನ್ನು ಜಾರಿ ಮಾಡುವುದಾಗಿ ಪಕ್ಷ ಘೋಷಣೆ ಮಾಡಿದೆ.

ಸ್ತ್ರೀಶಕ್ತಿ ಸ್ವಸಹಾಯ ಸಂಘಗಳ ಸಾಲಮನ್ನಾ, ಗರ್ಭಿಣಿ ತಾಯಂದಿರ ಅಗತ್ಯತೆ ಪೂರೈಕೆಗೆ 6 ತಿಂಗಳ ಕಾಲ 6,000 ರೂ. ಭತ್ಯೆ, ವಿಧವಾ ವೇತನ 900 ರೂ.ನಿಂದ 2,500 ರೂ.ಗಳಿಗೆ ಹೆಚ್ಚಳ, ಅಂಗನವಾಡಿ ಕಾರ್ಯಕರ್ತೆಯರಿಗೆ, ಸಹಾಯಕರಿಗೆ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ 5000 ರೂ.ವರೆಗೆ ಹೆಚ್ಚಿನ ವೇತನ, ಕನಿಷ್ಠ 15 ವರ್ಷ ಸೇವೆ ಸಲ್ಲಿಸಿ ನಿವೃತ್ತರಾದ ● 6ನೇ ಪುಟಕ್ಕೆ

ಮೀಸಲಾತಿ ಗೊಂದಲ ನಿವಾರಣೆ


ಮುಸ್ಲಿಂರಿಗೆ ಶೈಕ್ಷಣಿಕವಾಗಿ ಆರ್ಥಿಕವಾಗಿ ಮುಂದುವರಿಯಲು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಕಾಲದಲ್ಲಿ ಶೇ.4ರಷ್ಟು ಮೀಸಲು ನೀಡಲಾಗಿತ್ತು. ಅದನ್ನು ಬಿಜೆಪಿ ಸರ್ಕಾರ ಏಕಾಏಕಿ ಹಿಂಪಡೆದಿದೆ. ಆ ಮೀಸಲು ವ್ಯವಸ್ಥೆಯನ್ನು ಮರು ಜಾರಿ ಮಾಡಲಾಗುವುದು ಎಂದು ಜೆಡಿಎಸ್ ಘೋಷಣೆ ಮಾಡಿದೆ.

ಮುಖ್ಯಾಂಶಗಳು

- 12 ಕಾರ್ಯಕ್ರಮಗಳ ಘೋಷಣೆ
- ವರ್ಷಕ್ಕೆ 5 ಸಿಲಿಂಡರ್ ಉಚಿತ
- ಸ್ತ್ರೀಶಕ್ತಿ ಸಾಲ ಮನ್ನಾ
- ಕನ್ನಡಕ್ಕೆ ಅಗ್ರ ಮನ್ನಣೆ, ಖಾಸಗಿ ಕ್ಷೇತ್ರದಲ್ಲಿ ಕನ್ನಡಿಗರ ಉದ್ಯೋಗಕ್ಕೆ ಮೀಸಲು
- ವಕೀಲರ ರಕ್ಷಣೆಗೆ ಕಾಯಿದೆ
- ರಾಜ್ಯದಲ್ಲಿ ನಿಮ್ಹಾನ್ಸ್ ಮಾದರಿ ಆಸ್ಪತ್ರೆ
- ಬೋನ್ ಮ್ಯಾರೊ ಸೇರಿ ದುಬಾರಿ ಕಾಯಿಲೆಗಳಿಗೆ 25 ಲಕ್ಷ ರೂ.ವರೆಗೆ ಪರಿಹಾರ
- ನ್ಯಾ.ಸಾಚರ್ ವರದಿ ಜಾರಿಗೆ ಕ್ರಮ, ಪೊಲೀಸರ ವೇತನ ತಾರತಮ್ಯ ನಿವಾರಣೆ
- ವಿಕಲಚೇತನರ ಪಿಂಚಣಿ 2500, ಹಿರಿಯ ಪಿಂಚಣಿ 5000 ರೂ.ಗಳಿಗೆ ಏರಿಕೆ

ಯಾರೇನೇ ಹೇಳಲಿ ಜೆಡಿಎಸ್ ಸ್ವತಂತ್ರವಾಗಿ ಅಧಿಕಾರ ಹಿಡಿದೇ ಹಿಡಿಯುತ್ತದೆ....

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಅತೀವ ವಿಶ್ವಾಸ



ಬೆಂಗಳೂರು, ಏ.27(ಕೆಎಂಶಿ)–ವಿಧಾನಸಭಾ ಚುನಾವಣೆಯಲ್ಲಿ ಸ್ವತಂತ್ರವಾಗಿ ಪಕ್ಷ ಅಧಿ ಕಾರದ ಚುಕ್ಕಾಣಿ ಹಿಡಿಯಲಿದೆ ಎಂದು ಜೆಡಿಎಸ್‌ನ ರಾಷ್ಟ್ರೀಯ ಅಧ್ಯಕ್ಷ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ನಮಗೆ ಹತ್ತರಿಂದ 15 ಸ್ಥಾನ ಬರಲಿದೆ ಎಂದು ಹೇಳಿದ್ದಾರೆ. ಕಾಂಗ್ರೆಸ್‌ನವರು 25 ಸ್ಥಾನ ಬರಬಹುದು ಎಂದು ಹೇಳಿದ್ದಾರೆ. ಹೇಳಿಕೆ ನೀಡಲು ಅವರಿಗೆ ಸ್ವಾತಂತ್ರ್ಯವಿದೆ. ನಾವು ಅದನ್ನು ತಡೆಯಲು ಸಾಧ್ಯವಿಲ್ಲ ಎಂದರು.

ಮೇ 13 ರಂದು ಜನಾದೇಶ ಬರಲಿದ್ದು, ಅಲ್ಲಿಯವರೆಗೂ ಕಾದು ನೋಡೋಣ. ಸಂಸದೆ ಸುಮಲತಾ ಸೇರಿದಂತೆ ಕೆಲವು ಹಿರಿಯವರು ಟೀಕೆ ಮಾಡುತ್ತಾರೆ. ನಾವು ಅವರ ಟೀಕೆಗಳಿಂದ ಗೊಂದಲಕ್ಕೆ ಒಳಗಾಗುವುದಿಲ್ಲ. ಪ್ರತಿಯೊಬ್ಬರಿಗೂ ಅಭಿವ್ಯಕ್ತ ಸ್ವಾತಂತ್ರ್ಯವಿದೆ. ಯಾರು ಏನೇ ಹೇಳಿದರೂ ಅದಕ್ಕೆ ಪ್ರತಿಕ್ರಿಯೆ ನೀಡುವುದಿಲ್ಲ.

ಕುಮಾರಸ್ವಾಮಿ ಅವರು ವಿನೂತನವಾದ ಪಂಚರತ್ನ ಯೋಜನೆಗಳನ್ನು ರೂಪಿಸಿದ್ದಾರೆ. ಪ್ರತಿ ವಿಧಾನಸಭಾ ಕ್ಷೇತ್ರಗಳಿಗೆ ಆ ಯೋಜನೆ ಬಗ್ಗೆ ತಿಳಿಸಿದ್ದಾರೆ. ಈ ಬಾರಿ ಕುಮಾರಸ್ವಾಮಿ ಸ್ವತಂತ್ರವಾಗಿ ಸರ್ಕಾರ ಮಾಡಬಹುದೆಂಬ ಪ್ರಾಮಾಣಿಕ ಭಾವನೆ ನನಗಿದೆ. ಮೇ 8ರವರೆಗೆ 42 ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ಕೈಗೊಳ್ಳುತ್ತೇನೆ. ಪಕ್ಷವನ್ನು ಅಧಿಕಾರಕ್ಕೆ ತರಲು ಕುಮಾರಸ್ವಾಮಿ ಹಗಲಿರುಳು ಹೋರಾಟ ನಡೆಸುತ್ತಿದ್ದಾರೆ. ನನ್ನ ಅನಾರೋಗ್ಯದ ನಡುವೆಯೇ ಈ ವಯಸ್ಸಿನಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳ ಪರ ಮತ ಭಿಕ್ಷೆಯಾಚಿಸುತ್ತೇನೆ ಎಂದರು.

ಮೈಸೂರು ಮಿತ್ರ ಶುಕ್ರವಾರ 28 ಏಪ್ರಿಲ್ 2023

ಟಿ.ಎಸ್.ಶ್ರೀವತ್ಸ ಪರ ಮತಯಾಚನೆ



ಮೈಸೂರು, ಏ.27–ಕೃಷ್ಣರಾಜ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಟಿ.ಎಸ್.ಶ್ರೀವತ್ಸ ಪರವಾಗಿ ನವಿಲು ರಸ್ತೆಯಲ್ಲಿರುವ ರಾಘವೇಂದ್ರ ಮಠ ಮುಂಭಾಗದಲ್ಲಿ ಪ್ರಚಾರ ಮಾಡಲಾಯಿತು. ಸಾರ್ವಜನಿಕರಿಗೆ ಟಿ.ಎಸ್. ಶ್ರೀವತ್ಸರವರ ಪರಿಚಯದ ಕರಪತ್ರ ನೀಡಿ ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪದಾಧಿಕಾರಿಗಳು ಮತಯಾಚನೆ ಮಾಡಿದರು.

ಬಳಿಕ ಮಾತನಾಡಿದ ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಬಿಜೆಪಿ ಕೇವಲ ಒಂದು ಪಕ್ಷವಾಗಿಲ್ಲ. ಭಾರತೀಯರ ರಾಷ್ಟ್ರಾಭಿಮಾನದ ಪ್ರತೀಕ, ಸ್ವಾಭಿಮಾನ, ನಮ್ಮ ಸನಾತನ ಸಂಸ್ಕೃತಿಯ ಸಂಕೇತ, ಧರ್ಮಜಾಗೃತಿ ಇತಿಹಾಸ ಧಾರ್ಮಿಕ ನಂಬಿಕೆಯಾಗಿದೆ ಎಂದರು.

ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಅಧ್ಯಕ್ಷ ಎಚ್.ಎನ್.ಶ್ರೀಧರಮೂರ್ತಿ ಮಾತನಾಡಿ, ಭಾರತದಲ್ಲೇ ವಿಪ್ರ ಸಮಾಜ ಹೆಚ್ಚಿರುವ ವಿಧಾನಸಭಾ ಕ್ಷೇತ್ರದಲ್ಲಿ ಕೃಷ್ಣರಾಜ ಕ್ಷೇತ್ರವು ಸಹ ಒಂದು. ವಿಧಾನಸಭಾ ಮತ್ತು ಲೋಕಸಭಾ ಚುನಾವಣೆಗಳಲ್ಲಿ ಅತೀ ಹೆಚ್ಚು ಮತಗಳ ಮುನ್ನಡೆಯನ್ನು ಬಿಜೆಪಿಗೆ ನೀಡುತ್ತದೆ. ವಿಪ್ರ ಸಮುದಾಯದವರು ಈ ಬಾರಿ ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಬಿಜೆಪಿ ಅಭ್ಯರ್ಥಿ ಟಿ.ಎಸ್.ಶ್ರೀವತ್ಸ ಅವರು ಕಳೆದ 35 ವರ್ಷಗಳಿಂದ ಹಲವಾರು ಮಂದಿಯನ್ನು ಎಲ್ಲಾ ಕ್ಷೇತ್ರದಲ್ಲೂ ಮುಖ್ಯವಾಹಿನಿಗೆ ತಂದಿದ್ದಾರೆ. ಸರಳಸಜ್ಜನಿಕೆಯ ವ್ಯಕ್ತಿ ಜನಸಾಮಾನ್ಯರಿಗೆ ಹಲವಾರು ಯೋಜನೆಗಳನ್ನು ತಲುಪಿಸಲಿದ್ದಾರೆ ಎಂದರು. ಬ್ರಾಹ್ಮಣ ಯುವ ವೇದಿಕೆ ಸಂಘಟನಾ ಕಾರ್ಯದರ್ಶಿ ಅಜಯ್ ಶಾಸ್ತ್ರಿ, ವಾಸು ದೇವಮೂರ್ತಿ, ಮಧುಸೂದನ್ ಹಾಗೂ ಇನ್ನಿತರರು ಈ ಸಂದರ್ಭದಲ್ಲಿದ್ದರು.



ಆನಂದೂರು ಗ್ರಾಮದ ಮಾಜಿ ಛೇರ್ಮನ್ ಚಿಕ್ಕೇಗೌಡ, ಎ.ಸಿ. ಬ್ರಿಕ್ಸ್ ಮಾಲೀಕ ಎ.ಸಿ.ಸತೀಶ್, ವೈರಮುಡಿ, ತಿಪ್ಪೇಗೌಡ, ಸಂತೋಷ್, ರವಿ ಇನ್ನಿತರರು ಕಾಂಗ್ರೆಸ್ ತೊರೆದು ಶಾಸಕ ಜಿ.ಟಿ.ದೇವೇಗೌಡರ ಸಮ್ಮುಖದಲ್ಲಿ ಜೆಡಿಎಸ್ ಸೇರ್ಪಡೆಗೊಂಡರು. ಈ ವೇಳೆ ಎಪಿಎಂಸಿ ಮಾಜಿ ಅಧ್ಯಕ್ಷ ಹೊಸಕೋಟೆ ನಾಗರಾಜು, ತಾಪಂ ಮಾಜಿ ಉಪಾಧ್ಯಕ್ಷ ಎನ್.ಬಿ.ಮಂಜು, ಆನಂದೂರು ಹಾಲೇಗೌಡ, ಪ್ರಭಾಕರ್, ಮಂಜಣ್ಣ, ಸುರೇಶ್, ಲೋಕಿ, ದೇವು, ಕುಮಾರ್, ಭೈರೇಗೌಡ, ರಮೇಶ್, ರವಿ ಇತರರಿದ್ದರು.

ಆಮಿಷಗಳಿಗೆ ಒಳಗಾಗದೇ ಉತ್ತಮ ಸರ್ಕಾರ ಅಸ್ತಿತ್ವಕ್ಕೆ ತರಲು ಸಹಕರಿಸಿ

ಮತದಾರರಲ್ಲಿ ಜಿಪಂ ಉಪಕಾರ್ಯದರ್ಶಿ ಕೃಷ್ಣರಾಜು ಮನವಿ



ಮೈಸೂರು,ಏ.27(ಜಿಎ)–ಆಸೆ, ಆಮಿಷಗಳಿಗೆ ಮಾರುಹೋಗದೇ ಉತ್ತಮ ಸರ್ಕಾರ ಅಸ್ತಿತ್ವಕ್ಕೆ ಪ್ರತಿಯೊಬ್ಬರು ಕಡ್ಡಾಯವಾಗಿ ಮತ ಚಲಾಯಿಸುವಂತೆ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ (ಅಭಿವೃದ್ಧಿ) ಎಂ.ಕೃಷ್ಣರಾಜು ತಿಳಿಸಿದರು.

ನಂಜನಗೂಡು ತಾಲೂಕಿನ ದೇಬೂರು ಗ್ರಾಮ ಪಂಚಾಯತ್ ಕತ್ವಾಡಿಪುರ ಗ್ರಾಮದಲ್ಲಿ ಗುರುವಾರ ನರೇಗಾ ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬರ ಮತವು ಅಮೂಲ್ಯವಾದದ್ದು, ದೇಶ ಕಟ್ಟಲು ಪ್ರತಿಯೊಂದು ಮತವು ಮುಖ್ಯಪಾತ್ರ ವಹಿಸುತ್ತದೆ. ಆದ್ದರಿಂದ ಯೋಚಿಸಿ ನೈತಿಕವಾಗಿ ತಮ್ಮ ಹಕ್ಕು ಚಲಾಯಿಸುವಂತೆ ನರೇಗಾ ಕೂಲಿ ಕಾರ್ಮಿಕರಲ್ಲಿ ಅರಿವು ಮೂಡಿಸಿದರು. ನಂಜನಗೂಡು ತಾಲೂಕಿನ ಸ್ವೀಪ್ ಸಮಿತಿಯ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಎಲ್ಲಾ ತಾಲೂಕಿನಲ್ಲಿ ವಿಭಿನ್ನ ರೀತಿಯಲ್ಲಿ ಮತದಾನ ಜಾಗೃತಿ ಕಾರ್ಯಕ್ರಮಗಳು ಜರುಗುತ್ತಿವೆ. ಇನ್ನಷ್ಟು ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮತದಾನ ಜಾಗೃತಿ ಮೂಡಿಸಿ ಶೇಕಡವಾರು ಮತದಾನವನ್ನು ಹೆಚ್ಚಿಸುವಂತೆ ತಿಳಿಸಿದರು.

ಈ ವೇಳೆ ರಂಗೋಲಿ ಮೂಲಕ ಮತದಾನದ ಬಗ್ಗೆ ಜಾಗೃತಿ ಮೂಡಿಸಿದ ಸಂಜೀವಿನಿ ಸಂಘದ ಮಹಿಳೆಯರಿಗೆ ಬಹುಮಾನ ವಿತರಿಸಿದರು. ಬಳಿಕ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಯೋಜನಾ ನಿರ್ದೇಶಕಿ ಸವಿತಾ, ಜಿಲ್ಲಾ ಪಂಚಾಯಿತಿ, ತಾಲೂಕು ಕಾರ್ಯ ನಿರ್ವಾಹಕ ಅಧಿಕಾರಿ ಶ್ರೀನಿವಾಸ್, ತಾಲೂಕು ಯೋಜನಾಧಿಕಾರಿ ಗುರುಮಹದೇವು, ದೇಬೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸೋಮಶೇಖರ್ ಸೇರಿದಂತೆ ಹಲವರು ಹಾಜರಿದ್ದರು.

ಸಿಪಿಐ(ಎಂ)ನಿಂದ ರಾಜಕೀಯ ಸಮಾವೇಶ

ಮೈಸೂರು,ಏ.27–ಭಾರತ್ ಕಮ್ಯೂನಿಸ್ಟ್ ಪಕ್ಷ (ಮಾರ್ಕ್ಸ್‌ವಾದ), ಮೈಸೂರು ನಗರ ಸ್ಥಳೀಯ ಸಮಿತಿ ವತಿಯಿಂದ ಏ.29ರಂದು ಬೆಳಗ್ಗೆ 10.30ಕ್ಕೆ ಚಾಮರಾಜ ಜೋಡಿ ರಸ್ತೆಯಲ್ಲಿರುವ ಮೈಸೂರು ಹೌಸಿಂಗ್ ಕೋ–ಆಪರೇಟಿವ್ ಸಮುದಾಯ ಭವನದಲ್ಲಿ ರಾಜಕೀಯ ಸಮಾವೇಶ ಏರ್ಪಡಿಸಲಾಗಿದೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಮೈಸೂರು ನಗರ ಸ್ಥಳೀಯ ಸಮಿತಿ ಕಾರ್ಯದರ್ಶಿ ಜಿ.ರಾಜೇಂದ್ರ, ನಾಲ್ಕು ವರ್ಷದ ಹಿಂದೆ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಪ್ರಜಾಪ್ರಭುತ್ವ ಮೌಲ್ಯವನ್ನು ನಾಶ ಮಾಡಿ ನೂರಾರು ಕೋಟಿ ರೂ.ಗಳನ್ನು ಸುರಿದು ಪ್ರತಿಪಕ್ಷಗಳ ಶಾಸಕರನ್ನು ಅಕ್ರಮವಾಗಿ ಖರೀದಿ ಮಾಡಿ ಅಧಿಕಾರಕ್ಕೆ ಬಂದು ಕರ್ನಾಟಕದ ಗೌರವ, ಹಿರಿಮೆಯನ್ನು ನಾಶ ಮಾಡಿದೆ. ರಾಜಕೀಯ, ಸಾಮಾಜಿಕ, ಸಾಂಸ್ಕೃತಿಕ, ಆರ್ಥಿಕ ಕ್ಷೇತ್ರಗಳನ್ನು ಸರಿಪಡಿಸಲಾಗದಷ್ಟು ಹದಗೆಡಿಸಿದೆ. ಪರಂಪರೆಯನ್ನು ನಾಶ ಮಾಡಲು ಮುಕ್ತ ಅವಕಾಶ ನೀಡಿದೆ. ಈ ನಿಟ್ಟಿನಲ್ಲಿ ಭ್ರಷ್ಟ ಬಿಜೆಪಿ ಸರ್ಕಾರವನ್ನು ಸೋಲಿಸಲು ಮತ್ತು ಜಾತ್ಯಾತೀತ ಪರಂಪರೆಯನ್ನು ಎತ್ತಿ ಹಿಡಿಯಲು ರಾಜಕೀಯ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ.

ಈ ಸಮಾವೇಶವನ್ನು ಸಿಪಿಐ(ಎಂ) ರಾಜ್ಯ ಕಾರ್ಯದರ್ಶಿ ಯು.ಬಸವರಾಜು ಉದ್ಘಾಟಿಸಲಿದ್ದಾರೆ. ರಾಜ್ಯ ಸಮಿತಿ ಸದಸ್ಯರಾದ ಹೆಚ್.ಎಸ್.ಸುನಂದ, ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಸ್ಥಳೀಯ ಸಮಿತಿ ಕಾರ್ಯದರ್ಶಿ ಜಿ. ರಾಜೇಂದ್ರ ಅಧ್ಯಕ್ಷತೆ ವಹಿಸಲಿದ್ದಾರೆ.

ನಿಧನ

ಶ್ರೀಮತಿ ಟಿ.ಆರ್.ಮಣಿ



ಮೈಸೂರು,ಏ.27–ಮೈಸೂರಿನ ದಟ್ಟಗಳ್ಳಿ ನಿವಾಸಿ ಹಾಗೂ ಇತಿಹಾಸ ಉಪನ್ಯಾಸಕರಾದ ಶ್ರೀಮತಿ ಟಿ.ಆರ್.ಮಣಿ (51) ಗುರುವಾರ ನಿಧನರಾದರು. ಮೃತರು ಪತಿ ಮೈಸೂರು ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷರು ಮತ್ತು ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಇತಿಹಾಸ ಉಪನ್ಯಾಸಕರಾದ ಎ.ಎಲ್ ಉಮೇಶ್, ಇಬ್ಬರು ಹೆಣ್ಣು ಮಕ್ಕಳು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಏ.28) ಬೆಳಗ್ಗೆ 11 ಗಂಟೆಗೆ ಮೈಸೂರಿನ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಥಾಮಸ್ ಪ್ರಭಾಕರ್



ಮೈಸೂರಿನ ಗಾಂಧಿನಗರದ ನಿವಾಸಿ ಹಾಗೂ ಜೆ.ಕೆ. ಟೈರ್ಸ್ ನಿವೃತ್ತ ನೌಕರ ಥಾಮಸ್ ಪ್ರಭಾಕರ್ (61) ಗುರುವಾರ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ ಶೀಲಾ ಥಾಮಸ್, ಮಕ್ಕಳಾದ ಆಲ್ವಿನ್ ಥಾಮಸ್ ಮತ್ತು ಮಾಯ ಥಾಮಸ್, ಸಹೋದರರಾದ ಜಾನ್ಸನ್ ಮನೋಜ್‌ಕುಮಾರ್ ಮತ್ತು ಪಾಲ್ ದೇವಾನಂದ್, ಸಹೋದರಿ ಅನಿತಾ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗಾಂಧಿನಗರದ ಮಹದೇವಪುರ ರಸ್ತೆಯಲ್ಲಿರುವ ಸಿಎಸ್ಐ ಸಿಮೆಟ್ರಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಐದು ವರ್ಷದಲ್ಲಿ ವರುಣ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡುತ್ತೇನೆ

ವಿ.ಸೋಮಣ್ಣ ಅಬ್ಬರದ ಪ್ರಚಾರ, ಸಂಸದ ಪ್ರತಾಪ್ ಸಿಂಹ ಸೇರಿ ಹಲವರು ಸಾಥ್



ಮೈಸೂರು, ಏ.27–ಇಡೀ ರಾಜ್ಯದ ಗಮನ ಸೆಳೆದಿರುವ ವರುಣ ವಿಧಾನ ಸಭಾ ಕ್ಷೇತ್ರದಲ್ಲಿ ಚುನಾವಣೆ ಪ್ರಚಾರ ದಿನದಿಂದ ದಿನಕ್ಕೆ ರಂಗೇರುತ್ತಿದೆ.

ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ವರುಣ ವಿಧಾನಸಭಾ ಕ್ಷೇತ್ರದ ಮೆಲ್ಲಹಳ್ಳಿ ಗ್ರಾಮದಲ್ಲಿ ರೋಡ್ ಶೋ ನಡೆಸಿ ಮತಯಾಚಿಸಿದರು. ಮೈಸೂರು–ಕೊಡಗು ಸಂಸದ ಪ್ರತಾಪ್ ಸಿಂಹ ಅವರ ಜತೆಗಿದ್ದರು.

ಈ ಸಂದರ್ಭದಲ್ಲಿ ಮತದಾರರನ್ನು ಉದ್ದೇಶಿಸಿ ಮಾತನಾಡಿದ ವಿ.ಸೋಮಣ್ಣ, ಈ ಕ್ಷೇತದಲ್ಲಿ ಕಳೆದ 15 ವರ್ಷದಲ್ಲಿ ಎಷ್ಟು ಕೆಲಸಗಳು ಆಗಿವೆಯೋ ಅದಕ್ಕಿಂತ ಎರಡು ಪಟ್ಟು ಅಭಿವೃದ್ಧಿ ಯೋಜನೆಗಳನ್ನು ತರುತ್ತೇನೆ. ಇಡೀ ವರುಣ ಕ್ಷೇತ್ರವನ್ನು ಅಭಿವೃದ್ಧಿ ಮಾಡುತ್ತೇನೆ ಎಂದು ತಿಳಿಸಿದರು.

ಎಲ್ಲ ಕೆಲಸಗಳನ್ನು ನಾನು 5 ವರ್ಷದಲ್ಲಿ ಮಾಡಿ ತೋರಿಸುತ್ತೇನೆ. ವರುಣ ಕ್ಷೇತ್ರವನ್ನು ಇಡೀ ರಾಜ್ಯದಲ್ಲಿಯೇ ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿ ಮಾಡುತ್ತೇನೆ. ಬೆಂಗಳೂರಿನ ಗೋವಿಂದರಾಜನಗರ ಕ್ಷೇತ್ರ ಸಾಕಷ್ಟು ಅಭಿವೃದ್ಧಿ ಕಂಡಿದೆ. ಇದೇ ಮಾದರಿಯಲ್ಲಿ ವರುಣದಲ್ಲಿ ಅಭಿವೃದ್ಧಿಯ ಪರ್ವ ಆರಂಭವಾಗಲಿದೆ. ಬೆಂಗಳೂರು ನಗರ ಯಾವ ರೀತಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಗಳಿಸಿದೆಯೋ ಅದೇ ರೀತಿ ವರುಣ ಕ್ಷೇತ್ರವನ್ನು, ಮೈಸೂರು ನಗರವನ್ನು ಅಭಿವೃದ್ಧಿಪಡಿಸುತ್ತೇನೆ ಎಂದು ಸೋಮಣ್ಣ ತಿಳಿಸಿದರು.

ನಿಮ್ಮ ವೋಟಿನ ಶಕ್ತಿ ಮತ್ತು ಬೆಲೆ ಏನೆಂದು ತೋರಿಸುವೆ. ಅದಕ್ಕೋಸ್ಕರ ಕಮಲದ ಗುರುತಿಗೆ ಈ ಬಾರಿ ಮತ ನೀಡಿ ನನ್ನನ್ನು ಆಯ್ಕೆ ಮಾಡಿ. ನಿಮ್ಮ ಒಂದೊಂದು ಮತದ ಹಕ್ಕಿನ ಋಣ ತೀರಿಸುತ್ತೇನೆ. ನಿಮ್ಮ ಪ್ರೀತಿ, ಬೆಂಬಲಕ್ಕೆ ಅಭಿವೃದ್ಧಿ ಯೋಜನೆಗಳ ಮೂಲಕ ನಾನು ಕೊಡುಗೆ ನೀಡುತ್ತೇನೆ. ಇದು ನೂರಕ್ಕೆ ನೂರು ಸತ್ಯ ಎಂದು ಭರವಸೆ ನೀಡಿದರು.

ಕೇಂದ್ರ ಸರ್ಕಾರ ನಮ್ಮ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ಮುನ್ನಡೆಯುತ್ತಿದೆ. ಇಡೀ ವಿಶ್ವ ಕೋವಿಡ್‌ನಿಂದ ಸಂಕಷ್ಟಕ್ಕೆ ಒಳಗಾದಾಗ ಮೋದಿ ಧೃತಿಗೆಡದೇ 132 ಕೋಟಿ ಭಾರತೀಯರಿಗೆ ಉಚಿತವಾಗಿ ಲಸಿಕೆ ಕೊಡಿಸಿದರು. ಬೇರೆ ಬೇರೆ ರಾಷ್ಟ್ರಗಳಿಗೂ ನಾವು ಕೊರೊನಾ ಲಸಿಕೆ ಪೂರೈಸಿದ್ದೇವೆ. ಆಗ ರಾಜ್ಯದಲ್ಲಿ ಅಂದಿನ ಮುಖ್ಯಮಂತ್ರಿ ಯಡಿಯೂರಪ್ಪನವರು ಕೂಡ ಉತ್ತಮ ಆಡಳಿತ ನೀಡಿ ಜನರಿಗೆ ಬೇಕಾದ ಸವಲತ್ತು ಒದಗಿಸಿದರು. ಅದೇ ರೀತಿ ನನ್ನ ಗುರಿ ಅಭಿವೃದ್ಧಿ ಪರ್ವ ಎಂದು ವಿವರಿಸಿದರು. ಲಕ್ಷ್ಮೀಪುರ, ಶಿವಪುರ, ಹಾರೋಹಳ್ಳಿ, ಮೆಲ್ಲಹಳ್ಳಿ, ಬಡಗಲಪುರ, ಮೂಡಲಪುರ, ಚಟ್ನಹಳ್ಳಿ ಮತ್ತು ಪಾಳ್ಯ, ಮಹಾದೇವಿ ಕಾಲೋನಿ, ದುದ್ದಗೆರೆ ಮುಂತಾದ ಕಡೆ ಸೋಮಣ್ಣ ಮತಯಾಚಿಸಿದರು. ಈ ವೇಳೆ ಮುಖಂಡರಾದ ಅಪ್ಪಣ್ಣ, ವರುಣ ಕ್ಷೇತ್ರದ ಅಧ್ಯಕ್ಷ ಕಲ್ಮಹಳ್ಳಿ ವಿಜಯಕುಮಾರ, ಪ್ರಕಾಶ್ ಎಸ್.ಎಂ.ಪಿ. ಡೆವಲಪರ್, ಮೆಲ್ಲಹಳ್ಳಿ ಮಹದೇವ ಸ್ವಾಮಿ, ನಾಗೇಂದ್ರ, ವೀರಭದ್ರಪ್ಪ, ಎಲ್ಲ ಗ್ರಾಮಗಳ ಬಿಜೆಪಿ ಮುಖಂಡರು, ನೂರಾರು ಸಂಖ್ಯೆಯಲ್ಲಿ ಮಹಿಳೆಯರು ರೋಡ್ ಶೋನಲ್ಲಿ ಸಾಥ್ ನೀಡಿದರು.

ಅಭಿವೃದ್ಧಿ ಹರಿಕಾರ ಸೋಮಣ್ಣ ಬೆಂಬಲಿಸಿ: ಪ್ರತಾಪ್ ಸಿಂಹ



ಮೈಸೂರು: ವರುಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಪರ ಸಂಸದ ಪ್ರತಾಪ್ ಸಿಂಹ ಪ್ರಚಾರ ನಡೆಸಿದರು. ಕ್ಷೇತ್ರದ ಅಭಿವೃದ್ಧಿಗೆ ಸೋಮಣ್ಣ ಅವರಿಗೆ ಮತ ನೀಡಿ. ಸೋಮಣ್ಣ ಅಭಿವೃದ್ಧಿಯ ಹರಿಕಾರರೆಂದೇ ಹೆಸರುವಾಸಿಯಾಗಿದ್ದಾರೆ. ಬೆಂಗಳೂರಿನ ಗೋವಿಂದರಾಜನಗರ ಕ್ಷೇತ್ರವನ್ನು ನೋಡಿದರೆ ಸಾಕು ಅಲ್ಲಿ ಯಾವ ಮಟ್ಟದಲ್ಲಿ ಯೋಜನೆಗಳು ಜಾರಿಗೆ ಬಂದಿವೆ ಎಂಬುದು ತಿಳಿಯುತ್ತದೆ ಎಂದರು.

ಅದೇ ರೀತಿ ಇಲ್ಲಿಯೂ ಹಲವಾರು ಯೋಜನೆಗಳು ಜಾರಿಗೆ ತರಲು ಸೋಮಣ್ಣಗೆ ಭಾರೀ ಬಹುಮತದಿಂದ ಗೆಲ್ಲಿಸಿ ಎಂದು ಸಂಸದ ಪ್ರತಾಪ್ ಸಿಂಹ ಮನವಿ ಮಾಡಿದರು. ವರುಣ ವಿಧಾನಸಭಾ ಕ್ಷೇತ್ರದ ಚಿಕ್ಕಹಳ್ಳಿ ಗ್ರಾಮದಲ್ಲಿರುವ ಗಾರ್ಮೆಂಟ್‌ನಲ್ಲಿ ಮತಯಾಚನೆ ಮಾಡಲಾಯಿತು. ಹಳ್ಳಿಕೆರೆಹುಂಡಿ, ಬಡಗಲಹುಂಡಿ, ಮೂಡಲಹುಂಡಿ, ಕೆಂಪೇಗೌಡನಹುಂಡಿ, ವರಕೂಡು, ಚಟ್ನಳ್ಳಿಪಾಳ್ಯ ಗ್ರಾಮಗಳಲ್ಲಿ ಪ್ರಚಾರ ನಡೆಸಲಾಯಿತು. ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

ಇಂದು ಎಲ್ಲೆಲ್ಲಿ: ವರುಣ ಕ್ಷೇತ್ರದಲ್ಲಿ ಶುಕ್ರವಾರ ಕೂಡ ಸೋಮಣ್ಣ ಪ್ರಚಾರ ಮುಂದುವರಿಸಲಿದ್ದಾರೆ. ವರಹಳ್ಳಿ, ಕಕ್ಕರಕಟ್ಟೆ, ಚುಂಚನಹಳ್ಳಿ, ಹನುಮನಪುರ, ಕೋಣನೂರು, ಕೋಣನಪಾಳ್ಯ, ಮರಳ್ಳಿಪುರ, ಪಿ.ಮರಳ್ಳಿ, ದಾಸನೂರು, ಕಾರೇಮೊಳೆ, ದೊಡ್ಡಹೊಮ್ಮ, ಸುತ್ತೂರು ಸೇರಿದಂತೆ ಹಲವಾರು ಗ್ರಾಮಗಳಲ್ಲಿ ಪ್ರಚಾರ ನಡೆಸಲಿದ್ದಾರೆ.

ಸೂಕ್ಷ್ಮ, ಅತೀ ಸೂಕ್ಷ್ಮ ಪ್ರದೇಶ ಗುರುತಿಸುವ ಕೇಂದ್ರ ಸಚಿವೆ ಶೋಭಾ ಸೂಚನೆ ಸಂಬಂಧ ತನಿಖೆಗೆ ಸಿದ್ದರಾಮಯ್ಯ ಆಗ್ರಹ



ಬೆಂಗಳೂರು,ಏ.27(ಕೆಎಂಶಿ)–ಕೇಂದ್ರ ಸಚಿವೆ ಹಾಗೂ ಬಿಜೆಪಿ ನಾಯಕಿ ಶೋಭಾ ಕರಂದ್ಲಾಜೆ ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸುವಂತೆ ಹೇಳಿರುವ ಬಗ್ಗೆ ತನಿಖೆ ನಡೆಸಬೇಕೆಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

ಈ ಸಂಬಂಧ ಸರಣಿ ಟ್ವೀಟ್ ಮಾಡಿರುವ ಅವರು, ಯಾವ ಯಾವ ಮತಗಟ್ಟೆಗಳನ್ನು ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಎಂದು ಘೋಷಿಸಬೇಕು. ಯಾವ ಭಾಗಗಳಲ್ಲಿ ಕೇಂದ್ರ ಸೇನಾಪಡೆಗಳು, ಅಥವಾ ಅರೇ ಸೇನಾಪಡೆ ತುಕಡಿಗಳನ್ನು ನಿಯೋಜಿಸಬೇಕು ಹಾಗೂ ಯಾವ ಮತಗಟ್ಟೆಗಳಿಗೆ 'ವೆಬ್ ಕಾಸ್ಟಿಂಗ್' ಮತ್ತು 'ವಿಡಿಯೋ ರೆಕಾರ್ಡಿಂಗ್' ಸೇವೆ ಅಗತ್ಯವಿದೆ ಎನ್ನುವುದನ್ನು ಪದಾಧಿಕಾರಿಗಳು ಬೇಗ ತಿಳಿಸಬೇಕು ಎಂದು ಶೋಭಾ ಕರಂದ್ಲಾಜೆ ಪತ್ರ ಬರೆದಿದ್ದಾರೆ. ರಾಜ್ಯದಲ್ಲಿ ಚುನಾವಣೆ ನಡೆಸುತ್ತಿರುವುದು ಚುನಾವಣಾ ಆಯೋಗವೋ ಬಿಜೆಪಿಯೋ ಪಕ್ಷದ ಪದಾಧಿಕಾರಿಗಳು ನಿರ್ಧರಿಸಲಿರುವುದು, ಸೂಕ್ಷ್ಮ ಅತಿಸೂಕ್ಷ್ಮ ಮತಗಟ್ಟೆಗಳನ್ನೋ ಬಿಜೆಪಿ ಪರ ಮತ್ತು ವಿರೋಧಿ ಮತದಾರರು ಇರುವ ಮತಗಟ್ಟೆಗಳನ್ನೋ ಎಂದು ಪ್ರಶ್ನಿಸಿದ್ದಾರೆ. ತಮ್ಮ ಪಕ್ಷದ ಪರವಾಗಿಲ್ಲದ ಮತದಾರರು ಇರುವ ಮತಗಟ್ಟೆಗಳಲ್ಲಿ ಭದ್ರತೆಯ ನೆಪದಲ್ಲಿ ಕೇಂದ್ರ ಸೇನಾಪಡೆಗಳನ್ನು ನಿಯೋಜಿಸಿ ಮತದಾರರನ್ನು ಬೆದರಿಸಿ ಅವರು ಮತದಾನ ಮಾಡದಂತೆ ತಡೆಯುವುದು ಈ ಪತ್ರದ ದುರುದ್ದೇಶವಾಗಿದೆ ಎಂದು ಆರೋಪಿಸಿದ್ದಾರೆ.

ಚುನಾವಣಾ ಮತಗಟ್ಟೆಗಳಲ್ಲಿ 'ವೆಬ್ ಕಾಸ್ಟಿಂಗ್' ಮತ್ತು 'ವಿಡಿಯೋ ರೆಕಾರ್ಡಿಂಗ್' ಮಾಡುವ ಹೊಣೆ ಚುನಾವಣಾ ಆಯೋಗದ್ದಲ್ಲವೇ ಇದನ್ನು ನಡೆಸಲು ರಾಜಕೀಯ ಪಕ್ಷಕ್ಕೆ ಅನುಮತಿ ಕೊಟ್ಟವರು ಯಾರು ಎಂದು ಪ್ರಶ್ನಿಸಿದ್ದಾರೆ. ಶೋಭಾ ಕರಂದ್ಲಾಜೆ ಅವರೇ ಈ ಪತ್ರ ಬರೆದಿರುವುದನ್ನು ನೋಡಿದರೆ ಕೇಂದ್ರ ಸರ್ಕಾರವೇ ಈ ಅಕ್ರಮ ಚಟುವಟಿಕೆಯಲ್ಲಿ ಶಾಮೀಲಾಗಿರುವುದು ಸ್ಪಷ್ಟವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಚುನಾವಣಾ ಆಯುಕ್ತರು ತಕ್ಷಣ ಮಧ್ಯಪ್ರವೇಶಿಸಿ ಸಚಿವೆ ಶೋಭಾ ಕರಂದ್ಲಾಜೆ ಅವರನ್ನು ವಿಚಾರಣೆಗೊಳಪಡಿಸಿ ಅವರು ಯಾವುದೇ ಚುನಾವಣಾ ಪ್ರಚಾರದಲ್ಲಿ ಭಾಗವಹಿಸದಂತೆ ನಿಷೇಧಿಸಬೇಕು. ಅವರ ಪಕ್ಷದ ನಾಯಕರು ಮತ್ತು ಅಭ್ಯರ್ಥಿಗಳಿಂದ ಪಡೆದಿರುವ ಮಾಹಿತಿಯನ್ನು ವಶಕ್ಕೆ ಪಡೆಯಬೇಕು ಎಂದು ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಇಂದು ಬೇಸಿಗೆ ಶಿಬಿರ ಸಮಾರೋಪ

ಮೈಸೂರು,ಏ.27–ಮೈಸೂರಿನ ಮೈತ್ರಿ ಬುದ್ಧಿ ಮಾಂದ್ಯ ಮಕ್ಕಳ ಶಾಲೆಯಲ್ಲಿ ಆಯೋಜಿಸಿದ್ದ 14 ದಿನಗಳ ಕಾಲ ನಡೆದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವನ್ನು ನಾಳೆ (ಏ.28) ಸಂಜೆ 6 ಗಂಟೆಗೆ ಕುವೆಂಪುನಗರದ ರಮಣ ಮಹರ್ಷಿ ಕೇಂದ್ರದಲ್ಲಿ ಏರ್ಪಡಿಸಲಾಗಿದೆ. ಸಮಾರಂಭದಲ್ಲಿ ಮಕ್ಕಳು ಮತ್ತು ಪೋಷಕರು, ಶಿಕ್ಷಕರ ಒಳಗೊಂಡ ತರಕಾರಿ ಮೇಳ, ರಂಗೋಲಿ ಸ್ಪರ್ಧೆ, ಕರಕುಶಲ ತಯಾರಿಕೆ, ಯೋಗ, ಕಲಿಕಾ ಹಬ್ಬ, ಬೆಂಕಿ ಇಲ್ಲದೆ ಅಡುಗೆ ತಯಾರಿಕೆ ಇನ್ನೂ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಗಳಿಗೆ ವಿದ್ಯಾರ್ಥಿಗಳೊಂದಿಗೆ ಪೋಷಕರು ಸಹ ಅತೀ ಉತ್ಸಾಹದಿಂದ ಪಾಲ್ಗೊಂಡಿದ್ದರು.



ಮೈಸೂರಿನ ವಾರ್ಡ್ ನಂ.3 ಮಹದೇಶ್ವರ ಬಡಾವಣೆಯಲ್ಲಿ ಚಾಮರಾಜ ವಿಧಾನಸಭಾ ಕ್ಷೇತ್ರದ ಜಾ.ದಳ ಅಭ್ಯರ್ಥಿ ಎಚ್.ಕೆ.ರಮೇಶ್ ಗುರುವಾರ ಬಿರುಸಿನ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ನಗರಪಾಲಿಕೆ ಸದಸ್ಯ ಕೆ.ವಿ.ಶ್ರೀಧರ, ಸ್ಥಳೀಯ ಜೆಡಿಎಸ್ ಮುಖಂಡರಾದ ಪುಟ್ಟಸ್ವಾಮಾಚಾರ್, ಶಶಿ, ಕುಮಾರ್, ವೆಂಕಟೇಶ್ ಮತ್ತಿತರರು ಉಪಸ್ಥಿತರಿದ್ದರು.

ತವರು ನೆಲದಲ್ಲಿಯೇ ಜಗದೀಶ್ ಶೆಟ್ಟರ್ ವಿರುದ್ಧ ಬಿಜೆಪಿ ಸಮರ

ಚುನಾವಣೆಗೂ ಮುನ್ನವೇ 'ಆಪರೇಷನ್ ಕಮಲ'!

ಹುಬ್ಬಳ್ಳಿ, ಏ.27– ಕರ್ನಾಟಕದಲ್ಲಿ ಈ ಬಾರಿಯು ಅಧಿಕಾರದ ಗದ್ದುಗೆ ಏರಲೇಬೇಕು ಎಂದು ನಿರ್ಧರಿಸಿರುವ ಬಿಜೆಪಿಯು ಸರ್ವ ಪ್ರಯತ್ನಗಳನ್ನು ಮಾಡುತ್ತಿದೆ. ಪಕ್ಷ ತೊರೆದು ಕಾಂಗ್ರೆಸ್ ಸೇರಿರುವ ಮಾಜಿ ಸಿಎಂ ಜಗದೀಶ ಶೆಟ್ಟರ್ ಅವರನ್ನು ತವರು ನೆಲವಾದ ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ಕ್ಷೇತ್ರದಲ್ಲಿಯೇ ಸೋಲಿಸಲೇಬೇಕು ಎಂದು 'ಆಪರೇಷನ್ ಕಮಲ' ನಡೆಸುತ್ತಿದೆ ಎಂದು ಮೂಲಗಳು ತಿಳಿಸಿವೆ.

ಕಾರ್ಯಾಚರಣೆಯ ಭಾಗವಾಗಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಹುಬ್ಬಳ್ಳಿ–ಧಾರವಾಡದ ಮಾಜಿ ಮೇಯರ್ ಮತ್ತು ಕಾಂಗ್ರೆಸ್ ಹಿರಿಯ ಮುಖಂಡ ಪ್ರಕಾಶ ಕ್ಯಾರಕಟ್ಟಿ ಅವರನ್ನು ಬಿಜೆಪಿಗೆ ಸೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ. ಯಾವುದೇ ಬೆಲೆ ತೆತ್ತಾದರೂ ಸರಿ ಇತ್ತೀಚೆಗಷ್ಟೇ ಕಾಂಗ್ರೆಸ್ ಸೇರಿದ ಶೆಟ್ಟರ್ ಅವರನ್ನು ಸೋಲಿಸಲು ಬಿಜೆಪಿ ನಿರ್ಧರಿಸಿದೆ ಎನ್ನಲಾಗಿದೆ.

ಶೆಟ್ಟರ್‌ಗೆ ಟಿಕೆಟ್ ನಿರಾಕರಿಸಿದ ಹಿನ್ನೆಲೆಯಲ್ಲಿ ತಮ್ಮ ಸ್ಥಾನಕ್ಕೆ ಸಾಮೂಹಿಕ ರಾಜೀನಾಮೆ ನೀಡಿದ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಸದಸ್ಯರನ್ನು ಬಿಜೆಪಿಯಲ್ಲಿ ಉಳಿಸಿಕೊಳ್ಳುವಲ್ಲಿ ಪ್ರಹ್ಲಾದ ಜೋಶಿ ಯಶಸ್ವಿಯಾಗಿದ್ದಾರೆ ಎಂದು ವಿವರಿಸಿದರು. ಶೆಟ್ಟರ್ ಅವರನ್ನು ಕ್ಷೇತ್ರಕ್ಕೆ ಸೀಮಿತಗೊಳಿಸುವಂತೆ ಒತ್ತಡ ಹೇರಲು ಹುಬ್ಬಳ್ಳಿ–ಧಾರವಾಡದಲ್ಲಿ ಕಾಂಗ್ರೆಸ್ ನಾಯಕರನ್ನು ಪಕ್ಷವು ಒಬ್ಬರ ಹಿಂದೆ ಒಬ್ಬರನ್ನು ಸೆಳೆಯುತ್ತಿದೆ. ಸದ್ಯ ಶೆಟ್ಟರ್ ಉತ್ತರ ಕರ್ನಾಟಕ ಭಾಗದಲ್ಲಿ ಪ್ರಚಾರ ನಡೆಸುತ್ತಿದ್ದಾರೆ. ಬಿಜೆಪಿ ಲಿಂಗಾಯತ ನಾಯಕತ್ವವನ್ನು ಅವಮಾನಿಸುತ್ತಿದೆ ಮತ್ತು ಅಪರಾಧ ಹಿನ್ನೆಲೆಯುಳ್ಳ ವ್ಯಕ್ತಿಗಳಿಗೆ ಟಿಕೆಟ್ ನೀಡುತ್ತಿದೆ ಎಂದು ಶೆಟ್ಟರ್ ಕಿಡಿಕಾರಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

28.4.2023 ಶುಕ್ರವಾರ, ಮಳೆ ನಕ್ಷತ್ರ: ಅಶ್ವಿನಿ, 14.04.2023ರಿಂದ 27.04.2023 ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಶುಕ್ಲ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ಪುಷ್ಯ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

■ **ಶ್ರೀ ರೇಣುಕಾದೇವಿ ಕರಗ ದೇವಸ್ಥಾನ ಟ್ರಸ್ಟ್ :** ಶ್ರೀ ಚಾಮುಂಡೇಶ್ವರಿ ಮತ್ತು ಶ್ರೀ ಮಾರಿಯಮ್ಮನವರ 99ನೇ ವರ್ಷದ ಮೈಸೂರು ಕರಗ ಮಹೋತ್ಸವ, ಬೆಳಗ್ಗೆ 7 ಗಂಟೆಗೆ ಅಮ್ಮನವರ ಕರಗವು ದೇವಸ್ಥಾನದಿಂದ ಹೊರಟು, ಇಟ್ಟಿಗೆಗೂಡು ಶ್ರೀ ಸತ್ಯನಾರಾಯಣಸ್ವಾಮಿ ದೇವಸ್ಥಾನದ ಸರ್ಕಲ್‌ನಿಂದ ಪ್ರಾರಂಭವಾಗಿ, ಪೆರಿಯತಂಬಿ ರಸ್ತೆ, 2ನೇ ಕ್ರಾಸ್ ಹಾಗೂ ಶ್ರೀ ಸಿದ್ದಪ್ಪಾಜಿ ದೇವಸ್ಥಾನದ ಮಾರ್ಗವಾಗಿ ಅರುಣಾಚಲಂ ರಸ್ತೆಯಿಂದ ಲೋಕರಂಜನ್ ಮಹಲ್ ರಸ್ತೆ, ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದಲ್ಲಿ ಪೂಜೆ ಸ್ವೀಕರಿಸಿ ಕಮ್ಮಾಳಗೇರಿಯಿಂದ ಜೂ ಗಾರ್ಡನ್ ಮಾರ್ಗವಾಗಿ ಭವಾನಿ ರಸ್ತೆಯವರೆಗೂ ಭಕ್ತಾದಿಗಳಿಂದ ಪೂಜೆ ಸ್ವೀಕರಿಸಿ, ದೇವಸ್ಥಾನ ಸೇರುತ್ತದೆ. ಸ್ಥಳ: ಶ್ರೀ ರೇಣುಕಾದೇವಿ ದೇವಸ್ಥಾನ, ಇಟ್ಟಿಗೆಗೂಡು.

■ **ಮೈಸೂರು ಜಿಲ್ಲಾ ಪತ್ರಕರ್ತರ ಸಂಘ :** ಚಾಮರಾಜ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಗಳಾದ ಬಿಜೆಪಿಯ ಎಲ್. ನಾಗೇಂದ್ರ, ಕಾಂಗ್ರೆಸ್‌ನ ಕೆ. ಹರೀಶ್‌ಗೌಡ, ಜೆಡಿಎಸ್‌ನ ಹೆಚ್.ಕೆ. ರಮೇಶ್ ಅವರ ಜೊತೆ ಸಂವಾದ ಕಾರ್ಯಕ್ರಮ, ಸ್ಥಳ: ಜಿಲ್ಲಾ ಪತ್ರಕರ್ತರ ಸಂಘ, ತ್ಯಾಗರಾಜ ರಸ್ತೆ, ಬೆಳಗ್ಗೆ 11ಕ್ಕೆ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಹಾಗೂ ವಿಶೇಷ ಉಪನ್ಯಾಸ, ಅಧ್ಯಕ್ಷತೆ : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಪತಿ ಡಾ. ಶರಣಪ್ಪ ವಿ. ಹಲಸೆ, ವಾಣಿಜ್ಯ ತೆರಿಗೆ ಇಲಾಖೆ ನಿವೃತ್ತ ಅಪರ ಆಯುಕ್ತ ಹೆಳವರಹುಂಡಿ ಸಿದ್ದಪ್ಪ ಅವರಿಂದ ಉಪನ್ಯಾಸ, ಉಪಸ್ಥಿತರು : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಸಚಿವ ಡಾ. ಕೆ.ಎಲ್.ಎನ್. ಮೂರ್ತಿ, ಪ್ರಾಸ್ತಾವಿಕ ನುಡಿ : ಸಹಾಯಕ ಪ್ರಾಧ್ಯಾಪಕ ಡಾ.ಎನ್.ಆರ್. ಚಂದ್ರೇಗೌಡ, ಸ್ಥಳ: ಕಾವೇರಿ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ವಿದ್ವಾಂಸ ಮುರಳೀಧರದಾಸ್ ಅವರಿಂದ ಶ್ರೀನಿವಾಸ ಕಲ್ಯಾಣ ಕುರಿತು ಪ್ರವಚನ, ಸ್ಥಳ: ಶ್ರೀರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ.

■ **ಗಾನಭಾರತೀ :** ವಿದುಷಿ ಕಲಾಂಬಿಕ ಸೋದರಿಯರಿಂದ ಗಾಯನ, ವಿದ್ವಾನ್ ಸಿ.ಎ. ಗುರುದತ್ತ–ಮೃದಂಗ, ವಿದ್ವಾನ್ ಪ್ರಾದೇಶ್ ಆಚಾರ್–ಪಿಟೀಲು, ವಿದ್ವಾನ್ ವಿ.ಎಸ್. ರಮೇಶ್–ಮೋರ್ಚಿಂಗ್, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಇಂಜಿನಿಯರಿಂಗ್ ವಿದ್ಯಾವಿಕಾಸ, ಪ್ರಾಯೋಜಕರು–ವಿದ್ಯಾವಿಕಾಸ ಇಂಜಿನಿಯರಿಂಗ್ ಕಾಲೇಜ್, ಮೈಸೂರು, 6.40 ಅರಿವಿನ ಶಿಖರ, ಗಾಯನ–ಜಿ.ಪುಷ್ಪಲತಾ, ವ್ಯಾಖ್ಯಾನ– ಮೈಸೂರು ಕೃಷ್ಣಮೂರ್ತಿ, 9.00 ನಾರಾಯಣ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಆರೋಗ್ಯ ಕಾರ್ಯಕ್ರಮ, 9.30 ಚುನಾವಣೆ 2023 –ವಿಧಾನಸಭಾ ಕ್ಷೇತ್ರ ಪರಿಚಯ, 10.00 ಕೋವಿಲಡಿ ಆರ್. ಕಲಾ – ಹಾಡುಗಾರಿಕೆ, 11.30 ಮಿಶ್ರ ಮಾಧುರ್ಯ

ಮಧ್ಯಾಹ್ನ: 12.30 ದೇವರನಾಮ, 12.45 ಕಾದಂಬರಿ ವಿಹಾರ– ಡಾ.ಎಸ್.ಎಲ್. ಭೈರಪ್ಪನವರ ದೂರ ಸರಿದರು ಕಾದಂಬರಿಯ ಬಾನುಲಿ ಓದು ಪ್ರಸ್ತುತಿ– ಉಮೇಶ್ ಎಸ್.ಎಸ್., 1.00 ರಂಗಗೀತೆಗಳು–ಪ್ರಾರ್ಥನೆಯ ಪದ್ಯಗಳು, 1.20 ಭಾವಗೀತೆ, 2.50 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ– ಜಿ.ಕೆ. ರವೀಂದ್ರಕುಮಾರ್, 3.00 ಮೌನದಾಚೆಯ ಬೆಳಕು–ಸದಾಶಿವ ಬ್ರಹ್ಮೇಂದ್ರರ ಜೀವನ ಹಾಗೂ ರಚನೆಗಳನ್ನಾಧರಿಸಿದ ವಿಶೇಷ ಕಾರ್ಯಕ್ರಮ ಸರಣಿ, 4.00 ಮಹಿಳಾರಂಗ– ಕೈಗನ್ನಡಿ, ಸಂಚಿಕೆ ಕಾರ್ಯಕ್ರಮ, ಪ್ರಸ್ತುತಿ– ನಿಶಿತಾ ಕೃಷ್ಣಸ್ವಾಮಿ, 4.30 ವೃತ್ತಿ ಮಾರ್ಗದರ್ಶನ–ಮೆಡಿಕಲ್ ಫಿಸಿಕ್ಸ್ ಅಥವಾ ರೇಡಿಯೇಷನ್ ಫಿಸಿಕ್ಸ್ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ. ಷಣ್ಮುಖಪ್ಪ ಬಿ. ಕಾಗಿನೆಲ್ಲಿ ಅವರೊಂದಿಗೆ ಮಾತುಕತೆ, 6.55 ಕೃಷಿರಂಗ–ಕಿಸಾನ್‌ವಾಣಿ, ಬಾಳೆ ಬೆಳೆಯಲ್ಲಿ ಪೋಷಕಾಂಶಗಳ ನಿರ್ವಹಣೆ ಕುರಿತು ಜೆ.ಜಿ. ರಾಜಣ್ಣ ಅವರೊಂದಿಗೆ ಸಂದರ್ಶನ. ಸಂದರ್ಶಕರು– ಹೇಮಂತಕುಮಾರ್, 8.00 50 ವರ್ಷಗಳ ನಂತರ ಭೇಟಿಯಾದ ಹಳೆಯ ಗೆಳೆಯರ ಜೊತೆ ಮಾತುಕತೆ, 9.15 ಜನಪದ ಸಂಗೀತ–ರಾಚಪ್ಪಜಿ ಮತ್ತು ತಂಡ, 10.30 ವಾದ್ಯವೃಂದ– ಪೊಲೀಸ್ ಬ್ಯಾಂಡ್, 10.30 ಸವಿನೆನಪು

ಮೈಸೂರು ಮಿತ್ರ

ವಿಧಾನಸಭೆ ಚುನಾವಣೆಯ ಅಚ್ಚರಿಗಳಲ್ಲೊಂದು!

ಮಾರ್ಚ್, ಏಪ್ರಿಲ್‌ನಲ್ಲಿ 2,000 ರೂ. ಮುಖ ಬೆಲೆ ನೋಟುಗಳ ಚಲಾವಣೆ ಹೆಚ್ಚಳ



ಮೈಸೂರು,ಏ.27(ಆರ್‌ಕೆ)– ಕಳೆದ ಮೂರ್‍ನಾಲ್ಕು ವರ್ಷಗಳಿಂದ ವಿರಳವಾಗಿದ್ದ 2,000 ರೂ. ಮುಖ ಬೆಲೆಯ ಕರೆನ್ಸಿ ನೋಟುಗಳ ಚಲಾವಣೆಯಲ್ಲಿ ಇದೀಗ ಹೆಚ್ಚಳವಾಗುತ್ತಿದೆ.

ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಕಳೆದ ಮಾರ್ಚ್ ಮೊದಲ ವಾರದಿಂದ ಬ್ಯಾಂಕ್, ಅಂಗಡಿಗಳು, ಜ್ಯುವೆಲರಿ ಶಾಪ್‌ಗಳು, ಮದ್ಯದಂಗಡಿ, ಮರ್ಚೆಂಟ್ ಕೋ–ಆಪರೇಟಿವ್ ಬ್ಯಾಂಕ್, ಸಹಕಾರ ಸಂಘಗಳು, ಸರ್ಕಾರಕ್ಕೆ ಪಾವತಿಯಾಗುವ ವಿವಿಧ ಬಾಬತ್ತಿನ ಶುಲ್ಕ, ತೆರಿಗೆ ಕೌಂಟರ್‌ಗಳಲ್ಲಿ ಇತ್ತೀಚೆಗೆ 500 ರೂ. ಬದಲಾಗಿ 2,000 ರೂ. ಮುಖಬೆಲೆಯ ಕರೆನ್ಸಿ ನೋಟುಗಳು ಹೆಚ್ಚಾಗಿ ಬರುತ್ತಿರುವುದು ಕಂಡು ಬರುತ್ತಿದೆ.

2023ರ ಫೆಬ್ರವರಿ ಮಾಹೆವರೆಗೆ ಕೇವಲ 500, 200, 100 ರೂ. ಮುಖ ಬೆಲೆಯ ನೋಟುಗಳೇ ಹೆಚ್ಚಾಗಿ ಚಲಾವಣೆಯಲ್ಲಿರುತ್ತಿದ್ದವು. ಹಣಕಾಸು ಸಂಸ್ಥೆಗಳಿಂದ ಚಿನ್ನಾಭರಣ ಅಡವಿಟ್ಟು ಸಾಲ ಪಡೆಯುವಾಗ ಅಥವಾ ಮರು ಪಾವತಿ ಮಾಡುವಾಗ ಹೆಚ್ಚಾಗಿ 500 ರೂ. ನೋಟುಗಳೇ ಚಾಲ್ತಿಯಲ್ಲಿದ್ದವು.

ಮಾರುಕಟ್ಟೆ, ಮಾಲ್‌ಗಳು, ಬಟ್ಟೆ ಅಂಗಡಿ, ದೊಡ್ಡ ದೊಡ್ಡ ಉದ್ದಿಮೆ, ಆಸ್ತಿಗಳ ನೋಂದಣಿಗೆ ಕೆ–2 ಚಲನ್ ಮೂಲಕ ಸ್ಟ್ಯಾಂಪ್ ಡ್ಯೂಟಿ ಪಾವತಿ, ಪಾಲಿಕೆ, ಮುಡಾದಂತಹ ಸರ್ಕಾರಿ ಕಚೇರಿಯ ಕ್ಯಾಷ್ ಕೌಂಟರ್‌ಗಳಲ್ಲೂ ನಗದು ವಹಿವಾಟು ಮಾಡುವಾಗ 2,000 ರೂ. ಮುಖಬೆಲೆಯ ನೋಟುಗಳು ಬಹಳ ವಿರಳವಾಗಿತ್ತು.

ರಾಷ್ಟ್ರೀಕೃತ ಬ್ಯಾಂಕುಗಳ ಚೆಸ್ಟ್‌ಗಳಿಗೆ ಈಗ ನಿಧಾನಗತಿಯಲ್ಲಿ 2,000 ರೂ. ಕರೆನ್ಸಿ ನೋಟುಗಳು ಬರುತ್ತಿವೆ. ಈ ಹಿಂದೆಯೇ ಈ ಮುಖಬೆಲೆಯ ನೋಟುಗಳು ಬಂದರೆ, ಚಲಾವಣೆಗೆ ಬಿಡದೇ ನೇರವಾಗಿ ಚೆಸ್ಟ್‌ಗೆ ಕಳುಹಿಸಿ ಎಂದು ರಿಸರ್ವ್ ಬ್ಯಾಂಕ್ ಎಲ್ಲಾ ಬ್ಯಾಂಕುಗಳಿಗೆ ನಿರ್ದೇಶನ ನೀಡಿತ್ತಲ್ಲದೆ, 2,000 ರೂ. ಮುಖಬೆಲೆಯ ನೋಟುಗಳ ಮುದ್ರಣವನ್ನೇ 1 ವರ್ಷದ ಹಿಂದೆಯೇ ಸ್ಥಗಿತಗೊಳಿಸಲಾಗಿದೆ ಎಂದು ಬ್ಯಾಂಕ್ ಮೂಲಗಳು ತಿಳಿಸಿವೆ.

2,000 ರೂ. ಮುಖ ಬೆಲೆಯ ನೋಟುಗಳನ್ನು ಏಕಕಾಲದಲ್ಲಿ ಅಪಮೌಲ್ಯೀಕರಣ (ಬ್ಯಾನ್) ಮಾಡಿದಲ್ಲಿ ಜನರಿಗೆ ತೊಂದರೆಯಾಗುತ್ತದೆ ಎಂಬ ಕಾರಣಕ್ಕೆ ಮುದ್ರಣ ಸ್ಥಗಿತಗೊಳಿಸಿರುವ ಆರ್‌ಬಿಐ, ಬ್ಯಾಂಕಿಗೆ ಬರುವ ನೋಟುಗಳನ್ನು ಚಲಾವಣೆಗೆ ಬಿಡದೇ ಚೆಸ್ಟ್‌ಗೆ ಕಳುಹಿಸುವಂತೆ ನಿರ್ದೇಶನ ನೀಡಿ ನಿಧಾನವಾಗಿ ಈ ನೋಟುಗಳ ಚಲಾವಣೆಯನ್ನೇ ಸ್ಥಗಿತಗೊಳಿಸಲಾಗುತ್ತಿದೆ ಎಂದು ಹೇಳಲಾಗುತ್ತಿತ್ತು. ಆದರೆ, ಇದೀಗ ಮಾರ್ಚ್ ಮಾಹೆಯಿಂದೀಚೆಗೆ ಮತ್ತೆ 2,000 ರೂ. ಮುಖಬೆಲೆಯ ನೋಟುಗಳು ಹೆಚ್ಚಾಗಿ ಚಲಾವಣೆಯಾಗುತ್ತಿರುವುದು ಕಂಡು ಬರುತ್ತಿದೆ. ಏಪ್ರಿಲ್ ತಿಂಗಳಲ್ಲಿ ಅವುಗಳ ಸಂಖ್ಯೆ ಹೆಚ್ಚಾಗಿದ್ದು, ಮೇ 5ರ ನಂತರ ಈ ನೋಟುಗಳ ಚಲಾವಣೆಯಲ್ಲಿ ಮತ್ತಷ್ಟು ಹೆಚ್ಚಳವಾಗಬಹುದೆಂದು ಹಲವರು ಹೇಳುತ್ತಿದ್ದಾರೆ.

ಅಲ್ಲದೆ ರಾಜ್ಯಾದ್ಯಂತ ಚುನಾವಣೆ ಹಿನ್ನೆಲೆಯಲ್ಲಿ ಸ್ಥಾಪಿಸಲಾಗಿರುವ ಪೊಲೀಸ್ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ವೇಳೆ ಸಿಕ್ಕಿರುವ ನಗದಿನ ಪೈಕಿ 500 ರೂ.ಗಳಂತೆಯೇ 2,000 ರೂ. ನೋಟುಗಳ ಸಂಖ್ಯೆಯೂ ಹೆಚ್ಚಿರುವುದು ಗಮನಾರ್ಹ. ಅಂದರೆ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಈ ನೋಟುಗಳು ಹೊರ ಬರುತ್ತಿದ್ದು, ಅಧಿಕ ಚಲಾವಣೆಯಲ್ಲಿವೆ ಎಂಬ ಬ್ಯಾಂಕ್ ಅಧಿಕಾರಿಗಳ ಮಾಹಿತಿ ಆಧರಿಸಿ ಚುನಾವಣಾ ವೀಕ್ಷಕರು ಆದಾಯ ತೆರಿಗೆ ಅಧಿಕಾರಿಗಳು ಸಾರ್ವಜನಿಕ ವಲಯದಲ್ಲಿ ನಗದು ವಹಿವಾಟು, ಬ್ಯಾಂಕ್ ವಹಿವಾಟು ಮೇಲೆ ನಿಗಾ ಇರಿಸಿದ್ದಾರೆ ಎನ್ನಲಾಗಿದೆ.

ಕಣ್ಮರೆಯಾಗುತ್ತಿದ್ದ 2,000 ರೂ. ನೋಟುಗಳು ಇದೀಗ ಅಪಾರ ಪ್ರಮಾಣದಲ್ಲಿ ಪ್ರಸರಣವಾಗುತ್ತಿರುವುದರಿಂದ ಚುನಾವಣೆ ಹಿನ್ನೆಲೆಯಲ್ಲಿ ಈ ಬೆಳವಣಿಗೆಯಾಗಿದೆ ಎಂದು ಕೆಲ ಉದ್ಯಮಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಬಿ.ಎಲ್.ಸಂತೋಷ್ ರಾಷ್ಟ್ರ, ಪಕ್ಷಕ್ಕೆ ಸಮರ್ಪಣೆ ಮಾಡಿಕೊಂಡಿರುವ ವ್ಯಕ್ತಿ

ಕಾಂಗ್ರೆಸ್ ಮಾಡುತ್ತಿರುವ ಭ್ರಷ್ಟಾಚಾರದ ಆರೋಪಗಳಿಗೆ ಸಾಕ್ಷಿ ಇಲ್ಲ; ಬಿಜೆಪಿ ಗೆಲುವು ಶತಃಸಿದ್ಧ: ಅರುಣ್‌ಸಿಂಗ್



ಮೈಸೂರಿನ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ, ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಮಾತನಾಡಿದರು. ಶಾಸಕ ಎಸ್.ಎ.ರಾಮದಾಸ್, ಮೈಲ್ಯಾಕ್ ಅಧ್ಯಕ್ಷ ಆರ್.ರಘು ಕೌಟಿಲ್ಯ, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಶಿವಕುಮಾರ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಬಿಜೆಪಿ ನಗರ ಕಾರ್ಯಾಧ್ಯಕ್ಷ ಹೆಚ್.ಜಿ.ಗಿರಿಧರ್ ಚಿತ್ರದಲ್ಲಿದ್ದಾರೆ.

ಮೈಸೂರು,ಏ.27(ಎಂಟಿವೈ)– ಕರ್ನಾಟಕದಲ್ಲಿ ನಡೆಯುತ್ತಿರುವ ವಿಧಾನಸಭಾ ಚುನಾವಣೆಯಲ್ಲಿ ಭ್ರಷ್ಟಾಚಾರದ ಸುಳ್ಳು ಆರೋಪ ಯಾವುದೇ ದುಷ್ಪರಿಣಾಮ ಬೀರುವುದಿಲ್ಲ. ಈ ಬಾರಿ ಬಿಜೆಪಿ 150 ಸ್ಥಾನಗಳಿಸಿ ಮತ್ತೊಮ್ಮೆ ಅಧಿಕಾರಕ್ಕೆ ಬರಲಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ, ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಚಾಮರಾಜ ಮೊಹಲ್ಲಾದಲ್ಲಿರುವ ಬಿಜೆಪಿ ಮಾಧ್ಯಮ ಕೇಂದ್ರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ಭ್ರಷ್ಟಾಚಾರವೊಂದೇ ಚುನಾವಣಾ ಚರ್ಚಾ ವಿಷಯ ಆಗುವುದಿಲ್ಲ. ಕಾಂಗ್ರೆಸ್ ನಾಯಕರು ಬಿಜೆಪಿ ಸರ್ಕಾರವನ್ನು ಶೇ.40 ಕಮಿಷನ್ ಸರ್ಕಾರ ಎಂದು ಸುಳ್ಳು ಆರೋಪ ಮಾಡುತ್ತಿದ್ದಾರೆ. ಆ ಆರೋಪಕ್ಕೆ ಯಾವುದೇ ಸ್ಪಷ್ಟ ಪುರಾವೆಗಳನ್ನು ಒದಗಿಸಿಲ್ಲ. ಸುಳ್ಳು ಆರೋಪದ ಮೂಲಕ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಈ ಚುನಾವಣೆಯಲ್ಲಿ ಕಾಂಗ್ರೆಸ್ ನಾಯಕರು ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನೇ ಮುಂದಿಟ್ಟುಕೊಂಡು ಚರ್ಚಾ ವಿಷಯವಾಗಿ ಮಾಡಿಕೊಂಡಿದ್ದಾರೆ. ಉತ್ತರಪ್ರದೇಶ, ಉತ್ತರಾಖಂಡ, ಗೋವಾ, ಅಸ್ಸಾಂ, ತ್ರಿಪುರ, ಮಣಿಪುರ ವಿಧಾನಸಭಾ ಚುನಾವಣೆಯಲ್ಲೂ ಇದನ್ನೇ ಇಟ್ಟುಕೊಂಡು ಪ್ರಚಾರ ನಡೆಸಿ ಸೋಲು ಕಂಡಿದ್ದಾರೆ. ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲೂ ಕಾಂಗ್ರೆಸ್‌ಗೆ ಅದೇ ಸ್ಥಿತಿ ಒದಗಿ ಬರುತ್ತದೆ. ಇದರಿಂದ ರಾಜ್ಯದಲ್ಲೂ ಮತ್ತೊಮ್ಮೆ ಬಿಜೆಪಿ ಎಂದರೆ ಜಯ, ಕಾಂಗ್ರೆಸ್ ಎಂದರೆ ಸೋಲು ಎಂಬ ಸಂದೇಶ ರವಾನೆಯಾಗಲಿದೆ ಎಂದರು.

ಉತ್ತರ ಪ್ರದೇಶದ 403 ಸ್ಥಾನಗಳಲ್ಲಿ ಕೇವಲ 2 ಸ್ಥಾನ ಗೆಲ್ಲಲು ಸಾಧ್ಯವಾಗಿರುವ ಪ್ರಿಯಾಂಕಾ ಗಾಂಧಿ ಅವರು ಕರ್ನಾಟಕದಲ್ಲಿ ಸುಳ್ಳು ಆರೋಪ ಮಾಡುತ್ತಿದ್ದಾರೆ. ಅಧಿಕಾರದಲ್ಲಿ ಇದ್ದಾಗ ಕಾಂಗ್ರೆಸ್ ಸಾಮಾಜಿಕ ನ್ಯಾಯ ಕಲ್ಪಿಸಿಕೊಡಲು ಏನೂ ಮಾಡಲಿಲ್ಲ. ಬಿಜೆಪಿ ಸರ್ಕಾರ ಎಸ್ಸಿ–ಎಸ್ಟಿ ಮೀಸಲಾತಿ ಪ್ರಮಾಣವನ್ನು ಹೆಚ್ಚಳ ಮಾಡಿದೆ. ಇದೇ ಕೆಲಸವನ್ನು 5 ವರ್ಷ ಅಧಿಕಾರದಲ್ಲಿದ್ದ ಕಾಂಗ್ರೆಸ್ ಏಕೆ ಮಾಡಲಿಲ್ಲ ಎಂದು ಅರುಣ್‌ಸಿಂಗ್ ಪ್ರಶ್ನಿಸಿದರು.

ನಮ್ಮ ಸರ್ಕಾರ 4 ಲಕ್ಷ ಶೌಚಾಲಯ ನಿರ್ಮಾಣ, ಮನೆ ಮನೆಗೆ ನಲ್ಲಿ ನೀರು, ಬೆಂಗಳೂರು– ಮೈಸೂರು ಎಕ್ಸ್‌ಪ್ರೆಸ್ ವೇ ನಿರ್ಮಾಣ, ರಿಂಗ್ ರೋಡ್ ಸೇರಿ ಅನೇಕ ಅಭಿವೃದ್ಧಿ ಕಾರ್ಯಕ್ರಮ ನಡೆದಿವೆ. ಸೆಮಿ ಕಂಡಕ್ಟರ್ ಕಾರ್ಖಾನೆ ಮೂಲಕ 10 ಸಾವಿರಕ್ಕೂ ಹೆಚ್ಚು ಜನರಿಗೆ ಉದ್ಯೋಗ ಸಿಗಲಿದೆ. ಕರ್ನಾಟಕವು ಎಫ್‌ಡಿಐಯಲ್ಲಿ ಮುಂಚೂಣಿ ಸ್ಥಾನ ಪಡೆದುಕೊಂಡಿದೆ. ಸುಲಲಿತ ವ್ಯವಹಾರದಲ್ಲೂ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ಇನೋವೇಶನ್ ಇಂಡೆಕ್ಸ್‌ನಲ್ಲೂ ಮೊದಲ ಸ್ಥಾನ ಪಡೆದಿದೆ. ಮೊದಲ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಕರ್ನಾಟಕದಿಂದಲೇ ಆರಂಭವಾಗಿದೆ. ವ್ಯಾಪಾರ, ವ್ಯವಹಾರ, ಅಭಿವೃದ್ಧಿ ವಿಚಾರದಲ್ಲಿ ಗಣನೀಯ ಸಾಧನೆಯನ್ನು ಬಿಜೆಪಿ ಸರಕಾರ ಮಾಡಿದೆ ಎಂದು ವಿವರಿಸಿದರು.

ಕಾಂಗ್ರೆಸ್ ಆಡಳಿತದಲ್ಲಿದ್ದಾಗ ಪಿಎಫ್‌ಐ ಜಾಲ ವಿಸ್ತಾರಗೊಂಡಿತ್ತು. ದಂಗೆ, ಹಿಂದೂ ಕಾರ್ಯಕರ್ತರ ಹತ್ಯೆ ನಿರಂತರವಾಗಿತ್ತು. ಸಿದ್ದರಾಮಯ್ಯ ಅವಧಿಯಲ್ಲಿ ಇಂಥ ಸ್ಥಿತಿ ಇತ್ತು. ನಮ್ಮ ಸರ್ಕಾರ ಬಂದಾಗ ಅಭಿವೃದ್ಧಿ ಕಾರ್ಯ ವೇಗ ಪಡೆದುಕೊಂಡಿದೆ. ಯಡಿಯೂರಪ್ಪ ನೇತೃತ್ವದ ಸರ್ಕಾರವು ಗೋಹತ್ಯೆ ನಿಷೇಧಿಸಿತು. ಕೇಂದ್ರ ಸರ್ಕಾರವು ಪಿಎಫ್‌ಐ ನಿಷೇಧಿಸಿತು. ಕಾಂಗ್ರೆಸ್ ಓಲೈಕೆ ನೀತಿ ತನ್ನದಾಗಿಸಿಕೊಂಡಿತ್ತು. ಆದರೆ, ಬಿಜೆಪಿ ಎಲ್ಲರ ಅಭಿವೃದ್ಧಿಗೆ ಗಮನ ಕೊಟ್ಟಿದೆ ಎಂದು ತಿಳಿಸಿದರು.

ಮೀಸಲಾತಿ ವಿಷಯದಲ್ಲಿ ಲಿಂಗಾಯತ, ಒಕ್ಕಲಿಗರ ಸಮುದಾಯಕ್ಕೆ ಬಿಜೆಪಿ ವಿಶ್ವಾಸದ್ರೋಹ ಮಾಡಿದೆ. ಸುಪ್ರೀಂಕೋರ್ಟ್‌ನಲ್ಲಿ ವ್ಯತಿರಿಕ್ತ ಪ್ರಮಾಣಪತ್ರವನ್ನು ಸಲ್ಲಿಸುವ ಮೂಲಕ ಅನ್ಯಾಯ ಮಾಡಿದೆ ಎಂದು ಆರೋಪಿಸಿರುವ ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ್ ಹೇಳಿಕೆಗೆ ತಿರುಗೇಟು ನೀಡಿದ ಅವರು, ಸುಪ್ರೀಂಕೋರ್ಟ್‌ನಲ್ಲಿ ಈ ಕುರಿತು ಇನ್ನೂ ವಿಚಾರಣೆ ನಡೆಯುತ್ತಿದೆ. ಅದು ಇನ್ನೂ ರಾಜ್ಯ ಸರ್ಕಾರ ಅರ್ಜಿಯನ್ನು ತಿರಸ್ಕಾರ ಮಾಡಿಲ್ಲ. ಸರ್ಕಾರದ ಕ್ರಮವನ್ನು ಅನೂರ್ಜಿತಗೊಳಿಸಿಲ್ಲ. ಅದು ತೀರ್ಪು ಕೊಡುವವರೆಗೂ ಸ್ವಲ್ಪ ತಾಳ್ಮೆ ಕಾಯಿರಿ ಎಂದರು. ಸುದ್ದಿಗೋಷ್ಠಿಯಲ್ಲಿ ಶಾಸಕ ಎಸ್.ಎ.ರಾಮದಾಸ್, ಮೈಲ್ಯಾಕ್ ಅಧ್ಯಕ್ಷ ಆರ್.ರಘು ಕೌಟಿಲ್ಯ, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಶಿವಕುಮಾರ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಬಿಜೆಪಿ ನಗರ ಕಾರ್ಯಾಧ್ಯಕ್ಷ ಹೆಚ್.ಜಿ.ಗಿರಿಧರ್ ಇದ್ದರು.

ಪಕ್ಷ ಬಿಟ್ಟವರ ಸ್ಥಿತಿ ನೋಡಿ

ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರಿರುವ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್, ಲಕ್ಷ್ಮಣ್ ಸವದಿ ಮುಂದಿನ ದಿನಗಳಲ್ಲಿ ವ್ಯಥೆ ಪಡುವುದು ನಿಶ್ಚಿತ. 'ನನಗೆ ಬಿಜೆಪಿ ಟಿಕೆಟ್ ತಪ್ಪಲು ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಕಾರಣ' ಎಂದು ಜಗದೀಶ್ ಶೆಟ್ಟರ್, ಸೋಲಿನ ಭಯದಿಂದ ಹೇಳಿದ್ದಾರೆ. ತಮ್ಮ ಜೀವನವನ್ನು ರಾಷ್ಟ್ರ ಹಾಗೂ ಪಕ್ಷಕ್ಕೆ ಅರ್ಪಣೆ ಮಾಡಿರುವ ಸಂತೋಷ್ ಕುರಿತು ಹೀಗೆ ಮಾತನಾಡುವುದು ಸರಿಯಲ್ಲ. ಪಕ್ಷದಿಂದ ಸಿಎಂ ಸೇರಿದಂತೆ ಎಲ್ಲ ಅಧಿಕಾರವನ್ನೂ ಅನುಭವಿಸಿರುವ ಶೆಟ್ಟರ್, ಹೊಸಬರಿಗೆ ಅವಕಾಶ ಕೊಡಲಿಲ್ಲ. ಕಾಂಗ್ರೆಸ್‌ಗೆ ಹೋಗಿರುವ ಅವರಿಗೆ ಸೋಲಿನ ಬಳಿಕ ಮನವರಿಕೆ ಆಗಲಿದೆ. –ಅರುಣ್ ಸಿಂಗ್



ವರುಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಸುತ್ತೂರಿನಲ್ಲಿ ವಿಪಕ್ಷ ನಾಯಕ ಸಿದ್ದರಾಮಯ್ಯ ಅವರ ಪರ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಉದ್ಯಮಿ ಹಾಗೂ ಕಾಂಗ್ರೆಸ್ ಮುಖಂಡ ಎನ್.ಸಂದೇಶ್ ಹಾಗೂ ಇನ್ನಿತರರು ಪಾದಯಾತ್ರೆಯ ಮೂಲಕ ಮತಯಾಚನೆ ಮಾಡಿದರು.

ನಾಗೇಂದ್ರ ಪರ ಅರುಣ್‌ಸಿಂಗ್ ರೋಡ್ ಶೋ



ಮೈಸೂರು,ಏ.27(ಎಂಕೆ)–ಮೈಸೂರು ನಗರ ಹೃದಯ ಭಾಗದಲ್ಲಿ ಭರ್ಜರಿ ರೋಡ್ ಶೋ ನಡೆಸಿದ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್, ಚಾಮರಾಜ ಕ್ಷೇತ್ರದ ಶಾಸಕ ಎಲ್.ನಾಗೇಂದ್ರ ಪರ ಮತಯಾಚಿಸಿದರು.

ಕೆ.ಟಿ.ಸ್ಟ್ರೀಟ್‌ನಲ್ಲಿನ ಪ್ರಭಾ ಟಾಕೀಸ್ ಎದುರಿನಿಂದ ಆರಂಭವಾದ ರೋಡ್ ಶೋ, ಇರ್ವಿನ್ ರಸ್ತೆ ಮಾರ್ಗವಾಗಿ ಪೋಸ್ಟ್ ಆಫೀಸ್ ವೃತ್ತದಿಂದ ಅಶೋಕ ರಸ್ತೆ ಮಾರ್ಗವಾಗಿ ದೊಡ್ಡ ಗಡಿಯಾರದ ಮೂಲಕ ಗಾಂಧಿವೃತ್ತದವರೆಗೆ ಸಾಗಿತು. ಅಪಾರ ಕಾರ್ಯಕರ್ತರೊಂದಿಗೆ ಮಿಂಚಿದ ಅರುಣ್ ಸಿಂಗ್, ಮತದಾರರತ್ತ ಕೈ ಬೀಸಿ ಬಿಜೆಪಿ ಅಭ್ಯರ್ಥಿ ಬೆಂಬಲಿಸುವಂತೆ ಕೋರಿದರು.

ಈ ವೇಳೆ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಅಸ್ತಿತ್ವಕ್ಕೆ ಬರುವುದು ಖಚಿತ. ರಾಜಸ್ಥಾನದಲ್ಲಿ ಸುಳ್ಳು ಭರವಸೆಗಳನ್ನು ನೀಡಿದ್ದ ಕಾಂಗ್ರೆಸ್, ಒಂದೇ ಒಂದೂ ಭರವಸೆಯನ್ನೂ ಈಡೇರಿಸಿಲ್ಲ. ಕಾಂಗ್ರೆಸ್‌ನ ಉಚಿತ ಘೋಷಣೆಗಳು ಭಾಷಣಕ್ಕೆ ಸೀಮಿತವೇ ಹೊರತು ಜಾರಿಗೊಳ್ಳುವುದಿಲ್ಲ ಎಂದು ವ್ಯಂಗ್ಯವಾಡಿದರು. ಅಲ್ಲದೆ ಕಳೆದ 5 ವರ್ಷಗಳಲ್ಲಿ ಚಾಮರಾಜ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿರುವ ನಾಗೇಂದ್ರ ಅವರನ್ನು ಮತ್ತೆ ಗೆಲ್ಲಿಸಿ ಎಂದು ಮನವಿ ಮಾಡಿದರು. ಮೈಲ್ಯಾಕ್ ಅಧ್ಯಕ್ಷ ರಘು ಕೌಟಿಲ್ಯ, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಶಿವಕುಮಾರ್, ಕ್ಷೇತ್ರದ ಅಧ್ಯಕ್ಷ ಸೋಮಶೇಖರ ರಾಜು, ಯುವ ಮೋರ್ಚಾ ನಗರಾಧ್ಯಕ್ಷ ಎಂ.ಜೆ.ಕಿರಣ್‌ಗೌಡ, ಮುಖಂಡರಾದ ಚೌಡಪ್ಪ, ಪ್ರಶಾಂತ್‌ಗೌಡ, ಗಿರೀಶ್, ಪುನೀತ್, ದಿನೇಶ್, ಹರೀಶ್, ಹರ್ಷ, ಅರವಿಂದ್, ಗಣೇಶ್ ಮತ್ತಿತರರಿದ್ದರು.

ನಿಖಿಲ್ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು, ಏ.27– ಮೈಸೂರು ಕುವೆಂಪುನಗರದ ಶ್ರೀ ಕಾವೇರಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿ ನಿಖಿಲ್ ಎಂ.ಕೃಷ್ಣ ದ್ವಿತೀಯ ಪಿಯು ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದಲ್ಲಿ 590 (600ಕ್ಕೆ) ಅಂಕ ಗಳಿಸುವುದರೊಂದಿಗೆ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಸಂಸ್ಕೃತ 100, ಇಂಗ್ಲಿಷ್ 93, ಅರ್ಥಶಾಸ್ತ್ರ 98, ವ್ಯವಹಾರಿಕ ಅಧ್ಯಯನ 100, ಲೆಕ್ಕಶಾಸ್ತ್ರ 99 ಹಾಗೂ ಕಂಪ್ಯೂಟರ್ ಸೈನ್ಸ್‌ನಲ್ಲಿ 100 ಅಂಕ ಗಳಿಸಿದ್ದಾರೆ.

ದಲಿತ, ಶೋಷಿತ ಸಮುದಾಯ ಸಿದ್ದರಾಮಯ್ಯ ಬೆನ್ನಿಗೆ ನಿಲ್ಲಲಿ

ಮಾಜಿ ಮುಖ್ಯಮಂತ್ರಿ ಸೋಲಿಸಲು ಮತೀಯ ಶಕ್ತಿಗಳ ಒಗ್ಗಟ್ಟು: ಮಾಜಿ ಸಚಿವ ಡಾ.ಮಹದೇವಪ್ಪ



ಮೈಸೂರು,ಏ.27(ಎಂಟಿವೈ)–ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸೋಲಿಸಲು ಮತೀಯ ಶಕ್ತಿಗಳೆಲ್ಲರೂ ಒಗ್ಗಟ್ಟಾಗುತ್ತಿದ್ದು, ದಲಿತ ಮತ್ತು ಶೋಷಿತ ಸಮುದಾಯ ಚಾಮುಂಡೇಶ್ವರಿ ಕ್ಷೇತ್ರದ ಉಪ ಚುನಾವಣೆ ಮಾದರಿಯಲ್ಲೇ ವರುಣ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಅವರ ಬೆನ್ನಿಗೆ ಬಂಡೆಯಂತೆ ನಿಂತು ಗೆಲ್ಲಿಸಬೇಕು ಎಂದು ಮಾಜಿ ಸಚಿವ ಡಾ.ಹೆಚ್.ಸಿ.ಮಹಾದೇವಪ್ಪ ಮನವಿ ಮಾಡಿದ್ದಾರೆ.

ಮೈಸೂರು ತಾಲೂಕಿನ ವರಕೋಡು ಗೇಟ್ ಬಳಿ ಕಲ್ಯಾಣ ಮಂಟಪದಲ್ಲಿ ಗುರುವಾರ ವರುಣ ಬ್ಲಾಕ್ ಕಾಂಗ್ರೆಸ್ ಎಸ್‌ಸಿ ಘಟಕ ವತಿಯಿಂದ ಆಯೋಜಿಸಿದ್ದ ಸಾರ್ವಜನಿಕರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ವರುಣ ಕ್ಷೇತ್ರದಲ್ಲಿ ಮತೀಯವಾದಿ ಶಕ್ತಿಗಳು ಸಿದ್ದರಾಮಯ್ಯ ಅವರನ್ನು ಸೋಲಿಸಲು ಹೊರಟಿವೆ. ಅದಕ್ಕಾಗಿ ಎಲ್ಲ ಶಕ್ತಿಗಳು ಕೈ ಜೋಡಿಸಿವೆ. ರಾಜ್ಯ ಅತ್ಯಂತ ಮಹತ್ತರವಾದ ಚುನಾವಣೆಯನ್ನು ಎದುರಿಸುತ್ತಿದೆ. ಹಿಂದೆಂದೂ ಕಂಡರಿಯದ ರೀತಿಯಲ್ಲಿ ಸಂವಿಧಾನ, ಪ್ರಜಾಪ್ರಭುತ್ವ ಅಸ್ತಿತ್ವ, ಅಳಿವು ಉಳಿವಿನ ಪ್ರಶ್ನೆ ನಮ್ಮ ಮುಂದೆ ಎದುರಾಗಿದೆ. ಸಣ್ಣ ಪುಟ್ಟ ಅಸಮಾಧಾನ ಇರಬಹುದು. ಕೆಲವರಿಗೆ ಇಷ್ಟ ಇಲ್ಲದೇ ಇರಬಹುದು. ಆದರೆ, ಈ ಸಮುದಾಯಕ್ಕೆ ಗೆಲುವು ಅನಿವಾರ್ಯ. ಚುನಾವಣೆಯಲ್ಲಿ ದಲಿತರು ಮೈಮರೆತರೆ ಸಂವಿಧಾನ ಕೈ ಜಾರಿ ಹೋಗುತ್ತದೆ ಎನ್ನುವುದನ್ನು ಅರಿಯಬೇಕು ಎಂದು ಮನವರಿಕೆ ಮಾಡಿಕೊಟ್ಟರು. ಮಾತನಾಡುವ ಅವಕಾಶವೇ ಇಲ್ಲದಂತೆ ಮಾಡುವ ಸಂಚು ನಡೆಯುತ್ತಿದೆ. ಬಿಜೆಪಿಗರು ಡಾ.ಅಂಬೇಡ್ಕರ್ ಅವರ ಮೊಮ್ಮಗಳ ಪತಿ ಆನಂದ್ ತೇಲ್ತುಂಬೆಯನ್ನು ಬಂಧಿಸಿದರು. ಸಂವಿಧಾನಕ್ಕೆ ವಿರುದ್ಧ ಮಾತನಾಡದಿದ್ದರೂ, ಎಫ್‌ಐಆರ್ ಹಾಕದೆ ಎರಡು ವರ್ಷಗಳ ಜೈಲಿನಲ್ಲಿಯೇ ಅಕ್ರಮವಾಗಿ ಬಂಧಿಸಿಟ್ಟಿದ್ದರು. ದೇಶಕ್ಕೆ ಶ್ರೇಷ್ಠ ಸಂವಿಧಾನ ಕೊಡುಗೆ ನೀಡಿದ ಡಾ.ಅಂಬೇಡ್ಕರ್ ಅವರ ಕುಟುಂಬದವರನ್ನೇ ಬಿಡದ ಮತೀಯ ಶಕ್ತಿಗಳು ನಮ್ಮನ್ನು ಬಿಡುವುದಿಲ್ಲ ಎನ್ನುವ ಸಂದೇಶ ರವಾನಿಸಿದ್ದಾರೆ. ರಾಹುಲ್ ಗಾಂಧಿ ಅವರನ್ನು ಬಿಟ್ಟಿಲ್ಲ. ದಲಿತರ ಸ್ವಾಭಿಮಾನವನ್ನು ಹತ್ತಿಕ್ಕಲು ಬಿಜೆಪಿ ನಿರಂತರವಾಗಿ ಪ್ರಯತ್ನ ಮಾಡುತ್ತಿದೆ. ಸಾತ್ವಿಕ ಸಿಟ್ಟನ್ನು ಕೆರಳಿಸಿ ಮತೀಯವಾದವನ್ನಾಗಿ ಮುನ್ನೆಲೆಗೆ ತಂದು ಮತಗಳನ್ನು ಕ್ರೋಢೀಕರಿಸುವ ಸಂಚು ನಡೆಯುತ್ತಿದೆ ಎಂದು ಹರಿಹಾಯ್ದರು.

ಸತ್ಯಕ್ಕೆ ದೂರವಾದ ವಿಚಾರ: ಚುನಾವಣೆಯಲ್ಲಿ ನಿರಂತರವಾಗಿ ಗೊಂದಲ ಸೃಷ್ಟಿಸಲು ಸತ್ಯಕ್ಕೆ ದೂರವಾದ ಕಥೆಯನ್ನು ಕಟ್ಟುತ್ತಿದ್ದಾರೆ. ಮಲ್ಲಿಕಾರ್ಜುನ ಖರ್ಗೆ, ಡಾ.ಜಿ.ಪರಮೇಶ್ವರ್, ಕೆ.ಹೆಚ್.ಮುನಿಯಪ್ಪ ಅವರನ್ನು ಸೋಲಿಸಿದರು. ಶ್ರೀನಿವಾಸಪ್ರಸಾದ್ ಅವರನ್ನು ಸಂಪುಟದಿಂದ ಕೈಬಿಟ್ಟರೆಂದು ಸುಳ್ಳು ವಿಚಾರಗಳನ್ನು ಹೇಳಿ ದಲಿತ ಸಮಾಜದ ಜನರ ಮನಸ್ಸಿನಲ್ಲಿ ವಿಷಬೀಜ ಬಿತ್ತುವ ಕೆಲಸ ನಡೆಯುತ್ತಿದೆ. ಇದರ ಬಗ್ಗೆ ದಲಿತ ಸಮುದಾಯ ಅರಿತುಕೊಂಡು ಕೋಮುವಾದಿಗಳ ಸಂಚಿನ ಬಗ್ಗೆ ಜಾಗೃತರಾಗಬೇಕು ಎಂದರು.

ನಾನು ನಂಬಿದ ಸಿದ್ಧಾಂತ, ಬದ್ಧತೆ ಮತ್ತು ಸಂವಿಧಾನದ ಆಶಯವನ್ನು ಸಿದ್ಧರಾಮಯ್ಯ ಅವರು ಹೊಂದಿರುವ ಕಾರಣ ಅವರ ಜತೆಯಾಗಿ ಇದ್ದೇನೆ ಹೊರತು ಟಿಕೆಟ್, ಮಂತ್ರಿ ಹುದ್ದೆಗಲ್ಲ. ವರುಣ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಗೆಲುವಿನ ಅಡಿಪಾಯ ದಲಿತರಾಗಿದ್ದಾರೆ. ಈ ಅಡಿಪಾಯವನ್ನು ಕಟ್ಟುತ್ತಾ ಹೋಗಬೇಕು. ಜೆಡಿಎಸ್ ಹಾಗೂ ಬಿಎಸ್ಪಿಗೆ ದಲಿತರ ಕಾಳಜಿ ಇದ್ದಲ್ಲಿ ಚಾಮರಾಜ, ಕೆ.ಆರ್.ನಗರ ಕ್ಷೇತ್ರದಲ್ಲಿ ಅಭ್ಯರ್ಥಿ ಹಾಕಬಹುದಾಗಿತ್ತು. ಮಂಡ್ಯ ಜಿಲ್ಲೆಯಲ್ಲೂ ದಲಿತ ಅಭ್ಯರ್ಥಿಯನ್ನು ಕಣಕ್ಕಿಳಿಸಬಹುದಾಗಿತ್ತು. ಅದನ್ನು ಬಿಟ್ಟು ವರುಣ ಕ್ಷೇತ್ರದಲ್ಲಿ ದಲಿತರ ಮತಗಳನ್ನು ವಿಭಜಿಸಲು ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗಿದೆ ಎಂದು ಟೀಕಿಸಿದರು.

ಸಭೆಯಲ್ಲಿ ದಲಿತ ಮುಖಂಡ ಭುಗತಗಳ್ಳಿ ಮಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಮುಡಾ ಮಾಜಿ ಅಧ್ಯಕ್ಷ ಸಿ.ಬಸವೇಗೌಡ, ಜಿಪಂ ಮಾಜಿ ಸದಸ್ಯರಾದ ಸುಧಾ ಮಹದೇವಯ್ಯ, ವರುಣ ಬ್ಲಾಕ್ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಮಹದೇವು, ಎಪಿಎಂಸಿ ಮಾಜಿ ಉಪಾಧ್ಯಕ್ಷ ಚಿಕ್ಕಜವರಪ್ಪ, ಮುಖಂಡರಾದ ಅಂಕಯ್ಯ, ಪುಟ್ಟಸುಬ್ಬಯ್ಯ, ರೇವಣ್ಣ, ಪುಟ್ಟಣ್ಣ, ಪ್ರಕಾಶ್, ಮಲ್ಲು, ಎಂ.ನೂತನ್, ನಾಗರಾಜ, ಚಿಕ್ಕದೇವಯ್ಯ, ಕೃಷ್ಣಮೂರ್ತಿ, ಡಿ.ಎನ್.ಮೂರ್ತಿ, ಮಣಿ, ಹೊನ್ನಯ್ಯ, ಬಸವರಾಜು, ದಲಿತ ಹೋರಾಟಗಾರ ಎಂ.ಶಾಂತರಾಜು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಬಿಜೆಪಿಯಿಂದ ದಲಿತರಿಗೆ ಅನ್ಯಾಯ

ಬಿಜೆಪಿ ನಿರಂತರವಾಗಿ ದಲಿತ ಸಮುದಾಯಕ್ಕೆ ಅನ್ಯಾಯ ಮಾಡುತ್ತಲೇ ಬಂದಿದೆ. ಜಾತಿ–ಜಾತಿ, ಧರ್ಮ–ಧರ್ಮಗಳ ನಡುವೆ ಒಡೆದಾಳುವ ನೀತಿ ಅನುಸರಿಸುತ್ತಿದ್ದಾರೆ. ಮೀಸಲಾತಿ ವ್ಯವಸ್ಥೆಯನ್ನೇ ಅಲುಗಾಡಿಸುವ ಸಂಚು ನಡೆಸಲಾಗುತ್ತಿದೆ. ನಮ್ಮ ನಮ್ಮ ವೈಯಕ್ತಿಕ ವಿಚಾರ, ಮನಸ್ತಾಪ ಬದಿಗೊತ್ತಿ ಒಗ್ಗಟ್ಟಿನಿಂದ ಈ ಚುನಾವಣೆಯಲ್ಲಿ ಸಿದ್ದ ರಾಮಯ್ಯ ಅವರ ಗೆಲುವಿಗೆ ಕೆಲಸ ಮಾಡಬೇಕು. ಜೆಡಿಎಸ್ ಅಭ್ಯರ್ಥಿಯಿಂದ ಮತ ವಿಭಜಿಸಿ ಕಾಂಗ್ರೆಸ್ ಸೋಲಿಸುವ ಹುನ್ನಾರವನ್ನು ಬಿಜೆಪಿ ನಾಯಕರು ನಡೆಸಿದ್ದಾರೆ.

–ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕ

ಅನುದಾನ ಕಡಿತ

ಸ್ವಾತಂತ್ರ್ಯ ಬಂದ ನಂತರ ದೇಶ ಅಭಿವೃದ್ಧಿ ಹೊಂದಲು ಕಾಂಗ್ರೆಸ್ ರೂಪಿಸಿದ ಪಂಚ ವಾರ್ಷಿಕ ಯೋಜನೆಗಳು ನೆರವಾಯಿತು. ಕೃಷಿ, ಕೈಗಾರಿಕೆ, ನೀರಾವರಿ, ಶಿಕ್ಷಣ ಕ್ಷೇತ್ರದಲ್ಲಿ ಅಪಾರ ಬೆಳವಣಿಗೆ ಕಂಡಿತು. ಸಿದ್ಧರಾಮಯ್ಯ ಸರ್ಕಾರದಲ್ಲಿ ಜಾರಿಗೆ ತಂದ ಅನ್ನಭಾಗ್ಯ ಯೋಜನೆಯನ್ನು ಮೊಟಕುಗೊಳಿಸಲಾಗಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಹತ್ತು ಕೆಜಿ ಅಕ್ಕಿಯನ್ನು ನೀಡಲಾಗುತ್ತದೆ. ಸಿದ್ದರಾಮಯ್ಯ ಮತ್ತು ಡಾ.ಮಹದೇವಪ್ಪ ಅವಳಿ ಜವಳಿ ಇದ್ದಂತೆ. ಈ ನಾಯಕರು ವಿಧಾನಸೌಧದಲ್ಲಿ ಕುಳಿತರೆ ಹಲವಾರು ಯೋಜನೆಗಳು ಜಾರಿಗೆ ಬರಲಿವೆ.

–ಡಾ.ಡಿ.ತಿಮ್ಮಯ್ಯ, ವಿಧಾನಪರಿಷತ್ ಸದಸ್ಯ

ವೀರಶೈವ ಲಿಂಗಾಯತ ವಧು–ವರರಿಗೆ ಏ.30ರಂದು ಮುಖಾಮುಖಿ ಸಮಾವೇಶ

ಮೈಸೂರು, ಏ.27– ಬೆಂಗಳೂರಿನ ಗಾಂಧಿನಗರದ ಲಿಂಗಾಯತ ಕಲ್ಯಾಣ ಟ್ರಸ್ಟ್‌ನಲ್ಲಿ ಏ.30ರಂದು ಮಧ್ಯಾಹ್ನ 2 ಗಂಟೆಗೆ ವೀರಶೈವ ಲಿಂಗಾಯತ ವಧು–ವರರಿಗೆ ಮುಖಾಮುಖಿ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಇಚ್ಛೆವುಳ್ಳ ವಧು–ವರರು ಮತ್ತು ಪೋಷಕರು ಸಮಾವೇಶದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಲು ಕೋರಲಾಗಿದೆ. ಆನ್‌ಲೈನ್‌ನಲ್ಲಿ ನೋಂದಣಿ ಮಾಡಬಯಸುವವರು www.lingayatkalyanatrust.org ವೆಬ್‌ಸೈಟ್‌ನ ಮೂಲಕ ನೋಂದಣಿ ಮಾಡಬಹುದು. ಮಾಹಿತಿಗೆ ದೂ. 22269237 ಸಂಪರ್ಕಿಸಬಹುದು.



ವರುಣ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಿಎಂ ಸಿದ್ದರಾಮಯ್ಯ ಅವರ ಪರ ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್ ನೇತೃತ್ವದಲ್ಲಿ ಲಿಂಗಾಯತ ಮುಖಂಡರು ಭಾರೀ ಪ್ರಚಾರ ನಡೆಸಿದರು. ಈ ವೇಳೆ ದಾಸನೂರ ನಾಗೇಶ್, ಹುಳಿಮಾವು ಪರಶಿವಮೂರ್ತಿ, ಹನುಮನಪುರ ಮಧು, ಬುಗುತ್‌ಹಳ್ಳಿ ಪ್ರದೀಪ್, ಕಲ್ಕುಂದ ರತ್ನಶೇಖರ್, ಚಿಕ್ಕಳ್ಳಿ ಗುರುಮೂರ್ತಿ, ಎಂಬಿ ಹಳ್ಳಿ ಸುಜೇಂದ್ರ, ಜೋರನಹಳ್ಳಿ ಸ್ವಾಮಣ್ಣ, ಪಿಲ್ಲಹಳ್ಳಿ ಚಿಕ್ಕಬುದ್ದಿ ಗಂಗಾ ಇನ್ನಿತರರು ಹಾಜರಿದ್ದರು.

ಅನುಬಂಧ–47

(ಅಧ್ಯಾಯ 5, ಪ್ಯಾರಾ 5,16,5) ನಮೂನೆ ಸಿ–1 ಯಿಂದ ಸಿ–8 ಮತ್ತು ಸಿ ಎ

ನಮೂನೆ ಸಿ–1

(ಅಭ್ಯರ್ಥಿಯು ವೃತ್ತಪತ್ರಿಕೆಗಳು, ಟಿವಿಯಲ್ಲಿ ಪ್ರಕಟಿಸುವುದಕ್ಕಾಗಿ)

ಅಪರಾಧ ಪ್ರಕರಣಗಳ ಬಗ್ಗೆ ಘೋಷಣೆ :

(ಮಾನ್ಯ ಸರ್ವೋಚ್ಚ ನ್ಯಾಯಾಲಯವು, 2011 ರ ಡಬ್ಲ್ಯೂ ಪಿ (ಸಿವಿಲ್) ಸಂ.536, ದಿನಾಂಕ : 25ನೇ ಸೆಪ್ಟೆಂಬರ್ 2018 (ಸಾರ್ವಜನಿಕ ಹಿತಾಸಕ್ತಿ ಪ್ರತಿಷ್ಠಾನ ಮತ್ತು ಇತರರು–ವಿರುದ್ಧ–ಭಾರತ ಒಕ್ಕೂಟ ಮತ್ತು ಇತರರು) ರಲ್ಲಿ ನೀಡಿದ ತೀರ್ಪಿಗೆ ಅನುಸಾರವಾಗಿ)

ಅಭ್ಯರ್ಥಿಯ ಹೆಸರು : ಜಿ. ಬಿ. ಶಿವಣ್ಣ
ಅಭ್ಯರ್ಥಿಯ ವಿಳಾಸ : # 4314, 6ನೇ ತಿರುವು, ಗಾಂಧಿನಗರ, ನರಸಿಂಹರಾಜ ಮೊಹಲ್ಲಾ, ಮೈಸೂರು–570007.
ರಾಜಕೀಯ ಪಕ್ಷದ ಹೆಸರು : ಪಕ್ಷೇತರ ಅಭ್ಯರ್ಥಿ
ಚುನಾವಣೆಯ ಹೆಸರು : ಕರ್ನಾಟಕ ವಿಧಾನಸಭೆ
ಚುನಾವಣಾ ಕ್ಷೇತ್ರದ ಹೆಸರು : 218 ನರಸಿಂಹರಾಜ ವಿಧಾನಸಭಾ ಕ್ಷೇತ್ರ

ಮೇಲೆ ಸೂಚಿಸಿರುವ ಚುನಾವಣೆಯ ಪಕ್ಷೇತರ ಅಭ್ಯರ್ಥಿಯಾಗಿರುವ ದೂರವಾಣಿ ಚಿಹ್ನೆ ಹೊಂದಿರುವ ಜಿ. ಬಿ. ಶಿವಣ್ಣ (ಅಭ್ಯರ್ಥಿಯ ಹೆಸರು) ಆದ ನಾನು, ನನ್ನ ಅಪರಾಧಿಕ ಪೂರ್ವ ಇತಿಹಾಸದ ಬಗ್ಗೆ ಮುಂದಿನ ವಿವರಗಳನ್ನು ಸಾರ್ವಜನಿಕ ಮಾಹಿತಿಗಾಗಿ ಘೋಷಿಸುತ್ತೇನೆ.

(ಎ) ಬಾಕಿ ಇರುವ ಕ್ರಿಮಿನಲ್ ಪ್ರಕರಣಗಳು:

ಕ್ರ.ಸಂ	ನ್ಯಾಯಾಲಯದ ಹೆಸರು	ಪ್ರಕರಣ ಸಂಖ್ಯೆ ಮತ್ತು ದಿನಾಂಕ	ಪ್ರಕರಣ (ಗಳ) ಸ್ಥಿತಿಗತಿ	ಸಂಬಂಧಪಟ್ಟ ಅಧಿನಿಯಮಗಳ ಪ್ರಕರಣ (ಗಳು) ಮತ್ತು ಅಪರಾಧ (ಗಳ) ಸಂಕ್ಷಿಪ್ತ ವಿವರ
1.	ಗೌರವಾನ್ವಿತ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಶ್ರೀರಂಗಪಟ್ಟಣ	45/2018	ಬಾಕಿ ಇರುತ್ತದೆ	ಭಾರತೀಯ ದಂಡ ಸಂಹಿತೆ ಕಲಂ 353, 504, 332, 506, ಐ.ಪಿ.ಸಿ
2.	ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ (ಕಿ.ಶ್ರೇ) ಮೈಸೂರು.	ಸಿ.ಸಿ. 17805/2022	ಬಾಕಿ ಇರುತ್ತದೆ	ಭಾರತೀಯ ದಂಡ ಸಂಹಿತೆ ಕಲಂ 324, 504, 506 ಸಹವಾಚಕ 34
3.	ಗೌರವಾನ್ವಿತ 3ನೇ ಜೆ.ಎಂ.ಎಫ್.ಸಿ.ನ್ಯಾಯಾಧೀಶರ ನ್ಯಾಯಾಲಯ, ಮೈಸೂರು.	ಸಿ.ಸಿ.452/2020	ಬಾಕಿ ಇರುತ್ತದೆ	ಭಾರತೀಯ ದಂಡ ಸಹಿಂತೆ ಕಲಂ 354 (ಬಿ) ಮತ್ತು 506
4.	ಗೌರವಾನ್ವಿತ 3ನೇ ಜೆ.ಎಂ.ಎಫ್.ಸಿ. ನ್ಯಾಯಾಧೀಶರ ನ್ಯಾಯಾಲಯ, ಮೈಸೂರು.	ಸಿ.ಆರ್.119/2022	ಬಾಕಿ ಇರುತ್ತದೆ	ಭಾರತೀಯ ದಂಡ ಸಂಹಿತೆ ಕಲಂ 143, 447, 427, 504, 506 (2), 149

(ಬಿ) ಕ್ರಿಮಿನಲ್ ಅಪರಾಧಿಗಳಾಗಿ ನ್ಯಾಯ ನಿರ್ಣೀತವಾದ ಪ್ರಕರಣಗಳ ಕುರಿತಾದ ವಿವರಗಳು

ಕ್ರ.ಸಂ	ನ್ಯಾಯಾಲಯದ ಹೆಸರು ಮತ್ತು ಆದೇಶ(ಗಳು) ದಿನಾಂಕ (ಗಳು)	ಅಪರಾಧ (ಗಳ) ವಿವರಣೆ ಮತ್ತು ವಿಧಿಸಲಾದ ದಂಡನೆ	ವಿಧಿಸಲಾದ ಗರಿಷ್ಠ ದಂಡನೆ
1.	ಅನ್ವಯಿಸುವುದಿಲ್ಲ		

ಮೈಸೂರು. ಸಹಿ /– ಜಿ. ಬಿ. ಶಿವಣ್ಣ, ಪಕ್ಷೇತರ ಅಭ್ಯರ್ಥಿ ನರಸಿಂಹರಾಜ ವಿಧಾನಸಭಾ ಕ್ಷೇತ್ರ, ಮೈಸೂರು.

ನಕ್ಕರೆ ಅದೇ ಸ್ವರ್ಗ

ವೈದ್ಯರು : ನೀವು ಪ್ರತಿದಿನ ನಿದ್ದೆ ಮಾಡುವ ಮೊದಲು 10 ನಿಮಿಷ ವಾಕಿಂಗ್ ಮಾಡಿ

ಉದ್ಯೋಗಿ : ನನಗೂ ಹಾಗೆ ಮಾಡಬೇಕೆಂಬ ಆಸೆ ಇದೆ. ಆದರೆ ನಮ್ಮ ಆಫೀಸಿನಲ್ಲಿ ಅದು ಸಾಧ್ಯವಿಲ್ಲವಾಗಿದೆ ಸಾರ್

ಮೈಸೂರು ಮಿತ್ರ

ಶುಕ್ರವಾರ, 28 ಏಪ್ರಿಲ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ನಮ್ಮ ಶಕ್ತಿಗಿಂತ ಹೆಚ್ಚಿನದನ್ನು ನಮ್ಮ ತಾಳ್ಮೆ ಸಾಧಿಸುತ್ತದೆ.

– ಎಡ್ಮಂಡ್ ಬರ್ಕ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ರಸ ಬೆಳೆದು ಕಸ ತಿನ್ನಬೇಡ, ಹಸು ಕಟ್ಟಿ ಮೊಸರಿಗೆ ಪರದಾಡಬೇಡ

ನಿಮ್ಮ ಪತ್ರಗಳು

ಜಾತಿ ವಿಷ ಬೀಜ ಬಿತ್ತುತ್ತಿರುವ ಕಾಂಗ್ರೆಸ್

ಮಾನ್ಯರೆ,

ಕೆಲವು ದಿನಗಳಿಂದ ರಾಜ್ಯ ರಾಜಕಾರಣ ಅಸಹ್ಯ ಅನಿಸುತ್ತಿದೆ. ಕಾರಣ, ಜಾತಿ ಧರ್ಮದ ಹೆಸರಲ್ಲಿ ರಾಜಕಾರಣ ಮಾಡುತ್ತಿರುವುದು. ಯಾವುದೇ ಪಕ್ಷ ಅಧಿಕಾರಕ್ಕೆ ಬರಲು ಎಲ್ಲಾ ಜಾತಿ ಧರ್ಮದ ಜನರ ಆಶೀರ್ವಾದ ಬೇಕು. ಆದರೆ, ಕಾಂಗ್ರೆಸ್ ಪಕ್ಷವು ಲಿಂಗಾಯಿತರ ಜಾತಿ ಬಗ್ಗೆ ಒಂದು ಬೀದಿ ರಾಜಕಾರಣ ಮಾಡುತ್ತಿರುವುದು ದುರದೃಷ್ಟ. ಇದೆ ಕಾಂಗ್ರೆಸ್ ಪಕ್ಷವು ಅಧಿಕಾರದಲ್ಲಿದ್ದಾಗ ವೀರಶೈವ ಲಿಂಗಾಯತರನ್ನು ಬೇರೆ ಮಾಡಲು ಒಬ್ಬ ಲಿಂಗಾಯಿತ ಶಾಸಕನನ್ನು ಮುಂದಿಟ್ಟುಕೊಂಡು ಕೈಸುಟ್ಟಿಕೊಂಡಿತ್ತು. ಈಗ, ಚುನಾವಣೆ ಹತ್ತಿರ ಬರುತ್ತಿದ್ದಂತೆ ಲಿಂಗಾಯತ ಜಾತಿ ಬಗ್ಗೆ ಕಾಂಗ್ರೆಸ್‌ಗೆ ಅನುಕಂಪ ಬಂದಿದೆ. ಕಾರಣ, ಪ್ರಬಲ ವೀರಶೈವ ಲಿಂಗಾಯತ ಮತ ಬಿಜೆಪಿ ಜೊತೆಗಿರುವುದು. ಇದೇ ಲಿಂಗಾಯತ ಜಾತಿ ಹೊಡೆಯಲೆತ್ನಿಸಿದ ಕಾಂಗ್ರೆಸ್‌ಗೆ ಲಿಂಗಾಯತರ ಮತ ಕೇಳುವುದಕ್ಕೆ ಯಾವುದೇ ನೈತಿಕತೆ ಇಲ್ಲ. ಯಾವುದೇ, ಪಕ್ಷವು ಅಭಿವೃದ್ಧಿ ಆಧಾರದಲ್ಲಿ ಮತ ಕೇಳಬೇಕೆ ಹೊರತು ಜಾತಿ ಧರ್ಮದಿಂದಲ್ಲ. ಈಗ ಜನ ಬಹಳ ಬುದ್ಧಿವಂತರಿದ್ದಾರೆ. ಯಾರನ್ನೂ ಮೋಸ ಮಾಡಲು ಸಾಧ್ಯವಿಲ್ಲ. ಇದೇ ರೀತಿ ಜಾತಿ ಧರ್ಮದ ವಿಷ ಬೀಜ ಬಿತ್ತುತ್ತಾ ಹೋದರೆ ಮುಂಬರುವ ದಿನಗಳಲ್ಲಿ ಜನ ತಕ್ಕಪಾಠ ಕಲಿಸುತ್ತಾರೆ.

–ಸಂತೋಷ್, ಮೈಸೂರು

ಪ್ರೇಕ್ಷಕರನ್ನು ಆಕರ್ಷಿಸಿದ ಸುಮಧುರ ಸಂಗೀತ ಸಂಜೆ

ಮಾನ್ಯರೆ,

ಇತ್ತೀಚೆಗೆ ರೋಟರಿ ಐವರಿ ಸಿಟಿ ವತಿಯಿಂದ ರೊ.ವಿ.ಎನ್.ಪ್ರಸಾದ್ ಹಾಗೂ ತಂಡದಿಂದ ಕಲಾಮಂದಿರದಲ್ಲಿ ಆಯೋಜಿಸಿದ್ದ 'ಮೆಗಾ ಮ್ಯೂಸಿಕಲ್ ನೈಟ್' ಲೈವ್ ಪ್ರೇಕ್ಷಕರನ್ನು ಸಂತೋಷಪಡಿಸಿತು. ಸುಮಾರು 50ರಿಂದ 80ರ ದಶಕದ ಹಿಂದಿ ಹಾಡುಗಳು ಕಲಾರಸಿಕರಿಗೆ ಮುದ ನೀಡಿತು. ಆಗಿನ ಕಾಲದ ನಟರು, ಗೀತರಚನೆ, ಸಂಗೀತ, ಹಿನ್ನೆಲೆ ಗಾಯನ ಪುನಃ ನೋಡಬೇಕೆಂದರೆ ಜನ್ಮಜನ್ಮಕ್ಕೆ ಸಾಧ್ಯವಿಲ್ಲ. ಅದನ್ನು ಅರ್ಥ ಮಾಡಿಕೊಂಡಿದ್ದವರು, ಅದರಲ್ಲಿ ಅಭಿರುಚಿ ಹೊಂದಿರುವ ಶ್ರೋತೃಗಳು ಪ್ರತಿ ವರ್ಷ ಆಗಮಿಸಿ, ಆಸ್ವಾದಿಸುತ್ತಾರೆ. ಈ ಕಾರ್ಯಕ್ರಮದ ಪ್ರಮುಖ ಆಕರ್ಷಣೆ ಎಂದರೆ ದಂತಕಥೆ ಮಹಮದ್ ರಫಿ ಅವರ ಮಗಳು ಹಾಗೂ ಅಳಿಯ ಆಗಮಿಸಿ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗನ್ನು ಕೊಟ್ಟರು. ರೊ.ವಿ.ಎನ್.ಪ್ರಸಾದ್ ಸೇರಿದಂತೆ ಅವರ ಮಗಳು ಮಮತಾ, ಹಂಸಿನಿ, ಅಶ್ವಿನ್ ಪ್ರಭು, ಜಯಂತಿ, ಶೀಲಾ, ಡಾ.ಸೋಮನಾಥ್ ಇನ್ನೂ ಮುಂತಾದವರು ತುಂಬಾ ಸೊಗಸಾಗಿ ಎಲ್ಲಿಯೂ ಲೋಪ, ದೋಷಗಳು ಇರದಂತೆ ಹಾಡಿ ಮನರಂಜಿಸಿದರು. ಜಯರಾಂ ಹಾಗೂ ವೃಂದದವರಿಂದ ಲೈವ್ ವಾದ್ಯಗೋಷ್ಠಿ ಕೇಂದ್ರಬಿಂದುವಾಗಿತ್ತು. ನಿರೂಪಕ ಅಫ್ತಾಬ್ ಹಾಗೂ ಪ್ರಸಾದ್ ಅವರ ಮಗ ಅರುಣ್ ಹಾಡಲು ಪಾದಾರ್ಪಣೆ ಮಾಡಿ ಸೊಗಸಾಗಿ ಹಾಡಿದರು. ರೊ.ವಿ.ಎನ್. ಪ್ರಸಾದ್ ಹಾಗೂ ಅವರ ವೃಂದ ಹೀಗೆ ಕಾರ್ಯಕ್ರಮ ನಿರಂತರವಾಗಿ ನೀಡಿ, ಸಾಂಸ್ಕೃತಿಕ ನಗರಿ ಮೈಸೂರಿನ ವರ್ಚಸ್ಸನ್ನು ಮತ್ತಷ್ಟು ಹೆಚ್ಚಿಸಲಿ ಎಂಬುದೇ ನಮ್ಮೆಲ್ಲರ ಆಶಯ.

–ಜ್ಯೋತಿಷಿ ಸಿ.ವಿ.ಶ್ರೀನಿವಾಸರಾವ್, ವಿ.ವಿ.ಮೊಹಲ್ಲಾ, ಮೈಸೂರು

ಗ್ರಾಮೀಣ ಪ್ರದೇಶದಲ್ಲಿ ಮತದಾನದ ಬಗ್ಗೆ ಪ್ರಾತ್ಯಕ್ಷಿಕೆ ಕಾರ್ಯಕ್ರಮ ನೀಡಿ

ಮಾನ್ಯರೆ,

ಎಲ್ಲೆಡೆ ಚುನಾವಣೆಯ ಪ್ರಚಾರ ಎಗ್ಗಿಲ್ಲದೆ ನಡೆಯುತ್ತಿದೆ. ಎಲ್ಲರೂ ತಮ್ಮ ತಮ್ಮ ಪಕ್ಷದ ಬಗ್ಗೆ ಪ್ರಚಾರ ಮಾಡುತ್ತಿದ್ದಾರೆ. ಆದರೆ ಗ್ರಾಮೀಣ ಪ್ರದೇಶದ ಜನರಿಗೆ ಚುನಾವಣೆಗೆ ಸಂಬಂಧಪಟ್ಟಂತೆ ಜಾಗೃತಿ ಮೂಡಿಸಬೇಕು. ಮತದಾನದ ಮಹತ್ವವನ್ನು ತಿಳಿಸಬೇಕು. ಚುನಾವಣೆಯ ಸಂದರ್ಭದಲ್ಲಿ ಹಲವು ಮಂದಿ ಪೊಲೀಸರನ್ನು ನೋಡಿ ಭಯ ಬೀಳಬಹುದು. ಆ ಕೋಣೆಯ ನಿಶಬ್ದ ವಾತಾವರಣವು ಗಾಬರಿ ಹುಟ್ಟಿಸಬಹುದು. ತಮ್ಮ ಅಮೂಲ್ಯವಾದ ಮತದ ಬಗ್ಗೆ ವಿವೇಚನೆ ಇಲ್ಲದೆ ಯಾರೋ ಒಬ್ಬರಿಗೆ ಮತದಾನ ಮಾಡಿ ಬರುತ್ತಾರೆ. ಆ ಸ್ಪರ್ಧೆಯ ಬಗ್ಗೆ ತಿಳುವಳಿಕೆ ಇರುವುದಿಲ್ಲ. ಕೆಲವೊಮ್ಮೆ ಅವರು ಮಾಡಿದ ವೋಟುಗಳು ತಿರಸ್ಕೃತವಾಗುವ ಸಂಭವ ಇರುತ್ತದೆ. ಮತದಾನದ ದಿನ ಪರ ಊರಿಗೆ ಹೋಗುವುದು, ಹೊಲದಲ್ಲಿ ಕೆಲಸ ಎಂದು ಮತದಾನ ಮಾಡದೆ ಕುಳಿತಿರುತ್ತಾರೆ. ಗ್ರಾಮೀಣ ಪ್ರದೇಶದ ಜನರಿಗೆ ಮತದಾನದ ಬಗ್ಗೆ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಮಾಡಬೇಕು. ಇದನ್ನು ನೋಡಿದ ಜನರಿಗೆ ಧೈರ್ಯದಿಂದ ಆಲೋಚನೆ ಮಾಡಿ ಮತದಾನ ಮಾಡುತ್ತಾರೆ. ಅವರಿಗೆ ಆತ್ಮತೃಪ್ತಿಯು ಇರುತ್ತದೆ. ಅಭ್ಯರ್ಥಿಯ ಗೆಲುವಿಗೂ ಕಾರಣರಾಗುತ್ತಾರೆ

–ಎಂ. ಎಸ್. ಉಷಾ ಪ್ರಕಾಶ್, ಲೇಖಕಿ ಹಾಗೂ ಕವಯಿತ್ರಿ, ಮೈಸೂರು.


'ಮೈಸೂರು ಮಿತ್ರ'ನಿಗೆ ಶುಭಾಶಯ

ಮಾನ್ಯರೆ,

ನಮ್ಮ ಹೆಮ್ಮೆಯ 'ಮೈಸೂರು ಮಿತ್ರ' ದಿನಪತ್ರಿಕೆಯು 43 ವಸಂತಗಳನ್ನು ಪೂರೈಸಿ 44ನೇ ವಸಂತಕ್ಕೆ ಕಾಲಿಟ್ಟಿರುವುದು ಸಂತಸದ ವಿಷಯ. ಪತ್ರಿಕಾ ಧರ್ಮವನ್ನು ಪಾಲಿಸಿಕೊಂಡು, ಸತ್ಯನಿಷ್ಠ ವರದಿಗಳನ್ನು ಆಧರಿಸಿದ ಸುದ್ದಿಗಳ ಸಿಹಿ ಹೂರಣವನ್ನು ಓದುಗರಿಗೆ ನೀಡುತ್ತಿರುವ ಪತ್ರಿಕೆಯ ಸಂಪಾದಕೀಯ ಬಳಗಕ್ಕೆ ಕೋಟಿ ವಂದನೆಗಳು. ಕೆಲಸದ ಒತ್ತಡದ ನಡುವೆಯೂ ಸಹ ಓದುಗರ ಸಂಖ್ಯೆ ಹೆಚ್ಚಾದರೆ ಪತ್ರಿಕೆಗೆ ಹಾಗೂ ವಿಚಾರ ಮೌಲ್ಯಕ್ಕೆ ಮತ್ತು ಸುದ್ದಿಗಳಿಗೆ ಬೆಲೆ ಕೊಟ್ಟಂತಾಗುತ್ತದೆ.

ಸಾಮಾಜಿಕ ಜಾಲತಾಣಗಳ ನಡುವೆ ಬೆರಳ ತುದಿಯಲ್ಲಿ ಎಲ್ಲಾ ಸುದ್ದಿಗಳು ಭಿತ್ತರವಾಗುತ್ತಿರುವ ಸಂದರ್ಭದಲ್ಲಿ ಈ ಒಂದು ಪತ್ರಿಕಾ ಮಾಧ್ಯಮ ಯಶಸ್ಸು ಸಾಧಿಸಬೇಕಾದರೆ ಓದುಗರ ಸಂಖ್ಯೆ ಹೆಚ್ಚಳವಾಗಬೇಕು ಹಾಗೂ ಗ್ರಂಥಾಲಯಗಳಿಗೆ ಹೋಗುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಇಷ್ಟೆಲ್ಲಾ ಎಡರು–ತೊಡರುಗಳ ನಡುವೆಯೂ ಪತ್ರಿಕೆ ಬೆಳಗ್ಗೆ ಮನೆಗೆ ಬರಲಿಲ್ಲವಾದರೆ ಏನೋ ಚಡಪಡಿಕೆ. ಬೆಳಗಿನ ಕಾಫಿಯೊಂದಿಗೆ ತಾಜಾ ಸುದ್ದಿಗಳ ಸ್ವಾಧವನ್ನು ಅನುಭವಿಸುತ್ತಾ ಮೈಸೂರು ಮಿತ್ರ ದಿನಪತ್ರಿಕೆಯನ್ನು ಬರಮಾಡಿಕೊಂಡಾಗಲೇ ದಿನ ಎಂದಿನಂತೆ ಪ್ರಾರಂಭವಾಗುತ್ತದೆ. ಇಲ್ಲವಾದರೆ ಏನೋ ಕಳೆದುಕೊಂಡ ಭಾವ ಬರುತ್ತದೆ. ವಿಶೇಷ ಅಂಕಣಗಳು, ರಾಜಕೀಯ, ಸಾಮಾಜಿಕ ಸಮಸ್ಯೆಗಳ ಪ್ರತಿಬಿಂಬ, ಶಿಕ್ಷಣ, ಧಾರ್ಮಿಕ ವಿಚಾರಗಳು, ನೈತಿಕ ಶಿಕ್ಷಣ ಹೀಗೆ ಎಲ್ಲಾ ವಿಚಾರಗಳನ್ನು ಒಂದೇ ಪತ್ರಿಕೆಯಲ್ಲಿ ಕಾಣಬಹುದಾಗಿರುತ್ತದೆ. 'ಮೈಸೂರು ಮಿತ್ರ' ದಿನಪತ್ರಿಕೆಯು ಇನ್ನೂ ಹೆಚ್ಚಿನ ರೀತಿಯಲ್ಲಿ ಬೆಳೆಯಲಿ ಹಾಗೂ ಪತ್ರಿಕೋದ್ಯಮದಲ್ಲಿ ಉನ್ನತ ಸ್ಥಾನಕ್ಕೇರಲಿ ಎಂದು ಹಾರೈಸುವ 'ಮೈಸೂರು ಮಿತ್ರ' ದಿನಪತ್ರಿಕೆಯ ಅಭಿಮಾನಿ. ಶುಭವಾಗಲಿ.

–ವೇಣು ಬೀರಿಹುಂಡಿ, ಮೈಸೂರು




ಕಾರ್ಕಳ ಆನಂದಭಟ್

ಮೊ.7676554198

ದಿಕ್ಕುದೆಸೆ

ಟಿಬೆಟ್ ವಿಷಯದಲ್ಲಿ ಮಗ್ಗುಲಲ್ಲಿ ಮುಳ್ಳು ಹಾಸಿಕೊಂಡ ಭಾರತ!





> ❝ ಕಳೆದ ಏಳು ದಶಕಗಳಿಂದ ಜಿಂಕೆಯೊಂದು ಸಿಂಹದ ಮುಂದೆ ನಿಂತು ಶಾಂತಿ, ಸಹಬಾಳ್ವೆ ಬಗ್ಗೆ ಸ್ಫೂರ್ತಿಯುತ ಭಾಷಣ ಮಾಡಿದಂತೆ ಟಿಬೆಟಿಯನ್‌ರು ಚೀನಾ ಸರಕಾರ ಸೇನೆ ವಿರುದ್ಧ ಹೋರಾಡುತ್ತಿದ್ದಾರೆ. ಧರ್ಮಗುರು ದಲೈಲಾಮರು ಈಗಲೂ ಅಹಿಂಸಾತ್ಮಕ ಹೋರಾಟದ ಮೇಲೆ ವಿಶ್ವಾಸವಿರಿಸಿದ್ದಾರೆ. ವಯಸ್ಸಾಗಿರುವ ದಲೈಲಾಮರು ಚೀನಿ ಸಾರ್ವಭೌಮತ್ವದಡಿ ಟಿಬೆಟ್‌ಗೆ ಸ್ವಾಯತ್ತ ಆಡಳಿತ ದೊರೆತರೂ ಸಾಕು ಎಂಬ ಅಭಿಪ್ರಾಯ ಹೊಂದಿದ್ದಾರೆ. ಹಾಂಗ್‌ಕಾಂಗ್ ಜನರ ಸ್ವಾತಂತ್ರ್ಯ ಕಸಿದು ಅಲ್ಲಿ ದಮನ ಕಾರ್ಯ ಮಾಡುತ್ತಿರುವ ಚೀನಿ ಸರಕಾರ ಟಿಬೆಟ್‌ಗೆ ಸ್ವಾಯತ್ತ ನೀಡಿದರೂ ಏನೂ ಪ್ರಯೋಜನವಿಲ್ಲ ಎಂಬ ಸತ್ಯವನ್ನು ದಲೈಲಾಮರು ತಿಳಿದು, ಟಿಬೆಟ್‌ನ ಸಂಪೂರ್ಣ ಸ್ವಾತಂತ್ರ್ಯಕ್ಕಾಗಿ ಎಲ್ಲ ರೀತಿಯಲ್ಲಿ ಹೋರಾಟ ನಡೆಸುವ ಸಾಮರ್ಥ್ಯವಿರುವ ಯುವಕನನ್ನು ಗುರುತಿಸಿ ನೂತನ ಧರ್ಮಗುರುವಾಗಿ ನೇಮಿಸಿ ದಲೈಲಾಮರು ಹಿಂದೆ ಸರಿಯಬೇಕಾಗಿದೆ.

ಚೀನಿ ಮಿಲಿಟರಿ ಟಿಬೆಟ್ ಆಕ್ರಮಿಸಿ ಏಳು ದಶಕಗಳಾದವು. ಆಕ್ರಮಣ ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದ ಸಹಸ್ರಾರು ಟಿಬೆಟಿಯನ್‌ರನ್ನು ಚೀನಿ ಸೇನೆ ಕ್ರೂರವಾಗಿ ಹತ್ಯೆಗೈದಿತ್ತು. ಬೌದ್ಧ ಧರ್ಮದ ಅನುಯಾಯಿಗಳಾಗಿರುವ ಟಿಬೆಟಿಯನ್‌ರು ಸಹಜವಾಗಿ ಶಾಂತಿಪ್ರಿಯರು, ಅಹಿಂಸೆಯಲ್ಲಿ ವಿಶ್ವಾಸವುಳ್ಳವರಾಗಿದ್ದಾರೆ. ಟಿಬೆಟಿಯನ್‌ರ ಅಹಿಂಸಾತ್ಮಕ ಪ್ರದರ್ಶನ ಚೀನಿ ರಾಕ್ಷಸಿ ಬಲಕ್ಕೆ ಸರಿಸಾಟಿಯಾಗಿರಲಿಲ್ಲ. ಜಗತ್ತಿನ ಇತಿಹಾಸದಲ್ಲಿ ಟಿಬೆಟ್ ಆಕ್ರಮಣ ಒಂದು ಕಪ್ಪುಚುಕ್ಕೆಯಾಗಿದೆ. ಜಾಗತಿಕ ಸಮುದಾಯವು ಈ ಮಾರಣಹೋಮವನ್ನು ಅಸಹಾಯಕತೆ ಹಾಗೂ ವೈಯಕ್ತಿಕ ಸ್ವಾರ್ಥದಿಂದ ಪ್ರೇಕ್ಷಕರಂತೆ ವೀಕ್ಷಿಸಿತು.

ಭಾರತವು ಟಿಬೆಟಿಯನ್‌ರ ದುರ್ದಶೆಯನ್ನು ಮೌನವಾಗಿ ನಿರ್ಲಕ್ಷಿಸಿತು. ಈ ಆಕ್ರಮಣ ಇಂದಿಗೂ ಭಾರತೀಯರ ಅಂತರಾತ್ಮವನ್ನು ಚುಚ್ಚುತ್ತಿದೆ. ಗಾಯದ ಮೇಲೆ ಬರೆ ಎಳೆದಂತೆ ಚೀನಾದ ಟಿಬೆಟ್ ಆಕ್ರಮಣಕ್ಕೆ ಭಾರತವು ಮಾನ್ಯತೆ ನೀಡಿ ಭಾರೀ ಪ್ರಮಾದವೆಸಗಿತು. ಈ ರೀತಿ ಭಾರತವು ಶತ್ರುವನ್ನು ಮನೆ ಬಾಗಿಲಿಗೆ ಬರಲು ಆಹ್ವಾನ ನೀಡಿತು. ಇದರ ಪರಿಣಾಮ 1962ರಲ್ಲಿ ಚೀನಾದೊಂದಿಗೆ ನಡೆದ ಯುದ್ಧದಲ್ಲಿ ಭಾರತವು ಹೀನಾಯವಾಗಿ ಸೋಲನುಭವಿಸಿತು. ಈ ಯುದ್ಧದ ನಂತರವೂ ಭಾರತವನ್ನು ಎಲ್ಲ ಕ್ಷೇತ್ರಗಳಲ್ಲಿ ಚೀನಾ ನಿರಂತರವಾಗಿ ಕಾಡುತ್ತಿದೆ. ದೊಕ್ಲಾಂ ಪ್ರದೇಶ ಅತಿಕ್ರಮಿಸಿ ದರ್ಪ ತೋರಿತು. ಗಲ್ವಾನ್ ಘಾಟಿಯಲ್ಲಿ ಭಾರತ–ಚೀನಾ ಸೇನೆ ಮಧ್ಯೆ ಘರ್ಷಣೆಯಾಯಿತು. ಅರುಣಾಚಲ ಪ್ರದೇಶ ತನ್ನದೆಂದು ತವಾಂಗ್ ಪ್ರದೇಶದಲ್ಲಿ ತರಲೆ ತೆಗೆದಿದೆ. ಅರುಣಾಚಲದ ಅನೇಕ ಹಳ್ಳಿಗಳ ಹೆಸರುಗಳನ್ನು ತನ್ನ ಭೂಪಟದಲ್ಲಿ ಬದಲಾಯಿಸಿ ಪ್ರಕಟಿಸಿದೆ. ನೆಹರು ಮಾಡಿದ ಪ್ರಮಾದದ ಫಲವನ್ನು ಭಾರತ ನಿರಂತರವಾಗಿ ಅನುಭವಿಸುತ್ತಿದೆ. ಟಿಬೆಟ್‌ಗೆ ಸಂಬಂಧಿಸಿದಂತೆ ಭಾರತ ಮಾಡಿದ ಏಕೈಕ ಉತ್ತಮ ಕಾರ್ಯವೆಂದರೆ ಧರ್ಮಗುರು ದಲೈಲಾಮಾ ಮತ್ತವರ ಶಿಷ್ಯರು, ಅನುಯಾಯಿಗಳಿಗೆ ನಿರಾಶ್ರಿತರ ರೂಪದಲ್ಲಿ ಭಾರತ ಪ್ರವೇಶಿಸಿ ವಾಸಿಸಲು ಅವಕಾಶ ನೀಡಿತು.

ಪಾಶ್ಚಾತ್ಯ ರಾಷ್ಟ್ರಗಳ ಮೌನ: ಪ್ರಜಾತಂತ್ರದ ರಕ್ಷಕರೆಂದು ಹೇಳಿಕೊಳ್ಳುವ ಅಮೇರಿಕ ಹಾಗೂ ಪಾಶ್ಚಾತ್ಯ ದೇಶಗಳು ಬಿಕ್ಕಟ್ಟಿನ ಘಳಿಗೆಯಲ್ಲಿ ಟಿಬೆಟ್‌ಗೆ ಯಾವುದೇ ರೀತಿಯ ಸಹಾಯ ನೀಡದೇ ಕೇವಲ ಬಾಯಿಮಾತಿನ ಸಹಾನುಭೂತಿ ತೋರಿ ಸುಮ್ಮನಾದವು. ಚೀನಾ ವಿರುದ್ಧ ಟಿಬೆಟಿಯನ್‌ರು ಗೆರಿಲ್ಲಾ ಯುದ್ಧ ಹೂಡಲು ಅಮೇರಿಕ ಪ್ರೋತ್ಸಾಹ ನೀಡಿ ಕೆಲವೇ ದಿನಗಳಲ್ಲಿ ಆತುರಾತುರವಾಗಿ ಬೆಂಬಲ ಹಿಂದೆಗೆಯಿತು. ಪ್ರಸ್ತುತ ಅಮೇರಿಕವು ತೋರಿಕೆಗಾಗಿ ಕಾಂಗ್ರೆಸ್‌ನಲ್ಲಿ ಕಾಲಕಾಲಕ್ಕೆ ಟಿಬೆಟ್ ಪರ ನಿರ್ಣಯಗಳನ್ನು ಮಾಡುವುದರ ಹೊರತು ಯಾವುದೇ ರೀತಿಯ ಶಾಶ್ವತ ಪರಿಹಾರಕ್ಕೆ ಅಮೇರಿಕ ಆಸಕ್ತಿ ಹೊಂದಿಲ್ಲ.

ಟಿಬೆಟ್ ಪ್ರಸ್ತುತ ಭಾರತದಿಂದ ಕಾರ್ಯ ನಿರ್ವಹಿಸುವ ದೇಶಭ್ರಷ್ಟ ಸರಕಾರ ಹೊಂದಿದೆ. ಈ ಸರಕಾರವು ಆಟಕ್ಕೂ ಇಲ್ಲ, ಲೆಕ್ಕಕ್ಕೂ ಇಲ್ಲ ಎನ್ನುವ ರೀತಿಯಲ್ಲಿ ಪರಿಣಾಮ ಶೂನ್ಯವಾಗಿದೆ. ಚೀನಿ ಸೈನಿಕರು ನಡೆಸಿದ ಕ್ರೌರ್ಯ, ಮಾಡಿದ ಮಾರಣಹೋಮ ವಿವರಿಸಿ ಟಿಬೆಟಿಯನ್ ಯುವಕರನ್ನು ಚೀನಾ ವಿರುದ್ಧ ಹೋರಾಡಲು ಪ್ರೇರೇಪಿಸಲು ಪ್ರತ್ಯಕ್ಷದರ್ಶಿಗಳ್ಯಾರೂ ಏಳು ದಶಕಗಳ ನಂತರ ಈಗ ಬದುಕಿ ಉಳಿದಿಲ್ಲ. ಹೊಸ ತಲೆಮಾರಿನವರಿಗೆ ಚೀನಾ ಸರಕಾರವು ವ್ಯವಸ್ಥಿತವಾಗಿ ಎಲ್ಲ ರೀತಿಯಲ್ಲಿ ಟಿಬೆಟಿಯನ್ ಮೂಲ ಸಂಸ್ಕೃತಿಯಿಂದ ಪ್ರತ್ಯೇಕಿಸುವ ಮೂಲಕ ಅವರಲ್ಲಿ ಟಿಬೆಟ್ ಪ್ರತ್ಯೇಕ ದೇಶವೆಂಬ ಭಾವನೆಯನ್ನೇ ನಾಶ ಮಾಡುತ್ತಿದೆ.

ಟಿಬೆಟಿಯನ್‌ರಿಗೆ ಮುಂದೇನು ದಾರಿ?: ಚೀನಿ ಆಕ್ರಮಣದಿಂದ ವಲಸೆ ಹೋಗಿರುವ ಸಾವಿರಾರು ಟಿಬೆಟಿಯನ್‌ರು ಭಾರತ ಸಹಿತ ಜಗತ್ತಿನ ಅನೇಕ ದೇಶಗಳಲ್ಲಿ ಆಶ್ರಯ ಪಡೆದಿದ್ದಾರೆ. ಹೆಚ್ಚಿನವರು ಪೌರತ್ವವನ್ನು ಪಡೆದಿದ್ದಾರೆ. ಇವರಿಗೆ ಟಿಬೆಟ್ ಸ್ವಾತಂತ್ರ್ಯ ಹೋರಾಟವನ್ನು ಜೀವಂತವಾಗಿರಿಸಿ ಮುಂದುವರಿಸಿಕೊಂಡು ಹೋಗುವ ಅವಕಾಶವಿದೆ. ಟಿಬೆಟಿನೊಳಗೂ ತಾವು ಭವಿಷ್ಯದಲ್ಲಿ ಸ್ವತಂತ್ರರಾಗುವೆವೆಂಬ ಆತ್ಮವಿಶ್ವಾಸ, ಆಶಾಭಾವನೆ ಕುಂದಿಲ್ಲ. ಈ ಭಾವನೆಗೆ ಶಕ್ತಿ ತುಂಬುವ ಕಾರ್ಯವನ್ನು ವಿದೇಶಗಳಲ್ಲಿರುವ ಟಿಬೆಟಿಯನ್‌ರು ಮಾಡಬೇಕಾಗಿದೆ.

ಈಗಲೂ ಟಿಬೆಟ್‌ನ ನಗರಗಳ ಜನನಿಬಿಡ ಪ್ರದೇಶಗಳಲ್ಲಿ ಚೀನಾದ ಪಾಶವಿ ಆಡಳಿತ ಪ್ರತಿಭಟಿಸಿ ಟಿಬೆಟಿಯನ್‌ರು ತಮಗೆ ತಾವೇ ಬೆಂಕಿ ಹಚ್ಚಿ ಆತ್ಮಾಹುತಿ ಮಾಡಿಕೊಳ್ಳುತ್ತಿದ್ದಾರೆ. ಇಂತಹ ಹೃದಯವಿದ್ರಾವಕ ಕೃತ್ಯಗಳು ಟಿಬೆಟಿಯನ್‌ರಲ್ಲಿ ಚೀನಿ ಆಡಳಿತದ ವಿರುದ್ಧ ಇರುವ ಹತಾಶೆ, ಅಸಹಾಯಕತೆ ಹಾಗೂ ಆಕ್ರೋಶವನ್ನು ಪರಿಚಯಿಸುತ್ತಿದೆ. ಈ ಕೃತ್ಯಗಳ ಮೂಲಕ ಟಿಬೆಟಿಯನ್‌ರು ತಮ್ಮ ಸ್ವಾತಂತ್ರ್ಯ ಹೋರಾಟವನ್ನು ಜೀವಂತವಾಗಿರಿಸಿ ಜಗತ್ತಿನ ಅಂತರಾತ್ಮಕ್ಕೆ ಪ್ರಶ್ನೆ ಮಾಡುತ್ತಿದ್ದಾರೆ. ಟಿಬೆಟಿಯನ್‌ರ ಈ ರೀತಿಯ ಕೃತ್ಯಗಳು ಜಗತ್ತಿನ ಗಮನ ಸೆಳೆಯುವ ಹಾಗೂ ಸಹಾನುಭೂತಿ ಗಳಿಸುವಲ್ಲಿ ಯಶಸ್ವಿಯಾಗಿದೆ. ಇದು ಚೀನಿ ಸರಕಾರದ ಆಕ್ರೋಶಕ್ಕೂ ಕಾರಣವಾಗಿದೆ.

ಉಪ ಖಂಡದಲ್ಲಿ ಚೀನಾ ಹೆಚ್ಚಿನೆಲ್ಲ ದೇಶಗಳೊಂದಿಗೆ ಗಡಿ ಸಮಸ್ಯೆ ಹೊಂದಿದೆ. ಅನೇಕ ದೇಶಗಳಿಗೆ ಚೀನಾ ಸಾಲ ನೀಡಿ ಆರ್ಥಿಕ ಭಯೋತ್ಪಾದನೆ ಮೂಲಕ ತನ್ನ ನಿಯಂತ್ರಣಕ್ಕೆ ತಂದು ಇವುಗಳನ್ನು ಆರ್ಥಿಕ ಗುಲಾಮರನ್ನಾಗಿ ಮಾಡುತ್ತಿದೆ. ಚೀನಾದ ಆರ್ಥಿಕ ಶಕ್ತಿ ಮತ್ತು ಮಿಲಿಟರಿ ಭಯದಿಂದ ಯಾವುದೇ ದೇಶವಿಂದು ಚೀನಾದೊಂದಿಗೆ ಶತ್ರುತ್ವ ಹೊಂದಲು ಸಿದ್ಧವಿಲ್ಲ. ಚೀನಾದ ಆಕ್ರಮಣಕಾರಿ ಯೋಜನೆಗಳು ಮತ್ತು ವಿಧಾನಗಳು ವಿಶ್ವದ ಶಾಂತಿ ಮತ್ತು ಗಡಿ ಸಾರ್ವಭೌಮತ್ವಕ್ಕೆ ಅಪಾಯಕಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಚೀನಾ ಸರಕಾರದ ಅನಾಚಾರಗಳು, ಸೇನಾ ಕ್ರೌರ್ಯಗಳನ್ನು ಜಗತ್ತಿಗೆ ವಿವರಿಸಲು ಟಿಬೆಟಿಯನ್‌ರು ಸರಿಯಾದ ಜನಾಂಗವಾಗಿದೆ. ಟಿಬೆಟಿಯನ್‌ರು ವಿಶ್ವವ್ಯಾಪಿಯಾಗಿ ಚೀನಿಯರ ದೌರ್ಜನ್ಯಗಳ ವಿರುದ್ಧ ಆಂದೋಲನ ಹೂಡಬೇಕಾಗಿದೆ. ಸ್ವಾತಂತ್ರ್ಯಕ್ಕಾಗಿ ತಮ್ಮ ಸಂಘರ್ಷವನ್ನು ಬಿರುಸುಗೊಳಿಸಬೇಕಾಗಿದೆ. ಆಂದೋಲನವನ್ನು ಇನ್ನಷ್ಟು ತೀವ್ರ ಹಾಗೂ ಆಕ್ರಮಣಕಾರಿಗೊಳಿಸಬೇಕಾಗಿದೆ.

ಕಳೆದ ಏಳು ದಶಕಗಳಿಂದ ಜಿಂಕೆಯೊಂದು ಸಿಂಹದ ಮುಂದೆ ನಿಂತು ಶಾಂತಿ, ಸಹಬಾಳ್ವೆ ಬಗ್ಗೆ ಸ್ಫೂರ್ತಿಯುತ ಭಾಷಣ ಮಾಡಿದಂತೆ ಟಿಬೆಟಿಯನ್‌ರು ಚೀನಾ ಸರಕಾರ ಸೇನೆ ವಿರುದ್ಧ ಹೋರಾಡುತ್ತಿದ್ದಾರೆ. ಧರ್ಮಗುರು ದಲೈಲಾಮರು ಈಗಲೂ ಅಹಿಂಸಾತ್ಮಕ ಹೋರಾಟದ ಮೇಲೆ ವಿಶ್ವಾಸವಿರಿಸಿದ್ದಾರೆ. ವಯಸ್ಸಾಗಿರುವ ದಲೈಲಾಮರು ಚೀನಿ ಸಾರ್ವಭೌಮತ್ವದಡಿ ಟಿಬೆಟ್‌ಗೆ ಸ್ವಾಯತ್ತ ಆಡಳಿತ ದೊರೆತರೂ ಸಾಕು ಎಂಬ ಅಭಿಪ್ರಾಯ ಹೊಂದಿದ್ದಾರೆ. ಹಾಂಗ್‌ಕಾಂಗ್ ಜನರ ಸ್ವಾತಂತ್ರ್ಯ ಕಸಿದು ಅಲ್ಲಿ ದಮನ ಕಾರ್ಯ ಮಾಡುತ್ತಿರುವ ಚೀನಿ ಸರಕಾರ ಟಿಬೆಟ್‌ಗೆ ಸ್ವಾಯತ್ತ ನೀಡಿದರೂ ಏನೂ ಪ್ರಯೋಜನವಿಲ್ಲ ಎಂಬ ಸತ್ಯವನ್ನು ದಲೈಲಾಮರು ತಿಳಿದು, ಟಿಬೆಟ್‌ನ ಸಂಪೂರ್ಣ ಸ್ವಾತಂತ್ರ್ಯಕ್ಕಾಗಿ ಎಲ್ಲ ರೀತಿಯಲ್ಲಿ ಹೋರಾಟ ನಡೆಸುವ ಸಾಮರ್ಥ್ಯವಿರುವ ಯುವಕನನ್ನು ಗುರುತಿಸಿ ನೂತನ ಧರ್ಮಗುರುವಾಗಿ ನೇಮಿಸಿ ದಲೈಲಾಮರು ಹಿಂದೆ ಸರಿಯಬೇಕಾಗಿದೆ. ಅಮೇರಿಕದ ದೈತ್ಯ ಮಿಲಿಟರಿ ಶಕ್ತಿಯ ಎದುರು 20 ವರ್ಷಗಳ ಕಾಲ ಗೆರಿಲ್ಲಾ ಯುದ್ಧ ಹೂಡಿ ವಿಯೆಟ್ನಾಂ ಗೆಲುವು ಸಾಧಿಸಿತು. ಅತ್ಯಾಧುನಿಕ ಶಸ್ತ್ರಾಸ್ತ್ರಗಳು ಹಾಗೂ ಸಶಕ್ತ ಸೇನಾ ಪಡೆಗಳಿದ್ದ ರಷ್ಯಾ ಮತ್ತು ಅಮೇರಿಕ, ಆಫ್ಘಾನಿಸ್ಥಾನದ ಬಂಡುಕೋರ ಪಡೆಗಳಿಗೆ ಸೋತು ಕಾಲ್ಕಿತ್ತವು. ಅಮೇರಿಕ ಹಾಗೂ ಇನ್ನಿತರ ಬಲಾಢ್ಯ ದೇಶಗಳು ನೀಡುತ್ತಿರುವ ಆಧುನಿಕ ಶಸ್ತ್ರಗಳು ಹಾಗೂ ಸಂಪನ್ಮೂಲದಿಂದಾಗಿ ಪುಟ್ಟ ರಾಷ್ಟ್ರ ಯುಕ್ರೇನ್ ಅನ್ನು ವಶಪಡಿಸಿಕೊಳ್ಳಲು ರಷ್ಯಾಕ್ಕೆ ಇನ್ನೂ ಸಾಧ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ಶಾಂತಿಯುತ ಪ್ರತಿಭಟನೆ, ಆತ್ಮಾಹುತಿಯಂತಹ ಪರಿಣಾಮ ಶೂನ್ಯ ಹಾಗೂ ಅರ್ಥಹೀನ ಯೋಚನೆಗಳನ್ನು ತ್ಯಜಿಸಿ ಟಿಬೆಟಿಯನ್‌ರು ಸಂಪೂರ್ಣ ಸ್ವಾತಂತ್ರ್ಯಕ್ಕಾಗಿ ಸಶಸ್ತ್ರ ಹೋರಾಟಕ್ಕೆ ಸಿದ್ಧವಾಗಬೇಕಾಗಿದೆ. ಇವರ ಹೋರಾಟಕ್ಕೆ ಜಗತ್ತಿನ ಎಲ್ಲ ದೇಶಗಳು ಎಲ್ಲ ರೀತಿಯಲ್ಲಿ ಬೆಂಬಲ ನೀಡಬೇಕಾಗಿದೆ. ಏಕೆಂದರೆ ಚೀನಾ ವಿಶ್ವ ಶಾಂತಿಗೆ ಬೆದರಿಕೆಯಾಗಿದೆ.



ಮೈಸೂರಿನ ಬನ್ನಿಮಂಟಪ ಹುಡ್ಕೋ ಲೇಔಟ್‌ನಲ್ಲಿ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ತನ್ವೀರ್ ಸೇಠ್ ಗುರುವಾರ ಪಾದಯಾತ್ರೆ ಮೂಲಕ ಅಪಾರ ಬೆಂಬಲಿಗರೊಂದಿಗೆ ಮತಯಾಚನೆ ಮಾಡಿದರು. ಚಿತ್ರದಲ್ಲಿ ಉದ್ಯಮಿ ಅಬ್ದುಲ್ ಖಾದರ್, ಮುಖಂಡ ಅಬ್ದುಲ್ಲಾ ಇತರರನ್ನು ಕಾಣಬಹುದು.

ಪ್ರಚೋದನಕಾರಿ ಹೇಳಿಕೆ: ಅಮಿತ್ ಶಾ ವಿರುದ್ಧ ಕಾಂಗ್ರೆಸ್ ದೂರು

ಬೆಂಗಳೂರು, ಏ.27– ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ರಾಜ್ಯದಲ್ಲಿ ಪ್ರಚೋದನಕಾರಿ ಹೇಳಿಕೆ ನೀಡುತ್ತಿದ್ದು, ದ್ವೇಷ ಹರಡಲು ಪ್ರಯತ್ನ ನಡೆಸುತ್ತಿದ್ದಾರೆಂದು ಆರೋಪಿಸಿ ಕಾಂಗ್ರೆಸ್ ನಾಯಕರು ನಗರದ ಪೊಲೀಸರಿಗೆ ಗುರುವಾರ ದೂರು ನೀಡಿದ್ದಾರೆ.

ನಗರದ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ ಕಾಂಗ್ರೆಸ್ ಮುಖಂಡರಾದ ರಣದೀಪ್ ಸಿಂಗ್ ಸುರ್ಜೆವಾಲಾ, ಡಾ. ಪರಮೇಶ್ವರ್ ಮತ್ತು ಡಿ.ಕೆ.ಶಿವಕುಮಾರ್ ಅವರು, ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ನಾಯಕ ಅಮಿತ್ ಶಾ ಮತ್ತು ಬಿಜೆಪಿ ರ್ಯಾಲಿ ಆಯೋಜಕರ ವಿರುದ್ಧ ದೂರು ದಾಖಲಿಸಿದ್ದಾರೆ.

ರಾಜ್ಯ ವಿಧಾನಸಭಾ ಚುನಾವಣೆಯ ರಣಕಣ ದಿನದಿಂದ ದಿನಕ್ಕೆ ಕಾವೇರುತ್ತಿದ್ದು, ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ, ಕೋಮು ಗಲಭೆಗಳು ಸೃಷ್ಟಿಯಾಗಲಿವೆ ಎಂದು ಅಮಿತ್ ಶಾ ಹೇಳಿಕೆ ನೀಡಿದ್ದರು. ಈ ಹೇಳಿಕೆಗೆ ಕಾಂಗ್ರೆಸ್ ತೀವ್ರವಾಗಿ ಕಿಡಿಕಾರಿದ್ದು, ಉದ್ದೇಶಪೂರ್ವಕವಾಗಿ ಅಮಿತ್ ಶಾ ಅವರು ಪ್ರಚೋದನಕಾರಿ ಹೇಳಿಕೆ ನೀಡುತ್ತಿದ್ದು, ದ್ವೇಷ ಹರಡಲು ಬಿಜೆಪಿಯ ಸಮಾವೇಶಗಳಲ್ಲಿ ಪ್ರಚೋದನಕಾರಿ ಹೇಳಿಕೆ ನೀಡುತ್ತಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಭಾರತದ ಅಭಿವೃದ್ಧಿಗೆ ಮೈಸೂರು ಕೊಡುಗೆ ಅಪಾರ: ಶ್ರೀರಾಮ್

ಮೈಸೂರು,ಏ.27(ಸಿಎನ್)– ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಭಾರತ ಆರ್ಥಿಕತೆ ಹಾಗೂ ಅಭಿವೃದ್ಧಿಯಲ್ಲಿ ಸಾಕಷ್ಟು ಮುಂದಿದೆ. ದೇಶದ ಅಭಿವೃದ್ಧಿಗೆ ಜನರ ಕೊಡುಗೆ ಕೂಡ ಅಪಾರ ಹಾಗೂ ದೇಶದ ಎಲ್ಲಾ ರಾಜ್ಯಗಳ ಕೊಡುಗೆ ಕೂಡ ಬಹಳಷ್ಟಿದೆ ಎಂದು ಐಜಿಎಸ್‌ಸಿ ಅಧ್ಯಕ್ಷ ಶ್ರೀರಾಮ್ ತಿಳಿಸಿದ್ದಾರೆ.



ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಲಾಗಿದ್ದ ನರೇಡ್ಕೋ ಮೈಸೂರು ಘಟಕದ ಮಾಸಿಕ ಸಭೆಯಲ್ಲಿ ಮಾತನಾಡಿದರು. ಭಾರತದ ಅಭಿವೃದ್ಧಿಗೆ ಹಿಂದಿನಿಂದಲೂ ಮೈಸೂರು ಕೊಡುಗೆ ನೀಡುತ್ತಾ ಬಂದರೂ ಇಂದಿಗೂ ಅಭಿವೃದ್ಧಿ ದೃಷ್ಟಿಯಲ್ಲಿ ಹಿಂದೆ ಬಿದ್ದಿದೆ. ಹಾಗಾಗಿ ಮೈಸೂರಿನ ಸರ್ವತೋಮುಖ ಬೆಳವಣಿಗೆಗೆ ಎಲ್ಲಾ ಸಂಘ ಸಂಸ್ಥೆಗಳು, ಸಾರ್ವಜನಿಕರು ಒಗ್ಗೂಡಿ ಮುಂದಿನ ಪೀಳಿಗೆಗೆ ಅಭಿವೃದ್ಧಿ ಹೊಂದಿದ ಮೈಸೂರನ್ನು ಉಡುಗೊರೆಯಾಗಿ ನೀಡೋಣ ಎಂದರು.

ಕೇಂದ್ರ ಸರ್ಕಾರದ ಐದು ಬಿಲಿಯನ್ ಡಾಲರ್ ವಹಿವಾಟಿನ ಆರ್ಥಿಕ ಯೋಜನೆ ಗುರಿ ತಲುಪಲು ನಮ್ಮ ಮೈಸೂರು ತನ್ನದೇ ರೀತಿಯಲ್ಲಿ ಕೊಡುಗೆ ನೀಡಲು ಸಜ್ಜಾಗಿದೆ. ಬೆಂಗಳೂರು ಸಿಲಿಕಾನ್ ವ್ಯಾಲಿ ಇನ್ ಎಂಬಂತೆ ಮೈಸೂರು ನಗರವು ಸೆಮಿಕಂಡಕ್ಟರ್ ಘಟಕದ ಉತ್ಪಾದನೆಯಲ್ಲಿ ತನ್ನ ಸಾರ್ವಭೌಮತ್ವ ಸ್ಥಾಪಿಸಲು ಬ್ರಾಂಡ್ ಮೈಸೂರು ಎಂಬ ಯೋಜನೆಯಡಿ ಸಿದ್ಧವಾಗಿದೆ. ಮೈಸೂರು ನಗರವು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ಗಳಿಸಲು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಹತ್ತು ಅಂಶಗಳುಳ್ಳ ಯೋಜನೆಯನ್ನು ಅನುಷ್ಠಾನಕ್ಕೆ ತರಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ 'ಬ್ರಾಂಡ್ ಮೈಸೂರು ಯೋಜನೆ' ಗುರಿ ಮತ್ತು ಉದ್ದೇಶಗಳ ಕುರಿತು ಚರ್ಚೆ ಹಾಗೂ ಸಂವಾದ ಕಾರ್ಯಕ್ರಮ ನಡೆಸಲಾಯಿತು.

ಆರ್ಕಿಟೆಕ್ಟ್ ಸುಧೀಂದ್ರ ಜಿಕೆ, ಅಡಚಣೆ ಮತ್ತು ನಿರ್ಮಾಣ ಉದ್ಯಮದ ರೋಬೋಟಿಕ್ಸ್ ಅಳವಡಿಕೆ ತಂತ್ರಜ್ಞಾನದ ಬಗ್ಗೆ ಸುದೀರ್ಘವಾಗಿ ವಿಶ್ಲೇಷಿಸಿದರು.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣ ಗೌಡ, ಮೈಸೂರು ಕೈಗಾರಿಕಾ ಸಂಘದ ಪ್ರಧಾನ ಕಾರ್ಯದರ್ಶಿ ಸುರೇಶ್ ಕುಮಾರ್ ಜೈನ್, ಸಿಆರ್‌ಡಿಐ ಅಧ್ಯಕ್ಷ ಶ್ರೀ ಹರಿ ದ್ವಾರಕನಾಥ್, ನರೇಡ್ಕೋ ಮೈಸೂರು ಘಟಕದ ಅಧ್ಯಕ್ಷ ಆದಿಶೇಷನಗೌಡ, ಕಾರ್ಯದರ್ಶಿ ಎಂ.ಎಲ್.ನಾಗೇಂದ್ರ ಮತ್ತಿತರರು ಹಾಜರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ನಾವು ಪುಂಡಾಟಿಕೆ ಮಾಡಿಲ್ಲ, ಮಾಡೋಕೆ ನಮಗೂ ಬರುತ್ತೆ



ಮೈಸೂರು, ಏ.27– ಯಾವುದೇ ಕಾರಣಕ್ಕೂ ನಾವು ಪುಂಡಾಟಿಕೆ ಮಾಡಿಲ್ಲ, ಆದರೆ ಪುಂಡಾಟಿಕೆ ಮಾಡುವವರನ್ನು ನಿಯಂತ್ರಣ ಮಾಡೋಕೆ ಬರುತ್ತೆ. ಬೇಕಿದ್ದರೆ ಒಬ್ಬನೇ ನಿಮ್ಮ ಊರಿಗೆ ಬರುತ್ತೇನೆ. ಪುಂಡಾಟಿಕೆ ಮಾಡಿ ನೋಡೋಣ ಎಂದು ಮೈಸೂರು–ಕೊಡಗು ಸಂಸದ ಪ್ರತಾಪ್ ಸಿಂಹ ಎಚ್ಚರಿಸಿದ್ದಾರೆ.

ಸಿದ್ದರಾಮನಹುಂಡಿಯಲ್ಲಿ ಪ್ರಚಾರ ನಡೆಸುತ್ತಿದ್ದಾಗ ಬಿಜೆಪಿ ಪ್ರಚಾರ ರಥದ ಮೇಲೆ ಕಲ್ಲು ತೂರಾಟ ನಡೆಸಿದ ಪ್ರಕರಣದ ಸಂಬಂಧ ಈ ಎಚ್ಚರಿಕೆ ಕೊಟ್ಟಿದ್ದಾರೆ. ನಿಮ್ಮ ಊರಿಗೆ ಬಂದು ಮತದಾರರ ಆಶೀರ್ವಾದ ಕೇಳೋಕೆ, ಪ್ರಚಾರ ಮಾಡೋಕೆ ನಮಗೂ ಹಕ್ಕಿದೆ. ಆದರೆ ಪುಂಡಾಟಿಕೆ ಮಾಡುವವರಿಗೆ ಹೇಳ್ತೀನಿ, ನಾವು ಪುಂಡಾಟಿಕೆ ಮಾಡಿಲ್ಲ, ಅದನ್ನು ತಡೆಯೋಕೆ ನಮಗೂ ಬರುತ್ತೆ ಅಂಬೇಡ್ಕರ್ ಅವರ ಸಂವಿಧಾನದ ಆಶಯವನ್ನು ಚಾಚೂ ತಪ್ಪದೇ ಪಾಲಿಸುವವರು ನಾವು ಎಂದರು.

ಸಿದ್ದರಾಮನಹುಂಡಿ ಹೆಸರಿನಲ್ಲೇ ರಾಮನ ಹೆಸರಿದೆ. ರಾಮನನ್ನು ಆರಾಧಿಸುವ, ಭಜಿಸುವ ಆಂಜನೇಯ ಹುಟ್ಟಿನ ಬಗ್ಗೆ ಪ್ರಶ್ನೆ ಮಾಡುವವರು ಈ ಊರಿನಲ್ಲಿ ಇರಬಾರದು ಎಂದು ಪ್ರತಾಪ್ ಸಿಂಹ ಅಬ್ಬರಿಸಿದರು.

ವರುಣ ಕ್ಷೇತ್ರದಲ್ಲಿ ಸೋಮಣ್ಣ ಮತ್ತು ಪ್ರತಾಪ್ ಸಿಂಹ ಗುರುವಾರ ರಾತ್ರಿ ಪ್ರಚಾರ ನಡೆಸುತ್ತಾ ಸಿದ್ದರಾಮನಹುಂಡಿಗೆ ಆಗಮಿಸಿದ ಕೆಲವರು ಕಲ್ಲು ತೂರಾಟ ನಡೆಸಿದರು ಎಂದು ಬಿಜೆಪಿ ಕಾರ್ಯಕರ್ತರು ಆರೋಪಿಸಿದ್ದಾರೆ. ಈ ಸಂದರ್ಭದಲ್ಲಿ ಎರಡು ಪಕ್ಷದ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದು ಕೈಕೈ ಮಿಲಾಯಿಸುವ ಹಂತಕ್ಕೆ ಪರಿಸ್ಥಿತಿ ತಲುಪಿತು. ಕಾಂಗ್ರೆಸ್ ಬೆಂಬಲಿಗರು ಬಿಜೆಪಿ ಕಾರ್ಯಕರ್ತ ನಾಗೇಶ್ ಮೇಲೆ ಹಲ್ಲೆ ನಡೆಸಿದರು ಎಂದು ದೂರಲಾಗಿದೆ.

ಈ ಕುರಿತು ನಾಗೇಶ್ ತಂದೆ ಚಂದ್ರಪ್ಪ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ಈ ಮಧ್ಯೆ ನಾಗೇಶ್‌ಗೆ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಯಿತು ಎಂದು ಬಿಜೆಪಿ ನಾಯಕರು ತಿಳಿಸಿದ್ದಾರೆ.

ವರುಣ ಕ್ಷೇತ್ರದ ಅಭ್ಯರ್ಥಿ ಸಿದ್ದರಾಮಯ್ಯ ಅವರ ಅಣ್ಣನ ಮನೆ ಮುಂದೆ ಬಿಜೆಪಿ ರಥ ಸಂದರ್ಭದಲ್ಲಿ ಈ ಘಟನೆ ನಡೆದಿದೆ.

ಸಿದ್ದರಾಮಯ್ಯ ಪ್ರತಿಕ್ರಿಯೆ

ರಾಯಚೂರಿನಲ್ಲಿ ಮಾತನಾಡಿದ ಸಿದ್ದರಾಮಯ್ಯ, ಯಾವ ಕಾರಣಕ್ಕೆ ಈ ಘಟನೆ ನಡೆದಿದೆ ಎಂಬುದು ತಿಳಿದಿಲ್ಲ. ಮಾಹಿತಿ ಪಡೆದುಕೊಳ್ಳುತ್ತೇನೆ. ಆದರೆ ಬಿಜೆಪಿ, ಜೆಡಿಎಸ್ ಅಥವಾ ಇನ್ಯಾವುದೇ ಪಕ್ಷವಾಗಲಿ ಪ್ರಚಾರ ಮಾಡುವ ಹಕ್ಕಿದೆ. ಇದನ್ನು ಯಾರೂ ತಡೆಯಬಾರದು ಎಂದು ತಿಳಿಸಿದ್ದಾರೆ.

ಶಾಸಕ ಜಿ.ಟಿ.ದೇವೇಗೌಡರ ಪರ ಪತ್ನಿ ಶ್ರೀಮತಿ ಲಲಿತಾ, ಪುತ್ರಿಯರಾದ ಅನ್ನಪೂರ್ಣ, ಯಶೋಧಾ ಮತಯಾಚನೆ





ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಬೋಗಾದಿಯಲ್ಲಿ ಜೆಡಿಎಸ್ ಅಭ್ಯರ್ಥಿ ಜಿ.ಟಿ.ದೇವೇಗೌಡರ ಪತ್ನಿ ಶ್ರೀಮತಿ ಲಲಿತಾ ಬಿರುಸಿನ ಪ್ರಚಾರ ನಡೆಸಿದರು. (ಬಲಚಿತ್ರ) ಗೌಡರ ಪುತ್ರಿಯರಾದ ಅನ್ನಪೂರ್ಣ ಹಾಗೂ ಯಶೋಧಾ ತಂದೆಯ ಪರ ಮೈಸೂರಿನ ಶಾರದಾದೇವಿನಗರ, ರಾಮಕೃಷ್ಣನಗರದಲ್ಲಿ ಗುರುವಾರ ಪಾದಯಾತ್ರೆ ಮೂಲಕ ಮತಯಾಚಿಸಿದರು.

ಮೈಸೂರು, ಏ.27 (ಎಸ್‌ಬಿಡಿ)– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಹಾಗೂ ಹಾಲಿ ಶಾಸಕ ಜಿ.ಟಿ.ದೇವೇಗೌಡರ ಪುತ್ರಿಯರೂ ತಂದೆಯ ಪರ ಮತಬೇಟೆಗಿಳಿದಿದ್ದಾರೆ.

ಜಿ.ಟಿ.ದೇವೇಗೌಡರ ಪುತ್ರಿಯರಾದ ಅನ್ನಪೂರ್ಣ ಹಾಗೂ ಯಶೋಧಾ ಅವರು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸೇರುವ ಮೈಸೂರು ನಗರದ ರಾಮಕೃಷ್ಣನಗರ ಹಾಗೂ ಶಾರದಾದೇವಿನಗರದಲ್ಲಿ ಗುರುವಾರ ಬಿರುಸಿನ ಪ್ರಚಾರ ನಡೆಸಿದರು. ಮನೆ ಮನೆಗೆ ತೆರಳಿ ತಮ್ಮ ತಂದೆ ಜಿ.ಟಿ.ದೇವೇಗೌಡರಿಗೆ ಮತ ನೀಡಿ, ಮತ್ತೆ ಶಾಸಕರಾಗಿ ಆಯ್ಕೆ ಮಾಡುವಂತೆ ಮನವಿ ಮಾಡಿದರು.

ಕಳೆದ ಚುನಾವಣೆಯಲ್ಲಿ ಅತ್ಯಧಿಕ ಮತಗಳನ್ನು ನೀಡಿ ಗೆಲ್ಲಿಸಿದ್ದೀರಿ. ನಮ್ಮ ತಂದೆಯವರು ಸಾಕಷ್ಟು ಅಭಿವೃದ್ಧಿ ಕಾರ್ಯಗಳ ಮೂಲಕ ಮತದಾರರ ಋಣ ತೀರಿಸುವ ಪ್ರಯತ್ನ ಮಾಡಿದ್ದಾರೆ. ಸದಾ ಜನರೊಂದಿಗಿದ್ದು ಕೆಲಸ ಮಾಡಲು ಉತ್ಸುಕರಾಗಿರುತ್ತಾರೆ. ಈ ಬಾರಿಯೂ ಹರಿಸಿ, ಆಶೀರ್ವದಿಸಿ. ನಮ್ಮ ತಂದೆಗೆ ಮತ ನೀಡುವ ಮೂಲಕ ಗೆಲ್ಲಿಸಿಕೊಡಿ ಎಂದು ಕೋರಿದರು. ಇವರೊಂದಿಗೆ ಶೇಖರ್ ಸೇರಿದಂತೆ ಅನೇಕ ಜೆಡಿಎಸ್ ಮುಖಂಡರು ಪ್ರಚಾರದಲ್ಲಿ ಭಾಗಿಯಾಗಿದ್ದರು.

ಜಿಟಿಡಿ ಪತ್ನಿ ಪ್ರಚಾರ: ಜಿ.ಟಿ.ದೇವೇಗೌಡರ ಪತ್ನಿ ಲಲಿತಾ ಜಿ.ಟಿ.ದೇವೇಗೌಡರೂ ಪ್ರಚಾರದಲ್ಲಿ ಸಕ್ರಿಯವಾಗಿದ್ದಾರೆ. ಬೋಗಾದಿ ಎರಡನೇ ಹಂತದಲ್ಲಿ ಗುರುವಾರ ಬೆಳಗ್ಗೆ ಗಣಪತಿ ದೇವಾಲಯದಲ್ಲಿ ಪೂಜೆ ಸಲ್ಲಿಸಿದ ಬಳಿಕ ಮನೆ ಮನೆಗೆ ತೆರಳಿ ಮತ ಯಾಚಿಸಿದರು. ಜಿ.ಟಿ.ದೇವೇಗೌಡರ ಅಭಿವೃದ್ಧಿ ಕೆಲಸ ಕಾರ್ಯಗಳ ಬಗ್ಗೆ ಕ್ಷೇತ್ರದ ಜನರಿಗೆ ಚೆನ್ನಾಗಿ ತಿಳಿದಿದೆ. ದಯಮಾಡಿ ಈ ಬಾರಿಯೂ ಅತೀ ಹೆಚ್ಚು ಮತಗಳನ್ನು ನೀಡಿ, ವಿಜಯಶಾಲಿಯಾಗಲು ಹರಸುವಂತೆ ಮನವಿ ಮಾಡಿಕೊಂಡರು. ಕಾರ್ಪೊರೇಟರ್ ಸವಿತಾ ಸುರೇಶ್, ಸುರೇಶ್, ಉಮಾ ಶಂಕರ್, ಬೋಗಾದಿ ಚಂದ್ರಶೇಖರ್ ಅನೇಕ ಮುಖಂಡರು ಪ್ರಚಾರದಲ್ಲಿ ಭಾಗಿಯಾಗಿ, ಜಿ.ಟಿ.ದೇವೇಗೌಡರ ಪರ ಮತಯಾಚಿಸಿದರು.

ಗೀತಾ ಶಿವರಾಜ್‌ಕುಮಾರ್ ಇಂದು ಅಧಿಕೃತವಾಗಿ ಕಾಂಗ್ರೆಸ್ ಸೇರ್ಪಡೆ

ಬೆಂಗಳೂರು, ಏ.27– ನಟ ಶಿವರಾಜ್‌ಕುಮಾರ್ ಪತ್ನಿ ಗೀತಾ ಶಿವರಾಜ್‌ಕುಮಾರ್ ಅವರು ನಾಳೆ (ಶುಕ್ರವಾರ) ಕಾಂಗ್ರೆಸ್ ಪಕ್ಷಕ್ಕೆ ಸೇರಲಿದ್ದಾರೆ ಎಂದು ವರದಿಯಾಗಿದೆ.



ಕೆಪಿಸಿಸಿ ಕಚೇರಿಯಲ್ಲಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ನಾಳೆ ಗೀತಾ ಅವರು ಕಾಂಗ್ರೆಸ್‌ಗೆ ಸೇರ್ಪಡೆಯಾಗಲಿದ್ದಾರೆ. ಮಾಜಿ ಸಿಎಂ ದಿವಂಗತ ಎಸ್. ಬಂಗಾರಪ್ಪನವರ ಪುತ್ರಿಯಾಗಿರುವ ಗೀತಾ ಅವರು, ಈ ಹಿಂದೆ ಜೆಡಿಎಸ್‌ನಿಂದ ಲೋಕಸಭಾ ಚುನಾವಣೆಗೆ ಬಿ.ಎಸ್.ಯಡಿಯೂರಪ್ಪ ಎದುರು ಸ್ಪರ್ಧಿಸಿದ್ದರು. ಆದರೆ, ಬಿ.ಎಸ್. ಯಡಿಯೂರಪ್ಪ ಅವರ ಎದುರು ಭಾರೀ ಮತಗಳ ಅಂತರದಿಂದ ಸೋತಿದ್ದರು.

ಬಂಗಾರಪ್ಪ ಅವರ ಐವರು ಮಕ್ಕಳಲ್ಲಿ ಮಧು ಬಂಗಾರಪ್ಪ, ಕುಮಾರ್ ಬಂಗಾರಪ್ಪ ಮತ್ತು ಗೀತಾ ಅವರು ರಾಜಕೀಯ ಜೀವನದಲ್ಲಿದ್ದಾರೆ. ಮಧು ಬಂಗಾರಪ್ಪ ಮತ್ತು ಕುಮಾರ್ ಬಂಗಾರಪ್ಪ ಅವರು ಕ್ರಮವಾಗಿ ಕಾಂಗ್ರೆಸ್ ಮತ್ತು ಬಿಜೆಪಿಯಲ್ಲಿದ್ದು, ಈ ಬಾರಿ ಸೊರಬ ವಿಧಾನಸಭಾ ಚುನಾವಣೆಯಲ್ಲಿ ಸೆಣಸಲಿದ್ದಾರೆ. 2021ರ ಜುಲೈನಲ್ಲಿ ಮಧು ಬಂಗಾರಪ್ಪ ಜೆಡಿಎಸ್ ತೊರೆದು ಕಾಂಗ್ರೆಸ್ ಸೇರಿದ್ದರು. ಆಗಲೇ ಗೀತಾ ಶಿವರಾಜ್‌ಕುಮಾರ್ ಸಹ ಕಾಂಗ್ರೆಸ್ ಸೇರಲಿದ್ದಾರೆ ಎನ್ನುವ ಸುದ್ದಿಗಳು ಹಬ್ಬಿದ್ದವು. ಈ ಹಿಂದೆಯೇ ಗೀತಾ ಶಿವರಾಜ್‌ಕುಮಾರ್ ಕಾಂಗ್ರೆಸ್‌ಗೆ ಬಂದಿದ್ದಾರೆ ಎಂದುಕೊಳ್ಳಿ ಎಂದು ಹೇಳಿದ್ದ ಮಧು ಬಂಗಾರಪ್ಪ, ಗೀತಾ ಅವರು ಪಕ್ಷ ಸೇರುವ ಕುರಿತು ಸುಳಿವು ನೀಡಿದ್ದರು. ಇದೀಗ ಅಧಿಕೃತವಾಗಿ ಅವರು ಕಾಂಗ್ರೆಸ್ ಪಕ್ಷವನ್ನು ಸೇರ್ಪಡೆಯಾಗುತ್ತಿದ್ದಾರೆ.



ಚಾಮುಂಡೇಶ್ವರಿ ಕ್ಷೇತ್ರದ ಕರ್ನಾಟಕ ಪ್ರಜಾ ಪಾರ್ಟಿ(ರೈತ ಪರ್ವ)ಅಭ್ಯರ್ಥಿ ಬಿ.ಶಿವಣ್ಣ ಮೈಸೂರಿನ ವಿಜಯನಗರ 4ನೇ ಹಂತದಲ್ಲಿ ಪ್ರಚಾರ ನಡೆಸಿದರು.



ಮೈಸೂರಿನ ಸಿದ್ದಾರ್ಥ ಲೇ ಔಟ್‌ನಲ್ಲಿ ನರಸಿಂಹರಾಜ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸಂದೇಶ್ ಸ್ವಾಮಿ ನೇತೃತ್ವದಲ್ಲಿ ಹಲವು ಕಾಂಗ್ರೆಸ್, ಜೆಡಿಎಸ್ ಮುಖಂಡರು ಬಿಜೆಪಿ ಸೇರ್ಪಡೆಯಾದರು. ಈ ವೇಳೆ ಪಾಲಿಕೆ ಸದಸ್ಯ ಸಾತ್ವಿಕ್, ಮುಖಂಡರಾದ ಅಶೋಕ್, ಸು.ಮುರಳಿ, ಜಗದೀಶ್, ಶೇಖರ, ಗಗನ್, ನಮಂತ್, ಆದಿತ್ಯ ಮಿತನ್, ತಿಮ್ಮಯ್ಯ ನಿತೇಶ್, ಪೋರಬ್ ಕಿರಣ್ ಇತರರಿದ್ದರು.

ಭಕ್ತರ ದರ್ಶನಕ್ಕೆ ಬದರಿನಾಥ ದೇವಾಲಯ ಮುಕ್ತ; ಮೋದಿ ಹೆಸರಲ್ಲಿ ಮೊದಲ ಪೂಜೆ

ಬದರಿನಾಥ, ಏ.27– ಉತ್ತರಾಖಂಡದ ಬದರಿನಾಥ ದೇವಾಲಯದ ದ್ವಾರ ಗಳನ್ನು ಗುರುವಾರ ತೆರೆಯಲಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಹೆಸರಿನಲ್ಲಿ ಮೊದಲ ಪೂಜೆ ಮಾಡಲಾಯಿತು ಎಂದು ದೇವಾಲಯದ ಸಮಿತಿ ತಿಳಿಸಿದೆ.

ಇಂದು ಬೆಳಗ್ಗೆ 7:10ಕ್ಕೆ ದೇವಾಲಯದ ಬಾಗಿಲು ತೆರೆಯುವಿಕೆಯನ್ನು ವೀಕ್ಷಿಸಲು ಸಾವಿರಾರು ಯಾತ್ರಾರ್ಥಿಗಳು ಹಿಮಾಲಯದ ದೇಗುಲದಲ್ಲಿ ಲಘು ಹಿಮಪಾತ ಮತ್ತು ಮಳೆಯ ನಡುವೆ ಜಮಾಯಿಸಿದ್ದರು. ದೇವಾಲಯ ದ್ವಾರ ತೆಗೆಯುತ್ತಿದ್ದಂತೆ ಭಗವಾನ್ ವಿಷ್ಣುವಿಗೆ ನಮನ ಸಲ್ಲಿಸಿದರು. ಈ ವೇಳೆ ದೇವಸ್ಥಾನವನ್ನು 15 ಕ್ವಿಂಟಾಲ್ ಹೂವಿನಿಂದ ಅಲಂಕರಿಸಲಾಗಿತ್ತು ಮತ್ತು ಉದ್ಘಾಟನಾ ಸಮಾರಂಭದ ನಂತರ ಅದರ ಪ್ರಧಾನ ಅರ್ಚಕ ಈಶ್ವರಿ ಪ್ರಸಾದ್ ನಂಬೂದಿರಿ ಅವರು ಗರ್ಭಗುಡಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ, ಎಲ್ಲರಿಗೂ ಒಳಿತಾಗಲಿ ಎಂದು ಪ್ರಾರ್ಥಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ಹೆಸರಿನಲ್ಲಿ ಮೊದಲ ಪೂಜೆಯನ್ನು ಮಾಡಲಾಯಿತು ಗುರುವಾರ ಬದರಿನಾಥ ತೆರೆಯುವುದರೊಂದಿಗೆ, ಉತ್ತರಾಖಂಡದ ಎಲ್ಲಾ ಚಾರ್ ಧಾಮ್ ದೇವಾಲಯಗಳು ಈಗ ಯಾತ್ರಾರ್ಥಿಗಳ ದರ್ಶನಕ್ಕೆ ಮುಕ್ತವಾಗಿವೆ.

ಸಾಮೂಹಿಕ ಉಪನಯನ


ಮೈಸೂರು, ಏ.27– ಮೈಸೂರಿನ ಶ್ರೀ ವೈಷ್ಣವ ಸಾಮೂಹಿಕ ಉಪನಯನ ಸಮಿತಿ ವತಿಯಿಂದ ಶ್ರೀ ವೈಷ್ಣವ ವಟುಗಳಿಗೆ ಮೇ 22ರಂದು ಕೃಷ್ಣಮೂರ್ತಿಪುರಂನ ಶ್ರೀರಾಮಮಂದಿರದಲ್ಲಿ ಸಾಮೂಹಿಕ ಉಪನಯನ ನಡೆಸಲು ನಿರ್ಧರಿಸಲಾಗಿದೆ. ಶ್ರೀ ವೈಷ್ಣವ ಬಾಂಧವರು ಅರ್ಹ ವಟುಗಳಿಗೆ ಬ್ರಹ್ಮೋಪದೇಶ ಮಾಡಿಸುವ ಅವಕಾಶವನ್ನು ಉಪಯೋಗಿಸಿಕೊಳ್ಳಬೇಕೆಂದು ಕೋರಲಾಗಿದೆ. ನೋಂದಾಯಿಸಲು ಮೇ 10 ಕೊನೆ ದಿನಾಂಕ. ಹೆಚ್ಚಿನ ಮಾಹಿತಿಗೆ ಮೊ. 94488 72458, 9448330197 ಸಂಪರ್ಕಿಸಬಹುದು.



ಮೈಸೂರಿನ ಹೆಬ್ಬಾಳ 1ನೇ ಹಂತದಲ್ಲಿ ಬಿಜೆಪಿ ಅಭ್ಯರ್ಥಿ ಎಲ್.ನಾಗೇಂದ್ರ ಮನೆ ಮನೆಗೆ ತೆರಳಿ ಮತಯಾಚಿಸಿದರು. ಈ ವೇಳೆ ಬಿಜೆಪಿ ಯುವ ಮೋರ್ಚಾ ನಗರಾಧ್ಯಕ್ಷ ಎಂ.ಜೆ.ಕಿರಣ್‌ಗೌಡ, ವಾರ್ಡ್ ಅಧ್ಯಕ್ಷ ಕಿರಣ್ ಸುಖಧರೆ, ಮುಖಂಡರಾದ ಜಯಪ್ಪ, ನಾಚಪ್ಪ, ಹರೀಶ್‌ಕುಮಾರ್, ಸಂತೋಷ್‌ಕುಮಾರ್, ಮಧು ಶೈನ, ಪ್ರಭಾಕರ್, ತ್ರಿವೇಣಿ, ಸೌಮ್ಯ, ಸರಸ್ವತಿ, ಶಿವು, ಕಾರ್ತಿಕ್ ಇತರರಿದ್ದರು.

ಮೋದಿ ವಿಷದ ಹಾವು ಇದ್ದಂತೆ

ವಿವಾದ ಪಡೆಯುತ್ತಿದ್ದಂತೆ ಯೂಟರ್ನ್!



ಗದಗ, ಏ.27– ಮೋದಿ ಅಂದರೆ ವಿಷದ ಹಾವಿದ್ದಂತೆ. ವಿಷ ಹೌದೋ, ಇಲ್ಲವೋ ಎಂದು ನೆಕ್ಕಿ ನೋಡಿದರೆ ನೀವು ಸತ್ತಂತೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಗದಗದಲ್ಲಿ ನಡೆದ ಕಾಂಗ್ರೆಸ್ ಬಹಿರಂಗ ಸಭೆಯಲ್ಲಿ ಮಾತನಾಡಿದ ಖರ್ಗೆ, ಕರ್ನಾಟಕದಲ್ಲಿ ನಾವು ಯಾರಿಗೂ ಬಗ್ಗಲ್ಲ. ಗುಜರಾತಿನವರು ಹೇಗೆ ಇಲ್ಲಿನ ಮಣ್ಣಿನ ಮಕ್ಕಳ ಬಳಿ ನಮಗೆ ಓಟು ಕೊಡಿ ಎಂದು ಕೇಳುತ್ತಾರೆ. ನಾವು ಕರ್ನಾಟಕದ ಮಣ್ಣಿನ ಮಕ್ಕಳು, ನಮಗೂ ಕನ್ನಡ ಅಭಿಮಾನ ಇದೆ. ನರೇಂದ್ರ ಮೋದಿ ಎಂದರೆ ವಿಷದ ಹಾವಿದ್ದಂತೆ. ವಿಷ ಹೌದೋ ಇಲ್ಲ ಎಂದು ನೆಕ್ಕಿ ನೋಡಿದರೆ ಸತ್ತಂತೆ. ಬಿಜೆಪಿಯ ಸಿದ್ಧಾಂತ, ಐಡಿಯಾಲಜಿ ಏನಿದೆ ಅದು ದೇಶಕ್ಕೆ ಕೆಟ್ಟದಾಗಿದೆ. ಮೋದಿಯ ವಿಚಾರಧಾರೆಯೇ ದೇಶವನ್ನು ಹಾಳು ಮಾಡುತ್ತಿದೆ. ಈ ದೇಶದ ಬಗ್ಗೆ ಪ್ರತಿಯೊಬ್ಬರು ಚಿಂತೆ ಮಾಡಬೇಕಿದೆ. ದೇಶ ಮುಗಿಸೋಕೆ ಮೋದಿಯೊಬ್ಬರೇ ಸಾಕು. ಯಾವನು ಗುಜರಾತ್‌ನಿಂದ ಬರಲಿ, ಅಹ್ಮದಾಬಾದ್‌ನಿಂದ ಬರಲಿ ಯಾರಿಗೂ ಬಗ್ಗಲ್ಲ ಎಂದು ಹೇಳಿದರು.

ಒಬ್ಬ ದೇಶದ ಪ್ರಧಾನಿಯಾಗಿ ಹಳ್ಳಿ, ಹಳ್ಳಿ, ತಾಲೂಕು ಅಡ್ಡಾಡ್ತುತ್ತೀದ್ದೀರಾ, ಮೋದಿ ಮುಖ ನೋಡಿ ಮತ ಕೊಡಿ ಎಂದು ಬಿಜೆಪಿಯವರು ಕೇಳುತ್ತಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಕಾರ್ಪೊರೇಷನ್ ಇಲೆಕ್ಷನ್‌ನಲ್ಲಿಯೂ ಸಹ ಮೋದಿ ನೋಡಿ ಮತ ಕೊಡಿ ಎಂದು ಹೇಳುತ್ತಾರೆ. ಹಾಗಾದರೆ ನಿಮ್ಮದು ಎಷ್ಟು ಮುಖ ಇದೆ. ಇಂತಹ ಆಸೆಬುರುಕರಿಗೆ ಕುರ್ಚಿಗಾಗಿ ವ್ಯಾಮೋಹ. ಯಾವುದಾದರೂ ಒಂದು ಖುರ್ಚಿ ಖಾಲಿ ಇದ್ದರೆ ಅವರೇ ಬಂದು ಕೂರುತ್ತಾರೆ ಎಂದು ಲೇವಡಿ ಮಾಡಿದರು.

ಕಪ್ಪು ಹಣ ತಂದು ಪ್ರತಿಯೊಬ್ಬರಿಗೂ 15 ಲಕ್ಷ ಕೊಡುತ್ತೇವೆ ಎಂದು ಹೇಳಿದ್ದರು, ಈಗ ಕಪ್ಪು ಹಣ ಅದಾನಿ ಬಳಿ ಇಟ್ಟಿದ್ದಾರೇನು. ಯುವಕರಿಗೆ ನೌಕರಿ ಕೊಡುತ್ತೇವೆ ಎಂದರು. 9 ವರ್ಷದಿಂದ ನೀವು 18 ಕೋಟಿ ಜನರಿಗೆ ನೌಕರಿ ಕೊಡಬಹುದಿತ್ತು. ಬರೀ ಸುಳ್ಳು ಹೇಳಿರುವುದು ಜನರಿಗೆ ಗೊತ್ತಾಗಿದೆ. 30 ಲಕ್ಷ ಸರ್ಕಾರಿ ನೌಕರಿ ಖಾಲಿ ಇವೆ. ಅದನ್ನಾದರೂ ತುಂಬಿ. ಕರ್ನಾಟಕದಲ್ಲಿ ನೌಕರಿ ಖಾಲಿ ಇವೆ. ಇಲ್ಲಿ ಬೊಮ್ಮಾಯಿನೂ ತುಂಬುತ್ತಿಲ್ಲ, ಅಲ್ಲಿ ಮೋದಿನೂ ತುಂಬುತ್ತಿಲ್ಲ ಎಂದು ಕಿಡಿಕಾರಿದರು.

ಮೋದಿ ದೊಡ್ಡ ಸುಳ್ಳುಗಾರ. ಕೆಲವರು ಮೋದಿ ಮೋದಿ ಅಂತಾರೆ. ಅವರು ಕರ್ನಾಟಕಕ್ಕೆ ಏನು ಮಾಡಿದ್ದಾರೆ ಎಂದು ಹೇಳಿ ಎಂದು ಪ್ರಶ್ನಿಸಿದ ಮಲ್ಲಿಕಾರ್ಜುನ ಖರ್ಗೆ, ಇಂದಿರಾ ಗಾಂಧಿ ಮೊದಲ ಬಾರಿಗೆ ರಾಕೆಟ್ ಹಾರಿಸಿದರು. ಈಗ ಎಲ್ಲಿಯಾದರೂ ರಾಕೆಟ್ ಹಾರಿದರೆ 'ಏ ಮೇರಾ ಕಾಮ್ ಹೈ' ಎಂದು ಸುಳ್ಳು ಹೇಳೋ ಚಟ ಅವರದು ಎಂದು ಆರೋಪಿಸಿದರು. ಈ ನಡುವೆ ಹೇಳಿಕೆ ವಿವಾದ ಸ್ವರೂಪ ಪಡೆದು ಕೊಳ್ಳುತ್ತಿದ್ದಂತೆಯೇ ಮಲ್ಲಿಕಾರ್ಜುನ ಖರ್ಗೆಯವರು ಯೂಟರ್ನ್ ಹೊಡೆದಿದ್ದಾರೆ. ಹೇಳಿಕೆ ಸಂಬಂಧ ಸ್ಪಷ್ಟನೆ ನೀಡಿರುವ ಅವರು, ನಾನು ಮೋದಿಯವರನ್ನು ವಿಷದ ಹಾವು ಎಂದು ಹೇಳಿಲ್ಲ. ಬಿಜೆಪಿ ಹಾವು ಇದ್ದಂತೆ, ಅದನ್ನು ನೆಕ್ಕಿ ನೋಡುತ್ತೇನೆ ಅಂದರೆ ಸತ್ತು ಹೋಗ್ತಾರೆ ಎಂದು ಹೇಳಿದ್ದೆ. ವೈಯಕ್ತಿಕವಾಗಿ ಯಾರಿಗೂ ಹೇಳಿಲ್ಲ, ಯಾರ ಹೆಸರು ಹೇಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಗಳ ಮಾಧ್ಯಮ ಸಂವಾದ: ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಅಭ್ಯರ್ಥಿಗಳ ಬಹು ದೊಡ್ಡ ಆಶ್ವಾಸನೆ

ಸುಯೇಜ್ ಫಾರಂನ ಕಸದ ರಾಶಿ ಮೊದಲು ಖಾಲಿ ಮಾಡ್ತೇವೆ...

ಮೈಸೂರು,ಏ.27(ಪಿಎಂ)– ಕೃಷ್ಣರಾಜ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದರೆ ಕ್ಷೇತ್ರ ವ್ಯಾಪ್ತಿಯ ಮೈಸೂರಿನ ಸುಯೇಜ್ ಫಾರಂ ತ್ಯಾಜ್ಯ ಸಂಗ್ರಹಣಾ ಘಟಕದಲ್ಲಿ ಕಳೆದ 20 ವರ್ಷಗಳಿಂದ ವಿಲೇವಾರಿಯಾಗದೇ ಉಳಿದಿರುವ ಅಂದಾಜು 7 ಲಕ್ಷ ಟನ್ ತ್ಯಾಜ್ಯಕ್ಕೆ ಶೀಘ್ರಗತಿಯಲ್ಲಿ ಮುಕ್ತಿ ನೀಡುವುದಾಗಿ ಮೂರು ಪ್ರಮುಖ ಪಕ್ಷಗಳಾದ ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ಅಭ್ಯರ್ಥಿಗಳು ಭರವಸೆ ನೀಡಿದರು.

ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ವಿಧಾನಸಭಾ ಚುನಾವಣೆ ಪ್ರಯುಕ್ತ ಸಂಘದ ಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮಾಧ್ಯಮ ಸಂವಾದದಲ್ಲಿ ಬಿಜೆಪಿ ಅಭ್ಯರ್ಥಿ ಟಿ.ಎಸ್.ಶ್ರೀವತ್ಸ, ಕಾಂಗ್ರೆಸ್ ಅಭ್ಯರ್ಥಿ ಎಂ.ಕೆ.ಸೋಮಶೇಖರ್ ಮತ್ತು ಜೆಡಿಎಸ್ ಅಭ್ಯರ್ಥಿ ಕೆ.ವಿ.ಮಲ್ಲೇಶ್ ಭಾಗವಹಿಸಿ, ಕ್ಷೇತ್ರದ ಮತದಾರರಿಗೆ ಈ ಭರವಸೆ ಕೊಟ್ಟರು.

ಅವರು ಏನೂ ಮಾಡಲಿಲ್ಲ...: ಸುಯೇಜ್ ಫಾರಂ ತ್ಯಾಜ್ಯ ವಿಲೇವಾರಿ ಸಂಬಂಧ ಪ್ರತಿಕ್ರಿಯಿಸಿದ ಎಂ.ಕೆ.ಸೋಮಶೇಖರ್, ರಾಶಿಯಾಗಿ ಬಿದ್ದಿರುವ ಈ ತ್ಯಾಜ್ಯದಿಂದ ಸುತ್ತಮುತ್ತಲ ನಿವಾಸಿಗಳು ಅನೇಕ ರೀತಿ ಸಮಸ್ಯೆ ಅನುಭವಿಸುತ್ತಿದ್ದಾರೆ. 2013ರ ಚುನಾವಣೆ ನಂತರ ಈ ಸಮಸ್ಯೆ ಪರಿಹಾರಕ್ಕೆ ರಾಯನಕೆರೆ ಮತ್ತು ಕೆಸರೆಯಲ್ಲಿ ತ್ಯಾಜ್ಯ ವಿಲೇವಾರಿ ಘಟಕಗಳನ್ನು ಆರಂಭಿಸಲಾಯಿತು. ಇದರಿಂದ ಸುಯೇಜ್ ಫಾರಂಗೆ ಒತ್ತಡ ಕಡಿಮೆಯಾಯಿತು. 16 ಕಡೆ ಸಣ್ಣ ಘಟಕಗಳನ್ನು ಪ್ರಾರಂಭಿಸಲಾಯಿತು. ಆದರೆ ಈ ಹಿಂದಿನ ಐದು ವರ್ಷಗಳ ಅವಧಿಯಲ್ಲಿ ಕ್ಷೇತ್ರ ಶಾಸಕರು ಈ ಸಂಬಂಧ ಪ್ರಾಮಾಣಿಕ ಪ್ರಯತ್ನ ಮಾಡಲಿಲ್ಲ. ಈಗಾಗಲೇ ಅರ್ಧ ಕೆಲಸ ಮಾಡಿದ್ದೇನೆ. ಈ ಬಾರಿ ಗೆದ್ದು ಬಂದರೆ ಸಂಪೂರ್ಣ ತ್ಯಾಜ್ಯಕ್ಕೆ ಮುಕ್ತಿ ಕೊಟ್ಟೇ ಕೊಡುತ್ತೇನೆ ಎಂದು ತಿಳಿಸಿದರು.

ನಿಮ್ಮ ಅಧಿಕಾರಾವಧಿಯಲ್ಲಿ ಸಿಎಂ ಮೈಸೂರು ಜಿಲ್ಲೆಯವರೇ ಆಗಿದ್ದರು. ಈ ಅವಧಿಯಲ್ಲಿ ಚಾಮರಾಜ ಕ್ಷೇತ್ರಕ್ಕೆ ಹೋಲಿಸಿದರೆ ಕೆಆರ್ ಕ್ಷೇತ್ರದಲ್ಲಿ ಅಭಿವೃದ್ಧಿ ಹಿಂದುಳಿಯಿತೇ? ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಎಂ.ಕೆ.ಸೋಮಶೇಖರ್, ತುಳಸಿದಾಸ್ ಆಸ್ಪತ್ರೆ, ಜಯನಗರ ಹೆರಿಗೆ ಆಸ್ಪತ್ರೆ ಸ್ಥಾಪನೆ ಸೇರಿದಂತೆ ಸಾಕಷ್ಟು ಅಭಿವೃದ್ಧಿಯಾಗಿದ್ದು, ಹಲವಡೆ ರಸ್ತೆ ಅಭಿವೃದ್ಧಿಯಾಗಿದೆ ಎಂದು ಹೇಳಿದರು.


ಟ್ರಿಬಲ್ ಇಂಜಿನ್ ಇದ್ದರೂ ಆಗಲಿಲ್ಲ: ಬಳಿಕ ಕೆ.ವಿ. ಮಲ್ಲೇಶ್ ಮಾತನಾಡಿ, ಸುಯೇಜ್ ಫಾರಂ ತ್ಯಾಜ್ಯ ಸಮಸ್ಯೆ ಕಳೆದ 20ಕ್ಕೂ ಹೆಚ್ಚು ವರ್ಷಗಳಿಂದ ಹಾಗೆಯೇ ಉಳಿದಿದೆ. ಈ ಕ್ಷೇತ್ರದಲ್ಲಿ ಎರಡು ರಾಷ್ಟ್ರೀಯ ಪಕ್ಷಗಳ ಶಾಸಕರು ಇದ್ದರು. ಎಂ.ಕೆ.ಸೋಮಶೇಖರ್ ಅವಧಿಯಲ್ಲಿ ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿದ್ದರು. ಎಸ್.ಎ. ರಾಮದಾಸ್ ಅವಧಿಯಲ್ಲಿ ಅವರದೇ ಕೇಂದ್ರ, ರಾಜ್ಯ ಸರ್ಕಾರ ಮಾತ್ರ ವಲ್ಲದೆ, ಪಾಲಿಕೆ ಸೇರಿದಂತೆ ಟ್ರಿಬಲ್ ಇಂಜಿನ್ ಆಡಳಿತವೇ ಇತ್ತು. ಆದರೂ ಅವರು ಮಾಡಲಿಲ್ಲ ಎಂದು ಕೆ.ವಿ.ಮಲ್ಲೇಶ್ ಟೀಕಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಟಿ.ಎಸ್.ಶ್ರೀವತ್ಸ, ವಿ.ಸೋಮಣ್ಣ ಅವರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಅವಧಿಯಲ್ಲಿ ಸುಯೇಜ್ ಫಾರಂ ಸಮಸ್ಯೆ ಪರಿಹರಿಸುವ ಪ್ರಯತ್ನ ನಡೆದಿತ್ತು. ಸಂಸದ ಪ್ರತಾಪ್ ಸಿಂಹ ನಿರಂತರ ಪ್ರಯತ್ನದಲ್ಲಿದ್ದರು. ಅದೊಂದು ಸವಾಲಿನ ಕೆಲಸ. ಕಾಲಮಿತಿಯಲ್ಲಿ ಇದನ್ನು ಬಗೆಹರಿಸಬೇಕು. ನಾನು ಶಾಸಕನಾಗಿ ಆಯ್ಕೆಯಾದರೆ ಕಾಲಮಿತಿಯಲ್ಲಿ ಬಗೆಹರಿಸುತ್ತೇನೆ ಎಂದು ಭರವಸೆ ನೀಡಿದರು.

ತಡವೇಕೆ: ಸುಯೇಜ್ ಫಾರಂ ತ್ಯಾಜ್ಯ ವಿಲೇವಾರಿ ಸಂಬಂಧ ಮೊದಲು 14 ಕೋಟಿ ರೂ. ವೆಚ್ಚದ ಕ್ರಿಯಾ ಯೋಜನೆ ಸಿದ್ಧಗೊಳಿಸಲಾಗಿತ್ತು. ಇದೀಗ ಮತ್ತೆ 53 ಕೋಟಿ ರೂ. ಪರಿಷ್ಕೃತ ಡಿಪಿಆರ್ ಸಿದ್ಧಪಡಿಸಲಾಗಿದೆ. ಚುನಾವಣೆ ನೀತಿ ಸಂಹಿತೆ ಜಾರಿಗೆ ಮುನ್ನಾ ದಿನ ಸರ್ಕಾರದಿಂದ ಈ ಡಿಪಿಆರ್‌ಗೆ ಅನುಮೋದನೆ ನೀಡಲಾಗಿದೆ. ಶಾಸಕರು, ಸಂಸದರ ನಡುವಿನ ಭಿನ್ನಾಭಿಪ್ರಾಯದಿಂದ ಹೀಗೆ ಬದಲಾವಣೆ ಮತ್ತು ತಡವಾಯಿತೇ? ಎಂಬ ಬಗ್ಗೆ ಪ್ರತಿಕ್ರಿಯಿಸಿದ ಟಿ.ಎಸ್.ಶ್ರೀವತ್ಸ, ಸರ್ಕಾರ ರಚನೆಯಾಗುತ್ತಿದ್ದಂತೆ ಕೋವಿಡ್ ಎದುರಾಯಿತು. ಹೀಗಾಗಿ ಯಾವ ಕೆಲಸವೂ ಸರಿಯಾಗಿ ಆಗಲು ಸಾಧ್ಯವಾಗಲಿಲ್ಲ ಎಂದರು.

ಕೋವಿಡ್ ನಿರ್ವಹಣೆಗಾಗಿ ಇಂತಹ ಯೋಜನೆಗಳಿಗೆ ತಾತ್ಕಾಲಿಕ ತಡೆ ಹಿಡಿಯಲಾಗಿತ್ತು. ಕಳೆದ ಒಂದು ವರ್ಷದಿಂದ ಇದಕ್ಕೆ ಕಾಯಕಲ್ಪ ನೀಡುವ ನಿಟ್ಟಿನಲ್ಲಿ ಸಂಸದರು, ಮೇಯರ್ ಸ್ಥಳ ಪರಿಶೀಲಿಸಿದ್ದಾರೆ. ಆಯ್ಕೆಯಾದರೆ ಅಧಿಕಾರಿಗಳು ಮತ್ತು ಸಂಬಂಧಿಸಿದವರ ಜೊತೆ ಚರ್ಚಿಸಿ ಮೂರರಿಂದ ಆರು ತಿಂಗಳ ಒಳಗೆ ಇಲ್ಲಿನ ತ್ಯಾಜ್ಯಕ್ಕೆ ಮುಕ್ತಿ ಕಲ್ಪಿಸುತ್ತೇನೆ ಎಂದು ಭರವಸೆ ಕೊಟ್ಟರು.

ಕೋವಿಡ್ ವರದಾನವೇ ಆಯಿತು: ಇದಕ್ಕೆ ಪ್ರತಿಕ್ರಿಯಿಸಿದ ಕೆ.ವಿ.ಮಲ್ಲೇಶ್, ಶ್ರೀವತ್ಸ ತಮ್ಮ ಪಕ್ಷವನ್ನು ಸಮರ್ಥನೆ ಮಾಡಿಕೊಂಡಿದ್ದಾರೆ. ಅವರದೇ ಸರ್ಕಾರ ಇದ್ದರೂ ತ್ಯಾಜ್ಯ ವಿಲೇವಾರಿ ಯೋಜನೆಗೆ ಚುನಾವಣೆ ಘೋಷಣೆ ಆಗುವವರೆಗೂ ಅನುಮೋದನೆ ನೀಡಿರಲಿಲ್ಲವೆಂದರೆ ಇವರಿಂದ ಯಾವುದೇ ಅಭಿವೃದ್ಧಿ ನಿರೀಕ್ಷಿಸಲಾಗದು. ಕೋವಿಡ್ ಇವರಿಗೆ ವರದಾನವೇ ಆಯಿತು. ಮೊದಲ ಕೋವಿಡ್ ಪ್ರಕರಣ ಪತ್ತೆಯಾದಾಗ ದೇಶಕ್ಕೆ ಸೋಂಕು ಪ್ರವೇಶಿಸುವುದನ್ನು ತಡೆಯಲು ಗಂಭೀರ ಪ್ರಯತ್ನವನ್ನೇ ಮಾಡಲಿಲ್ಲ ಎಂದು ದೂರಿದರು. ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ ಹಾಜರಿದ್ದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ಸಂವಾದದಲ್ಲಿ ಕೆಆರ್ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಟಿ.ಎಸ್.ಶ್ರೀವತ್ಸ, ಕಾಂಗ್ರೆಸ್ ಅಭ್ಯರ್ಥಿ ಎಂ.ಕೆ.ಸೋಮಶೇಖರ್ ಮತ್ತು ಜೆಡಿಎಸ್ ಅಭ್ಯರ್ಥಿ ಕೆ.ವಿ.ಮಲ್ಲೇಶ್ ಭಾಗವಹಿಸಿದ್ದರು.

ಮಂಜುನಾಥಸ್ವಾಮಿ ಹೆಸರಿನಲ್ಲಿ ಆಣೆಗೆ ಆಕ್ಷೇಪ

ಮೈಸೂರು: ಅಧಿಕಾರಕ್ಕೆ ಬಂದರೆ ಕಾಂಗ್ರೆಸ್ ತನ್ನ ಗ್ಯಾರಂಟಿ ಕಾರ್ಡ್‌ಗಳ ಭರವಸೆಗಳನ್ನು ಮಂಜುನಾಥಸ್ವಾಮಿ ಆಣೆಗೂ ಈಡೇರಿಸಲಿದೆ ಎಂಬ ಎಂ.ಕೆ.ಸೋಮಶೇಖರ್ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ ಕೆ.ವಿ.ಮಲ್ಲೇಶ್, ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಧಾರ್ಮಿಕ ಹಿನ್ನೆಲೆಯಲ್ಲಿ ಪ್ರಮಾಣ ಮಾಡುವುದು ತಪ್ಪು ಎಂದು ತಿಳಿಸಿದರು.

ರಾಮದಾಸ್ ಅವಧಿಯಲ್ಲಿ ಅಭಿವೃದ್ಧಿ ಕಾರ್ಯ ದೊಡ್ಡ ಶೂನ್ಯವೆಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಎಂ.ಕೆ.ಸೋಮಶೇಖರ್, ಕಾಂಗ್ರೆಸ್ ಪಕ್ಷ ಜನತೆ ಮುಂದಿಟ್ಟಿರುವ ಗ್ಯಾರಂಟಿ ಕಾರ್ಡ್ ಭರವಸೆ ಬಗ್ಗೆ ಪ್ರತಿಕ್ರಿಯಿಸಿ, ರಾಜ್ಯದ ಬಜೆಟ್ 3 ಲಕ್ಷದ 9 ಸಾವಿರ ಕೋಟಿ ಇದ್ದು, ಗ್ಯಾರಂಟಿ ಕಾರ್ಡ್‌ಗಳ ಭರವಸೆ ಈಡೇರಿಸಲು 35 ಸಾವಿರ ಕೋಟಿ ರೂ. ಸಾಕು. ಬಡ ಜನತೆ ಕೈಗೆ ಹಣ ಸಿಕ್ಕರೆ ಅವರು ಅದನ್ನು ವೆಚ್ಚ ಮಾಡುವುದರಿಂದ ಸರ್ಕಾರಕ್ಕೆ ತೆರಿಗೆ ರೂಪದಲ್ಲಿ ಆದಾಯ ಹರಿದು ಬರಲಿದೆ. ಕಾಂಗ್ರೆಸ್ ಸರ್ಕಾರ ಬಂದರೆ ಮಂಜುನಾಥಸ್ವಾಮಿ ಆಣೆಯಾಗಲೂ ಗ್ಯಾರಂಟಿ ಕಾರ್ಡ್‌ಗಳ ಭರವಸೆ ಈಡೇರಿಸುತ್ತೇವೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಕೆ.ವಿ.ಮಲ್ಲೇಶ್, ಸೋಮಶೇಖರ್, ಮಂಜುನಾಥಸ್ವಾಮಿಯ ಮೇಲೆ ಆಣೆ ಹಾಕಿದರು. ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದು, ಹೀಗೆ ಧಾರ್ಮಿಕ ಹಿನ್ನೆಲೆಯಲ್ಲಿ ಪ್ರಮಾಣ ಮಾಡುವುದು ತಪ್ಪು. ಕೆಆರ್ ಕ್ಷೇತ್ರದ ಜನತೆಗೆ ದೊರೆಯಬೇಕಾದ ಮೂಲ ಸೌಲಭ್ಯಗಳು ಸೇರಿದಂತೆ ಪ್ರತಿಯೊಬ್ಬರಿಗೆ ಸೂರು, ಪ್ರತಿಯೊಬ್ಬರಿಗೂ ಸ್ವಯಂ ಉದ್ಯೋಗ ಕಂಡುಕೊಳ್ಳಲು ನೆರವಾಗುತ್ತೇನೆಂದು ಸಂವಿಧಾನದ ಹೆಸರಿನಲ್ಲಿ ಪ್ರಮಾಣ ಮಾಡಿದರು.

ಬಿಜೆಪಿ, ಚಿಹ್ನೆಯೇ ನನಗೆ ಶ್ರೀರಕ್ಷೆ; ಟಿ.ಎಸ್.ಶ್ರೀವತ್ಸ

ಮೈಸೂರು: ಬಿಜೆಪಿ ಮತ್ತು ಅದರ ಚಿಹ್ನೆಯೇ ನನಗೆ ಶ್ರೀರಕ್ಷೆ ಎಂದು ಟಿ.ಎಸ್.ಶ್ರೀವತ್ಸ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿದ್ದು, ಈ ಕ್ಷೇತ್ರದ ಮತದಾರರು ನಾಲ್ಕು ಬಾರಿ ಎಸ್.ಎ.ರಾಮದಾಸ್ ಅವರನ್ನು ಪಕ್ಷದ ಚಿಹ್ನೆ ಮೇಲೆ ಆಯ್ಕೆ ಮಾಡಿದ್ದಾರೆ. ಹಾಗಾಗಿ ಇಲ್ಲಿಯ ಮತದಾರರು ಪಕ್ಷದ ಚಿಹ್ನೆಗೆ ಆದ್ಯತೆ ನೀಡುತ್ತಾರೆ. ವ್ಯಕ್ತಿ ಇಲ್ಲಿ ನೆಪ ಮಾತ್ರ. ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ನಾಯಕತ್ವಕ್ಕೆ ಇಲ್ಲಿನ ಜನ ಆದ್ಯತೆ ನೀಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕೋವಿಡ್ ಲಸಿಕೆ ವಿಚಾರದಲ್ಲಿ ದೇಶದ ಯಾವ ಮೂಲೆಯಲ್ಲಿಯೂ ಲಂಚ ಕೊಟ್ಟು ಲಸಿಕೆ ಪಡೆದ ನಿದರ್ಶನವಿಲ್ಲ. ಅಷ್ಟರ ಮಟ್ಟಿಗೆ ಪಾರದರ್ಶಕ ಆಡಳಿತವನ್ನು ಕೇಂದ್ರ ಸರ್ಕಾರ ನೀಡಿದೆ. ಪ್ರಧಾನಿ ನರೇಂದ್ರ ಮೋದಿಯವರ ಮುಂದಾಲೋಚನೆಯ ಕಾರಣಕ್ಕೆ ದೇಶ ಸುಭದ್ರವಾಗಿದೆ ಎಂದು ಪ್ರತಿಪಾದಿಸಿದರು. ಕ್ಷೇತ್ರದ ಅಭ್ಯರ್ಥಿ ಬದಲಾವಣೆಗೆ ಅಭಿವೃದ್ಧಿ ಮಾನದಂಡ ಕಾರಣವಾಗಿಲ್ಲ. ಬದಲಿಗೆ 2ನೇ ಹಂತದ ನಾಯಕತ್ವ ಬೆಳೆಸುವ ಉದ್ದೇಶ ಇಲ್ಲಿದೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರಿಸಿದರು.

ಹರಿಕೆ ಕುರಿ ಎಂದಿದ್ದಕ್ಕೆ ಆಕ್ಷೇಪ

ಮೈಸೂರು: ಇಬ್ಬರ ಜಗಳದಲ್ಲಿ ಟಿ.ಎಸ್.ಶ್ರೀವತ್ಸ ಅವರನ್ನು ಹರಿಕೆಯ ಕುರಿ ಮಾಡಲಾಗಿದೆ. ಸಂಸದ ಪ್ರತಾಪ್ ಸಿಂಹ ವರುಣ ಕ್ಷೇತ್ರದಲ್ಲೇಕೆ ಪ್ರಚಾರಕ್ಕೆ ಹೋಗುತ್ತಿದ್ದಾರೆ. ಅವರು ಕೆಆರ್ ಕ್ಷೇತ್ರದಲ್ಲಿ ಮುಖ ತೋರಿಸಲಾಗುತ್ತಿಲ್ಲ. ಪ್ರತಾಪ್ ಸಿಂಹ ಅವರಿಗೆ ನಿಜವಾದ ಶಕ್ತಿ ಇದ್ದರೆ ಕೆಆರ್ ಕ್ಷೇತ್ರಕ್ಕೆ ಬರಬೇಕು ಎಂದು ಕೆ.ವಿ.ಮಲ್ಲೇಶ್ ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಟಿ.ಎಸ್.ಶ್ರೀವತ್ಸ, ವರುಣಗೆ ಏಕೆ ಪ್ರತಾಪ್ ಸಿಂಹ ಹೋಗುತ್ತಾರೆಂದು ಕೇಳುವುದು ಸರಿಯಲ್ಲ. ಪ್ರತಾಪ್ ಸಿಂಹ ತಾರಾ ಪ್ರಚಾರಕರು. ನೀವ್ಯಾರು ಅವರನ್ನು ಹೋಗಬೇಡಿ ಎನ್ನಲು. ಅವರು ಕೆಆರ್ ಕ್ಷೇತ್ರದಲ್ಲಿ ನಿನ್ನೆ–ಮೊನ್ನೆ ಪ್ರಚಾರ ಮಾಡಿದ್ದಾರೆ. ನಾವು ಹೆಚ್.ಡಿ.ಕುಮಾರಸ್ವಾಮಿಯವರನ್ನು ಈ ರೀತಿಯಲ್ಲಿ ಕೇಳಲಾಗುತ್ತದೆಯೇ? ಎಂದು ಪ್ರಶ್ನಿಸಿ, ಕಿಡಿಕಾರಿದರು.

ಕೆ.ಆರ್.ಪೇಟೆಯಲ್ಲಿ ಬಿಎಲ್‌ಡಿ ಗೆಲ್ಲಿಸಲು ಮನವಿ



ಕೆ.ಆರ್.ಪೇಟೆ, ಮಾ.27– ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದರಿಂದ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎಲ್.ದೇವರಾಜು ಅವರನ್ನು ಗೆಲ್ಲಿಸುವಂತೆ ಮತದಾರರಲ್ಲಿ ಕಾಂಗ್ರೆಸ್ ಮುಖಂಡ, ಸಮಾಜ ಸೇವಕ ವಿಜಯ್ ರಾಮೇಗೌಡ ಮನವಿ ಮಾಡಿದರು.

ತಾಲೂಕಿನ ಬೋಳಾರೆ ರಂಗನಾಥ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಚೀಕನ ಹಳ್ಳಿ, ಚೀಕನಹಳ್ಳಿ ಕೊಪ್ಪಲು, ವೆಂಕಟ ರಾಜಪುರ, ತಗಡೂರು, ಬಣ್ಣೇನಹಳ್ಳಿ, ಐಚನಹಳ್ಳಿ, ಕೆರೆಮೇಗಳಕೊಪ್ಪಲು, ಬೆಟ್ಟದ ಹೊಸೂರು, ರಂಗನಾಥಪುರ, ಬೊಮ್ಮಲಾಪುರ, ಚೋಕನಹಳ್ಳಿ, ವಿಜಯಹೊಸಹಳ್ಳಿ, ಕೀಳನಕೊಪ್ಪಲು, ಬಿ.ಬಾಚಹಳ್ಳಿ, ಬಣ್ಣನ ಕೆರೆ, ಬೊಮ್ಮೆಗೌಡನಕೊಪ್ಪಲು ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎಲ್.ದೇವರಾಜು ಪರ ಮತಯಾಚಿಸಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ಕುಟುಂಬದ ಮಹಿಳೆಗೆ 2 ಸಾವಿರ ರೂ., ಗೃಹಜ್ಯೋತಿ ಯೋಜನೆಯಡಿ ಪ್ರತಿ ಕುಟುಂಬಕ್ಕೆ 200 ಯೂನಿಟ್ ಉಚಿತ ವಿದ್ಯುತ್, ಅನ್ನಭಾಗ್ಯ ಯೋಜನೆ ಅಡಿ ಪ್ರತಿಯೊಬ್ಬರಿಗೂ ತಲಾ 10 ಕೆಜಿ ಅಕ್ಕಿ, ಜೊತೆಗೆ ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ 3 ಸಾವಿರ ರೂ., ಡಿಪ್ಲೊಮೋ ಪದವೀಧರರಿಗೆ ಮಾಸಿಕ 1500 ರೂ. ಪ್ರೋತ್ಸಾಹಧನ ನೀಡಲಾಗುತ್ತದೆ. ಪ್ರಣಾಳಿಕೆಯಲ್ಲಿ ಘೋಷಿಸಿರುವ ಎಲ್ಲಾ ಭರವಸೆಗಳನ್ನು ಈಡೇರಿಸಲಾಗುವುದು ಎಂದರು.

2013ರಲ್ಲಿ ಘೋಷಿಸಿದ್ದ 165 ಭರವಸೆಗಳ ಪೈಕಿ ಬಹುತೇಕ ಎಲ್ಲವನ್ನು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಈಡೇರಿಸಿತ್ತು. ಈಗಲೂ ಸಹ ಅದೇ ರೀತಿಯ ಉತ್ತಮ ಆಡಳಿತಕ್ಕಾಗಿ ಕಾಂಗ್ರೆಸ್ ಅಭ್ಯರ್ಥಿ ಬಿ.ಎಲ್.ದೇವರಾಜು ಅವರ ಹಸ್ತದ ಗುರುತಿಗೆ ಮತ ನೀಡುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು ಎಂದು ಮನವಿ ಮಾಡಿದರು.

ಈ ವೇಳೆ ಕಾಂಗ್ರೆಸ್ ಅಭ್ಯರ್ಥಿ ಬಿ.ಎಲ್.ದೇವರಾಜು, ತಮಿಳುನಾಡಿನ ಕಾರೈಕುಡಿ ಕ್ಷೇತ್ರದ ಶಾಸಕ ಎಸ್.ಮಾನ್ ಗುಡಿ, ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್, ಕೆಯುಐಡಿಎಫ್‌ಸಿ ನಿಗಮದ ಮಾಜಿ ಅಧ್ಯಕ್ಷ ಎಂ.ಡಿ.ಕೃಷ್ಣಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾ ಧರ್, ಪ್ರಧಾನ ಕಾರ್ಯದರ್ಶಿ ಟಿ.ಎನ್. ದಿವಾಕರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಕೆ.ರುಕ್ಮಾಂಗದ, ತಾಲೂಕು ಕಾಂಗ್ರೆಸ್ ವಕ್ತಾರ ನಾಗೇಶ್, ಕಾಂಗ್ರೆಸ್ ಮುಖಂಡರಾದ ಬಿ.ಟಿ. ವೆಂಕಟೇಶ್, ಮಾಧವ ಪ್ರಸಾದ್, ಮಲ್ಲೇಶ್, ಕಂಠಿ ಕುಮಾರ್, ಶಶಿಧರ್, ಸುರೇಶ್, ಅಶೋಕ್, ಕೆಆರ್. ರವೀಂದ್ರಬಾಬು, ನಾಗೇಶ್, ಎ.ಬಿ. ಕುಮಾರ್, ರಂಗರಾಜು, ಲೋಕೇಶ್, ಗಣೇಶ್, ಶಿವಕುಮಾರ್, ಸುರೇಶ್, ಸುಬ್ಬೇಗೌಡ, ಶಿವರಾಮು ಸೇರಿದಂತೆ ಇತರರಿದ್ದರು.

ಮೇ 1, 2ರಂದು ರಮ್ಯಾ ಪ್ರಚಾರ



ಮಂಡ್ಯ, ಏ.27– ಜಿಲ್ಲೆಯ ಕಾಂಗ್ರೆಸ್ ಅಭ್ಯರ್ಥಿಗಳ ಪರ ಮಾಜಿ ಸಂಸದೆ ಹಾಗೂ ನಟಿ ರಮ್ಯಾ ಮೇ 1, 2 ರಂದು ಪ್ರಚಾರ ನಡೆಸಲಿದ್ದಾರೆ ಎಂದು ಮಂಡ್ಯ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಗಣಿಗ ರವಿಕುಮಾರ್ ತಿಳಿಸಿದರು. ರಮ್ಯಾ ಅವರು ರೋಡ್ ಶೋ, ಪ್ರಚಾರ ಸಭೆ, ಕಾರ್ನರ್ ಮೀಟಿಂಗ್‌ಗಳಲ್ಲಿ ಭಾಗವಹಿಸಲಿದ್ದು, ರಮ್ಯಾ ಜೊತೆಗೆ ಸಿನಿಮಾ ನಟ, ನಟಿಯರು ಸಹ ಪಾಲ್ಗೊಳ್ಳಲಿದ್ದಾರೆ. ಗ್ರಾಮೀಣ ಪ್ರದೇಶದ ಕಡೆ ರಮ್ಯಾ ಪ್ರಚಾರಕ್ಕೆ ಬರುವಂತೆ ಮನವಿ ಕೇಳಿ ಬಂದಿವೆ. ಮಹಿಳಾ ಮತದಾರರನ್ನು ಸೆಳೆಯುವ ಉದ್ದೇಶದಿಂದ ರಮ್ಯಾ ಪ್ರಚಾರದಲ್ಲಿ ಭಾಗಿಯಾಗಲಿದ್ದಾರೆ ಎಂದರು.

ಗಣಿಗ ರವಿ ಬೆಂಬಲಿಸಿ ಕಾಂಗ್ರೆಸ್ ಶಕ್ತಿ ತುಂಬಿ: ಸಿಆರ್‌ಎಸ್



ಮಂಡ್ಯ, ಏ.27– ಮಂಡ್ಯ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಗಣಿಗ ರವಿ ಕುಮಾರ್ ಅವರನ್ನು ಬೆಂಬಲಿಸುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿ ಎಂದು ಮಾಜಿ ಸಚಿವ ಎನ್.ಚಲುವರಾಯಸ್ವಾಮಿ ಮನವಿ ಮಾಡಿದರು.

ತಾಲೂಕಿನ ಕೆರಗೋಡು ಹೋಬಳಿ ವಿವಿಧ ಗ್ರಾಮಗಳಲ್ಲಿ ರೋಡ್ ಶೋ ನಡೆಸಿ ಮಾತನಾಡಿದ ಅವರು, ಗಣಿಗ ರವಿಕುಮಾರ್ ಕಳೆದ ಚುನಾವಣೆಯಲ್ಲಿ ಸೋತಿದ್ದಾರೆ. ಸೋತರೂ ಕ್ಷೇತ್ರ ಬಿಡದೇ ಜನರ ನಡುವೆಯೇ ಇದ್ದು, ಜನರ ಕಷ್ಟ–ಸುಖಗಳಿಗೆ ಸ್ಪಂದಿಸಿದ್ದಾರೆ. ಕೊರೊನಾ ಸಂದರ್ಭ ಕ್ಷೇತ್ರದ ಜನರಿಗೆ ಶ್ರಮಿಸಿದ್ದಾರೆ. ಇಂತಹ ಜನನಾಯಕನನ್ನು ಬೆಂಬಲಿಸಿ ಎಂದು ಕರೆ ನೀಡಿದರು.

ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದ್ದು, ಇದಕ್ಕೆ ಪೂರಕವಾಗಿ ರವಿಕುಮಾರ್ ಗೆಲುವು ಸಾಧಿಸಿದರೆ ಕ್ಷೇತ್ರದ ಅಭಿವೃದ್ಧಿಯಾಗುತ್ತದೆ. ಅಭಿವೃದ್ಧಿ ದೃಷ್ಟಿಯಿಂದ ಕಾಂಗ್ರೆಸ್‌ಗೆ ಮತ ಕೊಡಿ ಎಂದರು. ಈ ವೇಳೆ ಅಭ್ಯರ್ಥಿ ಗಣಿಗ ರವಿಕುಮಾರ್, ಮಾಜಿ ಶಾಸಕರಾದ ಎಂ.ಎಸ್.ಆತ್ಮಾನಂದ, ಹೆಚ್.ಬಿ. ರಾಮು, ಮುಖಂಡರಾದ ಎಂ.ಎಸ್. ಚಿದಂಬರ್, ರಾಮ ಲಿಂಗಯ್ಯ, ಬಿ.ಸಿ.ಶಿವಾನಂದ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್ ಇತರರಿದ್ದರು.

ಉತ್ತಮ ಅಭ್ಯರ್ಥಿಗೆ ಮತ ನೀಡಿ: ತಾಪಂ ಇಓ

ಕೆ.ಆರ್.ಪೇಟೆ, ಏ.27– ಸಂವಿಧಾನ ನೀಡಿರುವ ಪವಿತ್ರ ಮತದಾನದ ಹಕ್ಕನ್ನು ಆಸೆ ಆಮಿಷಗಳಿಗೆ ಬಲಿಯಾಗಿ ದುರ್ಬಳಕೆ ಮಾಡಿಕೊಳ್ಳದೇ ಉತ್ತಮ ಅಭ್ಯರ್ಥಿಗೆ ಮತ ನೀಡುವಂತೆ ತಾಪಂ ಇಓ ಸತೀಶ್ ತಿಳಿಸಿದರು.

ಪಟ್ಟಣದಲ್ಲಿ ನಡೆದ ಮತದಾನ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ವಿಶ್ವದ ಬಹುತೇಕ ರಾಷ್ಟ್ರಗಳ ಜನರಿಗೆ ಸಿಗದ ಸ್ವಾತಂತ್ರ ಮತದಾನ ಹಾಗೂ ದೇಶದ ನಾಯಕರನ್ನು ಆಯ್ಕೆ ಮಾಡುವ ಹಕ್ಕನ್ನು ಹೊಂದಿರುವ ನಾವು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಬಳಸಿಕೊಳ್ಳಬೇಕು. ಆ ಮೂಲಕ ನಮ್ಮ ನಾಯಕರನ್ನು ಆಯ್ಕೆ ಮಾಡಿಕೊಳ್ಳುವುದರ ಜೊತೆಗೆ ನಮ್ಮನ್ನು ಮುನ್ನಡೆಸುವ ಸುಭದ್ರ ಸರ್ಕಾರವನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ. ಪ್ರತಿಯೊಬ್ಬರೂ ನನ್ನ ಒಂದು ಮತದಿಂದ ಏನಾಗುತ್ತದೆ ಎಂಬ ಉದಾಸೀನತೆ ದೂರ ಮಾಡಬೇಕು. ಚುನಾವಣೆ ದಿನ ಮತಗಟ್ಟೆಗೆ ತೆರಳಿ ತಮ್ಮ ಹಕ್ಕನ್ನು ಕಡ್ಡಾಯವಾಗಿ ಚಲಾಯಿಸಿದಾಗ ಮಾತ್ರ ಉತ್ತಮ ಜನಪ್ರತಿನಿಧಿ ಆಯ್ಕೆ ಮಾಡಲು ಸಾಧ್ಯ. ಅಲ್ಲದೆ ವಿಕಲ ಚೇತನರಿಗೆ ಹಾಗೂ 80ವರ್ಷ ಮೇಲ್ಪಟ್ಟವರಿಗೆ ಮನೆಯಿಂದಲೇ ಮತ ಹಾಕುವ ವಿಶೇಷ ಹಕ್ಕನ್ನು ಈ ಸಾಲಿನಲ್ಲಿ ಜಾರಿಗೆ ತರಲಾಗುತ್ತಿದೆ. ಇದನ್ನು ಸಂಬಂಧಪಟ್ಟವರು ಸದ್ಬಳಕೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ಜಾಥಾದಲ್ಲಿ ಜಿಪಂ ಯೋಜನಾ ನಿರ್ದೇಶಕ ಧನರಾಜ್ ಬೋರ್ಲೆ, ಸಹಾಯಕ ಕಾರ್ಯದರ್ಶಿ ಹೆಚ್.ಎಂ. ಷಣ್ಮುಗಂ, ಮೋಹನ್ ಕುಮಾರ್, ತಾಪಂ ಸಹಾಯಕ ನಿರ್ದೇಶಕ ಸಂದೀಪ್, ವ್ಯವಸ್ಥಾಪಕ ಅನಿಲ್ ಬಾಬು, ಪಿಡಿಓ ವಿ.ಎಂ.ರವಿಕುಮಾರ್, ದೇವೇಗೌಡ, ತಾಲೂಕು ವಿಆರ್ ಡಬ್ಲ್ಯೂ ಸಂಚಾಲಕ ಬಸವರಾಜು ಸೇರಿದಂತೆ ಗ್ರಾಪಂ ನೌಕರರು ಹಾಗೂ ವಿಆರ್‌ಡಬ್ಲ್ಯೂ ಕಾರ್ಯಕರ್ತರು, ವಿಕಲಚೇತನರು ಭಾಗವಹಿಸಿದ್ದರು.



ಶಾಸಕ ಸಿಎಸ್‌ಪಿ ಪರ ಅಶೋಕ್ ದಂಪತಿ ಪ್ರಚಾರ



ಚಿನಕುರಳಿ, ಏ.27– ಮೇಲುಕೋಟೆ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ, ಶಾಸಕ ಸಿ.ಎಸ್.ಪುಟ್ಟರಾಜು ಪರ ಜಿಪಂ ಮಾಜಿ ಸದಸ್ಯ ಸಿ.ಅಶೋಕ್, ಪತ್ನಿ ವಿಜಯ ಅವರು ಅಪಾರ ಬೆಂಬಲಿಗರೊಂದಿಗೆ ಚಿನಕುರಳಿ ಜಿಪಂನ ಬನ್ನಂಗಾಡಿ, ಡಿಂಕಾ ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ಮನೆ ಮನೆಗೂ ತೆರಳಿ ಬಿರುಸಿನ ಪ್ರಚಾರ ನಡೆಸಿದರು.

ಬಳಿಕ ಮಾತನಾಡಿದ ಸಿ.ಅಶೋಕ್, ಮೇಲುಕೋಟೆ ಕ್ಷೇತ್ರದಲ್ಲಿ ಶಾಸಕ ಸಿ.ಎಸ್.ಪುಟ್ಟರಾಜು ಪರ ಅಲೆ ಎದ್ದಿದೆ. ಶಾಸಕರಾಗಿ ಸಾವಿರಾರು ಕೋಟಿ ಅನುದಾನ ತಂದು ಕ್ಷೇತ್ರವನ್ನು ಅಭಿವೃದ್ಧಿ ಪಡಿಸಿದ್ದಾರೆ. ಏತ ನೀರಾವರಿ ಯೋಜನೆಗಳ ಮೂಲಕ ಕೆರೆಕಟ್ಟೆಗಳನ್ನು ಭರ್ತಿ ಮಾಡಿಸಿದ್ದಾರೆ. ಕೋವಿಡ್ ಸಂದರ್ಭ ಜನರ ಕಷ್ಟ ಸುಖಕ್ಕೆ ಸ್ಪಂದಿಸಿದ್ದಾರೆ. ಸದಾ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿರುವ ಹಾಗೂ ಪ್ರತಿಯೊಬ್ಬ ಪ್ರಜೆಗೂ ಕ್ಷೇತ್ರದಲ್ಲಿ ಸುಲಭವಾಗಿ ಸಿಗುವ ಶಾಸಕ ಸಿ.ಎಸ್.ಪುಟ್ಟರಾಜು ಅವರಿಗೆ ಮತ ನೀಡುವ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದರು.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಂ.ಸಿ. ಯಶ್ವಂತ್ ಕುಮಾರ್ ಮಾತನಾಡಿ, ಸಿ.ಎಸ್.ಪುಟ್ಟರಾಜು ಅವರು ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕೆಲಸಗಳೇ ಅವರ ಗೆಲುವಿಗೆ ಶ್ರೀರಕ್ಷೆಯಾಗಿದೆ ಎಂದು ಹೇಳಿದರು. ಈ ವೇಳೆ ತಾಪಂ ಮಾಜಿ ಅಧ್ಯಕ್ಷೆ ಪೂರ್ಣಿಮಾ, ಮಾಜಿ ಸದಸ್ಯ ಗೋಪಾಲಗೌಡ ಸೇರಿದಂತೆ ಬನ್ನಾಂಗಾಡಿ, ಡಿಂಕಾ ಗ್ರಾಪಂ ವ್ಯಾಪ್ತಿಯ ಜೆಡಿಎಸ್ ಮುಖಂಡರು, ಕಾರ್ಯಕರ್ತತರು ಹಾಜರಿದ್ದರು.

ಅರ್ಜಿ ಆಹ್ವಾನ

ಮಂಡ್ಯ, ಏ.27– ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ), ಹಳೇನಗರ ಪೇಟೆ ಮಂಡ್ಯ ಟೌನ್ ಹಾಗೂ ಮಳವಳ್ಳಿ ತಾಲೂಕಿನ ಕಲ್ಕುಣಿ ಮೌಲಾನಾ ಆಜಾದ್ ಮಾದರಿ ಶಾಲೆ(ಆಂಗ್ಲ ಮಾಧ್ಯಮ), ಇಲ್ಲಿಗೆ 2023–24ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 27 ಕೊನೆ ದಿನ. ಪೋಷಕರು/ವಿದ್ಯಾರ್ಥಿಗಳು ನೇರವಾಗಿ ಅರ್ಜಿಗಳನ್ನು ಹತ್ತಿರದ ಮೌಲಾನಾ ಆಜಾದ್ ಮಾದರಿ ಶಾಲೆ, ಅಲ್ಪಸಂಖ್ಯಾತರ ತಾಲೂಕು ಮಾಹಿತಿ ಕೇಂದ್ರ ಮತ್ತು ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿಗಳಲ್ಲಿ ಉಚಿತವಾಗಿ ಪಡೆದು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೀಡಿ ಕಾಲೋನಿ, ಆಟೋ ನಿಲ್ದಾಣದ ಹತ್ತಿರ ಕೆರೆ ಅಂಗಳ, ಮಂಡ್ಯ ಜಿಲ್ಲಾ ಕಚೇರಿ ದೂ: 08232–297240, ಮುಖ್ಯೋಪಾಧ್ಯಾಯರು ಮೌ.ಅ.ಮಾ.ಶಾ, ಮಂಡ್ಯ ಟೌನ್:9844340821, ಮುಖ್ಯೋಪಾಧ್ಯಾಯರು. ಮೌ.ಆ.ಮಾ.ಶಾಲೆ, ಕಲ್ಕುಣಿ, ಮಳವಳ್ಳಿ: ತಾ.:8722364009, ತಾಲೂಕು ವಿಸ್ತರಣಾಧಿಕಾರಿ, ಮಂಡ್ಯ ವಿಭಾಗ ದೂ: 9008211484, ಜಿಲ್ಲಾ ಮಾಹಿತಿ ಕೇಂದ್ರ ಮಂಡ್ಯ ದೂ: 9880743927, ತಾಲೂಕು ಮಾಹಿತಿ ಕೇಂದ್ರಮಳವಳ್ಳಿ ದೂ: 9986682921 ಅನ್ನು ಸಂಪರ್ಕಿಸಬಹುದು.

ನಮ್ಮಲ್ಲಿ ಯಾವುದೇ ಗೊಂದಲವಿಲ್ಲ: ರಾಮಚಂದ್ರ



ಮಂಡ್ಯ, ಏ.27– ವ್ಯಕ್ತಿಗಿಂತ ಪಕ್ಷ ಮುಖ್ಯವೆಂದು ಜೆಡಿಎಸ್ ಮುಖಂಡರು, ಕಾರ್ಯಕರ್ತರು ನನ್ನ ಪರ ಕೆಲಸ ಮಾಡುತ್ತಿದ್ದಾರೆ. ನಮ್ಮಲ್ಲಿ ಯಾವುದೇ ಗೊಂದಲವಿಲ್ಲ ಎಂದು ಮಂಡ್ಯ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಬಿ.ಆರ್.ರಾಮಚಂದ್ರ ತಿಳಿಸಿದರು.

ತಾಲೂಕಿನ ಕೆರಗೋಡು ಗ್ರಾಮದ ಪಂಚಲಿಂಗೇಶ್ವರ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ಮಾರಗೌಡನಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದ ಅವರು, ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಮತ್ತೊಮ್ಮೆ ಮುಖ್ಯಮಂತ್ರಿ ಮಾಡುವುದೇ ನಮ್ಮ ಗುರಿ ಎಂದು ತಿಳಿದು ಜೆಡಿಎಸ್ ಪಕ್ಷ ಬೆಂಬಲಿಸುವಂತೆ ಮನವಿ ಮಾಡಿದರು.

ಒಬ್ಬ ಬಡ ರೈತನ ಮಗನನ್ನು ಗುರುತಿಸಿ ಪಕ್ಷ ಅಭ್ಯರ್ಥಿಯನ್ನಾಗಿ ಮಾಡಿದೆ. ಪ್ರತಿಯೊಬ್ಬರೂ ಆಶೀರ್ವದಿಸುವ ಮೂಲಕ ಅತಿಹೆಚ್ಚಿನ ಮತಗಳಿಂದ ಗೆಲ್ಲಿಸಿಕೊಡಿ. ನಿಮ್ಮ ಸೇವಕನಾಗಿ ಕೆಲಸ ಮಾಡುತ್ತೇನೆ. ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾದರೆ ಮಂಡ್ಯದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಕೊಡಲು ಸಿದ್ಧರಿದ್ದಾರೆ ಎಂದರು.

ದೇವೇಗೌಡರ ಆಸೆಯಂತೆ ಕುಮಾರಸ್ವಾಮಿ ಅವರನ್ನು ಮತ್ತೊಮ್ಮೆ ಮುಖ್ಯಮಂತ್ರಿ ಮಾಡಬೇಕೆಂದು ಈಗಾಗಲೇ ಅನೇಕರು ಮಂಡ್ಯ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷ ಸೇರ್ಪಡೆಯಾಗಿದ್ದಾರೆ. ಅದರಲ್ಲೂ ಜಿಪಂ ಮಾಜಿ ಸದಸ್ಯ ಚಂದಗಾಲು ಶಿವಣ್ಣ ಅವರ ಬೆಂಬಲಿಗರು ಜೆಡಿಎಸ್ ಪಕ್ಷ ಸೇರ್ಪಡೆಯಾಗಿರುವುದು ಮತ್ತಷ್ಟು ಬಲ ಬಂದಿದೆ ಎಂದರು.

ಈ ಸಂದರ್ಭ ಮನ್‌ಮುಲ್ ಉಪಾಧ್ಯಕ್ಷ ಎಂ.ಎಸ್.ರಘುನಂದನ್, ಮಾರಗೌಡನಹಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ವಸಂತರಾಜು, ಮುಖಂಡರಾದ ಕೆ.ಎಲ್.ಕೃಷ್ಣ, ಡಿಎಸ್‌ಎಸ್ ಮುಖಂಡ ವೆಂಕಟಗಿರಿಯಯ್ಯ, ಗಣೇಶ, ನಾಗರಾಜು ಸೇರಿದಂತೆ ಇತರರಿದ್ದರು.

ಒಂದನೇ ಪುಟದಿಂದ

ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲು

ಕಾರ್ಯಕರ್ತೆಯರಿಗೆ ಪಿಂಚಣಿ ನೀಡುವ ಭರವಸೆ ನೀಡಲಾಗಿದೆ. ಕೇಂದ್ರ ಸರ್ಕಾರದ ನಾಗರಿಕ ಸೇವೆಗಳಾದ ರೈಲ್ವೆ, ಬ್ಯಾಂಕಿಂಗ್, ರಾಜ್ಯದಲ್ಲಿರುವ ಕೇಂದ್ರ ಸಾರ್ವಜನಿಕ ಉದ್ಯಮಗಳು, ಕೇಂದ್ರ ಭದ್ರತಾಪಡೆ ಇನ್ನಿತರೆ ನೇಮಕದಲ್ಲಿ ಕನ್ನಡದಲ್ಲೇ ಪರೀಕ್ಷೆ ನಡೆಸಿ ಕನ್ನಡಿಗರಿಗೆ ಆದ್ಯತೆ ನೀಡಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು. ಖಾಸಗಿ ಉದ್ಯಮಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಿಗೆ ಅಗತ್ಯ ಕಾಯಿದೆ ಜಾರಿ ಮಾಡಲಾಗುವುದು ಎಂದು ಜನತಾ ಪ್ರಣಾಳಿಕೆಯಲ್ಲಿ ತಿಳಿಸಲಾಗಿದೆ.

ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 6.8 ಲಕ್ಷ ವಿದ್ಯಾರ್ಥಿಗಳಿಗೆ ಉಚಿತ ಸೈಕಲ್, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಮತ್ತು ಆರ್ಥಿಕವಾಗಿ ಹಿಂದುಳಿದಿರುವ, 18 ವರ್ಷ ತುಂಬಿರುವ 60,000 ಸಾವಿರ ವಿದ್ಯಾರ್ಥಿನಿಯರಿಗೆ ವಿದ್ಯುತ್ ಚಾಲಿತ ಮೊಪೆಡ್ ನೀಡಲಾಗುವುದು ಹಾಗೂ ಶಾಲೆ ಕಾಲೇಜಿಗೆ ತೆರಳುವ ಎಲ್ಲಾ ಮಕ್ಕಳಿಗೆ ಅಗತ್ಯ ಸಾರಿಗೆ ವ್ಯವಸ್ಥೆ ಮಾಡಲಾಗುವುದು. ರಾಜ್ಯದಲ್ಲಿ ಎಲ್ಲರಿಗೂ ಆರೋಗ್ಯ ಸೌಲಭ್ಯ ಸಮಾನವಾಗಿರುತ್ತದೆ. ರಾಜ್ಯ ಸರಕಾರದಿಂದ ನಿಮ್ಹಾನ್ಸ್ ಮಾದರಿಯಲ್ಲಿ 500 ಹಾಸಿಗೆಯುಳ್ಳ ಆಧುನಿಕ ನರವಿಜ್ಞಾನ ವೈದ್ಯಕೀಯ ಸಂಸ್ಥೆ ಸ್ಥಾಪನೆ, ಆಯುಷ್ಮಾನ್ ಭಾರತ್, ಯಶಸ್ವಿನಿ ಯೋಜನೆಯಡಿಯಲ್ಲಿ ಸೇರ್ಪಡೆಯಾಗದ ಮತ್ತು ದುಬಾರಿ ವೆಚ್ಚದ ವೈದ್ಯಕೀಯ ಶಸ್ತ್ರಚಿಕಿತ್ಸೆಗಳಾದ ಮೂಳೆಮಜ್ಜೆ ಚಿಕಿತ್ಸೆ, ಹೃದಯ, ಶ್ವಾಸಕೋಶ ಮತ್ತು ಯಕೃತ್ ಬದಲಾಯಿಸುವ ಶಸ್ತ್ರಚಿಕಿತ್ಸೆಗಳಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 25 ಲಕ್ಷದ ರೂ.ವರೆಗಿನ ಪರಿಹಾರವನ್ನು 24 ಗಂಟೆಗಳ ಅವಧಿಯಲ್ಲಿ ನೀಡಲಾಗುವುದು. 6006 ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ 30 ಹಾಸಿಗೆಗಳ ಹೈಟೆಕ್ ಆಸ್ಪತ್ರೆ ಸ್ಥಾಪನೆ, ಅಗತ್ಯ ಸಿಬ್ಬಂದಿ ವೈದ್ಯರ ನೇಮಕ ಮಾಡಲಾಗುವುದು ಎಂದು ಜನತಾ ಪ್ರಣಾಳಿಕೆಯಲ್ಲಿ ಭರವಸೆ ನೀಡಿದೆ.

ರೈತ ಸ್ವಾಭಿಮಾನದ ಬದುಕು ನಡೆಸುವ ನಿಟ್ಟಿನಲ್ಲಿ ಜೆಡಿಎಸ್ ಚಿಂತಿಸಿದೆ. ಪ್ರತೀ ಎಕರೆಗೆ 10,000 ರೂ. ಸಹಾಯ ಧನ, ರೈತ ಯುವಕರನ್ನು ಮದುವೆ ಆಗುವ ಯುವತಿಯರಿಗೆ 2 ಲಕ್ಷ ರೂ. ಪ್ರೋತ್ಸಾಹ ಧನ, ಪ್ರತಿ ಕೃಷಿ ಕಾರ್ಮಿಕ ಕುಟುಂಬಕ್ಕೆ ಮಾಸಿಕ 2000 ರೂ. ಸಹಾಯ ಧನ, ದಿನದ 24 ಗಂಟೆ ಕಾಲ ಕೃಷಿಗೆ ಉಚಿತ ವಿದ್ಯುತ್ ಒದಗಿಸಲಾಗುವುದು ಎಂದು ಜೆಡಿಎಸ್ ಘೋಷಣೆ ಮಾಡಿದೆ.

ಹಿರಿಯ ನಾಗರಿಕರು ಸಂಕಷ್ಟಕ್ಕೆ ಸಿಲುಕಬಾರದು ಎನ್ನುವ ಉದ್ದೇಶದಿಂದ ಹಿರಿಯರ ಮಾಸಾಶನವನ್ನು 1200 ರೂ.ನಿಂದ 5000 ರೂ.ಗಳಿಗೆ ಏರಿಕೆ ಮಾಡುವುದಾಗಿ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಲಾಗಿದೆ.

ರಾಜ್ಯದಲ್ಲಿ ಕುವೆಂಪು ಕನಸಿನ ಸರ್ವ ಜನಾಂಗದ ಶಾಂತಿಯ ತೋಟ ನಿರ್ಮಾಣ ಮಾಡುವುದು ಜೆಡಿಎಸ್ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ನ್ಯಾ.ರಾಜೇಂದ್ರ ಸಾಚರ್ ಆಯೋಗದ ವರದಿ ಶಿಫಾರಸುಗಳ ಅನುಷ್ಠಾನ ಕುರಿತು ಅಧ್ಯಯನಕ್ಕೆ ಸಮಿತಿ ರಚನೆ ಮತ್ತು ಆ ಸಮಿತಿ ವರದಿ ಆಧರಿಸಿ ಜಾರಿಗೆ ಕ್ರಮ, ರಾಜ್ಯದಲ್ಲಿನ ವಕ್ಫ್ ಆಸ್ತಿ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಉನ್ನತಮಟ್ಟದ ಸಮಿತಿ ರಚನೆ, ಅಗತ್ಯ ಅನುದಾನ ನೀಡಿಕೆ,ಅಶಕ್ತ ಪುರುಷ ಮತ್ತು ಅಬಲೆಯರ ಆಶ್ರಯಕ್ಕೆ ಸಹಾರಾ ಯೋಜನೆ ಜಾರಿ, ರಾಜ್ಯದ ಒಟ್ಟು ಜನಸಂಖ್ಯೆಯಲ್ಲಿ ಶೇ.20ರಷ್ಟಿರುವ ಧಾರ್ಮಿಕ ಅಲ್ಪ ಸಂಖ್ಯಾತರ ಏಳಿಗೆಗೆ ಬಜೆಟ್‌ನಲ್ಲಿ ಶೇ.5 ರಷ್ಟು ಅನುದಾನ ಮೀಸಲು ಇಡಲಾಗುವುದು ಎಂದು ಜೆಡಿಎಸ್ ಘೋಷಣೆ ಮಾಡಿದೆ.

ಯುವ ಜನರಿಗೆ ನೆರವು: ರಾಜ್ಯದಲ್ಲಿ ಯುವ ಮಾನವ ಸಂಪನ್ಮೂಲವನ್ನು ಪರಿಣಾಮಕಾರಿಯಾಗಿ ರೂಪಿಸಿ ಬೆಳೆಸುವ ಬಗ್ಗೆ ಗಮನ ಹರಿಸಲಾಗಿದೆ. ಒಂದು ವರ್ಷದ ಕೌಶಲ್ಯ ಅಭಿವೃದ್ಧಿ ತರಬೇತಿ ಯೋಜನೆಗಳಲ್ಲಿ ತೊಡಗಿಸಿಕೊಳ್ಳುವ ಯುವಕ/ಯುವತಿಯರಿಗೆ ಮಾಸಿಕ 8000 ರೂ. ಭತ್ಯೆ, ಸೂಕ್ಷ್ಮ, ಸಣ್ಣ, ಮಧ್ಯಮ ಉದ್ಯಮ ವಲಯಗಳಲ್ಲಿ ತೊಡಗಿಸಿಕೊಳ್ಳುವ ಯುವಕ/ಯುವತಿಯರಿಗೆ ನೆರವು, ಕೈಗಾರಿಕೆ ಉತ್ಪನ್ನ ಘಟಕ ಸ್ಥಾಪನೆಗೆ 10 ಲಕ್ಷ ರೂ. ಸಹಾಯಧನ, ತರಬೇತಿ ಮತ್ತು ಸೇವೆಗಳ ವಲಯದಲ್ಲಿ ಒದಗಿಸುವ ವಲಯಗಳಲ್ಲಿ ತೊಡಗಿಸಿಕೊಳ್ಳುವವರಿಗೆ 3 ಲಕ್ಷ ರೂ. ಸಹಾಯಧನ, ಸಣ್ಣ ಉದ್ಯಮವಾಗಿ ವ್ಯಾಪಾರ–ವಹಿವಾಟು ನಡೆಸುವವರಿಗೆ 2 ಲಕ್ಷ ರೂ. ಸಹಾಯಧನ, ಸಣ್ಣ ಉದ್ಯಮ ನಡೆಸುವ ಮಹಿಳಾ ಉದ್ಯಮಿಗಳಿಗೆ ಮೇಲಾಧಾರ ಭದ್ರತೆ ರಹಿತ 2 ಕೋಟಿ ರೂ.ವರೆಗೆ ಬ್ಯಾಂಕುಗಳ ಮುಖೇನ ಸಾಲ ಕೊಡಲಾಗುವುದು. ರಾಜ್ಯದಲ್ಲಿನ ವಿಕಲಚೇತನರಿಗೆ 600 ರೂ.ಗಳ ಪಿಂಚಣಿಯನ್ನು 2,500 ರೂ.ಗಳಿಗೆ ಹೆಚ್ಚಳ, ಭಾರತೀಯ ಸಂಕೇತ ಭಾಷೆಯನ್ನು ದೇಶದ 23ನೇ ಅಧಿಕೃತ ಭಾಷೆಯನ್ನಾಗಿ ಮಾನ್ಯತೆ ಕೊಡಿಸುವ ನಿಟ್ಟಿನಲ್ಲಿ ಪ್ರಯತ್ನ, ಬುದ್ಧಿಮಾಂದ್ಯ ಮಕ್ಕಳ ಆರೋಗ್ಯ ವೃದ್ಧಿಗೆ ಆರೋಗ್ಯ ಅಭಿವೃದ್ಧಿ ಕೇಂದ್ರ ಸ್ಥಾಪನೆ, ವಿಶೇಷ ಸಾಮರ್ಥ್ಯ ಉಳ್ಳ ಮಕ್ಕಳನ್ನು ಹೊಂದಿರುವ ಕುಟುಂಬಗಳ ನೆರವಿಗಾಗಿ 'ಮಿಷನ್ ವಾತ್ಸಲ್ಯ 'ಕಾರ್ಯಕ್ರಮ ಜಾರಿಗೆ ತರಲಾಗುವುದು ಎಂದು ಪಕ್ಷ ಘೋಷಣೆ ಮಾಡಿದೆ.

ಪೊಲೀಸರಿಗೆ ಸಿಹಿಸುದ್ದಿ: ಔರಾದ್ಕರ್ ಸಮಿತಿ ವರದಿಯಲ್ಲಿ ಪೊಲೀಸ್ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗೆ ನೀಡುವ ವೇತನ, ಸೌಲಭ್ಯಗಳಲ್ಲಿ ನ್ಯೂನತೆಗಳಿದ್ದು, ಈ ತಾರತಮ್ಯ ಹೋಗಲಾಡಿಸಿ, ನ್ಯಾಯಯುತ ವೇತನ, ಸೌಲಭ್ಯ ನೀಡಲಾಗುವುದು.

ಕೆ.ಎಸ್.ಎಫ್.ಸಿ ಪ್ರಸ್ತುತ ಶೇ.4ರಷ್ಟು ಬಡ್ಡಿ ವಿಧಿಸುತ್ತಿದ್ದು, ಇದಕ್ಕೆ ಇನ್ನಷ್ಟು ಸಬ್ಸಿಡಿ ನೀಡಿ ಎಸ್.ಸಿ/ಎಸ್.ಟಿ ಉದ್ದಿಮೆದಾರರಿಗೆ ಬಡ್ಡಿ ದರವನ್ನು ಶೇ.4ರಿಂದ ಶೇ.2ಕ್ಕೆ ಇಳಿಸುವುದು. ಎಸ್.ಸಿ/ಎಸ್.ಟಿ ಉದ್ದಿಮೆದಾರು/ಗುತ್ತಿಗೆದಾರರಿಗೆ ಶೇ.2 ಬಡ್ಡಿ ದರದಲ್ಲಿ 5 ಕೋಟಿ ರೂ.ವರೆಗೆ ಬಂಡವಾಳ ಒದಗಿಸಲಾಗುವುದು, ರಾಜ್ಯದಲ್ಲಿ ಅನುಷ್ಠಾನದಲ್ಲಿರುವ ವಿವಿಧ ವಸತಿ ಯೋಜನೆಗಳಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶೇ.50 ರಿಯಾಯಿತಿ ದರದಲ್ಲಿ ಮನೆ ಹಂಚಿಕೆ ಮಾಡಲಾಗುವುದು.

ವಕೀಲರಿಗೆ ಭತ್ಯೆ: ವೃತ್ತಿನಿರತ ವಕೀಲರ ರಕ್ಷಣೆಗೆ ಕಾಯಿದೆ ಜಾರಿ ಹಾಗೂ ನೂತನವಾಗಿ ನೋಂದಾಯಿತ ವಕೀಲರಿಗೆ ಈಗ ನೀಡುವ ಮಾಸಿಕ ಭತ್ಯೆಯನ್ನು 2000ದಿಂದ 3000 ರೂ.ಗಳಿಗೆ ಹೆಚ್ಚಳ ಮಾಡಲಾಗುವುದು.

ಹಾಗೆಯೇ ನೋಂದಾಯಿತ ಸೆಕ್ಯೂರಿಟಿ ಗಾರ್ಡ್‌ಗಳಿಗೆ ಮಾಸಿಕ 2000 ಸಹಾಯ ಧನ ಕೊಡಲಾಗುವುದು. ಆರ್ಥಿಕವಾಗಿ ಸಂಕಷ್ಟದಲ್ಲಿ ಇರುವ ಆಟೋ ಚಾಲಕರಿಗೆ ಮಾಸಿಕ 2000 ರೂ. ಸಹಾಯ ಧನ ಕೊಡಲಾಗುವುದು.

ಸಾರಿಗೆ ನೌಕರರು ಅಗತ್ಯ ಸೇವಾ ಕಾಯ್ದೆ ಅಡಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು, ಅವರಿಗೆ ವೇತನ ಆಯೋಗ ಜಾರಿಯಾದಾಗ ಯಥಾವತ್ತು ಅಳವಡಿಸಿಕೊಂಡು ನಗದು ರಹಿತ ವೈದ್ಯ ಸೇವೆ ಕೊಡಲಾಗುವುದು.

ರಾಜ್ಯಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಪರಾಮರ್ಶೆಗೆ ಒಳಪಡಿಸಿ ಹಳೆಯ ಪಿಂಚಣಿ ಯೋಜನೆಯನ್ನೇ ಜಾರಿ ಮಾಡಲಾಗುವುದು. ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿ ಕೈಗಾರಿಕೆ ಮತ್ತು ಕೃಷಿ ಆಧಾರಿತ ಕ್ಲಸ್ಟರ್‌ಗಳನ್ನು ಸ್ಥಾಪನೆ ಮಾಡಲಾಗುವುದು, ಸುಮಾರು 1000 ಕೋಟಿ ರೂ., ಬೆಳಗಾವಿಯಲ್ಲಿ 1000 ಕೋಟಿ ರೂ. ವೆಚ್ಚದಲ್ಲಿ ಚರ್ಮೋದ್ಯಮದ ಕ್ಲಸ್ಟರ್ ಸ್ಥಾಪನೆ ಮಾಡಲಾಗುವುದು, ಕೋಲಾರದಲ್ಲಿ 1000 ಕೋಟಿ ರೂ.ಗಳ ಟೊಮೋಟೊ ಕ್ಲಸ್ಟರ್, ರಾಮನಗರ ಮತ್ತು ಚಿಕ್ಕಬಳ್ಳಾಪುರದಲ್ಲಿ ತಲಾ 1000 ಕೋಟಿ ರೂ. ವೆಚ್ಚದ ರೇಷ್ಮೆ ಕ್ಲಸ್ಟರ್, ಉಳಿದ 15 ಜಿಲ್ಲೆಗಳಲ್ಲಿ 5000 ಕೋಟಿ ವೆಚ್ಚದಲ್ಲಿ ಕೃಷಿ, ಕೈಗಾರಿಕೆ ಆಧಾರಿತ ಕ್ಲಸ್ಟರ್ ಗಳನ್ನು ಸ್ಥಾಪಿಸಲಾಗುವುದು.

ಈಗಾಗಲೇ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು ರಾಜ್ಯಾದ್ಯಂತ ಕೈಗೊಂಡಿರುವ ಜನತಾ ಜಲಧಾರೆ ಕಾರ್ಯಕ್ರಮದ ಅಡಿಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ ರಾಜ್ಯಕ್ಕೆ ಹಂಚಿಕೆ ಆಗಿರುವ ಪ್ರತಿ ಹನಿ ನೀರನ್ನೂ ಸದ್ಬಳಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಯ 3ನೇ ಹಂತದ ಅನುಷ್ಠಾನಕ್ಕೆ ಬೇಕಿರುವ 1,33,867 ಎಕರೆ ಭೂಮಿಯನ್ನು ಸ್ವಾಧೀನ ಮಾಡಿಕೊಂಡು ಏಕರೂಪ ಭೂ ಪರಿಹಾರ ಕೊಡಲಾಗುವುದು. ಅಲ್ಲದೆ, ಈ ಯೋಜನೆಗೆ ಅಗತ್ಯ ಇರುವ ಅನುದಾನವನ್ನು ವಾರ್ಷಿಕ 5ರಿಂದ 10 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸಲು ಉದ್ದೇಶಿಸಲಾಗಿದೆ.

ಬಿಜೆಪಿ ವರಿಷ್ಠರ ಮಹತ್ವದ ಟಾಸ್ಕ್‌ನಲ್ಲಿ ಸೋಮಣ್ಣ ಮುನ್ನಡೆ; ಅಶೋಕ್‌ಗೆ ಹಿನ್ನಡೆ!?



ಬೆಂಗಳೂರು, ಏ.27(ಕೆಎಂಎ)– ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ಕನಕಪುರ ಕ್ಷೇತ್ರದಲ್ಲಿ ಕಟ್ಟಿ ಹಾಕಲು ಕಂದಾಯ ಸಚಿವ ಆರ್.ಅಶೋಕ್ ಅವರನ್ನು ಕಣಕ್ಕಿಳಿಸಿದ ಬಿಜೆಪಿ ಹೈಕಮಾಂಡ್ ಇದೀಗ ಭ್ರಮ ನಿರಸನಗೊಂಡಿದೆ.

ಈ ಬಾರಿಯ ವಿಧಾನ ಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿ ಅಭ್ಯರ್ಥಿಗಳೆಂದೇ ಗುರುತಿಸಲ್ಪಡುತ್ತಿರುವ ಡಿ.ಕೆ.ಶಿವಕುಮಾರ್ ಅವರನ್ನು ಕನಕಪುರ ಕ್ಷೇತ್ರದಲ್ಲಿ, ಪ್ರತಿಪಕ್ಷ ನಾಯಕ ಸಿದ್ಧರಾಮಯ್ಯ ಅವರನ್ನು ವರುಣ ಕ್ಷೇತ್ರದಲ್ಲಿ ಕಟ್ಟಿ ಹಾಕುವ ಮೂಲಕ ಪಕ್ಷದ ಓಟಕ್ಕೆ ತಡೆಯಾಗದಂತೆ ನೋಡಿಕೊಳ್ಳುವುದು ಬಿಜೆಪಿ ನಾಯಕರ ಲೆಕ್ಕಾಚಾರ ವಾಗಿತ್ತು.

ಇದೇ ಕಾರಣಕ್ಕಾಗಿ ಕನಕಪುರದಲ್ಲಿ ಡಿಕೆಶಿ ವಿರುದ್ಧ ಬಿಜೆಪಿಯ ಒಕ್ಕಲಿಗ ನಾಯಕ, ಕಂದಾಯ ಸಚಿವ ಆರ್.ಅಶೋಕ್ ಅವರನ್ನು ಕಣಕ್ಕಿಳಿಸಿದ್ದ ಬಿಜೆಪಿ ವರಿಷ್ಠರು, ವರುಣ ವಿಧಾನಸಭಾ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಅವರ ವಿರುದ್ಧ ಲಿಂಗಾಯತ ನಾಯಕ, ವಸತಿ ಸಚಿವ ವಿ.ಸೋಮಣ್ಣ ಅವರನ್ನು ಕಣಕ್ಕಿಳಿಸಿತ್ತು.

ಹೀಗೆ ಕಣಕ್ಕಿಳಿಸಿದ ಸಂದರ್ಭದಲ್ಲಿ ರಾಜ್ಯ ಬಿಜೆಪಿಯ ಉಸ್ತುವಾರಿ ಹೊಣೆ ಹೊತ್ತ ಅರುಣ್ ಸಿಂಗ್ ಅವರು, ಈ ಇಬ್ಬರು ನಾಯಕರನ್ನು ಕಣಕ್ಕಿಳಿಸುವ ಮೂಲಕ ಡಿಕೆಶಿ ಮತ್ತು ಸಿದ್ದರಾಮಯ್ಯ ಅವರಿಗೆ ಟಕ್ಕರ್ ಕೊಡುವುದಾಗಿ ಆತ್ಮವಿಶ್ವಾಸ ತೋರಿಸಿದ್ದರು.

ಹೀಗೆ ಪಕ್ಷದ ವರಿಷ್ಠರ ಆತ್ಮವಿಶ್ವಾಸ ಪ್ರದರ್ಶಿತವಾಗಿ ಎರಡು ವಾರ ಕಳೆದಿದ್ದು, ಈ ಅವಧಿಯಲ್ಲಿ ವರುಣ ಕ್ಷೇತ್ರದಿಂದ ಸ್ಪರ್ಧಿಸಿರುವ ವಿ.ಸೋಮಣ್ಣ ಅವರ ಹೆಜ್ಜೆ ಬಿಜೆಪಿ ವರಿಷ್ಠರಿಗೆ ಸಮಾಧಾನ ತಂದಿದ್ದರೆ, ಕಂದಾಯ ಸಚಿವ ಆರ್.ಅಶೋಕ್ ಅವರ ಹೆಜ್ಜೆ ಭ್ರಮನಿರಸನ ಮೂಡಿಸಿದೆ. ಅಂದ ಹಾಗೆ ವರುಣ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಸಲು ಮಾತ್ರ ಬರುತ್ತೇನೆ ಎಂದಿದ್ದ ಪ್ರತಿಪಕ್ಷ ನಾಯಕ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈಗ ಸೋಮಣ್ಣ ಅವರು ಒಡ್ಡಿರುವ ಪ್ರಬಲ ಪೈಪೋಟಿಯಿಂದ ಎಚ್ಚರದ ನಡೆ ಇಡತೊಡಗಿದ್ದು,ಮೇಲಿಂದ ಮೇಲೆ ವರುಣ ಕ್ಷೇತ್ರಕ್ಕೆ ಧಾವಿಸುತ್ತಿದ್ದಾರೆ. ಎರಡು ಲಕ್ಷಕ್ಕೂ ಅಧಿಕ ಮತದಾರರಿರುವ ವರುಣ ಕ್ಷೇತ್ರದಲ್ಲಿ ಲಿಂಗಾಯತ, ನಾಯಕ ಮತ್ತಿತರ ಮತಗಳನ್ನು ಎನ್‌ಕ್ಯಾಷ್ ಮಾಡಿಕೊಂಡರೆ ತಮ್ಮ ಗೆಲುವ ಅಸಂಭವವಲ್ಲ ಎಂಬ ಲೆಕ್ಕಾಚಾರಕ್ಕಿಳಿದಿರುವ ಸಚಿವ ಸೋಮಣ್ಣ ಹಗಲು–ರಾತ್ರಿ ಎನ್ನದೆ ಹೋರಾಟ ನಡೆಸಿದ್ದು, ಇದರ ಪರಿಣಾಮವಾಗಿ ವರುಣ ಕ್ಷೇತ್ರ ಹೈವೋಲ್ಟೇಜ್ ಕ್ಷೇತ್ರವಾಗಿ ಪರಿವರ್ತನೆಗೊಂಡಿದೆ.

ಪರಿಣಾಮವಾಗಿ, ಸಿದ್ದರಾಮಯ್ಯ ಅವರನ್ನು ಕ್ಷೇತ್ರದಲ್ಲಿ ಕಟ್ಟಿ ಹಾಕುವ ತಮ್ಮ ಉದ್ದೇಶ ಒಂದು ಮಟ್ಟದಲ್ಲಿ ಈಡೇರಿದೆ ಎಂದು ಬಿಜೆಪಿ ವರಿಷ್ಠರು ಸಮಾಧಾನಗೊಂಡಿದ್ದು, ಅದೇ ಕಾಲಕ್ಕೆ ಕನಕಪುರ ಕ್ಷೇತ್ರದಲ್ಲಿ ಡಿಕೆಶಿ ವಿರುದ್ಧ ಪೈಪೋಟಿ ನೀಡದೆ ಸುಸ್ತಾದಂತೆ ಕಾಣುತ್ತಿರುವ ಕಂದಾಯ ಸಚಿವ ಆರ್. ಅಶೋಕ್ ಬಗ್ಗೆ ಭ್ರಮನಿರಸನಗೊಂಡಿದ್ದಾರೆ.

ಎಲ್ಲಕ್ಕಿಂತ ಮುಖ್ಯವಾಗಿ ಅಶೋಕ್ ಅವರ ಸ್ಪರ್ಧೆಯಿಂದ ಆತಂಕಪಡುವ ಬದಲು,ಸಂಭ್ರಮದಲ್ಲಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕನಕಪುರ ಕ್ಷೇತ್ರದ ಕಡೆ ತಲೆ ಹಾಕುವ ಬದಲು ಟೆಂಪಲ್ ರನ್ ಮಾಡುತ್ತಾ ರಾಜ್ಯ ಪ್ರವಾಸ ಮಾಡುತ್ತಿದ್ದಾರೆ.

ಈ ಮಧ್ಯೆ ಡಿಕೆಶಿ ಪರವಾಗಿ ಕ್ಷೇತ್ರದಲ್ಲಿ ಸುತ್ತುತ್ತಿರುವ ಅವರ ಪತ್ನಿ,ನಾವು ಮತ ಕೇಳುವ ಅಗತ್ಯವೇ ಇಲ್ಲ,ಜನ ತಾವಾಗಿಯೇ ನಮ್ಮ ನಾಯಕರಿಗೆ ಮತ ಹಾಕುತ್ತಾರೆ ಎನ್ನುತ್ತಿರುವುದು ಬಿಜೆಪಿ ವರಿಷ್ಠರಿಗೆ ಅಶೋಕ್ ಬಗ್ಗೆ ವ್ಯತಿರಿಕ್ತ ಸಂದೇಶ ರವಾನಿಸಿದೆ.

ಅಶೋಕ್ ಅವರ ಸ್ಪರ್ಧೆ ಡಿಕೆಶಿ ಎದೆಯಲ್ಲಿ ಆತಂಕ ಹುಟ್ಟಿಸಿದ್ದಿದ್ದರೆ ಅವರನ್ನು ಕ್ಷೇತ್ರದಲ್ಲಿ ಕಟ್ಟಿ ಹಾಕುವ ತಮ್ಮ ಉದ್ದೇಶ ಈಡೇರಿದಂತಾಗುತ್ತಿತ್ತು.ಆದರೆ ಅಶೋಕ್ ಅವರು ಡಿಕೆಶಿಯನ್ನು ಕಟ್ಟಿ ಹಾಕುವುದಿರಲಿ, ತಾವೇ ಸುಸ್ತಾದಂತೆ ಕಾಣುತ್ತಿದ್ದಾರೆ ಎಂಬುದು ವರಿಷ್ಠರ ಅಸಮಾಧಾನ. ಈ ಮಧ್ಯೆ ಕನಕಪುರ ಕ್ಷೇತ್ರದಲ್ಲಿ ಮತದಾರರನ್ನು ಸೆಳೆಯಲು ಅಶೋಕ್ ಅನುಸರಿಸುತ್ತಿರುವ ತಂತ್ರ ಎಲ್ಲೂ ಫಲ ನೀಡುತ್ತಿಲ್ಲ. ಹೀಗಾಗಿ ಖುದ್ದು ಅಶೋಕ್ ಅವರೇ, ಡಿಕೆಶಿ ಅವರಿಗೆ ಹೆದರಿಕೊಂಡು ಮತದಾರರು ನಮ್ಮ ಕಡೆ ಕಾಣಿಸಿಕೊಳ್ಳಲು ಅಂಜುತ್ತಿದ್ದಾರೆ ಎಂಬಂತೆ ಆಪ್ತರ ಮುಂದೆ ಮಾತನಾಡುತ್ತಿರುವುದು ಕೂಡಾ ವರಿಷ್ಠರ ಅಸಮಾಧಾನಕ್ಕೆ ಕಾರಣವಾಗಿದೆ.



ಅಶೋಕ್ ಅವರು ಕನಕಪುರದಲ್ಲಿ ಗೆಲ್ಲಲೇಬೇಕು ಎಂಬುದು ನಮ್ಮ ಹಠವಲ್ಲ, ಆದರೆ ಸತತವಾಗಿ ಡಿಕೆಶಿ ಕೈ ಸೇರುತ್ತಿರುವ ಕನಕಪುರ ಕ್ಷೇತ್ರದಲ್ಲಿ ಬಿಜೆಪಿಯ ನೆಲೆ ಯನ್ನು ವಿಸ್ತರಿಸಿಕೊಳ್ಳಲು ಅಶೋಕ್ ಅವರ ಸ್ಪರ್ಧೆ ನೆರವಾಗಬೇಕಿತ್ತು. ಹೀಗೆ ಪಕ್ಷಕ್ಕೆ ನೆಲೆ ಸಿಗಲಿ ಎಂಬ ಕಾರಣಕ್ಕಾಗಿಯೇ ಈ ಹಿಂದೆ ಕನಕಪುರ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ದೇವೇಗೌಡ, ಡಿಕೆಶಿ ವಿರುದ್ಧ ಬಿಜೆಪಿ ವತಿಯಿಂದ ಹಿರಿಯ ನಾಯಕ ಈಶ್ವರಪ್ಪ ಅವರನ್ನು ಕಣಕ್ಕಿಳಿಸಲಾಗಿತ್ತು.

ಗಮನಾರ್ಹ ಸಂಗತಿ ಎಂದರೆ ಈಶ್ವರಪ್ಪ ಅವರು ಕಷ್ಟಪಟ್ಟು ಕೆಲಸ ಮಾಡಿ, ಪಕ್ಷದ ಕಾರ್ಯಕರ್ತರ ಶ್ರಮವನ್ನು ಬಳಸಿಕೊಂಡು ಸುಮಾರು ಮೂರು ಲಕ್ಷಕ್ಕೂ ಅಧಿಕ ಮತಗಳನ್ನು ಗಳಿ ಸಿದ್ದರು. ಈ ಅನುಭವದ ಆಧಾರದ ಮೇಲೆ ಹೇಳು ವುದಾದರೆ ಈ ಬಾರಿ ಕನಕಪುರ ವಿಧಾನಸಭಾ ಕ್ಷೇತ್ರದಲ್ಲಿ ಡಿಕೆಶಿ ವಿರುದ್ಧ ಅಶೋಕ್ ಅವರು ಕನಿಷ್ಠ 50 ಸಹಸ್ರ ಮತಗಳನ್ನು ಪಡೆಯಬೇಕು ಎಂಬುದು ಪಕ್ಷದ ಯೋಚನೆ. ಆದರೆ ಈಗಿನ ಪರಿಸ್ಥಿತಿ ನೋಡಿದರೆ ಚುನಾವಣೆಗೂ ಮುನ್ನವೇ ಡಿಕೆಶಿ ವಿರುದ್ಧ ಅಶೋಕ್ ಸೋಲು ಒಪ್ಪಿಕೊಂಡವರ ತರ ನಡೆದುಕೊಳ್ಳುತ್ತಿದ್ದಾರೆ. ಡಿಕೆಶಿಗೆ ಟಕ್ಕರ್ ಕೊಡುವ ಬದಲು ಇವರೇ ಡಿಕೆಶಿ ಟಕ್ಕರ್‌ಗೆ ಸುಸ್ತಾಗಿ ಹೋದಂತೆ ಕಾಣುತ್ತಿದೆ.

ಸಿದ್ದರಾಮಯ್ಯ ಪರ ಸೊಸೆ ಸ್ಮಿತಾ ರಾಕೇಶ್ ವರುಣದಲ್ಲಿ ಪ್ರಚಾರ



ಮೈಸೂರು, ಏ.27– ವರುಣ ಕ್ಷೇತ್ರದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಸೋಮಣ್ಣನ ಪರ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಇದೇ ಮೊದಲ ಬಾರಿಗೆ ಸಿದ್ದರಾಮಯ್ಯ ಸೊಸೆ ಸ್ಮಿತಾ ರಾಕೇಶ್, ಮಾವನ ಪರ ಪ್ರಚಾರ ಕೈಗೊಂಡಿದ್ದು, ವರುಣ ವ್ಯಾಪ್ತಿಯ ಗ್ರಾಮಗಳಲ್ಲಿ ಮತ ಯಾಚಿಸುತ್ತಿದ್ದಾರೆ.

ಈವರೆಗೆ ಸಿದ್ದರಾಮಯ್ಯ ಕುಟುಂಬದಲ್ಲಿ ಗಂಡು ಮಕ್ಕಳನ್ನು ಬಿಟ್ಟರೆ ಅವರ ಪತ್ನಿ ಹಾಗೂ ಸೊಸೆ ಎಂದೂ ಚುನಾವಣಾ ಪ್ರಚಾರದಲ್ಲಿ ಭಾಗಿಯಾಗಿರಲಿಲ್ಲ. ಇದೇ ಮೊದಲ ಬಾರಿಗೆ ಮಾವನ ಪರವಾಗಿ ರಾಕೇಶ್ ಸಿದ್ದರಾಮಯ್ಯ ಪತ್ನಿ ಸ್ಮಿತಾ ರಾಕೇಶ್ ವರುಣ ಕ್ಷೇತ್ರದ ತಾಯೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳ ಮನೆ ಮನೆಗೆ ಹೋಗಿ, ಕಾಂಗ್ರೆಸ್‌ಗೆ ಮತ ಹಾಕುವಂತೆ ಮನವಿ ಮಾಡುತ್ತಿದ್ದಾರೆ.


ಇತ್ತೀಚೆಗೆ ಸಿದ್ದರಾಮಯ್ಯ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಮೊದಲ ಬಾರಿಗೆ ರಾಕೇಶ್ ಸಿದ್ದರಾಮಯ್ಯ ಮಗ 17 ವರ್ಷದ ಧವನ್ ರಾಕೇಶ್‌ನನ್ನು ಮಾಜಿ ಸಿಎಂ ಸಿದ್ದರಾಮಯ್ಯನವರೇ ಸ್ವತಃ ಸಾರ್ವಜನಿಕ ಸಭೆಯಲ್ಲಿ ಮುಂದೆ ಈತ ರಾಜಕೀಯಕ್ಕೆ ಬರುತ್ತಾನೆ ಎಂದು ಪರಿಚಯ ಮಾಡಿಕೊಟ್ಟಿದ್ದರು.

ವರುಣ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಹಾಗೂ ಅವರ ಮಗ ಯತೀಂದ್ರ ಸಿದ್ದರಾಮಯ್ಯ ಕಳೆದ 15 ವರ್ಷಗಳಿಂದ ಶಾಸಕರಾಗಿ ಆಯ್ಕೆ ಆಗುತ್ತಿದ್ದಾರೆ. ವರುಣ ಕ್ಷೇತ್ರದಿಂದ ಎರಡು ಬಾರಿ ಆಯ್ಕೆಯಾಗಿದ್ದ ಸಿದ್ದರಾಮಯ್ಯ, ವಿರೋಧ ಪಕ್ಷದ ನಾಯಕರಾಗಿ ಹಾಗೂ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ್ದರು.

ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಯತೀಂದ್ರ ಅವರು ತಂದೆಗೆ ಮತ್ತೆ ವರುಣ ಕ್ಷೇತ್ರವನ್ನು ಬಿಟ್ಟುಕೊಟ್ಟಿದ್ದು, ಸಿದ್ದರಾಮಯ್ಯ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ.













ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ರಾಜಸ್ಥಾನ್	8	5	3	0	10
ಗುಜರಾತ್	7	5	2	0	10
ಸಿಎಸ್‌ಕೆ	8	5	3	0	10
ಲಕ್ನೋ	7	4	3	0	8
ಆರ್‌ಸಿಬಿ	8	4	4	0	8
ಪಂಜಾಬ್	7	4	3	0	8
ಕೋಲ್ಕತ್ತಾ	8	3	5	0	6
ಮುಂಬೈ	7	3	4	0	6
ಎಸ್‌ಆರ್‌ಹೆಚ್	7	2	5	0	4
ಡೆಲ್ಲಿ	7	2	5	0	4

ಸಿಎಸ್‌ಕೆ ವಿರುದ್ಧ ರಾಜಸ್ಥಾನ್‌ಗೆ ರಾಯಲ್ ಗೆಲುವು



ಜೈಪುರ, ಏ.27– ಯಶಸ್ವಿ ಜೈಸ್ವಾಲ್ ಅವರ ಸ್ಫೋಟಕ ಅರ್ಧಶತಕ ಹಾಗೂ ಆಡಂ ಜಂಪಾ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ರಾಜಸ್ಥಾನ್ ರಾಯಲ್ಸ್ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ 32 ರನ್‌ಗಳಿಂದ ಮಣಿಸಿದೆ.

ಹಾಲಿ ಆವೃತ್ತಿಯಲ್ಲಿ ಆಡಿದ ಎರಡೂ ಪಂದ್ಯಗಳಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡ ಗೆಲುವು ಸಾಧಿಸಿದ್ದು, ಅಂಕಪಟ್ಟಿಯಲ್ಲಿ ಅಗ್ರಸ್ಥಾನ ಅಲಂಕರಿಸಿದರೇ, ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದ್ದ ಚೆನ್ನೈ ಸೋಲು ಅನುಭವಿಸುವ ಮೂಲಕ ಅಂಕಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದೆ.

ಇಲ್ಲಿನ ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 202 ರನ್ ಗಳಿಸಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಯಶಸ್ವಿ ಜೈಸ್ವಾಲ್ ಹಾಗೂ ಜೋಸ್ ಬಟ್ಲರ್ ಮೊದಲ ವಿಕೆಟ್‌ಗೆ 86 ರನ್‌ಗಳ ಜೊತೆಯಾಟವಾಡುವ ಮೂಲಕ ಭದ್ರಬುನಾದಿ ಹಾಕಿಕೊಟ್ಟರು. ಆದರೆ ಬ್ಯಾಟಿಂಗ್‌ನಲ್ಲಿ ಪರದಾಡಿದ ಬಟ್ಲರ್ 21 ಎಸೆತಗಳಲ್ಲಿ 27 ರನ್ ಬಾರಿಸಿ ರವೀಂದ್ರ ಜಡೇಜಾಗೆ ವಿಕೆಟ್ ಒಪ್ಪಿಸಿದರು. 3ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಇಳಿದ ನಾಯಕ ಸಂಜು ಸ್ಯಾಮ್ಸನ್ ಏಕದಿನ ಶೈಲಿಯಲ್ಲಿ ಬ್ಯಾಟಿಂಗ್ ಮಾಡಿ 17 ಎಸೆತಗಳಲ್ಲಿ 17 ರನ್ ಪೇರಿಸಿ ಔಟಾದರು. ಮತ್ತೊಂದೆಡೆ ಬಿರುಸಿನ ಬ್ಯಾಟಿಂಗ್ ನಡೆಸಿದ ಜೈಸ್ವಾಲ್ 48 ಎಸೆತಗಳಲ್ಲಿ 8 ಬೌಂಡರಿ, 4 ಸಿಕ್ಸರ್ ಒಳಗೊಂಡ 77ರನ್ ಗಳಿಸಿ ನಿರ್ಗಮಿಸುವ ಮೂಲಕ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ನಂತರ ಕ್ರೀಸ್‌ಗೆ ಆಗಮಿಸಿದ ಶಿಮ್ರೋನ್ ಹೆಟ್ಮೆಯರ್ 8 ರನ್‌ಗೆ ವಿಕೆಟ್ ಒಪ್ಪಿಸಿದರು.

ಈ ವೇಳೆ ಒಂದಾದ ಕನ್ನಡಿಗ ದೇವದತ್ ಪಡಿಕ್ಕಲ್ ಹಾಗೂ ಧ್ರುವ್ ಜುರೇಲ್ ತಮ್ಮ ಸ್ಫೋಟಕ ಆಟದ ಮೂಲಕ ಕೇವಲ 20 ಎಸೆತಗಳಲ್ಲಿ 48 ರನ್ ಗಳಿಸುವ ಮೂಲಕ ತಂಡದ ಮೊತ್ತವನ್ನು 200ರ ಗಡಿ ದಾಟಿಸಿದರು. ಜುರೇಲ್ 15 ಎಸೆತಗಳಲ್ಲಿ 2 ಸಿಕ್ಸರ್, 3 ಬೌಂಡರಿ ಗಳಿದ್ದ 34 ರನ್ ಸಿಡಿಸಿದರು. ದೇವದತ್ ಪಡಿಕ್ಕಲ್ 27 ರನ್ ಗಳಿಸಿದರು. ಚೆನ್ನೈ ಪರ ತುಷಾರ್ ದೇಶಪಾಂಡೆ 2, ಮಹೇಶ್ ತೀಕ್ಷ್ಣ, ರವೀಂದ್ರ ಜಡೇಜಾ ತಲಾ ಒಂದೊಂದು ವಿಕೆಟ್ ಪಡೆದರು.

203ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 170ರನ್ ಗಳಿಸಲಷ್ಟೇ ಶಕ್ತವಾಗಿ ಸೋಲು ಅನುಭವಿಸಿತು. ತಂಡದ ಪರ ಆರಂಭದಲ್ಲೇ ಡಿವೋನ್ ಕಾನ್ವೆ ಕೇವಲ 8 ರನ್ ಪೇರಿಸಿ ನಿರ್ಗಮಿಸಿದರು. ಮತ್ತೊಂದೆಡೆ ಉತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿದ ಋತುರಾಜ್ ಗಾಯಕ್ವಾಡ್ 29 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಒಳಗೊಂಡ 47ರನ್ ಗಳಿಸಿ ಔಟಾದರು. ನಂತರ ಬಂದ ಅಜಿಂಕ್ಯಾ ರಹಾನೆ ಬಂದಷ್ಟೇ ವೇಗವಾಗಿ 15 ರನ್ ಗಳಿಸಿ ಪೆವಿಲಿಯನ್ ಸೇರಿದರು. ಚೆನ್ನೈ ಪರ ಬಿರುಸಿನ ಬ್ಯಾಟಿಂಗ್ ಮಾಡಿದ ಶಿವಂ ದುಬೆ 33 ಎಸೆತಗಳಲ್ಲಿ 4 ಸಿಕ್ಸರ್, 2 ಬೌಂಡರಿ ಒಳಗೊಂಡ 52 ರನ್ ಗಳಿಸಿದರು. ಉಳಿದಂತೆ ಮೊಯಿನ್ ಅಲಿ ರವೀಂದ್ರ ಜಡೇಜಾ ತಲಾ 23 ರನ್ ಗಳಿಸಿದರು. ರಾಜಸ್ಥಾನ್ ಪರ ಆಡಂ ಜಂಪಾ 3, ರವಿಚಂದ್ರನ್ ಅಶ್ವಿನ್ 2, ಕುಲದೀಪ್ ಯಾದವ್ 1 ವಿಕೆಟ್ ಕಬಳಿಸಿದರು. ಯಶಸ್ವಿ ಜೈಸ್ವಾಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



ಚಾಮರಾಜ ಕ್ಷೇತ್ರದಲ್ಲಿ ಮೂರೂ ಪಕ್ಷಗಳ ಪ್ರಚಾರ ಅಬ್ಬರ



ಬಿಜೆಪಿ ಅಭ್ಯರ್ಥಿ ಎಲ್.ನಾಗೇಂದ್ರ, ಪಡುವಾರಹಳ್ಳಿಯಲ್ಲಿ ಪ್ರಚಾರ ನಡೆಸಿದರು.



ಕಾಂಗ್ರೆಸ್ ಅಭ್ಯರ್ಥಿ ಕೆ.ಹರೀಶ್ ಗೌಡ, ಹೆಬ್ಬಾಳ ಬಡಾವಣೆಯಲ್ಲಿ ಮತ ಯಾಚಿಸಿದರು.



ಜೆಡಿಎಸ್ ಅಭ್ಯರ್ಥಿ ಹೆಚ್.ಕೆ.ರಮೇಶ್, ನಗರ ಪಾಲಿಕೆ ಸದಸ್ಯ ಎಸ್‌ಬಿಎಂ ಮಂಜು ಮತ್ತಿತರ ಮುಖಂಡರೊಂದಿಗೆ ಬೃಂದಾವನ ಬಡಾವಣೆಯಲ್ಲಿ ಬಿರುಸಿನ ಪ್ರಚಾರ ನಡೆಸಿದರು.

ಮೈಸೂರು, ಏ.27(ಎಸ್‌ಬಿಡಿ)– ಮೈಸೂರಿನ ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಪಕ್ಷದ ಅಭ್ಯರ್ಥಿಗಳ ಪ್ರಚಾರ ಮತ್ತಷ್ಟು ಬಿರುಸುಗೊಂಡಿದೆ.

ಬಿಜೆಪಿ ಅಭ್ಯರ್ಥಿ ಎಲ್.ನಾಗೇಂದ್ರ 22ನೇ ವಾರ್ಡ್ ಪಡುವಾರಹಳ್ಳಿಯಲ್ಲಿ ಗುರುವಾರ ಪ್ರಚಾರ ನಡೆಸಿದರು. ಇಲ್ಲಿನ ಶ್ರೀ ಮಹದೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಪಾದಯಾತ್ರೆ ಮೂಲಕ ಮತ ಯಾಚಿಸಿದರು. ಈ ವೇಳೆ ಕೆಲವೆಡೆ ಅವರ ಬೆಂಬಲಿಗರು ಹೂಮಳೆಗರೆಯುವ ಮೂಲಕ ಭವ್ಯ ಸ್ವಾಗತ ನೀಡಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಎಲ್.ನಾಗೇಂದ್ರ ಮಾತನಾಡಿ, ಪಡುವಾರಹಳ್ಳಿಯ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ಸುಮಾರು 70 ಕೋಟಿ ರೂ. ಅನುದಾನದಲ್ಲಿ ರಸ್ತೆಯ ಡಾಂಬರೀಕರಣ, ಯುಜಿಡಿ, 4 ಶುದ್ಧ ಕುಡಿಯುವ ನೀರಿನ ಘಟಕ, ಬಯಲು ರಂಗಮಂದಿರ ಹಾಗೂ ಕಲ್ಯಾಣ ಮಂಟಪ ಅಭಿವೃದ್ಧಿ, ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯ ಭವನ ನಿರ್ಮಾಣ, ಆಟೋ ನಿಲ್ದಾಣ, ಹೀಗೆ ಹತ್ತಾರು ಅಭಿವೃದ್ಧಿ ಕಾರ್ಯಗಳ ಜೊತೆಗೆ ಮೂಲ ಸೌಕರ್ಯವನ್ನು ಸಮರ್ಪಕವಾಗಿ ಕಲ್ಪಿಸಿರುವ ತೃಪ್ತಿ ನನಗಿದೆ. ಮತ್ತೊಮ್ಮೆ ನನ್ನನ್ನು ಆಶೀರ್ವದಿಸಿ ಗೆಲ್ಲಿಸುವ ಮೂಲಕ ಇನ್ನೂ ಹೆಚ್ಚಿನ ಸೇವೆಗೆ ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಡುವಾರಹಳ್ಳಿ ಗ್ರಾಮಾಭ್ಯುದಯ ಟ್ರಸ್ಟ್ ಅಧ್ಯಕ್ಷ ಮಹದೇವಸ್ವಾಮಿ, ಕಾರ್ಯದರ್ಶಿ ಎಂ.ಬೈರಪ್ಪ ರಾಮಣ್ಣ ಮುಖಂಡರು, ಲೋಕೇಶ್ವರ, ಸೋಮಣ್ಣ, ವಾರ್ಡ್ ಅಧ್ಯಕ್ಷ ಮಂಜು, ಎಂ.ಚಿಕ್ಕವೆಂಕಟು, ಎಸ್.ಬಿ.ಶಿವು, ಸಿ.ಡಿ.ಕುಮಾರ್, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಈ.ಬಸವರಾಜು, ವಿ.ಬೈರವ, ಅರುಣ್, ಎನ್.ಯೋಗಾನಂದ್, ಸಿ.ಸಂತೋಷ್, ಆಟೋ ಕಾಂತಾ, ಆಟೋ ಪ್ರಕಾಶ್, ಚಾಮ, ವೇಣು, ಗೋಪಾಲ, ಗುರುದತ್ತ, ಹೇಮಾ, ಛಾಯಾಪ್ರಸಾದ್, ಗಿರೀಶ್ ಮತ್ತಿತರರು ಉಪಸ್ಥಿತರಿದ್ದರು.

ಕೈ ಅಭ್ಯರ್ಥಿ ಪ್ರಚಾರ: ಕಾಂಗ್ರೆಸ್ ಅಭ್ಯರ್ಥಿ ಕೆ.ಹರೀಶ್‌ಗೌಡ, ಹೆಬ್ಬಾಳ ಬಡಾವಣೆಯ ಮಾದೇಗೌಡ ಸರ್ಕಲ್ ಬಳಿ ಮನೆಮನೆಗೆ ತೆರಳಿ ಮತಯಾಚಿಸಿದರು. ಕಳೆದ ಬಾರಿ ಪಕ್ಷೇತರನಾಗಿ ಸ್ಪರ್ಧಿಸಿದ್ದ ನನಗೆ ಹೆಚ್ಚು ಮತ ನೀಡಿ, ಆಶೀರ್ವದಿಸಿದ್ದೀರಿ. ಈ ಬಾರಿ ನನ್ನನ್ನು ಗೆಲ್ಲಿಸುವ ಮೂಲಕ ನಿಮ್ಮಗಳ ಸೇವೆಗೆ ಅವಕಾಶ ಮಾಡಿ ಕೊಡಿ ಎಂದು ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಭ್ರಷ್ಟಾಚಾರ, ಹಗರಣಗಳಲ್ಲೇ ಮುಳುಗಿತು. 40 ಪರ್ಸೆಂಟ್ ಕಮಿಷನ್, ಪಿಎಸ್‌ಐ ಹಗರಣದ ಬಗ್ಗೆ ನಿಮಗೆಲ್ಲಾ ತಿಳಿದಿದೆ. ಯಾವುದೇ ಅಭಿವೃದ್ಧಿ ಕೆಲಸಗಳನ್ನು ಮಾಡದೆ ಸುಳ್ಳುಗಳ ಸರಮಾಲೆಯಲ್ಲೇ ಆಡಳಿತ ನಡೆಸಿದೆ. ಗ್ಯಾಸ್ ಸಿಲಿಂಡರ್, ಪೆಟ್ರೋಲ್, ಡೀಸೆಲ್, ಅಡುಗೆ ಎಣ್ಣೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರುತ್ತಲೇ ಇದೆ. ಮಜ್ಜಿಗೆ, ಮೊಸರು, ಹಾಲಿಗೂ ಜಿಎಸ್‌ಟಿ ಹಾಕುವ ಮೂಲಕ ಬಡವರ ಬದುಕಿನ ಮೇಲೆ ಬರೆ ಎಳೆದಿದ್ದಾರೆ. ಹಾಗಾಗಿ ಮತ್ತೆ ಜನವಿರೋಧಿ ಬಿಜೆಪಿ ಸರ್ಕಾರಕ್ಕೆ ಅವಕಾಶ ನೀಡದೆ ಕಾಂಗ್ರೆಸ್ ಗೆಲ್ಲಿಸುವಂತೆ ಕೋರಿದರು.

ಮಾಜಿ ಉಪಮೇಯರ್ ಮಹದೇವಪ್ಪ, ಮಂಚೇಗೌಡನಕೊಪ್ಪಲು ರವಿ, ಕಾಂಗ್ರೆಸ್ ನಗರ ಓಬಿಸಿ ಅಧ್ಯಕ್ಷ ಎನ್.ಆರ್. ನಾಗೇಶ್, ಜಯರಾಮಾಚಾರ್, ಡೆಲ್ಲಿ ರವಿ, ಪುಟ್ಟಸ್ವಾಮಿ, ರಾಮಚಂದ್ರ, ಕೃಷ್ಣ, ಎಸ್.ಕುಮಾರ್, ರವಿ ಸೇರಿದಂತೆ ಅನೇಕ ಮುಖಂಡರು ಪ್ರಚಾರದಲ್ಲಿ ಭಾಗಿಯಾಗಿದ್ದರು.

ಜೆಡಿಎಸ್ ಮತಯಾಚನೆ: ಜೆಡಿಎಸ್ ಅಭ್ಯರ್ಥಿ ಹೆಚ್.ಕೆ.ರಮೇಶ್ ಗೋಕುಲಂ ವಾರ್ಡ್‌ನ ಬೃಂದಾವನ ಬಡಾವಣೆಯಲ್ಲಿ ಪ್ರಚಾರ ನಡೆಸಿದರು. ಪಕ್ಷದ ವರಿಷ್ಠರಾದ ಹೆಚ್.ಡಿ.ದೇವೇಗೌಡರು ಮುಖ್ಯಮಂತ್ರಿಯಾಗಿ, ಪ್ರಧಾನಮಂತ್ರಿಯಾಗಿ ಜನಪರ ಆಡಳಿತ ನೀಡುವ ಮೂಲಕ ಮಾದರಿಯಾಗಿದ್ದಾರೆ. ಅವರಿಗೆ ಸಿಕ್ಕ ಕಡಿಮೆ ಅಧಿಕಾರಾವಧಿಯಲ್ಲೇ ದಾಖಲೆ ಅಭಿವೃದ್ಧಿ ಕಾರ್ಯ ಮಾಡಿದ್ದಾರೆ. ಅವರಂತೆಯೇ ಹೆಚ್.ಡಿ.ಕುಮಾರಸ್ವಾಮಿ ಅವರು 2 ಬಾರಿ ಮುಖ್ಯಮಂತ್ರಿಯಾಗಿ ನಾಡಿನ ಸೇವೆ ಮಾಡಿದ್ದಾರೆ. ಅವರ ಅಧಿಕಾರಾವಧಿಯನ್ನು ಜನ ಈಗಲೂ ಸ್ಮರಿಸುತ್ತಾರೆ. ಮತ್ತೆ ಅವರೇ ಮುಖ್ಯಮಂತ್ರಿಯಾಗಬೇಕೆಂಬ ಇಂಗಿತ ಅವರಲ್ಲಿದೆ. ಅವರ ಕೈ ಬಲಪಡಿಸುವ ನಿಟ್ಟಿನಲ್ಲಿ ಈ ಕ್ಷೇತ್ರದಲ್ಲೂ ಜೆಡಿಎಸ್‌ಗೆ ಬೆಂಬಲಿಸಬೇಕೆಂದು ಮನವಿ ಮಾಡಿಕೊಂಡರು.

ಪ್ರಚಾರಕ್ಕೆ ಜೆಡಿಎಸ್ ನಗರಾಧ್ಯಕ್ಷ ಕೆ.ಟಿ.ಚೆಲುವೇಗೌಡ, ನಗರಪಾಲಿಕೆ ಸದಸ್ಯ ಎಸ್‌ಬಿಎಂ ಮಂಜು, ಮಾಜಿ ಮೇಯರ್ ಎಂ.ಜೆ.ರವಿಕುಮಾರ್, ಮುಖಂಡರಾದ ಸೋಮಶೇಖರ್, ಹನುಮೇಗೌಡ, ಚಂದ್ರೇಗೌಡ, ಕೃಷ್ಣಪ್ಪ, ಮೋಹನ್, ರಘು, ಸಾವಿತ್ರಿ ಮತ್ತಿತರರು ಸಾಥ್ ನೀಡಿದರು.

ಆಮ್ ಆದ್ಮಿ ಪಕ್ಷದ ಮಾಲವಿಕ ಗುಬ್ಬಿವಾಣಿ, ಬಹುಜನ ಸಮಾಜವಾದಿ ಪಕ್ಷದ ಚಂದ್ರಶೇಖರ್ ಸೇರಿದಂತೆ ವಿವಿಧ ಪಕ್ಷ ಹಾಗೂ ಪಕ್ಷೇತರ ಅಭ್ಯರ್ಥಿಗಳು ಬಿರುಸಿನ ಪ್ರಚಾರ ನಡೆಸಿದ್ದಾರೆ. ಅಲ್ಲದೆ ಪಕ್ಷಗಳ ಮುಖಂಡರು, ಕಾರ್ಯಕರ್ತರೂ ಪ್ರತ್ಯೇಕವಾಗಿ ಮತದಾರರ ಭೇಟಿಯಾಗಿ ತಮ್ಮ ಅಭ್ಯರ್ಥಿಗಳ ಪರವಾಗಿ ಮತಯಾಚಿಸುತ್ತಿದ್ದಾರೆ.



ಮೈಸೂರಿನ ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಕೆ.ಹರೀಶ್ ಗೌಡರ ಪರ ಕಾಂಗ್ರೆಸ್ ಓಬಿಸಿ ನಗರ ಘಟಕದ ಅಧ್ಯಕ್ಷ ಎನ್.ಆರ್.ನಾಗೇಶ್, ಇಂದಿರಾಗಾಂಧಿ ಬ್ಲಾಕ್‌ನ ಸಿದ್ದಪ್ಪಾಜಿ ವಿಶ್ವಕರ್ಮ ಹಾಗೂ ಮುಖಂಡರು ಬಿಎಂಶ್ರೀ ನಗರದಲ್ಲಿ ಮತಯಾಚನೆ ಮಾಡಿದರು.



ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಟಿ.ಎಸ್.ಶ್ರೀವತ್ಸ ಅಗ್ರಹಾರದ ಕುಂದೂರು ಮಠದ ಶ್ರೀ ಶರತ್‌ಚಂದ್ರ ಸ್ವಾಮೀಜಿ, ನೀಲಕಂಠ ಸ್ವಾಮಿ ಮಠದ ಶ್ರೀ ಸಿದ್ಧಮಲ್ಲ ಸ್ವಾಮೀಜಿ, ಮುಡುಗುಂಡ ಮಠ ಮತ್ತು ಚಿಲಕುಂದ ಮಠದ ಶ್ರೀಗಳನ್ನು ಭೇಟಿಯಾಗಿ, ಅಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯ ಬಿ.ವಿ.ಮಂಜುನಾಥ್, ಜಗದೀಶ್, ನಿರಂಜನ ಮೂರ್ತಿ, ಕೇಬಲ್ ನಾಗೇಂದ್ರ, ಜಯಶಂಕರ್, ರೇಖಾ ಮತ್ತಿತರರಿದ್ದರು.

ಕಟ್ಟಡ ಕಾರ್ಮಿಕರ ಪುತ್ರಿಗೆ ಅತ್ಯುನ್ನತ ಶ್ರೇಣಿ



ಮೈಸೂರು, ಏ.27– ಹೆಚ್.ಡಿ.ಕೋಟೆ ತಾಲೂಕಿನ ಆಲನಹಳ್ಳಿ ಗ್ರಾಮದ ಕಟ್ಟಡ ಕಾರ್ಮಿಕ ಕೆಸಿದ್ದರಾಜು ಪುತ್ರಿ ಎಸ್. ಶೋಭ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ 600ಕ್ಕೆ 555(ಶೇ.92.5) ಅಂಕ ಪಡೆಯುವ ಮೂಲಕ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಶೋಭಾಳನ್ನು ಅಖಿಲ ಕರ್ನಾಟಕ ಶ್ರಮಜೀವಿ ಕಟ್ಟಡ ಕಾರ್ಮಿಕ ಮಹಾಸಭಾ(ರಿ) ಅಭಿನಂದಿಸಿದೆ.


ಪ್ರಧಾನಿಯವರೊಂದಿಗೆ ಬಿಜೆಪಿ ಮುಖಂಡರು, ಕಾರ್ಯಕರ್ತರ ಸಂವಾದ

ಕೆ.ಆರ್.ಕ್ಷೇತ್ರದಲ್ಲಿ ಪಕ್ಷ ಸಂಘಟನೆ ಸಂಬಂಧ ಪ್ರಧಾನಿ ಶ್ಲಾಘನೆಗೆ ಶಾಸಕ ರಾಮದಾಸ್ ಹರ್ಷ

ಮೈಸೂರು, ಏ.27(ಜಿಎ)–ಕರ್ನಾಟಕದ ಬಿಜೆಪಿ ಕಾರ್ಯಕರ್ತರಿಗಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಆಯೋಜಿಸಿದ್ದ ವರ್ಚ್ಯುಯಲ್ 'ಕಾರ್ಯಕರ್ತರೊಂದಿಗೆ ಸಂವಾದ'ದಲ್ಲಿ ಮೈಸೂರಿನಲ್ಲಿ ಪಕ್ಷದ ರಾಷ್ಟ್ರ, ರಾಜ್ಯ ಹಾಗೂ ಸ್ಥಳೀಯ ಮುಖಂಡರು, ಕಾರ್ಯಕರ್ತರು ಸಾಕಷ್ಟು ಸಂಖ್ಯೆಯಲ್ಲಿ ಪಾಲ್ಗೊಂಡರು.

ಮೈಸೂರಿನ ಕುವೆಂಪುನಗರದ ಸಾಮ್ರಾಟ್ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ 'ಕಾರ್ಯಕರ್ತರೊಂದಿಗೆ ಸಂವಾದ'ದಲ್ಲಿ ಕರ್ನಾಟಕ ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್, ದೆಹಲಿ ಬಿಜೆಪಿ ಉಪಾಧ್ಯಕ್ಷ ರಾಜೀವ್ ಬಬ್ಬರ್, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಟಿ.ಎಸ್. ಶ್ರೀವತ್ಸ, ಹಾಲಿ ಶಾಸಕ ರಾಮದಾಸ್ ಸೇರಿದಂತೆ ನಗರದ ನೂರಾರು ಮುಖಂಡರು, ಕಾರ್ಯಕರ್ತರು ಈ ಸಂವಾದದಲ್ಲಿ ಭಾಗಿಯಾಗಿ ಪ್ರಧಾನಿ ಮೋದಿ ಅವರು ಬೋಧಿಸಿದ ಜಯದ ಮಂತ್ರವನ್ನು ಪಠಿಸಿದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅರುಣ್ ಸಿಂಗ್, ಕರ್ನಾಟಕದ ವಿಕಾಸವೇ ದೇಶದ ವಿಕಾಸವಾಗಿದೆ ಎಲ್ಲರೂ ಒಟ್ಟಿಗೆ ಕೆಲಸ ಮಾಡೋಣ. ನರೇಂದ್ರ ಮೋದಿಯೊಬ್ಬರೇ ದೇಶದ ಪ್ರಧಾನಮಂತ್ರಿಯಾಗಿ ಕಾರ್ಯಕರ್ತರೊಂದಿಗೆ ಸಂವಾದ ಮಾಡಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಕರ್ನಾಟಕದ ಬೂತ್ ದೊಡ್ಡ ಶಕ್ತಿಯಾಗಿದ್ದು, ಅದನ್ನು ಸಮರ್ಪಕವಾಗಿ ಬಳಸಿಕೊಂಡು ಈ ಬಾರಿ ಜಯಶಾಲಿಯಾಗುತ್ತೇವೆ. ಬಿಜೆಪಿ ಕಾರ್ಯಕರ್ತರು, ಪ್ರಧಾನಮಂತ್ರಿಗಳು ಬೋಧಿಸಿರುವ ಜಯದ ಮಂತ್ರವನ್ನು ಸಿದ್ಧ ಸೂತ್ರವಾಗಿ ಅಳವಡಿಸಿಕೊಂಡು ಚುನಾವಣೆಯನ್ನು ಎದುರಿಸೋಣ ಎಂದು ಕರೆ ನೀಡಿದರು.



ಪ್ರಧಾನಿ ಮೋದಿ ಅವರು ವರ್ಚುವಲ್ ಮೂಲಕ ಕಾರ್ಯಕರ್ತರೊಂದಿಗೆ ಸಂವಾದ ನಡೆಸಿದ ನಂತರ ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಮಾತನಾಡಿದರು.

ನಂತರ ಶಾಸಕ ರಾಮದಾಸ್ ಮಾತನಾಡಿ, ಪಕ್ಷ ಸಂಘಟನೆಯಲ್ಲಿ ಕೆ.ಆರ್. ಕ್ಷೇತ್ರ ಮುಂಚೂಣಿಯಲ್ಲಿ ಇರುವ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಉಲ್ಲೇಖಿಸಿರುವುದು ನನಗೆ ಅತ್ಯಂತ ಸಂತೋಷ ತಂದಿದೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರಮೋದಿಯವರ ಜೊತೆ ನಡೆದ ವರ್ಚ್ಯುಯಲ್ ಸಂವಾದ ಕುರಿತಂತೆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಶಾಸಕ ರಾಮದಾಸ್ ಅವರು, ಇಂದಿನ ಸಂವಾದದಲ್ಲಿ ಡಬಲ್ ಇಂಜಿನ್ ಸರ್ಕಾರವಿದ್ದರೆ ಮುಂದಿನ ಐದು ವರ್ಷಗಳಲ್ಲಿ ಕರ್ನಾಟಕಕ್ಕೆ ಏನೆಲ್ಲಾ ಪ್ರಯೋಜನಗಳು ಆಗಲಿವೆ ಎಂಬುದನ್ನು ಪ್ರಧಾನಿ ನರೇಂದ್ರ ಮೋದಿ ಮನವರಿಕೆ ಮಾಡಿಕೊಟ್ಟಿದ್ದಾರೆ ಎಂದರು.

ಕ್ಷೇತ್ರದಲ್ಲಿ ಕಳೆದೊಂದು ವರ್ಷದಿಂದ ಬೂತ್ ಮಟ್ಟದಲ್ಲಿ 'ಆಲ್ ಓಟ್ಸ್ ಬಿಜೆಪಿ ಓಟ್ಸ್, ಆಲ್ ಬೂತ್ಸ್ ಬಿಜೆಪಿ ಬೂತ್ಸ್' ಗುರಿಯೊಂದಿಗೆ ಕೆಲಸ ಮಾಡಿದ್ದೇವೆ. ಇದರ ಪರಿಣಾಮ ಕ್ಷೇತ್ರದಲ್ಲಿ 265 ಬೂತ್‌ಗಳ ಪೈಕಿ 226 ಬೂತ್‌ಗಳು ಬಿಜೆಪಿ ಬೂತ್‌ಗಳಾಗಿವೆ. ಈ ಹಿಂದೆಯೇ ಹೇಳಿರುವಂತೆ ಈ ಬಾರಿಯ ಚುನಾವಣೆಯಲ್ಲಿ 50 ಸಾವಿರ ಮತಗಳ ಅಂತರದಿಂದ ಕೆ.ಆರ್. ಕ್ಷೇತ್ರವನ್ನು ನಾವು ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸಂವಾದದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ. ರಾಜೇಂದ್ರ, ಮೈಲ್ಯಾಕ್ ಅಧ್ಯಕ್ಷ ರಘು ಕೌಟಿಲ್ಯ, ಬಿಜೆಪಿ ನಗರ ಕಾರ್ಯಾಧ್ಯಕ್ಷ ಎಚ್.ಜಿ.ಗಿರಿಧರ್ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಏ.27– ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಅಧೀನದಲ್ಲಿರುವ ಕೆ.ಆರ್. ಆಸ್ಪತ್ರೆಯ ಕೊಠಡಿ ಸಂಖ್ಯೆ 12, ಇಎನ್‌ಟಿ ವಿಭಾಗ (ಓಪಿಡಿ)ದಲ್ಲಿ ಮೇ 3 ಮತ್ತು 8 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಹುಟ್ಟಿನಿಂದ ಕಿವುಡ ಮತ್ತು ಮೂಕರಾಗಿರುವ 6 ವರ್ಷದ ಒಳಗಿನ ಮಕ್ಕಳಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಅರ್ಹ ಮಕ್ಕಳನ್ನು ಕಾಂಕ್ಲಿಯರ್ ಇಂಪ್ಲಾಂಟ್ ಶಸ್ತ್ರ ಚಿಕಿತ್ಸೆಗಾಗಿ ಆಯ್ಕೆ ಮಾಡಿಕೊಳ್ಳಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಭಾವಸ್ಫೂರ್ತಿ ಕಾರ್ಯಕ್ರಮ

ಮೈಸೂರು, ಏ.27– ಕೆ.ಸಿ.ನಂದಕುಮಾರ್ ಮತ್ತು ಸೌಮ್ಯ ನಂದಕುಮಾರ್ ಅವರು ನೃತ್ಯಗಿರಿ ಸಹಕಾರದೊಂದಿಗೆ ಏ.29 ರಂದು ಸಂಜೆ 6.30 ಗಂಟೆಗೆ ಗಾನಭಾರತೀ ವೀಣೆಶೇಷಣ್ಣ ಭವನದಲ್ಲಿ 23ನೇ ವರ್ಷದ ಭಾವಸ್ಫೂರ್ತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರಿನ ಬಿಇಎಂಎಲ್ ಉದ್ಯೋಗಿ ಪದ್ಮನಾಭರಾವ್ ಹಾಗೂ ಅವರ ಪುತ್ರ ವಿಜಯಿಂದ್ರ ರಾವ್ ಅವರು ಸುಗಮ ಸಂಗೀತ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಅಪಪ್ರಚಾರ ಬಿಟ್ಟು ಅಭಿವೃದ್ಧಿ ವಿಚಾರ ಮುಂದಿಟ್ಟು ಮತ ಕೇಳಿ

ಮಡಿಕೇರಿ, ವಿರಾಜಪೇಟೆ ಶಾಸಕರ ವಿರುದ್ಧ ಕಾಂಗ್ರೆಸ್ ವಕ್ತಾರ ವಾಗ್ದಾಳಿ



ಮಡಿಕೇರಿ, ಏ.27– ಜನಪ್ರತಿನಿಧಿಗಳಾದವರು ತಮ್ಮ ಕ್ಷೇತ್ರದ ಅಭಿವೃದ್ಧಿಯ ವಿಚಾರವನ್ನು ಮುಂದಿಟ್ಟುಕೊಂಡು ಮತದಾರರ ಬಳಿ ಹೋಗಬೇಕೆ ಹೊರತು, ಸುಳ್ಳು ಹೇಳಿ ಜನರ ದಿಕ್ಕನ್ನು ತಪ್ಪಿಸುವುದು, ವಿರೋಧ ಪಕ್ಷದ ಬಗ್ಗೆ ಅಪಪ್ರಚಾರ ಮಾಡುವುದನ್ನು ಬಿಡಬೇಕು. ಇಂತಹ ವಿಕೃತಿಗೆ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಟಿ.ಈ.ಸುರೇಶ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೊಡಗು ಜಿಲ್ಲೆಯು ಅಭಿವೃದ್ಧಿ ಕಾಣದೆ ಹಾಳು ಕೊಂಪೆಯಾಗಿದೆ. ಅಭಿವೃದ್ಧಿಯ ಬಗ್ಗೆ ಕಿಂಚಿತ್ತೂ ಅರಿವಿಲ್ಲದ ಶಾಸಕರು, ಜನಸಾಮಾನ್ಯರ ಬಗ್ಗೆ ಕಾಳಜಿ ಇಲ್ಲದೆ ತಮ್ಮ ಜವಾಬ್ದಾರಿಯನ್ನು ಮರೆತಿರುವುದರಿಂದ ಜಿಲ್ಲೆಯ ಮತದಾರರು ಸ್ವಾಭಾವಿಕವಾಗಿ ಬದಲಾವಣೆಯನ್ನು ಬಯಸಿದ್ದಾರೆ. ಈ ಕಾರಣಕ್ಕಾಗಿ ಬಿಜೆಪಿಯ ಶಾಸಕರು ಮತ್ತು ಬೆಂಬಲಿಗರು ಹತಾಶೆಗೊಂಡು ಬಾಲಿಶ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ದೂರಿದರು.

ಸಂಸ್ಕೃತಿ ತೋರಿಸುತ್ತದೆ: ರಂಗಾಯಣದ ಜವಾಬ್ದಾರಿ ಹೊತ್ತಿರುವ ವ್ಯಕ್ತಿಯೊಬ್ಬರು ಕಾಂಗ್ರೆಸ್‌ಗೆ ಮತ ನೀಡುವ ಬಗ್ಗೆ ಅವಹೇಳನಕಾರಿಯಾಗಿ ನೀಡಿರುವ ಹೇಳಿಕೆ ಅವರ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುತ್ತದೆ. ಕಲಾ ಕ್ಷೇತ್ರಕ್ಕೆ ಅದರದ್ದೇ ಆದ ಗೌರವವಿದೆ. ಅಂತಹ ಕ್ಷೇತ್ರದಲ್ಲಿ ಇಂತಹವರು ಇರುವುದು ದುರದೃಷ್ಟಕರವೆಂದು ಹೇಳಿದರು.


ಹಾಸ್ಯಾಸ್ಪದ ಹೇಳಿಕೆ: ಕಾಂಗ್ರೆಸ್ ಪಕ್ಷದ ಇಬ್ಬರು ಅಭ್ಯರ್ಥಿಗಳ ಬಗ್ಗೆ ಜಿಲ್ಲೆಯ ಶಾಸಕರು ನೀಡುತ್ತಿರುವ ಹೇಳಿಕೆ ಹಾಸ್ಯಾಸ್ಪದವಾಗಿದೆ. ಜಿಲ್ಲೆಯ ಇಬ್ಬರು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ವಿದ್ಯಾವಂತರಿದ್ದಾರೆ. ಜನಪರ ಕಾಳಜಿ ಉಳ್ಳವರಾಗಿ ಸ್ಥಳೀಯರಾಗಿದ್ದಾರೆ. ಈ ಇಬ್ಬರು ಅಭ್ಯರ್ಥಿಗಳು ಗೆದ್ದ ನಂತರ ಬಿಜೆಪಿ ಎಂಎಲ್‌ಎಗಳ ಹೇಳಿಕೆಯಂತೆ ಬೆಂಗಳೂರಿಗೆ ಹೋಗಬೇಕಾಗಿಲ್ಲ. ಸ್ವ ಕ್ಷೇತ್ರದಲ್ಲೇ ಜನಸಾಮಾನ್ಯರಿಗೆ ಸಿಗುತ್ತಾರೆ. ಕೊಡಗು ಜಿಲ್ಲೆಗೆ ಕಾಂಗ್ರೆಸ್ ಅಭ್ಯರ್ಥಿಗಳಾದ ಡಾ.ಮಂಥರ್ ಗೌಡ ಮತ್ತು ಎ.ಎಸ್.ಪೊನ್ನಣ್ಣ ಅವರು ಗೆಲುವು ಅನಿವಾರ್ಯವೆಂದು ಸಮರ್ಥಿಸಿಕೊಂಡರು.

ಕಾಂಗ್ರೆಸ್ ಅನಿವಾರ್ಯ: ಈ ಚುನಾವಣೆ ಕರ್ನಾಟಕಕ್ಕೆ ಬಹಳ ಮಹತ್ವಪೂರ್ಣವಾಗಿದೆ. ಬಿಜೆಪಿ ನೇತೃತ್ವದ ಸರ್ಕಾರದಿಂದ ಇಂಧನ ದರ ಹೆಚ್ಚಳ, ನಿತ್ಯೋಪಯೋಗಿ ವಸ್ತುಗಳ ಬೆಲೆ ಹೆಚ್ಚಳದಿಂದ ಗಗನಕ್ಕೇರಿ ಜನಸಾಮಾನ್ಯರ ಬದುಕು ಚಿಂತಾಜನಕವಾಗಿದೆ. ಇಂತಹ ಪರಿಸ್ಥಿತಿಗಳಿಂದ ಹೊರಬರಲು ಈ ಚುನಾವಣೆ ಅತ್ಯಂತ ಮಹತ್ವದ್ದೆಂದು ಅಭಿಪ್ರಾಯಿಸಿದರು. ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಕೊಡಗಿನ ಇಬ್ಬರು ಅಭ್ಯರ್ಥಿಗಳನ್ನು ಗೆಲ್ಲಿಸಲು ಜನ ಸಂಕಲ್ಪ ಮಾಡಿದ್ದಾರೆ. ಈ ದೇಶ ಬಿಜೆಪಿಯ ಕಪಿಮುಷ್ಟಿಯಿಂದ ಉಳಿಯಬೇಕಾಗಿದೆ. ರೈತರು, ದಲಿತರು, ಕಾರ್ಮಿಕರು ಬದುಕಬೇಕಾದರೆ, ಭ್ರಷ್ಟಾಚಾರ, ಕಮಿಷನ್ ದಂಧೆ ತೊಲಗಿ ಈ ರಾಜ್ಯ ಅಭಿವೃದ್ಧಿ ಕಾಣಬೇಕಾಗಿದೆ. ಆದ್ದರಿಂದ ರಾಜ್ಯಕ್ಕೆ ಕಾಂಗ್ರೆಸ್ ಪಕ್ಷದ ಆಡಳಿತ ಅನಿವಾರ್ಯವೆಂದರು.

ಸುದ್ದಿಗೋಷ್ಠಿಯಲ್ಲಿ ಕೊಡಗು ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಪ್ರಧಾನ ಕಾರ್ಯದರ್ಶಿ ಕೆ.ಎಂ.ಬಾವ, ವಿರಾಜಪೇಟೆ ಬ್ಲಾಕ್ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾದ ಕಲೀಲ್ ಬಾಷ, ಗೆಜ್ಜೆಹಣಕೋಡು ಬೂತ್ ಅಧ್ಯಕ್ಷರಾದ ಹೆಚ್.ಕೆ.ಮಹೇಶ್, ಪಕ್ಷದ ಕಾರ್ಯಕರ್ತರಾದ ಪಿ.ಪಿ.ರವಿ, ಎಂ.ಅಲಿ ಹಾಜರಿದ್ದರು.

ನಾಳೆ ಮಡಿಕೇರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ

ವಿರಾಜಪೇಟೆ, ಮಡಿಕೇರಿ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರ



ಮಡಿಕೇರಿ, ಏ.27– ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಏ.29ರಂದು ಮಡಿಕೇರಿಗೆ ಆಗಮಿಸಲಿದ್ದು, ಬಿಜೆಪಿಯ ಬೃಹತ್ ಚುನಾವಣಾ ಪ್ರಚಾರ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ.

ಶನಿವಾರ ಮಧ್ಯಾಹ್ನ 11 ಗಂಟೆ 45 ನಿಮಿಷಕ್ಕೆ ನಗರದ ಗಾಲ್ಫ್ ಕ್ಲಬ್ ಮೈದಾನದ ಹೆಲಿಪ್ಯಾಡ್‌ಗೆ ವಿಶೇಷ ಹೆಲಿಕಾಪ್ಟರ್ ಮೂಲಕ ಬಂದಿಳಿಯಲಿದ್ದು, ಬಳಿಕ ರಸ್ತೆ ಮಾರ್ಗವಾಗಿ 11 ಗಂಟೆ 55 ನಿಮಿಷಕ್ಕೆ ಸಮಾವೇಶ ಆಯೋಜಿತ ಗಾಂಧಿ ಮೈದಾನಕ್ಕೆ ಆಗಮಿಸಲಿದ್ದಾರೆ. 12 ಗಂಟೆಯಿಂದ 12 ಗಂಟೆ 55 ನಿಮಿಷದವರೆಗೆ ಕೇಂದ್ರ ಮತ್ತು ರಾಜ್ಯ ಬಿಜೆಪಿ ಸರಕಾರಗಳ ಜನಪರ ಯೋಜನೆಗಳು, ಡಬಲ್ ಇಂಜಿನ್ ಸರಕಾರದ ಸಾಧನೆಗಳು, ಭವಿಷ್ಯದ ಯೋಜನೆಗಳ ಕುರಿತು ಸಮಾವೇಶದಲ್ಲಿ ಭಾಷಣ ಮಾಡಲಿದ್ದಾರೆ. ಇದೇ ಸಂದರ್ಭ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಗಳು ಹಾಗೂ ಹಾಲಿ ಶಾಸಕರುಗಳಾದ ಅಪ್ಪಚ್ಚು ರಂಜನ್ ಮತ್ತು ಕೆ.ಜಿ. ಬೋಪಯ್ಯ ಪರ ಮತಯಾಚನೆ ಮಾಡಲಿದ್ದಾರೆ.

ಚುನಾವಣಾ ಪ್ರಚಾರದ ಬಳಿಕ 1 ಗಂಟೆಗೆ ರಸ್ತೆ ಮಾರ್ಗವಾಗಿ ಗಾಲ್ಫ್ ಕ್ಲಬ್ ಹೆಲಿಪ್ಯಾಡ್‌ಗೆ ತೆರಳಿ ಅಲ್ಲಿಂದ ಹೆಲಿಕಾಪ್ಟರ್‌ನಲ್ಲಿ ಉಡುಪಿ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ.

ಜೆಡಿಎಸ್‌ಗೆ ರಾಜೀನಾಮೆ



ವಿರಾಜಪೇಟೆ, ಏ.27– ಜೆಡಿಎಸ್ ಪಕ್ಷದಲ್ಲಿ ವಿರಾಜಪೇಟೆ ನಗರ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದ ಯೋಗೇಶ್ ನಾಯ್ಡು ಅವರು ಜೆಡಿಎಸ್ ತೊರೆದು ತಾಲೂಕು ಅಧ್ಯಕ್ಷ ಪಿ.ಎ.ಮಂಜುನಾಥ್ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ.

ಬಳಿಕ ಮಾತನಾಡಿದ ಯೋಗೇಶ್ ನಾಯ್ಡು ಅವರು, ವಿರಾಜಪೇಟೆ ವಿಧಾನ ಸಭಾ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷದಿಂದ ನಾಮಪತ್ರ ಸಲ್ಲಿಸಲಾಗಿದ್ದರೂ ಇದುವರೆಗೂ ಚುನಾವಣೆ ಬಗ್ಗೆ ಯಾವುದೇ ಕಾರ್ಯ ಚಟುವಟಿಕೆಗಳು ನಡೆಯದಿರುವ ಕಾರಣ ನಾನು ಜೆಡಿಎಸ್ ಪಕ್ಷಕ್ಕೆ ರಾಜೀನಾಮೆ ನೀಡಿದ್ದೇನೆ. ಮುಂದೆ ರಾಷ್ಟ್ರೀಯ ಪಕ್ಷದತ್ತ ನನ್ನ ನಡೆ ಎಂದರು.

ಮೇ 10, ವೇತನ ಸಹಿತ ರಜೆ ನೀಡಲು ಸೂಚನೆ

ಮಡಿಕೇರಿ, ಏ.27– ಭಾರತ ಚುನಾವಣಾ ಆಯೋಗವು ಮೇ 10 ರಂದು ಕರ್ನಾಟಕ ವಿಧಾನ ಸಭೆಗೆ ಮತದಾನ ನಡೆಸಲು ನಿರ್ಧರಿಸಿದೆ.

ಅಂದು ರಾಜ್ಯಾದ್ಯಂತ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951 ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ರಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ 1963 ಕಲಂ 3(ಎ) ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿದೆ.

ಸಂವಿಧಾನಾತ್ಮಕ ಹಕ್ಕಾದ ಮತ ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ನಿಯೋಜಕರು ಅನುವು ಮಾಡಿಕೊಡಬೇಕಾಗಿದೆ. ಆದ್ದರಿಂದ, ಚುನಾವಣೆ ನಡೆಯುವ ಕ್ಷೇತ್ರಗಳ ವ್ಯಾಪ್ತಿಯ ಎಲ್ಲಾ ಕಾರ್ಖಾನೆಗಳು, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಈ ದಿನದಂದು ಕಾಯ್ದೆಯನ್ವಯ ಅರ್ಹ ಕಾರ್ಮಿಕರು ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡುವಂತೆ ತಿಳಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕೊಡಗು ಉಪ ವಿಭಾಗದ ಕಾರ್ಮಿಕ ಅಧಿಕಾರಿ ಅವರು ತಿಳಿಸಿದ್ದಾರೆ.

ಕರ್ತವ್ಯಕ್ಕೆ ಗೈರು: 'ಡಿ' ಗ್ರೂಪ್ ನೌಕರ ಅಮಾನತು

ಮಡಿಕೇರಿ, ಏ.27– ಕುಶಾಲನಗರ ಪುರಸಭೆ ಗ್ರೂಪ್ 'ಡಿ' ನೌಕರರಾದ (ನೀರು ಸರಬರಾಜು ಸಹಾಯಕರು) ಎಂ. ಅರುಣ್ ಕುಮಾರ್ ಅವರು ಅನಧಿಕೃತ ವಾಗಿ ಕರ್ತವ್ಯಕ್ಕೆ ಗೈರು ಹಾಜರಾಗಿರುವ ಹಿನ್ನೆಲೆಯಲ್ಲಿ ಕರ್ತವ್ಯ ಲೋಪ ಹಾಗೂ ಬೇಜವಾಬ್ದಾರಿತನದ ಕಾರಣದಿಂದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತುಗೊಳಿಸಲಾಗಿದೆ. ಕರ್ನಾಟಕ ಸರ್ಕಾರಿ ಸೇವಾ ನಿಯಮ 98ರನ್ವಯ ಅಮಾನತ್ತಿನ ಅವಧಿಯಲ್ಲಿ ಜೀವನಾಧಾರ ಭತ್ಯೆ ಪಡೆಯಲು ಅರ್ಹರಾಗಿರುತ್ತಾರೆ ಹಾಗೂ ವಿಚಾರಣೆಯ ಅವಧಿಯಲ್ಲಿ ಪೂರ್ವಾನುಮತಿ ಪಡೆಯದೇ ಕೇಂದ್ರಸ್ಥಾನ ಬಿಡತಕ್ಕದಲ್ಲ ಎಂದು ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಆದೇಶಿಸಿದ್ದಾರೆ.

ಶಿರಂಗಾಲದಿಂದ ಕುಶಾಲನಗರದವರೆಗೆ ಬೈಕ್ ರ‍್ಯಾಲಿ



ಕುಶಾಲನಗರ, ಏ.27– ಸಮೀಪದ ಶಿರಂಗಾಲದಿಂದ ತಾಲೂಕು ಕೇಂದ್ರ ಕುಶಾಲನಗರದವರೆಗೆ ನೂರಾರು ಬೈಕ್‌ಗಳ ಸಮ್ಮುಖದಲ್ಲಿ ಮಡಿಕೇರಿ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ನಾಪಂಡ ಮುತ್ತಪ್ಪ ಅವರು ಬೃಹತ್ ಮೆರವಣಿಗೆ ನಡೆಸುವ ಮೂಲಕ ಮತಯಾಚನೆ ಮಾಡಿದರು.

ಶಿರಂಗಾಲ ಗೇಟ್‌ನಿಂದ ಆರಂಭಗೊಂಡ ಬೈಕ್ ರ‍್ಯಾಲಿಯಲ್ಲಿ ಪಕ್ಷದ ನೂರಾರು ಯುವ ಕಾರ್ಯಕರ್ತರು ಬೈಕ್‌ಗೆ ಬಾವುಟ ಹಾಗೂ ಶಾಲು ಹಾಕಿಕೊಂಡು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಮೆರವಣಿಗೆ ಉದ್ದಕ್ಕೂ ಕಾರ್ಯಕರ್ತರು ಪಕ್ಷದ ಪರವಾಗಿ ಹಾಗೂ ಅಭ್ಯರ್ಥಿ ನಾಪಂಡ ಮುತ್ತಪ್ಪ ಪರವಾಗಿ ಘೋಷಣೆ ಕೂಗುತ್ತ ಜನರ ಗಮನ ಸೆಳೆದರು. ತೆರೆದ ವಾಹನದಲ್ಲಿ ಅಭ್ಯರ್ಥಿ ನಾಪಂಡ ಮುತ್ತಪ್ಪ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಂ.ಬಿ.ಗಣೇಶ್, ಯುವ ಘಟಕ ಅಧ್ಯಕ್ಷ ಸಿ.ಎಲ್.ವಿಶ್ವ, ಅಲ್ಪಸಂಖ್ಯಾತ ಘಟಕದ ಇಸಾಖ್ ಖಾನ್ ಅವರು ತೆರಳಿದರು. ದಾರಿ ಉದ್ದಕ್ಕೂ ಅಭ್ಯರ್ಥಿ ನಾಪಂಡ ಮುತ್ತಪ್ಪ ಜನರಿಗೆ ನಮಸ್ಕರಿಸುತ್ತ ಮತಯಾಚಿಸಿದರು. ಈ ಸಂದರ್ಭ ಮಾತನಾಡಿದ ಅವರು, ಕೊಡಗಿನಲ್ಲಿ ಕಳೆದ ಎರಡು ದಶಕಗಳಿಂದ ಬಿಜೆಪಿಯೇ ಅಧಿಕಾರದಲ್ಲಿದ್ದು, ಜಿಲ್ಲೆಯಲ್ಲಿ ಅಭಿವೃದ್ಧಿ ಕುಂಠಿತಗೊಂಡಿದೆ. ಅಲ್ಲದೇ ಮತದಾರರು ಕೂಡ ಈ ಬಾರಿ ಬದಲಾವಣೆ ಬಯಸಿದ್ದು, ಸ್ಥಳೀಯ ಜನಪ್ರತಿನಿಧಿಯನ್ನು ಆಯ್ಕೆ ಮಾಡಬೇಕೆಂಬ ಇಚ್ಛೆ ಹೊಂದಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭ ತಾಲೂಕು ಘಟಕದ ಅಧ್ಯಕ್ಷ ಪಿ.ಡಿ.ರವಿ,ಕೂಡುಮಂಗಳೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಕೆ.ಹೇಮಂತ್ ಕುಮಾರ್ ಮುಖಂಡರಾದ ಎಂ.ಎಸ್. ರಾಜೇಶ್, ಎಸ್.ಎನ್.ಧರ್ಮಪ್ಪ, ಅಜ್ಜಹಳ್ಳಿರವಿ, ರವೀಂದ್ರನಾಥ್, ನಾರಾಯಣ, ರವಿ.ವಸಂತ, ಎಚ್.ಡಿ.ಚಂದ್ರು, ಜಾಕ್ರಿಯಾ, ಪುಟ್ಟರಾಜು ಮತ್ತಿತರರು ಇದ್ದರು.

ಅತ್ತೂರು: ಸ್ಕೂಟಿಯಿಂದ ಬಿದ್ದು ರೈತ ಸಾವು

ಕುಶಾಲನಗರ, ಏ.27– ಸಮೀಪದ ಅತ್ತೂರು ಬಳಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ವ್ಯಕ್ತಿಯೊಬ್ಬರು ಮೃತಪಟ್ಟ ಘಟನೆ ಬುಧವಾರ ರಾತ್ರಿ ನಡೆದಿದೆ.

ಮೂಲತಃ ಮಡಿಕೇರಿ ತಾಲೂಕು ಮುಟ್ಲು ಗ್ರಾಮದವರಾದ ಪ್ರಸ್ತುತ ಸೋಮವಾರಪೇಟೆಯಲ್ಲಿ ವಾಸವಾಗಿರುವ ರೈತ ರಾಜು ಮಾಚಯ್ಯ (63)ಮೃತ ದುರ್ದೈವಿ. ಬುಧವಾರ ಸಂಜೆ ಕುಶಾಲನಗರದಲ್ಲಿ ತಿಥಿ ಕಾರ್ಯ ಮುಗಿಸಿಕೊಂಡು ತಮ್ಮ ಸ್ಕೂಟಿಯಲ್ಲಿ ಸೋಮವಾರಪೇಟೆಗೆ ತೆರಳುತ್ತಿದ್ದರು. ಅತ್ತೂರು ಬಳಿ ತುಂತುರು ಮಳೆಯಿಂದಾಗಿ ನಿಯಂತ್ರಣ ತಪ್ಪಿ ಸ್ಕೂಟಿ ಸಮೇತ ನೆಲಕ್ಕೆ ಬಿದ್ದ ಸಂದರ್ಭ ರಾಜು ಅವರ ತಲೆ ಕಲ್ಲಿಗೆ ಡಿಕ್ಕಿ ಹೊಡೆದ ಪರಿಣಾಮ ಗಂಭೀರವಾಗಿ ಗಾಯಗೊಂಡರು. ತಕ್ಷಣ ಅವರನ್ನು ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆತರಲಾಯಿತಾದರೂ ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರನನ್ನು ಅಗಲಿದ್ದಾರೆ.

ಗುಡ್ಡೆಹೊಸೂರಿನಲ್ಲಿ ಜೆಡಿಎಸ್ ಪ್ರಚಾರ



ಗುಡ್ಡೆಹೊಸೂರು, ಏ.27– ಜೆಡಿಎಸ್ ಪಕ್ಷದ ಅಭ್ಯರ್ಥಿ ನಾಪಂಡ ಮುತ್ತಪ್ಪ ಅವರು ಗುಡ್ಡೆಹೊಸೂರಿನಲ್ಲಿ ಬಹಿರಂಗ ಚುನಾವಣಾ ಪ್ರಚಾರ ನಡೆಸಿದರು. ಅಲ್ಲದೆ ಶಿರಂಗಾಲದಿಂದ ಗುಡ್ಡೆಹೊಸೂರುವರೆಗೆ ಕಾರ್ಯಕರ್ತರ ಬೈಕ್ ರ‍್ಯಾಲಿ ನಡೆಸಲಾಯಿತು.

ಈ ಸಂದರ್ಭ ಮುತ್ತಪ್ಪ ಅವರು ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು. ನಂಜರಾಯಪಟ್ಟಣ ಗ್ರಾಪಂ ಅಧ್ಯಕ್ಷ ಸಿ.ಎಲ್.ವಿಶ್ವ ಅವರು ಮಾತನಾಡಿದರು. ಈ ಸಂದರ್ಭ ಮುತ್ತಪ್ಪ ಅವರ ಸಹೋದರ ಮುದ್ದಪ್ಪ ಅಲ್ಲದೆ, ಕಾರ್ಯಕರ್ತರು ಹಾಜರಿದ್ದರು.

ಗೃಹಿಣಿ ನಾಪತ್ತೆ



ಗೋಣಿಕೊಪ್ಪ, ಏ.27– ಬಾಳಾಜಿ ಗ್ರಾಮದ ಚೆನ್ನಂಗೊಲ್ಲಿ ನಿವಾಸಿ ಎಸ್. ಮಂಜು ಅವರ ಪತ್ನಿ ಎಂ. ಅನು (27) ಏ.23 ರಿಂದ ಕಾಣೆಯಾಗಿದ್ದಾರೆ. ಧರ್ಮಸ್ಥಳ ಸಂಘಕ್ಕೆ ಹಣ ಕಟ್ಟಲೆಂದು ಬೆಳಗ್ಗೆ ಹೋದವರು ಮರಳಿ ಬಂದಿಲ್ಲ ಎಂದು ಪತಿ ಮಂಜು ಗೋಣಿಕೊಪ್ಪ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಸುಳಿವು ಸಿಕ್ಕವರು ದೂ. ಸಂಖ್ಯೆ 08274247333 ಸಂಖ್ಯೆಗೆ ಮಾಹಿತಿ ನೀಡುವಂತೆ ಗೋಣಿಕೊಪ್ಪ ಪೊಲೀಸ್ ಠಾಣೆ ಪ್ರಕಟಣೆ ತಿಳಿಸಿದೆ.

ಚುನಾವಣಾ ಪ್ರಚಾರಕ್ಕೆ ಮಕ್ಕಳ ಬಳಕೆ: 2 ಪ್ರಕರಣದಲ್ಲಿ ಎಫ್‌ಐಆರ್ ದಾಖಲು

ಚಾಮರಾಜನಗರ, ಏ.27– ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣಾ ಪ್ರಚಾರದಲ್ಲಿ ಮಕ್ಕಳನ್ನು ಬಳಸಿಕೊಂಡು ಮಾದರಿ ನೀತಿಸಂಹಿತೆ ಉಲ್ಲಂಘನೆ ಮಾಡಿರುವ ಎರಡು ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಏ.17ರಂದು ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಪಿ.ಮರಿಸ್ವಾಮಿ ಮೆರವಣಿಗೆಗೆ ಅನುಮತಿ ಪಡೆದಿದ್ದರು. ಈ ಚುನಾವಣಾ ಪ್ರಚಾರದಲ್ಲಿ ಅಪ್ರಾಪ್ತ ಮಕ್ಕಳನ್ನು ಬಳಸಿಕೊಂಡು ಮಾದರಿ ನೀತಿಸಂಹಿತೆ ಉಲ್ಲಂಘನೆ ಮಾಡಿರುವುದು ಕಂಡುಬಂದಿದ್ದು, ಚಾಮರಾಜನಗರ ಟೌನ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಏ.19 ರಂದು ಮೆರವಣಿಗೆಗೆ ಚಾಮರಾಜನಗರ ಜಿಲ್ಲೆಯ ಬಿಜೆಪಿ ಸಂಚಾಲಕ ನಾಗೇಂದ್ರ ಆರ್.ಎಲ್.ರವರು ಅನುಮತಿ ಪಡೆದಿದ್ದರು. ಈ ಚುನಾವಣಾ ಪ್ರಚಾರದಲ್ಲಿ ಅಪ್ರಾಪ್ತ ಮಕ್ಕಳನ್ನು ಬಳಸಿಕೊಂಡು ಮಾದರಿ ನೀತಿಸಂಹಿತೆ ಉಲ್ಲಂಘನೆ ಮಾಡಿರುವುದು ಕಂಡುಬಂದಿದ್ದು, ಚಾಮರಾಜನಗರ ಟೌನ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ ಎಂದು ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಯೋಗಾನಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾ.ನಗರದಲ್ಲಿ ಇಪಿಎಫ್ ಕುಂದು–ಕೊರತೆ ಸಭೆ



ಚಾಮರಾಜನಗರ, ಏ.27–ಕಾರ್ಮಿಕ ಭವಿಷ್ಯ ನಿಧಿ ಸಂಘಟನೆ (ಇಪಿಎಫ್‌ಓ)ಯ ಕುಂದು–ಕೊರತೆ ಸಭೆ ಚಾಮರಾಜನಗರ ಕೆಎಸ್‌ಆರ್‌ಟಿಸಿ ಡಿಪೋದಲ್ಲಿ ನಡೆಯಿತು.

ನಿಧಿ ಆಪ್ಕೆ ನಿಕಟ್ 2.0 ಅಡಿ ನಡೆದ ಕಾರ್ಯಕ್ರಮದಲ್ಲಿ ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಬಿ.ಶ್ರೀನಿವಾಸ್, ಲೆಕ್ಕಾಧಿಕಾರಿ ರುದ್ರಮುನಿ, ಕಾರ್ಮಿಕ ಕಲ್ಯಾಣಾಧಿಕಾರಿ ಶ್ರೀಮತಿ ರೇಷ್ಮಿ, ಇಪಿಎಫ್‌ಓ ಮೈಸೂರು ಕಚೇರಿಯ ಜಿಲ್ಲಾ ನೋಡಲ್ ಅಧಿಕಾರಿ ಅಶೋಕ್ ಕುಮಾರ್, ಎಸ್‌ಎಸ್‌ಎ ಎ.ತೇಜಸ್ ಕೃಷ್ಣ, ಎಲ್‌ಡಿಸಿ ರಾಕೇಶ್ ಪೂಜಾರಿ ಮುಂತಾದವರ ಉಪಸ್ಥಿತಿಯಲ್ಲಿ ಉದ್ಯೋಗದಾತರು, ಉದ್ಯೋಗಿಗಳು ಹಾಗೂ ಪಿಂಚಣಿದಾರರು ತಮ್ಮ ಕುಂದು–ಕೊರತೆಗಳನ್ನು ತಿಳಿಸಿ, ಪರಿಹಾರ ಕಂಡುಕೊಂಡರು.



ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಹಂಗಳ, ಬೆಟ್ಟಹಳ್ಳಿ, ಚಿಕ್ಕತುಪ್ಪೂರು, ದೊಡ್ಡತುಪ್ಪೂರು ಮುಂತಾದ ಗ್ರಾಮಗಳಿಗೆ ಮೈಸೂರು ಪಾಲಿಕೆ ಮಾಜಿ ಸದಸ್ಯ ಆರ್. ಸೋಮಸುಂದರ್, ರಾಜ್ಯ ಯುವ ಕಾಂಗ್ರೆಸ್ ಮಾಜಿ ಪ್ರಧಾನ ಕಾರ್ಯದರ್ಶಿ ಬೊಮ್ಮನಹಳ್ಳಿ ಉಮಾ ಮಹೇಶ್ವರ, ತಾಪಂ ಮಾಜಿ ಅಧ್ಯಕ್ಷೆ ಶ್ರೀಮತಿ ಜಯಂತಿ, ಮುಖಂಡರಾದ ಪಾರ್ಥಸಾರಥಿ, ಮಂಜೇಶ್ ಹಾಗೂ ಇತರರು ಕಾಂಗ್ರೆಸ್ ಅಭ್ಯರ್ಥಿ ಗಣೇಶ್ ಪ್ರಸಾದ್ ಪರ ಮತಯಾಚಿಸಿದರು.

ಜಿಲ್ಲೆಯಲ್ಲಿ ವಿವಿಧ ಪಕ್ಷಗಳಿಂದ ಭರ್ಜರಿ ಚುನಾವಣಾ ಪ್ರಚಾರ

ಎ.ಎಂ.ಮಲ್ಲಿಕಾರ್ಜುನಸ್ವಾಮಿ ಬಿರುಸಿನ ಮತಯಾಚನೆ



ಚಾಮರಾಜನಗರ, ಏ.27– ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಎ.ಎಂ.ಮಲ್ಲಿಕಾರ್ಜುನಸ್ವಾಮಿ (ಆಲೂರುಮಲ್ಲು) ಬೆಂಬಲಿಗರೊಂದಿಗೆ ಹಲವು ಗ್ರಾಮಗಳಲ್ಲಿ ಬಿರುಸಿನ ಮತಯಾಚನೆ ಮಾಡಿದರು.

ಕ್ಷೇತ್ರದ ಬೇವಿನತಾಳಪುರ, ಅಂಕಶೆಟ್ಟಿಪುರ, ಅಟ್ಟುಗುಳಿಪುರ, ಚಿಕ್ಕಹೊಳೆ, ದೊಳ್ಳೀಪುರ ಇತರ ಗ್ರಾಮಗಳಲ್ಲಿ ಮನೆಮನೆಗೆ ತೆರಳಿ ಬಿರುಸಿನ ಮತಯಾಚಿಸಿದರು. ಅಟ್ಟುಗುಳಿಪುರ ಗ್ರಾಮದಲ್ಲಿ ಮತಯಾಚಿಸಿದ ಆಲೂರು ಮಲ್ಲು ಮಾತನಾಡಿ, ರೈತರು, ಬಡವರು ಹಾಗೂ ಮಹಿಳೆಯರ ಅಭಿವೃದ್ಧಿಗಾಗಿ ಜೆಡಿಎಸ್ ಬೆಂಬಲಿಸಬೇಕು ಎಂದು ಮನವಿ ಮಾಡಿದರು. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿಯವರ ನೇತೃತ್ವದಲ್ಲಿ ಪಂಚರತ್ನ ಯಾತ್ರೆ ಬಹಳ ಯಶಸ್ವಿಯಾಗಿದ್ದು, ಈ ಮೂಲಕ ರಾಜ್ಯದಲ್ಲಿ ಜೆಡಿಎಸ್ ಘೋಷಿಸಿರುವ ಚುನಾವಣಾ ಪ್ರಣಾಳಿಕೆಯಂತೆ ರೈತರ ಸಾಲಮನ್ನಾ, ಸ್ತ್ರೀಶಕ್ತಿ ಸ್ವ–ಸಹಾಯ ಸಂಘಗಳ ಸಾಲ ಮನ್ನಾ, ಕಾರ್ಮಿಕರಿಗೆ ವಿಶೇಷ ಸವಲತ್ತು, ಉಚಿತ ವಿದ್ಯುತ್ ಸೇರಿದಂತೆ ಸವಲತ್ತು ನೀಡಲು ನಮ್ಮ ಪಕ್ಷ ಬದ್ಧವಾಗಿದೆ. ಹಾಗಾಗಿ ಮೇ 10 ರಂದು ನಡೆಯುವ ಚುನಾವಣೆಯಲ್ಲಿ ಹೆಚ್ಚಿನ ಮತಗಳನ್ನು ನೀಡಿ ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜೆಡಿಎಸ್ ರಾಜ್ಯ ಕಾರ್ಯದರ್ಶಿ ಹೊಂಗನೂರು ರಾಜು, ತಾಲೂಕು ಎಸ್‌ಟಿ ಘಟಕ ಅಧ್ಯಕ್ಷ ಹರದನಹಳ್ಳಿ ರಾಮಚಂದ್ರು, ಮಹಿಳಾ ಜಿಲ್ಲಾಧ್ಯಕ್ಷೆ ಡಿ.ಎನ್.ಉಷಾ, ಇದ್ರೇಶ್, ಜೂಲೆನಾ ವಿಲಿಯಂ, ನಾಗೇಂದ್ರ ಇತರರು ಹಾಜರಿದ್ದರು.

ಬಿಜೆಪಿ ಅಭ್ಯರ್ಥಿ ಮತಯಾಚನೆ



ಗುಂಡ್ಲುಪೇಟೆ, ಏ.27– ತಾಲೂಕಿನ ಸವಕನಹಳ್ಳಿ ಪಾಳ್ಯ ಸುತ್ತಮುತ್ತಲ ಗ್ರಾಮಗಳಲ್ಲಿ ಶಾಸಕ ಬಿಜೆಪಿ ಅಭ್ಯರ್ಥಿ ಸಿ.ಎಸ್.ನಿರಂಜನಕುಮಾರ್ ಭರ್ಜರಿ ಮತಯಾಚನೆ ಮಾಡಿದರು.

ಗ್ರಾಮದ ಮನೆ ಮನೆಗೆ ತೆರಳಿದ ನಿರಂಜನ್, ಈ ಬಾರಿಯೂ ಅಭಿವೃದ್ಧಿಯತ್ತ ಕ್ಷೇತ್ರವನ್ನು ಕೊಂಡೊಯ್ಯಲು ಬಿಜೆಪಿಯನ್ನು ಬೆಂಬಲಿಸಿ ಎಂದು ಮನವಿ ಮಾಡಿದರು. ಈಗಾಗಲೇ ಕ್ಷೇತ್ರದಲ್ಲಿ ಸರಿ ಸುಮಾರು 800 ಕೋಟಿ ರೂಪಾಯಿಗಳ ಅಂದಾಜಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ನೆರವೇರಿಸಲಾಗಿದೆ. ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಪೂರ್ಣಗೊಳಿಸಿ ಕೆರೆಯಿಂದ ಅಂತರ್ಜಲ ಹೆಚ್ಚಾಗುವಂತೆ ಮಾಡಲಾಗಿದೆ ಎಂದರು. ಎಲ್ಲಾ ವರ್ಗಗಳ ಹಿತಕಾಪಾಡಲು ಸಮುದಾಯಭವನಗಳನ್ನು ನಿರ್ಮಿಸಲಾಗಿದೆ. ಮುಂದೆಯೂ ಸಹ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತನ್ನು ನೀಡಲಿದ್ದೇನೆ ಎಂದರು. ಈ ಸಂದರ್ಭದಲ್ಲಿ ಮುಖಂಡರಾದ ಪ್ರಣಯ್, ಎಸ್.ಸಿ.ಮಂಜುನಾಥ್, ನವೀನ್ ಮೌರ್ಯ, ರಾಜೇಶ್ ಹಾಗೂ ಇತರರು ಇದ್ದರು.

ಕಾಂಗ್ರೆಸ್ ಗ್ಯಾರಂಟಿ ಕಾರ್ಡ್, ಎಚ್‌ಎಸ್‌ಎಂ ಸಾಧನೆಯೇ ನನ್ನ ಗೆಲುವಿಗೆ ಶ್ರೀರಕ್ಷೆ



ಚಾಮರಾಜನಗರ, ಏ. 27– ಕಾಂಗ್ರೆಸ್ ಪಕ್ಷದ ಮತದಾರರಿಗೆ ನೀಡಿರುವ ಗ್ಯಾರಂಟಿ ಕಾರ್ಡುಗಳು ಹಾಗೂ ನಮ್ಮ ತಂದೆ ಮಾಜಿ ಸಚಿವರಾದ ದಿ. ಎಚ್.ಎಸ್. ಮಹದೇವ ಪ್ರಸಾದ್ ಅವರು ಕ್ಷೇತ್ರದ ಅಭಿವೃದ್ಧಿಗೆ ಕೈಗೊಂಡಿರುವ ಯೋಜನೆಗಳು ಈ ಚುನಾವಣೆಯಲ್ಲಿ ನನ್ನ ಗೆಲುವಿಗೆ ಶ್ರೀರಕ್ಷೆಯಾಗಿದೆ ಎಂದು ಗುಂಡ್ಲುಪೇಟೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಚ್.ಎಂ. ಗಣೇಶ್ ಪ್ರಸಾದ್ ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕಿನ ಹರವೆ ಭಾಗದ ಬೆಟ್ಟದಪುರ, ಕೇತಹಳ್ಳಿ, ಸಾಗಡೆ, ಕೂಟೀಗೌಡನಹುಂಡಿ, ಕೆಂಗಾಕಿ ಗ್ರಾಮಗಳಲ್ಲಿ ಮತಯಾಚನೆ ಮಾಡಿ ಮಾತನಾಡಿದ ಅವರು, ಈ ಬಾರಿ ಕಾಂಗ್ರೆಸ್ ಪಕ್ಷದ ಪರವಾಗಿ ಜನರು ಹೆಚ್ಚಿನ ಒಲವು ತೋರುತ್ತಿದ್ದಾರೆ. ಐದು ವರ್ಷಗಳಲ್ಲಿ ಸ್ಥಳೀಯ ಶಾಸಕರು ಕ್ಷೇತ್ರವನ್ನು ಅಭಿವೃದ್ಧಿಪಡಿಸಲು ವಿಫಲರಾಗಿದ್ದಾರೆ. ನಮ್ಮ ತಂದೆಯವರಾದ ದಿ. ಎಚ್.ಎಸ್. ಮಹದೇವಪ್ರಸಾದ್ ಪ್ರಸಾದ್ ಅವರು ಸಚಿವರಾಗಿ, ಕ್ಷೇತ್ರದ ಶಾಸಕರಾಗಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳು ಇನ್ನು ಸಹ ಕ್ಷೇತ್ರದಲ್ಲಿ ನಡೆಯುತ್ತಿವೆ. ಈ ಎಲ್ಲಾ ಕಾರ್ಯಕ್ರಮಗಳು ನಮ್ಮದು ಎಂದು ಶಾಸಕರು ಹೇಳಿಕೊಂಡಿದ್ದು ವಿಪರ್ಯಾಸವೇ ಸರಿ. ಹೀಗಾಗಿ ಕ್ಷೇತ್ರದ ಜನರು ಬದಲಾವಣೆಯನ್ನು ಬಯಸಿದ್ದು, ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಲು ಮುಂದಾಗಿದ್ದಾರೆ. ಮೇ 10ರ ಮತದಾನವು ಇದಕ್ಕೆ ಸಾಕ್ಷಿಯಾಗಲಿದೆ ಎಂದು ನುಡಿದರು.

ಜಿಲ್ಲಾ ಚುನಾವಣಾ ಉಸ್ತುವಾರಿ ಹಾಗೂ ಚಲನಚಿತ್ರ ನಿರ್ದೇಶಕ ಎಸ್. ನಾರಾಯಣ್ ಮಾತನಾಡಿ, ಗಣೇಶ್ ಪ್ರಸಾದ್ ಅವರು ಈ ಬಾರಿ ಹೆಚ್ಚಿನ ಮತಗಳಲ್ಲಿ ಗೆಲುವು ಸಾಧಿಸಲಿದ್ದಾರೆ. ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾದ ಅಲೆ ಇದೆ. ದಿ. ಎಚ್.ಎಸ್. ಮಹದೇವಪ್ರಸಾದ್ ಅವರ ಸಾಧನೆ ಮತ್ತು ಗೀತಾ ಮಹದೇವಪ್ರಸಾದ್ ಅವರು ಜನಪರ ಕಾರ್ಯಕ್ರಮಗಳು ಗಣೇಶ್ ಅವರ ಗೆಲುವಿಗೆ ಪೂರಕವಾಗಿದೆ ಎಂದು ಬಣ್ಣಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ, ಜಿ.ಪಂ. ಮಾಜಿ ಸದಸ್ಯ ಹಾಗೂ ಜಿಲ್ಲಾ ವಕ್ತಾರ ಕೆರೆಹಳ್ಳಿ ನವೀನ್ ಮಾಜಿ ಸದಸ್ಯರಾದ ಕಬ್ಬಹಳ್ಳಿ ಮಹೇಶ್, ಜಿಲ್ಲಾ ಪ್ರಚಾರ ಸಮಿತಿಯ ಅಧ್ಯಕ್ಷ ಆಲೂರು ಪ್ರದೀಪ್, ವಿದ್ಯಾ ಗಣೇಶ್ ಪ್ರಸಾದ್, ಕೆಪಿಸಿಸಿ ವಕ್ತಾರೆ ಲಿಖಿತಾ, ಮುಖಂಡರಾದ ಮೂಡ್ನಾಕೂಡು ಕುಮಾರ್, ಮಹೇಶ್ ಕೆಂಡ್, ಮಲೆಯೂರು ಸುನೀಲ್, ಹಿರಿಬೇಗೂರು ಗುರುಸ್ವಾಮಿ, ಸಾಗಡೆ ಸುರೇಶ್, ನಟರಾಜು, ನಂಜುಂಡನಾಯಕ, ಬಸವಶೆಟ್ಟಿ ಬೆಳ್ಳಶೆಟ್ಟಿ, ಉದಯಕುಮಾರ್, ಹರವೆ ನಾಗೇಶ್, ಗುರುಪ್ರಸಾದ್, ಚಂದ್ರಶೇಖರ್ ಹಾಜರಿದ್ದರು.

ಅಕ್ರಮವಾಗಿ ಸಾಗಿಸುತ್ತಿದ್ದ ಮದ್ಯ ವಶ



ಚಾಮರಾಜನಗರ, ಏ.27– ಖಾಸಗಿ ಬಸ್‌ನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 22,925 ರೂ. ಮೌಲ್ಯದ 59.250 ಲೀಟರ್ ಮದ್ಯವನ್ನು ಅಬಕಾರಿ ಇಲಾಖೆ ಅಧಿಕಾರಿಗಳು ಬುಧವಾರ (ಏ.26) ರಾತ್ರಿ ಕೊಳ್ಳೇಗಾಲ ಪಟ್ಟಣದಲ್ಲಿ ವಶಪಡಿಸಿಕೊಂಡಿದ್ದಾರೆ.

ಗಸ್ತುಕಾರ್ಯ ನಡೆಸುತ್ತಿದ್ದ ವೇಳೆ ಖಾಸಗಿ ಬಸ್‌ವೊಂದರಲ್ಲಿ (ಕೆಎ55, 5045) ಅಕ್ರಮವಾಗಿ ಮದ್ಯವನ್ನು ಅಕ್ರಮವಾಗಿ ಸಾಗಾಣಿಕೆ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಕೊಳ್ಳೇಗಾಲ ಪಟ್ಟಣದ ಮಾದೇಗೌಡ ಪೆಟ್ರೋಲ್ ಬಂಕ್ ಬಳಿ ಬಸ್ಸನ್ನು ತಡೆದು ನಿಲ್ಲಿಸಿ ಶೋಧನೆ ಮಾಡಲಾಯಿತು. ಈ ಸಂದರ್ಭದಲ್ಲಿ 59.250 ಲೀಟರ್ ಮದ್ಯವನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದದ್ದು ಕಂಡು ಬಂತು.

ಬಸ್ಸಿನ ಚಾಲಕ ಸೆಲ್ವಕುಮಾರ್ ಹಾಗೂ ಬಸ್ ನಿರ್ವಾಹಕ ಕೆ. ರಾಜಕುಮಾರ್ ಎಂಬುವವರನ್ನು ದಸ್ತಗಿರಿ ಮಾಡಿ ಮದ್ಯ ಹಾಗೂ ವಾಹನವನ್ನು ವಶಕ್ಕೆ ತೆಗೆದುಕೊಳ್ಳಲಾಯಿತು. ಆರೋಪಿಗಳ ವಿರುದ್ಧ ಮೊಕದ್ದಮೆ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಮದ್ಯದ ಮೌಲ್ಯ 22,925 ರೂ. ಹಾಗೂ ವಾಹನದ ಮೌಲ್ಯ 50 ಲಕ್ಷ ರೂ. ಗಳಾಗಿದ್ದು ಒಟ್ಟು ಮೌಲ್ಯ 5,022,925 ರೂ.ಗಳಾಗಿವೆ ಎಂದು ಅಬಕಾರಿ ಇಲಾಖೆ ಪ್ರಕಟಣೆ ತಿಳಿಸಿದೆ.

ಇಂದು ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕ ಹಣ ಎಣಿಕೆ

ಚಾಮರಾಜನಗರ, ಏ.27– ಮಲೆ ಮಹದೇಶ್ವರ ಬೆಟ್ಟದ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣಿಕೆ ಕಾರ್ಯವನ್ನು ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಸಂಕೀರ್ಣ ಕಟ್ಟಡದ ಮೊದಲ ಮಹಡಿಯ ವಿಶ್ರಾಂತಿ ಗೃಹದಲ್ಲಿ ಏ.28ರಂದು ಬೆಳಗ್ಗೆ ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಸಿಬ್ಬಂದಿ ಸಹಯೋಗದೊಂದಿಗೆ ಸೂಕ್ತ ಪೊಲೀಸ್ ಬಂದೋ ಬಸ್ತ್‌ನಲ್ಲಿ ನಡೆಸಲಾಗುವುದು ಎಂದು ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾಂಗ್ರೆಸ್ ಅಭ್ಯರ್ಥಿ ಹಾಗೂ ಶಾಸಕ ಸಿ.ಪುಟ್ಟರಂಗಶೆಟ್ಟಿ ಪರ ಇಂದು ಅವರ ಪುತ್ರಿಯರಾದ ವೇದಾವತಿ ಹಾಗೂ ಶೀಲಾ ವಿವಿಧ ಬಡಾವಣೆಗಳಲ್ಲಿ ಮನೆಮನೆಗೆ ತೆರಳಿ ಬಿರುಸಿನ ಮತಯಾಚನೆ ಮಾಡಿದರು.

ದೊಡ್ಡಹುಂಡಿ ಪ್ರಭುಸ್ವಾಮಿ ನಿಧನ



ಗುಂಡ್ಲುಪೇಟೆ, ಏ.27– ತಾಲೂಕಿನ ದೊಡ್ಡಹುಂಡಿ ಗ್ರಾಮದ ಗ್ರೈನ್ಸ್ಯೂರ್ ಪ್ರಭುಸ್ವಾಮಿ (89) ಅವರು ವಯೋ ಸಹಜ ಖಾಯಿಲೆಯಿಂದ ಗುರುವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಪುತ್ರ ಗುಂಡ್ಲುಪೇಟೆ ಮಂಡಲ ಬಿಜೆಪಿ ಅಧ್ಯಕ್ಷ ಡಿ.ಪಿ.ಜಗದೀಶ್, ಓರ್ವ ಪುತ್ರಿ ಹಾಗೂ ಅಪಾರ ಬಂಧು ಬಳಗವನ್ನು ಹೊಂದಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ದೊಡ್ಡಹುಂಡಿಯಲ್ಲಿ ಶುಕ್ರವಾರ ಮಧ್ಯಾಹ್ನ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿದೆ.

ಮಡಿಕೇರಿಯಲ್ಲಿ ಒಳ್ಳೆ ಮಳೆ



ಮಡಿಕೇರಿ, ಏ.27–ಬಿರು ಬಿಸಿಲಿಗೆ ಕಾದ ಬಾಣಲೆಯಂತಾಗಿದ್ದ ಮಡಿಕೇರಿಯಲ್ಲಿ ಗುರುವಾರ ಸಂಜೆ ಒಳ್ಳೆ ಮಳೆ ಯಾಗುವ ಮೂಲಕ ಜನತೆಯಲ್ಲಿ ತಂಪೆರೆದಿದೆ. ಕಳೆದ ಕೆಲ ದಿನಗ ಳಿಂದ ಮಡಿಕೇರಿ ಗ್ರಾಮಾಂತರ ಪ್ರದೇಶ ಸೇರಿದಂತೆ ವಿವಿಧ ಕಡೆಗಳಲ್ಲಿ ವರ್ಷ ಧಾರೆಯಾಗಿತ್ತು. ಆದರೆ ನಗರದಲ್ಲಿ ಮಳೆ ಆಗಿರಲಿಲ್ಲ. ಕಳೆದ 3 ದಿನಗ ಳಿಂದ ಮಡಿಕೇರಿ ನಗರದಲ್ಲೂ ದಟ್ಟ ಮೋಡಕವಿದ ವಾತಾವರಣ ದಿಕ್ಕು ಮಳೆ ಬರುವ ನಿರೀಕ್ಷೆ ಮೂಡಿಸಿತ್ತು. ಆದರೆ ಗುರುವಾರ ಸಂಜೆ 5.30ರ ಸಮಯದಲ್ಲಿ ಒಳ್ಳೆ ಮಳೆಯಾಗಿ ನಗರದ ಜನತೆಯಲ್ಲಿ ಮಂದ ಹಾಸ ಮೂಡಿಸಿದೆ.

ಏಪ್ರಿಲ್ ತಿಂಗಳ 2ನೇ ವಾರದಿಂದಲೇ ಸುಡು ಬಿಸಿಲಿನ ತಾಪಕ್ಕೆ ಜನ ಕಂಗಾಲಾಗಿದ್ದು, ಮಳೆಗಾಗಿ ಆಗಸದ ಕಡೆ ಮುಖ ಮಾಡಿದ್ದರು. ಸೆಕೆಯ ವಾತಾವರಣ ಮತ್ತು ಸೊಳ್ಳೆ ಕಾಟದಿಂದ ನಗರ ನಿವಾಸಿಗಳು ಹೈರಾಣಾಗಿ ದ್ದರು. ಮಾತ್ರವಲ್ಲದೇ, ನಗರದಲ್ಲಿರುವ ಜಲ ಮೂಲಗಳು ಬರಿದಾಗಿದ್ದು, ಮಳೆ ಸುರಿಯದೇ ಇದ್ದಲ್ಲಿ ಸಂಪೂರ್ಣ ಒಣಗಿ ಹೋಗುವ ಆತಂಕ ಎದುರಾಗಿತ್ತು. ಇದೀಗ ಕೆಲಕಾಲ ಗುಡುಗು ಸಹಿತ ಉತ್ತಮ ಮಳೆ ಸುರಿಯುವ ಮೂಲಕ ನಗರ ನಿವಾಸಿ ಗಳಿಗಳಲ್ಲಿ ನೆಮ್ಮದಿ ಮೂಡಿಸಿದೆ. ಇದೀಗ ತಂಪಿನ ಹವಾಮಾನ ಕಂಡು ಬಂದಿದೆ.

ಜಗದೀಶ್ ಶೆಟ್ಟರ್ 100ಕ್ಕೆ 100 ಗೆಲ್ತಾರೆ; ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತೆ: ರಕ್ತದಲ್ಲೇ ಪತ್ರ ಬರೆದ ಅಭಿಮಾನಿ!



ಹುಬ್ಬಳ್ಳಿ, ಏ.27– ಈ ಬಾರಿ ವಿಧಾನಸಭೆ ಚುನಾವಣಾ ಕಣದಲ್ಲಿ ರಕ್ತ ರಾಜಕೀಯ ಭಾರೀ ಸದ್ದು ಮಾಡುತ್ತಿದ್ದು, ಇತ್ತೀಚೆಗೆ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ರಕ್ತದಲ್ಲಿ ಬರೆದುಕೊಡುವುದಾಗಿ ಹೇಳಿದ್ದರು. ರಾಜಕೀಯ ನಾಯಕರು ಕೇವಲ ಹೇಳಿಕೆ ನೀಡಿದ್ದರು. ಆದರೆ ಹುಬ್ಬಳ್ಳಿ ನಿವಾಸಿಯಾಗಿರುವ ಶೆಟ್ಟರ್ ಅಭಿಮಾನಿ ಮಂಜುನಾಥ ಅವರು ರಕ್ತದಲ್ಲಿ 'ಮಾನ್ಯ ಜಗದೀಶ್ ಶೆಟ್ಟರ್ 100ಕ್ಕೆ 100ರಷ್ಟು ವಿಜಯಶಾಲಿ ಆಗುತ್ತಾರೆ. ಈ ಸಾರಿ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಬರುತ್ತದೆ ಎಂದು ರಕ್ತದಲ್ಲಿ ಬರೆದಿರುವ ಆತ, ಆನಂತರ ಪತ್ರದ ಕೆಳಭಾಗದಲ್ಲಿ ಜೈ ಕಾಂಗ್ರೆಸ್' ಎಂದು ಹಾಕಿ, ಆನಂತರ ತನ್ನ ಹೆಸರಾದ ಮಂಜುನಾಥ ಎನ್. ಯಂಟ್ರುವಿ, ಕಾರ್ಯಕರ್ತ, ಹುಬ್ಬಳ್ಳಿ ಎಂದು ಬರೆದಿದ್ದಾರೆ. ಜಗದೀಶ್ ಶೆಟ್ಟರ್ ಅಭಿಮಾನಿ ಬರೆದಿರುವ ಈ ಪತ್ರ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಒಂದನೇ ಪುಟದಿಂದ

ಕಾಂಗ್ರೆಸ್ಸೇ ಗ್ಯಾರಂಟಿ ಇಲ್ಲ

25 ವರ್ಷಗಳ ಗುರಿಯಾಗಿಟ್ಟುಕೊಂಡು ಕೆಲಸ ಮಾಡುತ್ತೇವೆ. ಚುನಾವಣೆಗಾಗಿ ಕಾಂಗ್ರೆಸ್ ಭರವಸೆಗಳ ಮಹಾಪೂರ ವನ್ನೇ ಹರಿಸುತ್ತಿದೆ ಆದರೆ ಅವರು ರಾಜಸ್ಥಾನ ಮತ್ತು ಹಿಮಾಚಲದಲ್ಲಿ ಅಧಿಕಾರ ಹಿಡಿದ ನಂತರ ತಾವು ನೀಡಿದ ಭರವಸೆಗಳನ್ನು ಈಡೇರಿಸಲಾಗಲಿಲ್ಲ.

ಅಲ್ಲಿನ ಜನ ಕಾಂಗ್ರೆಸ್‌ನ ಬಗ್ಗೆ ಭ್ರಮನಿರಸನಗೊಂಡಿ ದ್ದಾರೆ. ಅವರ ಗ್ಯಾರಂಟಿಗಳನ್ನು ನಂಬಿ ಮುಂದೆ ಭ್ರಮನಿರಸರಾಗಬೇಡಿ. ಈ ಉಚಿತ ಕೊಡುಗೆಗಳನ್ನು ನೀಡುವುದರಿಂದ ದೇಶದ ಅಭಿವೃದ್ಧಿಗೆ ಹಿನ್ನಡೆಯಾ ಗುತ್ತದೆ. ನಾವು ಈ ಹಿಂದೆ ಸಂಕಷ್ಟದಲ್ಲಿದ್ದ ಜನತೆಗೆ ಸಹಕಾರ ನೀಡಲು ಕೊಡುಗೆಗಳನ್ನು ನೀಡಿದ್ದೇವೆ. ಹಾಗೆಂದು ಎಲ್ಲಾ ಸಮಯದಲ್ಲೂ ಭರವಸೆಗಳನ್ನೇ ಮುಂದಿಟ್ಟುಕೊಂಡು ಚುನಾವಣೆಗಳನ್ನು ನಡೆಸಲು ಸಾಧ್ಯವಿಲ್ಲ ಎಂದರು. ಡಬಲ್ ಇಂಜಿನ್ ಸರ್ಕಾರ ಎಂದರೆ ವೇಗ ದ್ವಿಗುಣಗೊಳ್ಳುತ್ತದೆ. ಬಡವರ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಹಕಾರಿ ಯಾಗುತ್ತದೆ. ಯಾವ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇಲ್ಲವೋ ಅಲ್ಲಿ ಕೇಂದ್ರ ಸರ್ಕಾರದ ಯೋಜನೆಗಳು ಸಫಲವಾಗುವುದಿಲ್ಲ. ಮೋದಿಗೆ ಜೈಕಾರ ಬೀಳುತ್ತದೆ ಎಂದು ಅವರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದಿಲ್ಲ. ನೋಡಿ ಕರ್ನಾಟಕದಲ್ಲಿ ಡಬಲ್ ಇಂಜಿನ್ ಸರ್ಕಾರ ಇರುವುದರಿಂದ ಕಿಸಾನ್ ಸಮ್ಮಾನ್ ಯೋಜನೆಯಡಿ ಯಲ್ಲಿ ಪ್ರತಿಯೊಬ್ಬ ರೈತರಿಗೆ ವಾರ್ಷಿಕ ಹತ್ತು ಸಾವಿರ ರೂ. ದೊರೆಯುತ್ತದೆ.

ಅಷ್ಟೇ ಅಲ್ಲ, ಕರ್ನಾಟಕದಲ್ಲಿ ಅನೇಕ ಮೂಲ ಸೌಕರ್ಯಗಳನ್ನು ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗಿದೆ. ಹೊಸ ವಿಮಾನ ನಿಲ್ದಾಣಗಳು, ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿ, ತುಮಕೂರಿನಲ್ಲಿ ಎಚ್‌ಎಎಲ್ ಘಟಕ, ಅದೇ ರೀತಿ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಅನೇಕ ಯೋಜನೆಗಳು ಅನುಷ್ಠಾನಗೊಂಡಿವೆ ಎಂದು ವಿವರಿಸಿದರು. ಪ್ರತಿ ಜಿಲ್ಲೆಯಲ್ಲೂ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸುತ್ತಿರುವುದರಿಂದ ಗ್ರಾಮೀಣ ಜನತೆಗೆ ಉತ್ತಮ ಆರೋಗ್ಯ ಚಿಕಿತ್ಸೆ ಹಾಗೂ ಅಲ್ಲಿನ ಮಕ್ಕಳು ವೈದ್ಯರಾಗಲು ಅವಕಾಶ ದೊರೆತಿದೆ. ಇದೇ ಡಬಲ್ ಇಂಜಿನ್ ಸರ್ಕಾರದ ಸಾಧನೆ.

ಕಾರಿಗೆ ಟ್ರ್ಯಾಕ್ಟರ್ ಟೈರ್ ಹಾಕಿ ಓಡಿಸಲು ಸಾಧ್ಯವಿಲ್ಲ. ನೀವು ಕಾಂಗ್ರೆಸ್‌ನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತಂದರೆ ಅದೇ ಪರಿಸ್ಥಿತಿ ಉಂಟಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಕರ್ನಾಟಕದಲ್ಲಿ ದಾಖಲೆ ಬಹುಮತದಿಂದ ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬರಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಕರ್ನಾಟಕದಲ್ಲಿ ಎಲ್ಲಿಯೇ ಹೋದರೂ ಜನರ ಉತ್ಸಾಹ ಕಾಣುತ್ತೇವೆ. ಕರ್ನಾಟಕಕ್ಕೆ ಬಂದ ನಾಯಕರು, ಮುಖಂಡರು ಜನರ ವಿಶ್ವಾಸದ ಮಾತ ನಾಡುತ್ತಿದ್ದಾರೆ. ಇದಕ್ಕಾಗಿ ಬಿಜೆಪಿಗೆ ಅಭಿನಂದನೆಗಳು. ಸಂಘಟನೆಯ ಶಕ್ತಿ ಅನಾವರಣ ಗೊಂಡಿದೆ. ಇದರಿಂದ ಪಕ್ಷ ಮತ್ತೆ ಅಧಿಕಾರದ ಚುಕ್ಕಾಣಿ ಹಿಡಿಯುವುದು ನಿಶ್ಚಿತ ಎಂದರು.

ರಾಜಮಾರ್ಗದಲ್ಲಿ ಮೋದಿ ರೋಡ್ ಶೋ

ಕು.ಶೋಭಾ ಕರಂದ್ಲಾಜೆ ತಿಳಿಸಿದರು. ರಾಜ್ಯದ 58,112 ಬೂತ್‌ಗಳಲ್ಲಿ, 1,680 ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಈ ಸಂವಾದವನ್ನು ಹಮ್ಮಿಕೊಳ್ಳಲಾಗಿತ್ತು. ಬೂತ್ ಮತ್ತು ಹೋಬಳಿ ಮಟ್ಟದಲ್ಲಿ ಟಿ.ವಿಗಳ ಮೂಲಕ ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಎಲ್‌ಇಡಿ ಸ್ಕ್ರೀನ್ ಮೂಲಕ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಕಾರ್ಯಕ್ರಮವನ್ನು ವೀಕ್ಷಿಸಿದ್ದಾರೆ. ಹೊಸ ತಂತ್ರಜ್ಞಾನ ಬಳಸಿಕೊಂಡು ಇದೇ ಮೊದಲ ಬಾರಿ ಬೃಹತ್ ಪ್ರಮಾಣದಲ್ಲಿ ನೇರ ಸಂವಾದ ಕಾರ್ಯಕ್ರಮ ನಡೆದು ಯಶಸ್ವಿಯಾಗಿದೆ ಎಂದು ತಿಳಿಸಿದರು. ಮೋದಿಯವರು ಸಾಮಾನ್ಯ ಕಾರ್ಯಕರ್ತನಾಗಿ ಬೆಳೆದು ಹಲವು ಜವಾಬ್ದಾರಿಗಳನ್ನು ಹೊತ್ತವರು. ಪಕ್ಷ ಅಸ್ತಿತ್ವದಲ್ಲಿರದ ಸಂದರ್ಭದಲ್ಲಿ ಯಾತ್ರೆಗಳ ಮೂಲಕ ವಾಜಪೇಯಿ, ಅಡ್ವಾಣಿ ಅವರೊಂದಿಗೆ ಪಕ್ಷ ಕಟ್ಟಿದ ಅಗ್ರಗಣ್ಯರಲ್ಲಿ ಒಬ್ಬರು. ದೇಶಾದ್ಯಂತ ಸಂಚರಿಸಿ, ಕಾರ್ಯಕರ್ತರ ನೋವು ಸಂಕಷ್ಟ ಮತ್ತು ಅವರ ಶ್ರಮ ಏನೆಂಬುದು ಅವರಿಗೆ ಗೊತ್ತಿದೆ. ಕಾರ್ಯಕರ್ತರನ್ನು ಇಷ್ಟು ಚೆನ್ನಾಗಿ ಬಲ್ಲವರು ಮೋದಿಯವರಿಗಿಂತ ಬೇರೊಬ್ಬರಿಲ್ಲ ಎಂದರು.

ಸಂವಾದ ಕಾರ್ಯಕ್ರಮದ ಮೂಲಕ ಕಾರ್ಯಕರ್ತರಲ್ಲಿ ಅವರು ಶಕ್ತಿ ತುಂಬಿದ್ದಾರೆ. ಡಬಲ್ ಇಂಜಿನ್ ಸರ್ಕಾರ ಏಕೆ ಅಗತ್ಯವೆಂಬುದನ್ನು ಪ್ರತಿಪಾದಿಸಿದ್ದಾರೆ. ಬಿಜೆಪಿ ಸರ್ಕಾರ ಇಲ್ಲದ ಕಡೆ ಅಭಿವೃದ್ಧಿ ಕುಂಠಿತಗೊಂಡಿದ್ದು, ಈ ರಾಜ್ಯಗಳಲ್ಲಿ ಕೇಂದ್ರದ ಯೋಜನೆಗಳನ್ನು ಜಾರಿಗೊಳಿಸಿಲ್ಲ ಎಂದು ಹೇಳಿದ್ದಾರೆ. ರಾಜ್ಯದ ಅಭಿವೃದ್ಧಿ ವೇಗಕ್ಕೆ ಬಿಜೆಪಿ ಸರ್ಕಾರ ಅಗತ್ಯವೆಂಬುದನ್ನು ಕಾರ್ಯಕರ್ತರು ಮನೆ–ಮನೆಗೆ ಹೋಗಿ ಮನವರಿಕೆ ಮಾಡಬೇಕು ಎಂದು ಕರೆ ನೀಡಿದ್ದಾರೆ ಎಂದು ಅವರು ತಿಳಿಸಿದರು.

ಕಾಂಗ್ರೆಸ್ ಪಕ್ಷ ನೀಡುತ್ತಿರುವ ಗ್ಯಾರಂಟಿಗಳನ್ನು ಜನರು ನಂಬುವುದಿಲ್ಲ. ಕಾಂಗ್ರೆಸ್‌ನ ಯಾವುದೇ ಗ್ಯಾರಂಟಿಗೆ ವಾರಂಟಿ ಇಲ್ಲ. ಸುಳ್ಳು ಪ್ರಚಾರಗಳನ್ನು ನಡೆಸುತ್ತಿರುವ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ. ಕಳೆದ 9 ವರ್ಷಗಳಲ್ಲಿ ದೇಶದಲ್ಲಿ ಕೋಮು ಗಲಭೆಗಳು ನಡೆದಿಲ್ಲ. ಕಾಂಗ್ರೆಸ್ ಆಡಳಿತದಲ್ಲಿದ್ದಾಗ ಕೋಮು ಗಲಭೆಗಳು, ಬಾಂಬ್ ಸ್ಫೋಟಗಳು ನಡೆದಿವೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಸಮಾಜಘಾತುಕ, ಕಾನೂನುಬಾಹಿರ ಮತ್ತು ಭಯೋತ್ಪಾದನಾ ಚಟುವಟಿಕೆಗಳನ್ನು ನಿಯಂತ್ರಿಸಿದ್ದಾರೆ. ಸರ್ದಾರ್ ವಲ್ಲಭಬಾಯಿ ಪಟೇಲ್ ನಂತರ ಅಮಿತ್ ಶಾ ಅತ್ಯುತ್ತಮ ಗೃಹ ಸಚಿವರಾಗಿದ್ದಾರೆ ಎಂದು ಶೋಭಾ ಕರಂದ್ಲಾಜೆ ಹೇಳಿದರು.

ಎಕ್ಸ್‌ಪ್ರೆಸ್ ವೇ ಬಂದ್

ಹಾಗೂ ಮದ್ದೂರು ನಡುವೆ ಎಕ್ಸ್‌ಪ್ರೆಸ್ ವೇ ಸಂಚಾರ ಬಂದ್ ಆಗಲಿದೆ. ಹೀಗಾಗಿ ಹೆದ್ದಾರಿಯಲ್ಲಿ ಸಾಗುವ ವಾಹನಗಳಿಗೆ ಬದಲಿ ಮಾರ್ಗದ ವ್ಯವಸ್ಥೆ ಮಾಡಲಾಗಿದೆ.

ಮೈಸೂರಿನಿಂದ ಮದ್ದೂರಿನ ಹೆಮ್ಮನಹಳ್ಳಿ ಗೇಟ್(ಅಡಿಗಾಸ್ ಹೋಟೆಲ್)ನಲ್ಲಿ ಕೆಸ್ತೂರು– ಹುಲಿಯೂರು ದುರ್ಗ– ಮಂಗಳೂರು– ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಮಾರ್ಗವಾಗಿ ಬೆಂಗಳೂರು ತಲುಪಬಹುದಾಗಿದೆ. ಅದೇ ರೀತಿ ಮೈಸೂರಿನಿಂದ ಮಂಡ್ಯ ಮಾರ್ಗವಾಗಿ ಬೆಂಗಳೂರಿಗೆ ಸಂಚರಿಸುವ ಎಲ್ಲಾ ವಾಹನಗಳಿಗೆ ಬನ್ನೂರು– ಕಿರುಗಾವಲು– ಮಳವಳ್ಳಿ– ಹಲಗೂರು– ಕನಕಪುರ ಮಾರ್ಗವಾಗಿ ಬೆಂಗಳೂರು ತಲುಪಬಹುದಾಗಿದೆ. ಇದಲ್ಲದೇ ಕೊಳ್ಳೇಗಾಲ ಹಾಗೂ ಮಳವಳ್ಳಿಯಿಂದ ಮದ್ದೂರು ಮಾರ್ಗವಾಗಿ ಬೆಂಗಳೂರು ತಲುಪುವವರಿಗೆ ಮಳವಳ್ಳಿ– ಹಲಗೂರು– ಕನಕಪುರ ಮಾರ್ಗವಾಗಿ ಬೆಂಗಳೂರು ತಲುಪಬಹುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆ ಹೊರಡಿಸಿದ್ದಾರೆ.

ನಾರಿಯರಿಗೆ ಉಚಿತ ಪ್ರಯಾಣ

ಮೊದಲ ಸಚಿವ ಸಂಪುಟದಲ್ಲೇ ಜಾರಿ ಮಾಡಲಾಗುವುದು ಎಂದು ಭರವಸೆಯನ್ನು ಸಹ ನೀಡಿವೆ. ಕಾಂಗ್ರೆಸ್ ಪಕ್ಷ ಈಗಾಗಲೇ ನಾಲ್ಕು ಗ್ಯಾರಂಟಿ ಯೋಜನೆ ಘೋಷಣೆ ಮಾಡಿದೆ. ಗೃಹ ಜ್ಯೋತಿ ಯೋಜನೆಯಡಿ ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್, ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು 2000 ರೂಪಾಯಿ, ಅನ್ನಭಾಗ್ಯ ಯೋಜನೆಯಡಿ ಬಡವರಿಗೆ ತಲಾ 10 ಕೆಜಿ ಅಕ್ಕಿ ಉಚಿತ ಹಾಗೂ ಯುವನಿಧಿ ಯೋಜನೆಯಡಿ ನಿರುದ್ಯೋಗ ಪದವೀಧರರಿಗೆ 3000 ರೂಪಾಯಿ ಹಾಗೂ ನಿರುದ್ಯೋಗಿ ಡಿಪ್ಲೊಮಾ ಪದವೀಧರರಿಗೆ 1500 ರೂಪಾಯಿ ನೀಡುವ ಘೋಷಣೆಯನ್ನು ಈಗಾಗಲೇ ಮಾಡಿದೆ.

ನಾನೇ ನಾನೆ ಎಂದು ಬೀಗುತ್ತಿದ್ದ ನಾಯಕರಲ್ಲಿ ಒಬ್ಬರು 36 ಸಾವಿರ, ಮತ್ತೊಬ್ಬರು 29 ಸಾವಿರ ಮತಗಳಿಂದ ಸೋತರು!

● ಸಿದ್ದರಾಮಯ್ಯ, ಹೆಚ್.ಸಿ.ಮಹದೇವಪ್ಪ ವಿರುದ್ಧ ಕಿಡಿಕಾರಿದ ಸಂಸದ ಶ್ರೀನಿವಾಸ್ ಪ್ರಸಾದ್ ● ಜೆಡಿಎಸ್ ಅತಿ ಹೆಚ್ಚು ನಾಟಕವಾಡೋ ಪಕ್ಷ ● ರಾಹುಲ್, ಪ್ರಿಯಾಂಕಾರಿಂದ ಏನೂ ಆಗಲ್ಲ ● ಯೋಗಿ ಆದಿತ್ಯನಾಥ್ ಉತ್ತಮ ಆಡಳಿತಗಾರ



ಮೈಸೂರು,ಏ.27(ಎಂಟಿವೈ)– ಎಲ್ಲದ್ದಕ್ಕೂ ನಾನೇ ನಾನೇ ಎಂದು ಬೀಗುತ್ತಿದ್ದ ಇಬ್ಬರಲ್ಲಿ ಒಬ್ಬರು 36 ಸಾವಿರ, ಇನ್ನೊಬ್ಬ ಮಹಾಪುರುಷ 29 ಸಾವಿರ ಮತಗಳ ಅಂತರದಿಂದ ಸೋತರು ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಾಜಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ವಿರುದ್ಧ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ವಾಗ್ದಾಳಿ ನಡೆಸಿದ್ದಾರೆ.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ಯಲ್ಲಿ ಮಾತನಾಡಿದ ಅವರು, ಕಳೆದ ಚುನಾವಣೆ ಯಲ್ಲಿ ಲಕ್ಷ ಮತಗಳ ಅಂತರದಲ್ಲಿ ಗೆಲ್ಲುತ್ತೇನೆ ಎಂಬು ಬೀಗುತ್ತಿದ್ದ ಜಿಲ್ಲೆಯ ಇಬ್ಬರು ನಾಯಕರು ಭಾರಿ ಅಂತರದಲ್ಲಿ ಸೋತಿದ್ದರು. ಈಗಲೂ ಆ ಮಹಾನುಭಾವರು ಗೆಲುವು ಸಾಧಿಸುವುದಾಗಿ ಬೀಗುತ್ತಿದ್ದಾರೆ. ಅವರಿಬ್ಬರೂ ಈ ಚುನಾವಣೆ ಯಲ್ಲೂ ಸೋಲನುಭವಿಸುತ್ತಾರೆ ಎಂದರು.

ಮಾನಸಿಕ ರೋಗಿಯೂ, ದಡ್ಡನೂ: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಒಬ್ಬ ಮಾನಸಿಕ ರೋಗಿ. ಅಲ್ಲದೇ, ಆತ ಒಬ್ಬ ದಡ್ಡ ವರುಣ ಕ್ಷೇತ್ರದಲ್ಲಿ ಸ್ಪರ್ಧಿಸಿರುವ ಸಿದ್ದರಾಮಯ್ಯ 'ಒಂದು ಲಕ್ಷ ಮತಗಳ ಅಂತರದಲ್ಲಿ ಗೆಲ್ಲಿಸಿ' ಎಂದು ಕರೆಕೊಟ್ಟಿದ್ದಾರೆ. ಸಾಕಾ ಅಷ್ಟು ಲೀಡ್. ಯಾರಾದರೂ ಹೀಗೆ ಹೇಳುತ್ತಾರಾ? ಮತಗಟ್ಟೆಗೆ ಬಂದವರೆಲ್ಲ ಅವರೊಬ್ಬರಿಗೆ ಮತ ಹಾಕಬೇಕೇ? ಇದು ಸಾಧ್ಯವೇ? ಅಷ್ಟು ಮತಗಳ ಅಂತರ ಹೇಗೆ ಸಿಗುತ್ತೆ? ಒಬ್ಬ ಮಾಜಿ ಮುಖ್ಯಮಂತ್ರಿ ಯಾಗಿ, ವಿರೋಧ ಪಕ್ಷದ ನಾಯಕನಾಗಿರುವ ಸಿದ್ದ ರಾಮಯ್ಯ ಮಾತನಾಡುವ ಮೊದಲು ಸ್ವಲ್ಪ ಯೋಚನೆ ಮಾಡಿ ಮಾತನಾಡಬೇಕು ಎಂದು ಟೀಕಿಸಿದರು.

ಲೋಕಸಭಾ ಚುನಾವಣೆಯಲ್ಲಿ ಅಂತರ ನೋಡಿ: ಕಳೆದ ಲೋಕಸಭಾ ಚುನಾವಣೆಯಲ್ಲಿ ವರುಣ ಕ್ಷೇತ್ರದಲ್ಲಿ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ಇದ್ದದ್ದು ಕೇವಲ 8 ಸಾವಿರ ಮತಗಳ ಅಂತರ. ಪರಿಸ್ಥಿತಿ ಬದಲಾಗಿದೆ. ಬಿಜೆಪಿ ಗಟ್ಟಿಗೊಳ್ಳುತ್ತಾ ಸಾಗಿದೆ. ಈ ಚುನಾವಣೆಯಲ್ಲಿ ಬಿಜೆಪಿ ರಾಷ್ಟ್ರೀಯ, ರಾಜ್ಯ ನಾಯಕರು ವರುಣ ಕ್ಷೇತ್ರಕ್ಕೆ ಹೆಚ್ಚು ಆದ್ಯತೆ ನೀಡಿದ್ದಾರೆ. ಕ್ಷೇತ್ರದುದ್ದಗಲಕ್ಕೂ ಹೆಚ್ಚಿನ ಗಮನ ಹರಿಸಿ, ಪ್ರಚಾರ ನಡೆಸುತ್ತಿದ್ದಾರೆ. ಇದರಿಂದ ಈ ಚುನಾವಣೆಯಲ್ಲಿ ಯಾರು ಎಷ್ಟು ಮತ ತೆಗೆದು ಕೊಳ್ಳುತ್ತಾರೆ ಎಂದು ತಿಳಿಯಲಿದೆ. ಲಕ್ಷ ಲೀಡ್ ಕೇವಲ ಬಾಯಿ ಮಾತಿಗಷ್ಟೇ ಸೀಮಿತವಾಗಲಿದೆ. ಫಲಿತಾಂಶದಲ್ಲಿ ಕ್ಷೇತ್ರದ ಜನರ ಒಲವು ಯಾರತ್ತ ಇದೆ ಎಂದು ತಿಳಿಯುತ್ತದೆ ಎಂದರು.

ಸೋಲಿನ ಭಯ: ಸಿದ್ದರಾಮಯ್ಯ ಅವರಿಗೆ ಸೋಲಿನ ಭಯ ಕಾಡುತ್ತಿದೆ. ಈ ಹಿಂದೆ ವರುಣ ಕ್ಷೇತ್ರದಲ್ಲಿ ಪ್ರಚಾರಕ್ಕೆ ಬರುವುದೇ ಇಲ್ಲ ಎಂದಿದ್ದ ಸಿದ್ದರಾಮಯ್ಯ, ಇದೀಗ ಮತ್ತೆ ಮತ್ತೆ ಪ್ರಚಾರಕ್ಕೆ ಬರುತ್ತಿದ್ದಾರೆ. ಕಳೆದ ಚುನಾವಣೆಯಲ್ಲಿ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿದ್ದಾಗಲೂ ಪ್ರಚಾರಕ್ಕೆ ಬರುವುದೇ ಇಲ್ಲ ಎಂದು ಹೇಳಿದ್ದರು. ವರುಣ ಕ್ಷೇತ್ರದಲ್ಲಿ ಸೋಲ ನುಭವಿಸುವುದು ಖಚಿತವಾಗುತ್ತಿದ್ದಂತೆ ಕ್ಷೇತ್ರದ ಗಲ್ಲಿ ಗಲ್ಲಿಯಲ್ಲೂ ತಿರುಗಾಡಿದ್ದಾರೆ. ಆದರೆ, ಅದು ಯಾವುದೇ ಕಾರಣಕ್ಕೂ ಉಪಯೋಗಕ್ಕೆ ಬರುವುದಿಲ್ಲ ಎಂದು ಶ್ರೀನಿವಾಸ್ ಪ್ರಸಾದ್ ಲೇವಡಿ ಮಾಡಿದರು.

ದಸಂಸ ವಿರುದ್ಧ ಕಿಡಿ: ವರುಣ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಬೆಂಬಲ ಸೂಚಿಸಿರುವ ದಲಿತ ಸಂಘರ್ಷ ಸಮಿತಿ ಖಂಡನೀಯ. ಯಾವ ಕಾರಣಕ್ಕೆ ಬೆಂಬಲ ನೀಡಿದ್ದಾರೆ ಎಂದು ತಿಳಿಯದು. ಕಾಂಗ್ರೆಸ್‌ಗೆ ಬೆಂಬಲ ನೋಡಿರುವ ದಲಿತ ಸಂಘರ್ಷ ಸಮಿತಿ ಶಕ್ತಿ ಏನೆಂದು ತಿಳಿದಿದೆ. ದಸಂಸಗೆ ಶಕ್ತಿ ಕುಗ್ಗಿ ಹೋಗಿದೆ. ಆ ಸಂಘಟನೆಯ ಸ್ಥಿತಿ ಏನಾಗಿದೆ ಎಂದು ಎಲ್ಲರಿಗೂ ಗೊತ್ತಿದೆ. ಆ ಸಂಘಟನೆಯ ಬಗ್ಗೆ ಮಾತನಾಡಬೇಡಿ ಎಂದು ಕಿಡಿಕಾರಿದರು.

ಜೆಡಿಎಸ್ ನಾಟಕವಾಡುತ್ತಿದೆ: ಈ ಚುನಾವಣೆ ಯಲ್ಲಿ ಜೆಡಿಎಸ್ ನಾಟಕವಾಡುತ್ತಿದೆ. ನಂಜನಗೂಡು ಕ್ಷೇತ್ರದಲ್ಲಿ ಅಭ್ಯರ್ಥಿಯನ್ನೇ ಕಣಕ್ಕಿಳಿಸದ ಜೆಡಿಎಸ್, ವರುಣದಲ್ಲಿ ತನ್ನ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಇದು ಯಾವ ನೀತಿ. ಇದು ಯಾವ ರೀತಿಯ ನಾಟಕ. ಜನರು ಏನು ಕಣ್ಣು ಮುಚ್ಚಿಕೊಂಡಿದ್ದಾರೆಯೇ? ಮನಸ್ಸಿಗೆ ಬಂದಂತೆ ನಾಟಕ ಆಡುವ ಜೆಡಿಎಸ್ ಸ್ಥಿತಿ ಬಗ್ಗೆ ಜನರಿಗೆ ತಿಳಿದಿದೆ. ನಾಟಕೀಯ ಮನಸ್ಥಿತಿ ಯುಳ್ಳ ಜೆಡಿಎಸ್‌ಗೂ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಧ್ಯಕ್ಷ ಸ್ಥಾನದಲ್ಲಿರುವ ವ್ಯಕ್ತಿಯಿಂದ ಇಂತಹ ಮಾತು: ರಾಜ್ಯದಲ್ಲಿ ಈ ಬಾರಿ ಕಾಂಗ್ರೆಸ್ 150 ಸ್ಥಾನ ಗಳಿಸಿ, ಅಧಿಕಾರಕ್ಕೆ ಬರುತ್ತದೆ ಎಂದು 'ರಕ್ತದಲ್ಲಿ ಬರೆದುಕೊಡುತ್ತೇನೆ' ಎಂದು ಹೇಳಿಕೆ ನೀಡಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಲೆ ಮೇಲೆ ಜಾರಿ ನಿರ್ದೇಶನಾಲಯದ (ಇಡಿ) ಕತ್ತಿ ತೂಗುತ್ತಲೇ ಇದೆ. ಮೊದಲು ಆ ಸಮಸ್ಯೆಯನ್ನು ಬಗೆಹರಿಸಿಕೊಳ್ಳಲು ಡಿ.ಕೆ.ಶಿವಕುಮಾರ್ ಮುಂದಾಗಲಿ. ಪಕ್ಷದ ರಾಜ್ಯಾಧ್ಯಕ್ಷರಾಗಿರುವ ಯಾರಾದರೂ ಹೀಗೆ ಮಾತನಾಡುತ್ತಾರೆಯೇ? ಅವರ ಹಿನ್ನೆಲೆ ಏನು. ಇದೆಲ್ಲ ಜನರಿಗೆ ಏನು ಗೊತ್ತಿಲ್ಲವೇ? ಇವರೆಲ್ಲ ಮುಖ್ಯಮಂತ್ರಿ ಆಗಲು ಹೊರಟವರು. ಸಿಎಂ ಆದ ಮೇಲೆ ಹೇಗೆ ಆಡಳಿತ ನಡೆಸುತ್ತಾರೆ ಎಂದು ಶ್ರೀನಿವಾಸ್ ಪ್ರಸಾದ್ ವಾಗ್ದಾಳಿ ನಡೆಸಿದರು.

ಯೋಗಿ ಆದಿತ್ಯನಾಥ್ ಉತ್ತಮ ಆಡಳಿತಗಾರ: ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಉತ್ತಮ ಆಡಳಿತಗಾರ. ಆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಯನ್ನು ತಹಬದಿಗೆ ತಂದಿದ್ದಾರೆ. ಭಯ ಮುಕ್ತ ವಾತಾವರಣ ನಿರ್ಮಾಣ ಮಾಡಿದ್ದಾರೆ. ರಾಜ್ಯದ ಮೇಲೂ ಅವರ ಪ್ರಭಾವ ಬೀರಲಿದೆ ಎಂದು ಶ್ರೀನಿವಾಸ್ ಪ್ರಸಾದ್ ಹಾಡಿ ಹೊಗಳಿದರು. ಸುದ್ದಿಗೋಷ್ಠಿಯಲ್ಲಿ ಮೇಯರ್ ಶಿವಕುಮಾರ್, ಬಿಜೆಪಿ ನಗರ ಕಾರ್ಯಾಧ್ಯಕ್ಷ ಹೆಚ್.ಜಿ. ಗಿರಿಧರ್, ವಸಂತಕುಮಾರ್, ಜಯಪ್ರಕಾಶ್ ಇದ್ದರು.

ರಾಹುಲ್ ಗಾಂಧಿಯಿಂದ ಏನೂ ಮಾಡಲು ಆಗಲ್ಲ

ಕಾಂಗ್ರೆಸ್ ಶಕ್ತಿ ದಿನದಿಂದ ದಿನಕ್ಕೆ ಕುಗ್ಗುತ್ತಿದೆ. ಕಾಂಗ್ರೆಸ್ ಸ್ಥಿತಿ 'ಮದ್ದೂರು ಷಟಲ್ ಟ್ರೈನ್'ನಂತಾಗಿದೆ. ಆ ಟ್ರೈನ್ ಮದ್ದೂರು ಬಿಟ್ಟು ಯಾವಾಗ ಬೆಂಗಳೂರು ಸೇರುತ್ತೆ ಎಂದು ಗೊತ್ತಾಗುವುದೇ ಇಲ್ಲ. ಅದೇ ಪರಿಸ್ಥಿತಿ ಈಗ ಕಾಂಗ್ರೆಸ್‌ನದ್ದಾಗಿದೆ. ಆದರೂ ಅಧಿಕಾರದ ಕನಸು ಕಾಣುತ್ತಿದ್ದಾರೆ. ಅಮೇಥಿ, ರಾಯ್‌ಬರೇಲಿ ಕ್ಷೇತ್ರದಲ್ಲಿ ಏನೂ ಮಾಡಲು ಆಗದ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ರಾಜ್ಯಕ್ಕೆ ಬಂದು ಏನು ಮಾಡುತ್ತಾರೆ ಎಂದು ವಾಗ್ದಾಳಿ ನಡೆಸಿದರು.

ಸಿದ್ದರಾಮಯ್ಯ ಕೊನೆ ಚುನಾವಣೆ, ಭಾರೀ ಅಂತರದಲ್ಲಿ ಗೆಲ್ಲಿಸಿ: ಯತೀಂದ್ರ



ಮೈಸೂರು,ಏ.27(ಎಂಟಿವೈ)– ಮುಖ್ಯಮಂತ್ರಿಯಾಗಿ 5 ವರ್ಷ ಯಶಸ್ವಿಯಾಗಿ ಆಡಳಿತ ನಡೆಸಿರುವ ಸಿದ್ದರಾಮಯ್ಯ, ಬಡವರಿಗೆ, ರೈತರಿಗೆ, ಶಾಲಾ ಮಕ್ಕಳಿಗೆ ಹಲವು ಭಾಗ್ಯಗಳನ್ನು ನೀಡುವ ಮೂಲಕ ರಾಜ್ಯದ ಜನರ ಹಿತ ಕಾಯುವ ಕೆಲಸ ಮಾಡಿದ್ದಾರೆ ಎಂದು ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.

ವರುಣ ಕ್ಷೇತ್ರದ ಸುತ್ತೂರು, ಜೀವು ರಳ್ಳಿ, ಬಿಳಿಗಲಿ, ಅಲಸ್ತಿಕಟ್ಟೆ ಹುಂಡಿ, ಬನ್ನಹಳ್ಳಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿದ್ದರಾಮಯ್ಯ ಪರ ಮನೆ ಮನೆಗೆ ತೆರಳಿ ಮತ ಯಾಚಿಸಿದರು.

ಸಿದ್ದರಾಮಯ್ಯ ಅವರು ಬುದ್ಧ, ಬಸವಣ್ಣ, ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಸಮ ಸಮಾಜ ನಿರ್ಮಾಣ ಮಾಡಲು ಪ್ರಯತ್ನಿಸಿದರು. ಹಸಿವು ಮುಕ್ತ ಕರ್ನಾಟಕ ಮಾಡಲು ಅನ್ನಭಾಗ್ಯ ಯೋಜನೆ ಜಾರಿಗೆ ತಂದರು. ಶಾಲಾ ಮಕ್ಕಳಲ್ಲಿರುವ ಅಪೌಷ್ಟಿಕತೆ ಹೋಗಲಾಡಿಸಲು ಕ್ಷೀರಭಾಗ್ಯ ಯೋಜನೆ ತಂದರು. ಅಲ್ಲದೇ, ಶಾದಿಭಾಗ್ಯ, ಶೂ ಭಾಗ್ಯ, ಮೈತ್ರಿ, ಮನಸ್ವಿನಿ, ಕೃಷಿ ಭಾಗ್ಯ ಕಾರ್ಯಕ್ರಮಗಳನ್ನು ಜಾರಿಗೊಳಿಸಿದರು ಎಂದು ತಿಳಿಸಿದರು.

ಎಸ್‌ಇಪಿ, ಟಿಎಸ್‌ಪಿ ಯೋಜನೆ ಜಾರಿಗೆ ತಂದು ರಾಜ್ಯದ ಎಲ್ಲಾ ದಲಿತರು, ನಾಯಕರ ಬೀದಿಗಳಲ್ಲಿ ಚರಂಡಿಗಳನ್ನು, ಕಾಂಕ್ರೀಟ್ ರಸ್ತೆಗಳನ್ನು ನಿರ್ಮಾಣ ಮಾಡಿದರು. ಇದನ್ನು ಸಹಿಸದ ಬಿಜೆಪಿಯವರು ಅಪಪ್ರಚಾರ ಮಾಡಿಕೊಂಡು ಜಾತಿ ಜಾತಿಗಳ ನಡುವೆ ಧರ್ಮ ಧರ್ಮಗಳ ನಡುವೆ ಕೋಮು ಭಾವನೆಯ ಕಿಚ್ಚನ್ನು ಹಚ್ಚಿ ಸಮಾಜದಲ್ಲಿ ಅಶಾಂತಿ ಮೂಡಿಸುತ್ತಿದ್ದಾರೆ. ಭ್ರಷ್ಟಾಚಾರ ನಡೆಸಿ ರಾಜ್ಯದ ಹಣವನ್ನು ಲೂಟಿ ಮಾಡಿ ಆ ಹಣದಿಂದ ಚುನಾವಣೆ ಗೆಲ್ಲುತ್ತೇವೆಂಬ ಭ್ರಮೆಯಲ್ಲಿದ್ದಾರೆ. ಆದರೆ ರಾಜ್ಯದ ಜನರು ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲು ಉತ್ಸುಕರಾಗಿದ್ದಾರೆ. ಇದು ಸಿದ್ದರಾಮಯ್ಯ ಅವರಿಗೆ ಕೊನೆ ಚುನಾವಣೆಯಾಗಿದ್ದು, ಈ ಬಾರಿ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಿ ಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಯದರ್ಶಿ ಗುರುಪಾದಸ್ವಾಮಿ, ಜಿ.ಪಂ. ಮಾಜಿ ಅಧ್ಯಕ್ಷ ಎಸ್.ಸಿ. ಬಸವರಾಜು, ಸಿದ್ದರಾಮಯ್ಯ ರವರ ಆಪ್ತ ಕಾರ್ಯದರ್ಶಿ ಎಂ.ರಾಮಯ್ಯ, ಜಿ.ಪಂ ಮಾಜಿ ಅಧ್ಯಕ್ಷ ಬಿ.ಎಂ. ರಾಮು, ತಾ.ಪಂ. ಮಾಜಿ ಅಧ್ಯಕ್ಷೆ ಮಂಜುಳಾ ಮಂಜುನಾಥ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ಗ್ರಾ.ಪಂ.ಅಧ್ಯಕ್ಷೆ ಅಂಬಿಕಾ ಮಾದಪ್ಪ ಸೋಮಣ್ಣ, ರವಿ, ಪಟೇಲ್ ಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಯಶಸ್ವಿನಿಗೆ ಶೇ.94.5 ಅಂಕ



ಮೈಸೂರು, ಏ.27– ಮೈಸೂರು ಬೃಂದಾವನ ಬಡಾವಣೆ ನಿವಾಸಿ ಬಿ.ಗುರುಪ್ರಸಾದ್ ಮತ್ತು ಸವಿತ ದಂಪತಿ ಪುತ್ರಿ ಜಿ.ಯಶಸ್ವಿನಿ ದ್ವಿತೀಯ ಪಿಯುಸಿ ಪರೀಕ್ಷೆಯ ವಾಣಿಜ್ಯ ವಿಭಾಗದಲ್ಲಿ 600ಕ್ಕೆ 567 ಅಂಕ ಗಳಿಸುವ ಮೂಲಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಯಾಗಿದ್ದಾರೆ. ಕೆ.ಪುಟ್ಟಸ್ವಾಮಿ ಸಂಯೋಜಿತ ಪಿಯು ಕಾಲೇಜ್ ವಿದ್ಯಾರ್ಥಿನಿಯಾದ ಯಶಸ್ವಿನಿ, ಕನ್ನಡದಲ್ಲಿ 98, ಇಂಗ್ಲೀಷ್ 81, ಅರ್ಥಶಾಸ್ತ್ರ 95, ವ್ಯವಹಾರ ಅಧ್ಯಯನ 93, ಅಕೌಂಟೆನ್ಸಿ 100 ಹಾಗೂ ಕಂಪ್ಯೂಟರ್ ಸೈನ್ಸ್‌ನಲ್ಲಿ 100 ಅಂಕ ಪಡೆದಿದ್ದಾರೆ.

ಮೈಸೂರಲ್ಲಿ ಮೋದಿ ರೋಡ್ ಶೋ ಮಾರ್ಗ ಪರಿಶೀಲಿಸಿದ ಎಸ್‌ಪಿಜಿ, ಪೊಲೀಸ್ ಅಧಿಕಾರಿಗಳು

ಓವಲ್ ಗ್ರೌಂಡ್, ಗನ್‌ಹೌಸ್ ವೃತ್ತ, ಕೆ.ಆರ್. ವೃತ್ತ, ಹೈವೇ ವೃತ್ತ, ಎಲ್‌ಐಸಿ ವೃತ್ತದವರೆಗೆ ರಾಜಮಾರ್ಗದಲ್ಲಿ ಸಾರ್ವಜನಿಕರ ವಾಹನ ಸಂಚಾರಕ್ಕೆ ನಿರ್ಬಂಧ ಸಾಧ್ಯತೆ



ಮೈಸೂರು, ಏ.27(ಆರ್‌ಕೆ)– ಏ.30ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮೈಸೂರಲ್ಲಿ ರೋಡ್ ಶೋ ನಡೆಸುವ ಮೂಲಕ ಬಿಜೆಪಿ ಅಭ್ಯರ್ಥಿಗಳ ಪರ ಪ್ರಚಾರ ನಡೆಸುವ ಹಿನ್ನೆಲೆಯಲ್ಲಿ ಪೊಲೀಸರು ವ್ಯಾಪಕ ಬಿಗಿ ಭದ್ರತೆ ಮಾಡಿದ್ದಾರೆ.

ಇಂದು ಎಸ್‌ಪಿಜಿ (Special Protection Group) ಅಧಿಕಾರಿಗಳು ಮೈಸೂರಿನ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಪ್ರಧಾನಿ ಮೋದಿ ಅವರು ರೋಡ್ ಶೋ ನಡೆಸುವ ಮಾರ್ಗ, ಹೆಲಿಕಾಪ್ಟರ್‌ನಲ್ಲಿ ಲ್ಯಾಂಡ್ ಆಗುವ ಓವಲ್ ಮೈದಾನ, ವಾಹನದಲ್ಲಿ ತೆರಳುವ ರಸ್ತೆಗಳು, ವಿಮಾನ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬೆಳಗ್ಗೆ 10 ಗಂಟೆಯಿಂದ ಮೈಸೂರು ವಿಶ್ವ ವಿದ್ಯಾನಿಲಯದ ಕ್ರಾಫರ್ಡ್ ಭವನದೆದುರು ಓವಲ್ ಮೈದಾನದಲ್ಲಿ ವ್ಯವಸ್ಥೆ ಮಾಡಿರುವ ತಾತ್ಕಾಲಿಕ ಹೆಲಿಪ್ಯಾಡ್‌ಗೆ ಭೇಟಿ ನೀಡಿ ಕೈಗೊಂಡಿರುವ ಸಿದ್ಧತೆ ಪರಿಶೀಲಿಸಿದ ಅಧಿ ಕಾರಿಗಳು, ಮೈದಾನದ ಸುತ್ತ ಯಾರೂ ಸುಳಿಯದಂತೆ ಪೊಲೀಸ್ ಸರ್ಪಗಾವಲಿರಿಸಬೇಕೆಂದು ಸೂಚಿಸಿದರು.

ಓವಲ್ ಮೈದಾನದ ಮುಖ್ಯದ್ವಾರ ಹೊರತು ಪಡಿಸಿ ಉಳಿದೆಲ್ಲಾ ಪ್ರವೇಶಗಳನ್ನು ಬಂದ್ ಮಾಡಿ, ಸುತ್ತಲಿನ ಮರಗಳ ಒಣಗಿದ ರೆಂಬೆ ತೆರವುಗೊಳಿಸಿ ಆವರಣವನ್ನು ತೆರವುಗೊಳಿಸಬೇಕು. ವಾಹನ ನಿಲುಗಡೆಗೆ ದೂರದಲ್ಲಿ ವ್ಯವಸ್ಥೆ ಮಾಡಬೇಕು ಎಂದು ಎಸ್‌ಪಿಜಿ ಹಿರಿಯ ಅಧಿಕಾರಿಗಳು ನಗರ ಪೊಲೀಸ್ ಆಯುಕ್ತ ಬಿ. ರಮೇಶ್, ಕಾನೂನು ಸುವ್ಯವಸ್ಥೆ ಡಿಸಿಪಿ ಎಂ. ಮುತ್ತುರಾಜ್ ಅವರಿಗೆ ತಿಳಿಸಿದರು.

ನಂತರ ಮುಡಾ ವೃತ್ತ, ಜೆಎಲ್‌ಬಿ ರಸ್ತೆ, ರಾಮಸ್ವಾಮಿ ವೃತ್ತ, ಚಾಮರಾಜ ಜೋಡಿ ರಸ್ತೆ, ಗನ್‌ಹೌಸ್ ವೃತ್ತಗಳಿಗೂ ತೆರಳಿ ಮಾರ್ಗದಲ್ಲಿನ ಅಭದ್ರ ಸ್ಥಿತಿಯಲ್ಲಿರುವ ವಿದ್ಯುತ್ ಕಂಬಗಳು, ಮರಗಳ ಒಣಗಿದ ರೆಂಬೆಗಳು, ಸಂಚಾರಕ್ಕೆ ಅಡ್ಡಿಯಾಗುವ ಪರಿಕರಗಳನ್ನು ತೆರವುಗೊಳಿಸುವಂತೆ ಸೂಚಿಸಿದರಲ್ಲದೆ, ಪ್ರಧಾನ ಮಂತ್ರಿಗಳು ರೋಡ್ ಶೋ ನಡೆಸುವ ಗನ್‌ಹೌಸ್ ವೃತ್ತದಿಂದ ಬನ್ನಿಮಂಟಪದ ಎಲ್‌ಐಸಿ ವೃತ್ತದವರೆಗೆ ರಾಜಮಾರ್ಗದಲ್ಲಿ ಬ್ಯಾರಿಕೇಡ್ ನಿರ್ಮಿಸಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆಯೂ ಸಲಹೆ ನೀಡಿದರು.

ಎಲ್‌ಐಸಿ ವೃತ್ತದಿಂದ ಮೈಸೂರು– ಬೆಂಗಳೂರು ರಸ್ತೆ ಮಣಿಪಾಲ್ ಆಸ್ಪತ್ರೆ ಜಂಕ್ಷನ್, ನಾರಾಯಣ ಹೃದಯಾಲಯ, ದೇವೇಗೌಡ ವೃತ್ತ, ಟಿ.ನರಸೀಪುರ ರಸ್ತೆ ಜಂಕ್ಷನ್, ನಂಜನಗೂಡು ರಸ್ತೆ ಮೂಲಕ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ತೆರಳಿದ ಎಸ್‌ಪಿಜಿ ಹಾಗೂ ಪೊಲೀಸ್ ಅಧಿಕಾರಿಗಳು, ವಿಮಾನ ನಿಲ್ದಾಣದಲ್ಲಿ ಕೈಗೊಂಡಿರುವ ಸುರಕ್ಷತಾ ಕ್ರಮಗಳ ಬಗ್ಗೆ ಸ್ಥಳ ಪರಿಶೀಲನೆ ನಡೆಸಿದ ಬಳಿಕ ಏರ್‌ಪೋರ್ಟ್ ಡೈರೆಕ್ಟರ್ ಆರ್. ಮಂಜುನಾಥ್‌ರೊಂದಿಗೆ ಸಭೆ ನಡೆಸಿ ಕೆಲ ಮಾರ್ಗಸೂಚಿಗಳನ್ನು ಪಾಲಿಸುವಂತೆ ಸೂಚಿಸಿದರು.

ಪ್ರಧಾನಿ ಮೋದಿ ರೋಡ್ ಶೋ ಹಿನ್ನೆಲೆ

ರಾಜಮಾರ್ಗದಲ್ಲಿ ಕಲ್ಲಿನ ಬ್ಯಾರಿಕೇಡ್‌ಗೆ ಮೆಸ್ ಅಳವಡಿಕೆ



ಪ್ರಧಾನಿ ಮೋದಿ ರೋಡ್ ಶೋ ಹಿನ್ನೆಲೆಯಲ್ಲಿ ಸಯ್ಯಾಜಿರಾವ್ ರಸ್ತೆಯಲ್ಲಿ ಫೋಕಸ್ ಲೈಟ್ ಅಳವಡಿಸುತ್ತಿರುವುದು.

ಮೈಸೂರು, ಏ.27(ಆರ್‌ಕೆ)– ಏ.30ರಂದು ಸಂಜೆ ಮೈಸೂರಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರೋಡ್ ಶೋ ನಡೆಸುವುದರಿಂದ ಭದ್ರತೆ ಹಿನ್ನೆಲೆಯಲ್ಲಿ ರಾಜ ಮಾರ್ಗದ ಕಲ್ಲಿನ ಬ್ಯಾರಿಕೇಡ್‌ಗೆ ಮೆಸ್ (ಜಾಲರಿ) ಅಳವಡಿಸಲಾಗುತ್ತಿದೆ.

ಎಸ್‌ಪಿಜಿ ಅಧಿಕಾರಿಗಳ ಸಲಹೆ ಮೇರೆಗೆ ಪೊಲೀಸರು, ಅರಮನೆ ದಕ್ಷಿಣ ದ್ವಾರದ ಕಾಡಾ ಕಚೇರಿ (ಪಾಲಿಕೆ ಕಚೇರಿ) ಯಿಂದ ಕೆ.ಆರ್. ವೃತ್ತ, ಸಯ್ಯಾಜಿರಾವ್ ರಸ್ತೆಯ ಸರ್ಕಾರಿ ಆಯುವೇದ ಕಾಲೇಜು ಜಂಕ್ಷನ್‌ವರೆಗೆ ಇರುವ ಇಕ್ಕೆಲಗಳ ಕಲ್ಲಿನ ಬ್ಯಾರಿಕೇಡ್‌ಗೆ ಫುಟ್‌ಪಾತ್‌ನಿಂದ ಯಾರೂ ರಸ್ತೆಗೆ ಸುಳಿಯದಂತೆ ಜಾಲರಿಯನ್ನು ಅಳವಡಿಸುವ ಕಾರ್ಯ ಭರದಿಂದ ನಡೆಯುತ್ತಿದೆ.

ನಗರ ಪಾಲಿಕೆಯಿಂದ ಅಳವಡಿಸಿರುವ ಕಲ್ಲಿನ ಬ್ಯಾರಿಕೇಡ್ ಎತ್ತರ ಕಡಿಮೆ ಇದ್ದು, ಮಧ್ಯೆ ಮಧ್ಯೆ ಅಂತರದಲ್ಲಿ ಜನರು ನುಸುಳದಂತೆ ತಡೆಯಲು ಈ ಮೆಸ್ ಅಳವಡಿಸಲಾಗುತ್ತಿದೆ. ಅಲ್ಲದೆ ಅಲ್ಲಲ್ಲಿ ಕಲ್ಲಿನ ಬ್ಯಾರಿಕೇಡ್‌ಗಳು ಮುರಿದಿದ್ದು, ಅಲ್ಲಿ ಗ್ಯಾಪ್ ಇರುವುದರಿಂದ ಪ್ರಧಾನಿಗಳು ರೋಡ್ ಶೋ ನಡೆಸುವಾಗ ಅವರ ಸುರಕ್ಷತೆಗಾಗಿ ಪೊಲೀಸರು ಸುಮಾರು ಎರಡೂವರೆ ಕಿಮೀ ದೂರದವರೆಗೆ ಕಬ್ಬಿಣದ ಮೆಸ್ ಅಳವಡಿಸಿ ಯಾರೂ ನುಸುಳದಂತೆ ಕ್ರಮವಹಿಸಲಾಗುತ್ತಿದೆ.

ಸಾಮಾನ್ಯವಾಗಿ ದಸರಾ ವಿಜಯದಶಮಿ ಮೆರವಣಿಗೆಗಾಗಿ ರಾಜ ಮಾರ್ಗದಲ್ಲಿ ವರ್ಷಕ್ಕೊಮ್ಮೆ ಬ್ಯಾರಿಕೇಡ್ ಅಳವಡಿಸುವುದನ್ನು ಹೊರತುಪಡಿಸಿದರೆ ಬೇರೆ ಯಾವ ಸಮಯದಲ್ಲೂ ಈ ವ್ಯವಸ್ಥೆಯನ್ನು ಈವರೆಗೆ ಮಾಡಿರಲಿಲ್ಲ. ಮೋದಿ ಅವರು ರೋಡ್ ಶೋ ಇರುವ ಕಾರಣ ಭದ್ರತೆಗಾಗಿ ರಾಜ ಮಾರ್ಗದಲ್ಲಿ ಬ್ಯಾರಿಕೇಡ್ ಹಾಕಿ ಕಲ್ಲಿನ ಬ್ಯಾರಿಕೇಡ್‌ಗೆ ಮೆಸ್ ಅನ್ನು ಅಳವಡಿಸಲಾಗುತ್ತಿದೆ.



ಭಾವನೆಗಳ ಸುತ್ತ

ಈ ಹಿಂದೆ 'ಕ್ರಷ್' ಹಾಗೂ 'ಲಗೋರಿ' ಚಿತ್ರಗಳನ್ನು ನಿರ್ದೇಶಿಸಿದ್ದ ಯು.ವಿ. ಹರಿಶೌರ್ಯ ಈಗ ತಮ್ಮ ಮೂರನೇ ಪ್ರಯತ್ನವಾಗಿ 'ಕಲರ್ಸ್ ಆಫ್ ಲವ್' ಎನ್ನುವ 50 ನಿಮಿಷದ ಮತ್ತೊಂದು ಕಿರುಚಿತ್ರವನ್ನು ನಿರ್ದೇಶಿಸಿದ್ದಾರೆ. ಒಂದು ಕಾವ್ಯಾತ್ಮಕ ಪ್ರೀತಿಯ ಕಥೆ ಎಂಬ ಅಡಿಬರಹವಿರುವ ಈ ಚಿತ್ರಕ್ಕೆ ನಿರ್ದೇಶಕರೇ ಕಥೆ, ಚಿತ್ರಕಥೆ ಬರೆದಿದ್ದಾರೆ, ಗ್ಯಾಂಗ್‌ಬ್ಯಾಂಗ್ ಪ್ರೊಡಕ್ಷನ್ ಅಡಿಯಲ್ಲಿ ಚೇತನ ಕುಮಾರ್ ಮತ್ತು ವಿಜಯಪ್ರಕಾಶ್ ಈ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ.

ನಾಯಕ ಒಬ್ಬ ಬರಹಗಾರ. 'ಕಲರ್ಸ್ ಆಫ್ ಲವ್' ಎನ್ನುವ ಪುಸ್ತಕವನ್ನು ಬರೆದು ಮುಗಿಸುವ ಈತನ ಜೀವನ ಏನೇನೆಲ್ಲ ತಿರುವುಗಳನ್ನು ಪಡೆಯಿತು. ಈ ಮಧ್ಯೆ ಆತ ಯುವತಿಯೊಬ್ಬಳನ್ನು ಪ್ರೀತಿಸುತ್ತಾನೆ. ಆದರೆ ಆ ಹುಡುಗಿ ಮನೆಯವರ ಒತ್ತಾಯಕ್ಕೆ ಮಣಿದು ಬೇರೊಬ್ಬನ ಕೈಹಿಡಿಯುತ್ತಾಳೆ. ಇದರಿಂದ ಬೇಸರಗೊಂಡ ನಾಯಕ, ಪ್ರೀತಿ ಎಂದರೆ ಇಷ್ಟೇ ಅಂದುಕೊಂಡು ಮತ್ತೆ ಬರೆಯುವುದರತ್ತ ತನ್ನ ಗಮನ ಹರಿಸುತ್ತಾನೆ. ಆನಂತರ ಈತನ ಒಳ್ಳೆಯ ಗುಣ, ನಡವಳಿಕೆಗೆ ಮಾರುಹೋದ ಹುಡುಗಿಯೊಬ್ಬಳು ಈತನ ಹಿಂದೆ ಬೀಳುತ್ತಾಳೆ. ಈ ಬರಹಗಾರ ಮಾತ್ರ ಅವಳಿಂದ ದೂರ ಹೋಗಲು ಎಷ್ಟೇ ಪ್ರಯತ್ನಪಟ್ಟರೂ ಆಕೆ ನೀನಿಲ್ಲದೆ ನಾನಿಲ್ಲವೆಂದು ಹೇಳುತ್ತಲೇ ಇರುತ್ತಾಳೆ. ಕೊನೆಗೆ ಆತ ತನ್ನ ಗುರಿಯನ್ನು ಸಾಧಿಸುತ್ತಾನಾ? ಅಥವಾ ನಾಯಕಿಯ ಕೋರಿಕೆಗೆ ಮಾರು ಹೋಗುತ್ತಾನಾ? ಎನ್ನುವುದೇ ಈ ಚಿತ್ರದ ತಿರುಳು.

ಮೊನ್ನೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಚಿತ್ರದ ನಿರ್ಮಾಪಕ ಚಂದ್ರಶೇಖರ್ ಮಾತನಾಡಿ ನಿರ್ದೇಶಕರು ಬ್ಯಾಂಕ್ ಕೆಲಸಕ್ಕೆ ರಾಜಿನಾಮೆ ನೀಡಿ ಸಿನಿಮಾರಂಗಕ್ಕೆ ಬಂದಿದ್ದಾರೆ. ಚಿತ್ರ ತುಂಬಾ ಚೆನ್ನಾಗಿ ಮೂಡಿಬಂದಿದೆ ಎಂದರು. ಅತಿಥಿಯಾಗಿದ್ದ ರಾಷ್ಟ್ರಪ್ರಶಸ್ತಿ ವಿಜೇತ ನಿರ್ದೇಶಕ ಚೇತನ್ ಮುಂಡಾಡಿ ಮಾತನಾಡಿ, ನಿಜವಾಗಿಯೂ ಒಂದು ಉತ್ತಮ ಚಿತ್ರವನ್ನು ನೋಡಿದಂತಾಗಿದೆ. ಇಂಥವರು ಸಿನಿಮಾರಂಗಕ್ಕೆ ಬೇಕಾಗಿದ್ದಾರೆ ಎಂದು ತಂಡಕ್ಕೆ ಶುಭ ಹಾರೈಸಿದರು. ಮಂಗಳೂರು ಪ್ರತಿಭೆ ಮನಿಷ್ ಕೊಟ್ಯಾನ್ ಈ ಚಿತ್ರದ ನಾಯಕ. ಅದೇ ಊರಿನ ಅನುಷ ರಾಜ್, ಹಾಸನ ಮೂಲದ ಪ್ರನುಪ ಗೌಡ ಇಬ್ಬರು ನಾಯಕಿಯರು ನಟಿಸಿದ್ದಾರೆ. ಉಳಿದಂತೆ ರಾಣಾರಂಜಿತ್, ಅಭಿಷೇಕ್‌ಶೆಟ್ಟಿ, ರಾಘವಸೂರಿ ನಟಿಸಿದ್ದಾರೆ. ಅಕ್ಷಯ್.ಎಸ್.ರಿಷಭ್ ಅವರ ಸಂಗೀತ, ಸಂತೋಷ್ ರಾಜೇಂದ್ರನ್ ಅವರ ಛಾಯಾಗ್ರಹಣ ಈ ಚಿತ್ರಕ್ಕಿದೆ. ಮಂಗಳೂರು ಕಡಲತೀರದಲ್ಲಿ ಹೆಚ್ಚಿನ ಭಾಗದ ಚಿತ್ರೀಕರಣ ನಡೆಸಲಾಗಿದೆ.



'ರವಿಕೆ ಪ್ರಸಂಗ' ಟೀಸರ್ ಬಿಡುಗಡೆ

ಹೆಣ್ಣುಮಕ್ಕಳು ಮನೆಯಲ್ಲಿ ಯಾವುದೇ ಸಮಾರಂಭವಾದರೂ ಸೀರೆಗೆ ತಕ್ಕಂತೆ ರವಿಕೆ ಹೊಲಿಸಿ ಕೊಳ್ಳುವುದು ಸಾಮಾನ್ಯ. ಅಂತಹ ರವಿಕೆಯ ಕುರಿತಾದ ಕಥೆ ಹೊಂದಿರುವ "ರವಿಕೆ ಪ್ರಸಂಗ" ಸಿನಿಮಾ ಇದೀಗ ತೆರೆಗೆ ಬರಲು ಸಿದ್ದವಾಗಿದೆ. ಇತ್ತೀಚೆಗೆ ಈ ಚಿತ್ರದ ಟೀಸರ್ ಬಿಡುಗಡೆ ಕಾರ್ಯಕ್ರಮ ನಡೆಯಿತು,

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಸಂತೋಷ್ ಕೊಡೆಂಕೇರಿ ನಮ್ಮ ದೃಷ್ಟಿ ಮೀಡಿಯಾ ಮತ್ತು ಪ್ರೊಡಕ್ಷನ್ ವತಿಯಿಂದ ನಿರ್ಮಾಣವಾಗಿರುವ ಎರಡನೇ ಚಿತ್ರವಿದು. ಶಂತನು ಮಹರ್ಷಿ, ಗಿರೀಶ್‌ಗೌಡ, ನಿರಂಜನ್‌ಗೌಡ ಹಾಗೂ ಶಿವರುದ್ರಯ್ಯ ಅವರು ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ. ನನ್ನ ಪತ್ನಿ ಪಾವನ ಸಂತೋಷ್ ಕಥೆ ಹಾಗೂ ಸಂಭಾಷಣೆ ಬರೆದಿದ್ದಾರೆ. "ಬ್ರಹ್ಮಗಂಟು" ಧಾರಾವಾಹಿ ಖ್ಯಾತಿಯ ಗೀತಾಭಾರತಿ ಭಟ್, ಸಂಪತ್ ಮೈತ್ರೇಯ, ರಾಕೇಶ್ ಮಯ್ಯ, ಸುನಿಲ್ ರಂಗನಾಥ್, ಪದ್ಮಜಾರಾವ್, ರಘು ಪಾಂಡೇಶ್ವರ ಹೀಗೆ ಸಾಕಷ್ಟು ಅನುಭವಿ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ವಿನಯ್ ಶರ್ಮ ಅವರ ಸಂಗೀತ ನಿರ್ದೇಶನ, ಮುರಳೀಧರನ್ ಎನ್. ಅವರ ಛಾಯಾಗ್ರಹಣ ಹಾಗೂ ರಘು ಶಿವರಾಮ್ ಅವರ ಸಂಕಲನವಿರುವ "ರವಿಕೆ ಪ್ರಸಂಗ" ಚಿತ್ರದ ಮೊದಲ ಪ್ರತಿ ಸಧ್ಯದಲ್ಲೇ ಹೊರಬರಲಿದೆ ಎಂದು ಚಿತ್ರದ ಕುರಿತು ಮಾಹಿತಿ ನೀಡಿದರು. ಈ ಚಿತ್ರದ ಕಥೆ ಬಹಳ ಇಷ್ಟವಾಯಿತು. ಪ್ರತಿಯೊಬ್ಬ ಹೆಣ್ಣುಮಕ್ಕಳಿಗೆ ರವಿಕೆ ಮೇಲೆ ಪ್ರೀತಿ. ಅದರ ಅಳತೆ ಸರಿಯಾಗಿರಬೇಕು ಎಂದು ಸಾಕಷ್ಟು ಸಲ ಟೈಲರ್ ಜೊತೆ ಚರ್ಚಿಸುತ್ತಾರೆ. ಈ ರೀತಿ ಮಹಿಳೆ ಹಾಗೂ ಟೈಲರ್ ನಡುವೆ ರವಿಕೆಗಾಗಿ ನಡೆಯುವ ಮುಖ್ಯ ವಿಷಯವೇ "ರವಿಕೆ ಪ್ರಸಂಗ". ಸಂಭಾಷಣೆ ಮಂಗಳೂರು ಕನ್ನಡದಲ್ಲಿರುತ್ತದೆ. ಎಲ್ಲರ ಮನಸ್ಸಿಗೆ, ವಿಶೇಷವಾಗಿ ಹೆಣ್ಣು ಮಕ್ಕಳಿಗೆ ಈ ಚಿತ್ರ ಪ್ರಿಯವಾಗಲಿದೆ ಎಂದು ನಾಯಕಿ ಗೀತಾಭಾರತಿ ಭಟ್ ಹೇಳಿದರು.

ನನ್ನ ಇಪ್ಪತ್ತೈದು ವರ್ಷಗಳ ಸಿನಿಮಾ ಜರ್ನಿಯಲ್ಲಿ ನೂರಕ್ಕೂ ಅಧಿಕ ಚಿತ್ರಗಳಲ್ಲಿ ನಟಿಸಿದ್ದೇನೆ. ಅದರಲ್ಲಿ ನನ್ನ ಮನಸಿಗೆ ಹತ್ತಿರವಾದ ಚಿತ್ರಗಳು ಕೆಲವು ಮಾತ್ರ, ಅದರಲ್ಲಿ ಈ ಚಿತ್ರ ಕೂಡ ಒಂದು ಎಂದು ನಟಿ ಪದ್ಮಜಾರಾವ್ ಹೇಳಿದರು. ಕಥೆ ಹಾಗೂ ಸಂಭಾಷಣೆ ಬರೆದಿರುವ ಪಾವನ ಸಂತೋಷ್, ಛಾಯಾಗ್ರಾಹಕ ಮುರಳಿಧರ್ ಎನ್. ಸಂಗೀತ ನಿರ್ದೇಶಕ ವಿನಯ್ ಶರ್ಮ ಹಾಗೂ ಚಿತ್ರದಲ್ಲಿ ನಟಿಸಿರುವ ರಾಕೇಶ್ ಮಯ್ಯ, ಪ್ರವೀಣ್ ಅಥರ್ವ, ರಘು ಪಾಂಡೇಶ್ವರ ಮುಂತಾದವರು ಚಿತ್ರದ ಕುರಿತು ಮಾತನಾಡಿದರು.

ಈ ವಾರ ದೇಶಾದ್ಯಂತ 'ಪೊನ್ನಿಯಿನ್ ಸೆಲ್ವನ್-2'



ಮಣಿರತ್ನಂ ನಿರ್ದೇಶನದ 'ಪೊನ್ನಿಯಿನ್ ಸೆಲ್ವನ್ 2' ಚಿತ್ರವು ಇಂದಿನಿಂದ ವಿಶ್ವಾದ್ಯಂತ ತೆರೆಗಪ್ಪಳಿಸುತ್ತಿದೆ. ಪ್ರೊಮೋಷನ್‌ಗಾಗಿ ಬೆಂಗಳೂರಿಗೆ ಆಗಮಿಸಿದ್ದ ಚಿತ್ರದ ನಾಯಕನಟ ವಿಕ್ರಂ, ನಾಯಕಿ ತ್ರಿಷಾ ಹಾಗೂ ಕಾರ್ತಿ ಮತ್ತು ಜಯಂ ರವಿ ಹಾಜರಿದ್ದು ಮಾತನಾಡಿದರು.

ಮೊದಲಿಗೆ ಮಾತನಾಡಿದ ಜಯಂ ರವಿ, ಕೆಜಿಎಫ್, ಭಾರತದ ಭಾಷೆಯ ಗಡಿ ಭೇದಿಸಿದ್ದರೆ, ಕಾಂತಾರ ಧಾರ್ಮಿಕ ಗಡಿಯನ್ನು ಭೇದಿಸಿದೆ. ಇದರಿಂದ ನಮಗೆ ಧಾರ್ಮಿಕತೆಯ ಬಗ್ಗೆ ನಂಬಿಕೆ ಹೆಚ್ಚಾಗಿದೆ. ಪ್ರಪಂಚದ ಸಿನಿಮಾ ಲೋಕದಲ್ಲಿ ಕನ್ನಡ ಇಂಡಸ್ಟ್ರಿ ಗುರುತರ ಪಾತ್ರ ವಹಿಸಿದೆ ಎಂದರು. ನಂತರ ವಿಕ್ರಂ ಮಾತನಾಡಿ, ನನಗೆ ಆದಿತ್ಯ ಕರಿಕಾಳನ್ ಪಾತ್ರವು ತೃಪ್ತಿ ಕೊಟ್ಟಿದೆ ಪಿಎಸ್ 2 ಒಂದೊಳ್ಳೆ ಐತಿಹಾಸಿಕ ಸಿನಿಮಾ ಎಂದರು.

ಕಾರ್ತಿ ಮಾತನಾಡಿ ಪಿಎಸ್ 1 ಮತ್ತು ಪಿಎಸ್ 2 ಎರಡೂ ಸಿನಿಮಾಗಳು ಒಟ್ಟಿಗೆ ಚಿತ್ರೀಕರಣವಾಗಿತ್ತು. ಮೊದಲ ಭಾಗಕ್ಕೆ ಜನ ತೋರಿಸಿದ ಪ್ರೀತಿ ದೊಡ್ಡದು. ಹಾಗೇ ಪಿಎಸ್ 2 ಕೂಡ ಜನರನ್ನು ಗೆಲ್ಲಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು, ನಾಯಕಿ ತ್ರಿಷಾ ಕೃಷ್ಣನ್ ಮಾತನಾಡುತ್ತಾ, ತಮ್ಮ ಪಾತ್ರದ ಬಗ್ಗೆ ಹೇಳಿ, ಮಣಿರತ್ನಂ ಅಂಥವರ ಜೊತೆ ಕೆಲಸ ಮಾಡಿರುವುದಕ್ಕೆ ಸಂತಸವಿದೆ ಎಂದರು.


ಕಲ್ಕಿ ಕೃಷ್ಣಮೂರ್ತಿ ಅವರು ಬರೆದ ಕಾದಂಬರಿ ಪೊನ್ನಿಯಿನ್ ಸೆಲ್ವನ್ ಆಧರಿಸಿ ತಯಾರಾದ ಈ ಚಿತ್ರದ ಮೊದಲ ಭಾಗ ಮೆಗಾ ಹಿಟ್ ಆಗಿತ್ತು. 500 ಕೋಟಿಗೂ ಹೆಚ್ಚು ಕಲೆಕ್ಷನ್ ಮಾಡಿತ್ತು. ಚೋಳ ಸಾಮ್ರಾಜ್ಯದ ದೃಶ್ಯವೈಭೋಗವನ್ನು ಹೇಳುವ ಈ ಸಿನಿಮಾ ತಮಿಳು, ತೆಲುಗು, ಕನ್ನಡ, ಹಿಂದಿ ಹಾಗೂ ಮಲಯಾಳಂ ಭಾಷೆಗಳಲ್ಲಿ ಈ ಶುಕ್ರವಾರ ಭರ್ಜರಿಯಾಗಿ ತೆರೆಕಂಡಿದೆ. ಲೈಕಾ ಪ್ರೊಡಕ್ಷನ್ಸ್ ಮತ್ತು ಮದ್ರಾಸ್ ಟಾಕೀಸ್ ಬ್ಯಾನರ್ ಅಡಿ ಅದ್ದೂರಿಯಾಗಿ ನಿರ್ಮಾಣವಾಗಿರುವ 'ಪೊನ್ನಿಯಿನ್ ಸೆಲ್ವನ್-2' ಸಿನಿಮಾದಲ್ಲಿ ಕಾರ್ತಿ, ಐಶ್ವರ್ಯಾ ರೈ, ಚಿಯಾನ್ ವಿಕ್ರಮ್, ಜಯಂ ರವಿ, ತ್ರಿಶಾ, ಶರತ್‌ಕುಮಾರ್, ಪ್ರಕಾಶ್‌ರಾಜ್ ಸೇರಿದಮತೆ ಚಿತ್ರರಂಗದ ಹಲವಾರು ಗಣ್ಯರು ಅಭಿನಯಿಸಿದ್ದಾರೆ. ಎ.ಆರ್. ರೆಹಮಾನ್ ಅವರ ಸಂಗೀತ ಸಂಯೋಜನೆ, ರವಿವರ್ಮನ್ ಅವರ ಕ್ಯಾಮೆರಾ ವರ್ಕ್ ಪೊನ್ನಿಯನ್ ಸೆಲ್ವನ್ ಚಿತ್ರಕ್ಕಿದೆ.

ರಾಘು ಏಕವ್ಯಕ್ತಿ ಚಿತ್ರದಲ್ಲಿ ವಿಜಯ್ ರಾಘವೇಂದ್ರ

ಆರಂಭದಿಂದಲೂ ವಿಭಿನ್ನ ಪೋಸ್ಟರ್, ಕಥೆಯ ಮೂಲಕ ಸಿನಿರಸಿಕರಲ್ಲಿ ಇನ್ನಿಲ್ಲದ ಕುತೂಹಲಗಳನ್ನು ಹುಟ್ಟು ಹಾಕಿರುವ ಚಿತ್ರ 'ರಾಘು'. ಇಡೀ ಸಿನಿಮಾದಲ್ಲಿ ಒಬ್ಬನೇ ಕಲಾವಿದ ಚಿನ್ನಾರಿ ಮುತ್ತ ವಿಜಯ್ ರಾಘವೇಂದ್ರ ಅಭಿನಯಿಸಿರುವ ಈ ವಿಶೇಷ ಚಿತ್ರ ಇಂದಿನಿಂದ ತೆರೆಕಾಣುತ್ತಿದೆ. ವಿಜಯ್ ರಾಘವೇಂದ್ರ ನಾಯಕನಾಗಿ ನಟಿಸಿರುವ ಏಕವ್ಯಕ್ತಿ ಚಿತ್ರ ಇದಾಗಿದೆ. ಒಂದಿಷ್ಟು ಕೌತುಕಗಳನ್ನು ತನ್ನೊಡಲಲ್ಲಿ ಬಚ್ಚಿಟ್ಟುಕೊಂಡಿರುವ ರಾಘು ಸಿನಿಮಾದ ಅಷ್ಟೂ ಸೀನ್‌ಗಳಲ್ಲಿ ವಿಜಯ್ ರಾಘವೇಂದ್ರ ಒಬ್ಬರೇ ಕಲಾವಿದನಾಗಿ ಅಭಿನಯಿಸಿದ್ದಾರೆ.

ಈ ಚಿತ್ರಕ್ಕೆ ಎಂ.ಆನಂದ್‌ರಾಜ್ ಅವರು ಕಥೆ ಚಿತ್ರಕಥೆ ಬರೆದು ಆಕ್ಷನ್‌ಕಟ್ ಹೇಳಿದ್ದಾರೆ. ಈ ಹಿಂದೆ ಆನ ಹಾಗೂ 'ಬ್ಯಾಂಗ್' ಸಿನಿಮಾಗಳಿಗೆ ಸಹಾಯಕ ನಿರ್ದೇಶಕರಾಗಿ ದುಡಿದಿರುವ ಆನಂದ್ ರಾಜ್ ಅವರಿಗೆ ರಾಘು ಚೊಚ್ಚಲ ನಿರ್ದೇಶನದ ಚಿತ್ರ. ಮೊದಲ ಹೆಜ್ಜೆಯಲ್ಲಿ ಹೊಸ ಪ್ರಯೋಗಕ್ಕೆ ಮುಂದಾಗಿರುವುದು ಕುತೂಹಲ ಹೆಚ್ಚಿಸಿದೆ.

ಡಿಕೆಎಸ್ ಸ್ಟುಡಿಯೋ, ಕೋಟಾ ಫಿಲಂ ಫ್ಯಾಕ್ಟರಿ ಪ್ರೊಡಕ್ಷನ್ ಹೌಸ್ ಮೂಲಕ ರಾಘು ಸಿನಿಮಾವನ್ನು ರನ್ವಿತ್ ಶಿವಕುಮಾರ್ ಹಾಗೂ ಅಭಿಷೇಕ್ ಕೋಟ ಅವರು ನಿರ್ಮಾಣ ಮಾಡಿದ್ದಾರೆ. ಉದಯ್‌ಲೀಲಾ ಅವರ ಛಾಯಾಗ್ರಹಣ, ವಿಜೇತ್ ಚಂದ್ರ ಅವರ ಸಂಕಲನ, ರಿತ್ವಿಕ್ ಮುರುಳಿಧರ್ ಅವರ ಹಿನ್ನೆಲೆ ಸಂಗೀತ ರಾಘು ಚಿತ್ರಕ್ಕಿದೆ. ಸೂರಜ್ ಜೋಯಿಸ್ ಅವರ ಸಂಗೀತ ನಿರ್ದೇಶನವಿರುವ ಈ ಚಿತ್ರದ ಎರಡು ಹಾಡುಗಳಿಗೆ ವಾಸುಕಿ ವೈಭವ್ ಹಾಗೂ ಅಲೋಕ್ ಧ್ವನಿಯಾಗಿದ್ದಾರೆ.




ಲೂಸ್‌ಮಾದ ಯೋಗಿ 50ನೇ ಚಿತ್ರ 'ರೋಸಿ'

ಲೂಸ್‌ಮಾದ ಯೋಗಿ ಅಭಿನಯದ 50ನೇ ಚಿತ್ರಕ್ಕೆ 'ರೋಸಿ' ಎಂಬ ಟೈಟಲ್ ಇಡಲಾಗಿದ್ದು, ಹೆಡ್‌ಬುಷ್ ಖ್ಯಾತಿಯ ನಿರ್ದೇಶಕ ಶೂನ್ಯ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಕೆಲ ದಿನಗಳ ಹಿಂದಷ್ಟೇ ಈ ಚಿತ್ರದ ಮುಹೂರ್ತ ನಡೆಸಿ ಸಿನಿಮಾದ ಶೀರ್ಷಿಕೆಯನ್ನು ಅನಾವರಣಗೊಳಿಸಲಾಗಿತ್ತು. ಈಗಾಗಲೇ 'ರೋಸಿ' ಶೀರ್ಷಿಕೆಯಡಿ ಯೋಗಿ ಮತ್ತವರ ಚಿತ್ರತಂಡ ಸಿನಿಮಾದ ಪ್ರೀ-ಪ್ರೊಡಕ್ಷನ್ ಕೆಲಸಗಳನ್ನು ನಡೆಸಿಕೊಂಡು ಶೂಟಿಂಗ್ ಹೊರಡಲು ರೆಡಿಯಾಗಿದೆ. ಈ ಮಧ್ಯೆ ರೋಸಿ ಟೈಟಲ್ ನಮ್ಮದು ಎಂದು ನಿರ್ದೇಶಕ ಅರ್ಜುನ್ ಜನ್ಯ ಅವರೂ ಪ್ರಕಟಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಲೆಂದೇ ಯೋಗಿ ಅಭಿನಯದ ರೋಜಿ ಚಿತ್ರತಂಡ ಪತ್ರಿಕಾಗೋಷ್ಠಿ ಕರೆದಿತ್ತು. ನಟ ಯೋಗಿ, ನಿರ್ದೇಶಕ ಶೂನ್ಯ ಮತ್ತು ಚಿತ್ರದ ನಿರ್ಮಾಪಕರಾದ ರಾಜೇಶ್ ಮಾತನಾಡಿ 'ರೋಸಿ' ಟೈಟಲ್ ಕುರಿತಾದ ಗೊಂದಲಗಳ ಬಗ್ಗೆ ಒಂದಷ್ಟು ಮಾಹಿತಿ ನೀಡಿದರು. ಮೊದಲಿಗೆ ಮಾತನಾಡಿದ ನಿರ್ದೇಶಕ ಶೂನ್ಯ, ಫಿಲಂ ಚೇಂಬರ್ 'ರೋಸಿ' ಟೈಟಲನ್ನು ಮೊದಲು ನಮ್ಮ ಚಿತ್ರಕ್ಕೆ ನೀಡಿದೆ. 'ರೋಸಿ' ಎನ್ನುವುದು ನಮ್ಮ ಸಿನಿಮಾದ ಟೈಟಲ್ ಮತ್ತು ನಾಯಕನ ಪಾತ್ರದ ಹೆಸರು. ವಾಣಿಜ್ಯ ಮಂಡಳಿ ನಮಗೆ ಅನುಮತಿ ನೀಡಿದ ನಂತರವೇ ನಾವು ಮುಹೂರ್ತ ನಡೆಸಿ, ಟೈಟಲ್ ಬಿಡುಗಡೆ ಮಾಡಿದ್ದೇವೆ. ಈಗ 'ರೋಸಿ' ಟೈಟಲ್ ಬೇರೆಯವರ ಪಾಲಾಗಿದೆ ಎಂಬ ಸುದ್ದಿ ಮೀಡಿಯಾಗಳಲ್ಲಿ ಹರಿದಾಡುತ್ತಿದೆ. ಇದರಿಂದ ಗೊಂದಲ ಉಂಟಾಗಿದೆ ಎಂದರು. ನಂತರ ಮಾತನಾಡಿದ ಯೋಗಿ, ನಾನು ಮತ್ತು ನಿರ್ದೇಶಕ ಶೂನ್ಯ ಇಬ್ಬರೂ ಶಿವರಾಜಕುಮಾರ್ ಅವರನ್ನು ಭೇಟಿಮಾಡಿ ಟೈಟಲ್ ಬಿಟ್ಟುಕೊಡುವಂತೆ ಮನವಿ ಮಾಡಿದಾಗ ಅವರೂ ಒಪ್ಪಿಕೊಂಡರು ಎಂದರು.

ಸಿನಿಪದಬಂಧ-471

ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______________________

ವಿಳಾಸ ______________________

ದೂರವಾಣಿ ಸಂಖ್ಯೆ ______________________

ಎಡದಿಂದ ಬಲಕ್ಕೆ

1. ಉರಿದು ಉದುರಿದ ವಸ್ತುವೇ ಆವರಿಸಿದೆ 7
6. ಸೀತೆಯಲ್ಲ ಸಾವಿತ್ರಿ ಚಿತ್ರದ ನಾಯಕಿ 4
7. ಉಪೇಂದ್ರ – ಸುದೀಪ್ ಅಭಿನಯದ ಚಿತ್ರ 6
8. ಕೋಡ್ಲು ರಾಮಕೃಷ್ಣ ಅವರ ಧೀರ್ಘಕತೆ 4
9. ಇರುಳಿನೊಂದಿಗೆ ಬಂದ ರಾತ್ರಿ ತಿರುಗಿದೆ 3
11. ಡಿ.ರಾಜೇಂದ್ರ ಬಾಬುವಿನ ತಾರಾಪತ್ನಿ 3
13. ಹಣಬಲದೊಂದಿಗಿನ ಪ್ರಜಾಶಕ್ತಿ 4
15. ಡಾಲಿ ಧನಂಜಯನ ಲೋಕ 6
16. ಋಷಿ ಮುನಿಗಳ ನೀರಿನ ಮಡಿಕೆ 4
17. ಕೆ. ವಿಜಯರಾಂ ನಿರ್ದೇಶನದ ಉಸುಕಿನ ಕೊಂಡಿ 7

ವಿಜೇತರು: ಅಖಿಲಾ ಎಂ.ಎ., #206, ಮಿಸ್ಟಿ ವುಡ್ಸ್, ಕೆ.ಸಿ.ನಗರ, ಮೈಸೂರು-11

ಸಿನಿ ಪದಬಂಧ 470ರ ಸರಿ ಉತ್ತರ

ರಾ	ಮ	ನ	ಅ	ವ	ತಾ	ರ		ಅ		ಮ
		ರ			ಯಿ			ಭಿ		ದ
ಹೂ	ವು	ಹ	ಣ್ಣು		ಕ	ನ	ಸಿ	ನ	ಲೋ	ಕ
		ರಿ			ನ			ಯ		ರಿ
ರ	ವಿ	ಶಾ	ಸ್ತ್ರೀ		ಸು	ಪ	ರ್ಣ			ನಾ
ತ್ನ		ಸ್ತ್ರೀ						ಬೆಂ		ಯ
ಗಿ			ಸ	ಮ	ರ		ನಾ	ಗ	ಲೋ	ಕ
ರಿ		ಆ			ಕ್ತ			ಳೂ		
ರ	ಕ್ಷ	ಕ	ರ	ಕ್ಷ	ಕ		ಕು	ರು	ಕ್ಷೇ	ತ್ರ
ಹ		ಸ್ಮಿ			ಣ್ಣೀ			ಭೂ		
ಸ್ಯ		ಕ		ನೂ	ರು	ನೂ	ರು	ತ	ರ	ಹ

ಮೇಲಿನಿಂದ ಕೆಳಕ್ಕೆ

2. ರಘುವೀರ್ – ಶ್ರಾವಂತಿ ಅಭಿನಯದ ಚಿತ್ರ 6
3. ಯೋಗೀಶ್ ಹುಣಸೂರು ಅವರ ರಕ್ತ ವರ್ಣದ ಮೋಡ 5
4. ಪ್ರಭಾಕರ್ ಸೆರೆಯಿಂದ ಬಿಡುಗಡೆಯಾಗಲು ಕೆ.ವಿ.ರಾಜು ನಿರ್ದೇಶಕ 4
5. ಆಡಳಿತ ಪಕ್ಷದ ಚಿಹ್ನೆ ಬಗ್ಗಡದಲ್ಲಿದೆ 7
8. ರಘುವೀರನ ಜೀವನದಿಯ ದಡ 7
10. "_ _ _ _ _ _ ನ್ಯಾಯ ದೇಗುಲ ಚೆಲುವೆ ದೇವರು.....," 6
12. ರಾಮ್ ಗೋಪಾಲ್ ಶರ್ಮಾ ಅವರ ರುಧಿರ ಇತಿಹಾಸ ಇಲ್ಲಿ ತಲೆಕೆಳಗು 5
14. _ _ _ _ ಸೇನ್ 4

'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ವರುಣದಲ್ಲಿ ಮುಂದುವರೆದ ಸೋಮಣ್ಣ ಮತಬೇಟೆ

ವಿವಿಧ ಗ್ರಾಮಗಳಲ್ಲಿ ರೋಡ್ ಶೋ ಮೂಲಕ ಮತಯಾಚನೆ



ತಿ.ನರಸೀಪುರ, ಏ.27– ಸಚಿವ ವಿ.ಸೋಮಣ್ಣ ವರುಣ ಕ್ಷೇತ್ರದಲ್ಲಿ ಮತಬೇಟೆ ಮುಂದುವರೆಸಿದ್ದು, ಗುರುವಾರ ಕ್ಷೇತ್ರ ವ್ಯಾಪ್ತಿಯಲ್ಲಿ ರೋಡ್ ಶೋ ಮೂಲಕ ಮತಯಾಚಿಸಿದರು.

ವಿವಿಧ ಗ್ರಾಮಗಳಲ್ಲಿ ಸೋಮಣ್ಣ ಅವರಿಗೆ ಭರ್ಜರಿ ಸ್ವಾಗತ ಕೋರಿದ ಗ್ರಾಮಸ್ಥರು ಜೆಸಿಬಿ ಮೂಲಕ ಪುಷ್ಪವೃಷ್ಟಿಗೈದು, ಪಟಾಕಿ ಸಿಡಿಸಿ, ಸ್ವಾಗತ ಕೋರಿದರು. ಗ್ರಾಮದಲ್ಲಿ ಮಿಂಚಿನ ಸಂಚಾರ ನಡೆಸಿದ ಸೋಮಣ್ಣ ಮಹಿಳೆಯರು, ಯುವಕರು ಸೇರಿದಂತೆ ಗ್ರಾಮಸ್ಥರಿಗೆ ಕೈ ಮುಗಿದು ಬಿಜೆಪಿಗೆ ಮತ ಹಾಕುವಂತೆ ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಸೋಮಣ್ಣ, ವರುಣ ಜನತೆಗೆ ಸಮರ್ಪಕ ಮೂಲ ಸೌಕರ್ಯ ದೊರೆತಿಲ್ಲ. ವರುಣ ಮೈಸೂರಿನ ಹೃದಯ ಭಾಗವಾಗಿದ್ದು, ಬೆಂಗಳೂರು ನಗರದಂತೆ ಬೆಳೆಯುವ ಎಲ್ಲಾ ಅರ್ಹತೆ ಹೊಂದಿದ್ದರೂ ಇಲ್ಲಿನ ಜನನಾಯಕರು ಆ ಬಗ್ಗೆ ಚಿಂತಿಸಿಲ್ಲ. ಹೀಗಾಗಿ ಈ ಬಾರಿ ನನಗೊಂದು ಅವಕಾಶ ಮಾಡಿಕೊಡಿ. ನಿಮ್ಮ ಒಂದು ಓಟಿಗಿರುವ ಶಕ್ತಿಯನ್ನು ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ ಮಾಡುವ ಮೂಲಕ ತೋರಿಸುತ್ತೇನೆ ಎಂದರು.

ವರುಣದಲ್ಲಿ ಆಗಬೇಕಿರುವ ಅಭಿವೃದ್ಧಿ ಕಾರ್ಯಗಳು ಸಾಕಷ್ಟಿವೆ. ಮಾಜಿ ಮುಖ್ಯಮಂತ್ರಿಗಳ ಕ್ಷೇತ್ರದಲ್ಲಿ ಸಮಸ್ಯೆಗಳಿರುವುದು ನನ್ನ ಗಮನಕ್ಕೆ ಬಂದಿದೆ. ಈ ಬಾರಿ ನನಗೆ ಕ್ಷೇತ್ರದ ಜನತೆ ಅವಕಾಶ ಮಾಡಿಕೊಟ್ಟರೆ ಸಮಸ್ಯೆ ಮುಕ್ತ ಕ್ಷೇತ್ರ ಮಾಡುತ್ತೇನೆ ಎಂದ ಸೋಮಣ್ಣ, ಒಟ್ಟಾರೆ ಕ್ಷೇತ್ರದ ಜನತೆ ಬದಲಾವಣೆ ಬಯಸಿದ್ದು ನನಗೆ ಆಶೀರ್ವದಿಸುವ ಭರವಸೆ ಇದೆ ಎಂದರು.

ಸಂಸದ ಪ್ರತಾಪ್ ಸಿಂಹ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡಿದ್ದಾರೆ. ಈ ಹಿಂದೆ ಮೈಸೂರಿಗೆ ಬರುತ್ತಿದ್ದ ಮೂರು ಮತ್ತೊಂದು ರೈಲಿನ ಸಂಖ್ಯೆಯನ್ನು 20ಕ್ಕೇರಿಸಿ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಿ ಕೊಟ್ಟಿದ್ದಾರೆ. ಮೈಸೂರು–ಬೆಂಗಳೂರು ದಶಪಥ ರಸ್ತೆ ನಿರ್ಮಾಣದಲ್ಲಿ ಸಿಂಹರ ಕೊಡುಗೆ ಅಪಾರವಾಗಿದ್ದು, ಇಡೀ ವಿಶ್ವವೇ ಕರ್ನಾಟಕದತ್ತ ತಿರುಗಿ ನೋಡುವಂತ ಕೆಲಸ ಮಾಡಿದ್ದಾರೆ ಎಂದು ಪ್ರತಾಪ್ ಸಿಂಹ ಅವರನ್ನು ಸೋಮಣ್ಣ ಹಾಡಿ ಹೊಗಳಿದರು.

> ಸಂಸದ ಪ್ರತಾಪ್ ಸಿಂಹ ಮೈಸೂರು ಜಿಲ್ಲೆಗೆ ನೀಡಿರುವ ಕೊಡುಗೆಗಳು ಅಪಾರವಾಗಿವೆ. ಅಂಥವರು ಬಂದು ಸೋಮಣ್ಣ ಪರವಾಗಿ ಮತಯಾಚನೆ ಮಾಡುತ್ತಿದ್ದಾರೆ. ಅಂದರೆ ಅಭಿವೃದ್ಧಿ ಮಾಡುವ ಜೋಡಿ ಇದು ಎಂದು ಗೊತ್ತಾಗುತ್ತದೆ. ಈ ರೀತಿಯ ನಾಯಕರು ನಮ್ಮ ಪ್ರತಿನಿಧಿಗಳಾದರೆ ನಮಗೆ ಅನುಕೂಲ. ನಮ್ಮಲ್ಲೂ ಅಭಿವೃದ್ಧಿ ಆಗಲಿ ಎಂದರೆ ಇಂಥವರನ್ನು ಆಯ್ಕೆ ಮಾಡೋಣ ಬಿಡಿ. –ಸುಶೀಲಮ್ಮ

ಮುಖಂಡ ಅಪ್ಪಣ್ಣ ಮಾತನಾಡಿ, ಸಂಸದ ಪ್ರತಾಪ್ ಸಿಂಹ ಅವರ ಪ್ರಯತ್ನದಿಂದ ಇಂದು ಪ.ವರ್ಗಕ್ಕೆ ಸೇರಿದ ನಾಯಕ ಜನಾಂಗಕ್ಕೆ ಪ್ರಮಾಣ ಪತ್ರ ದೊರಕುವಂತಾಗಿದೆ. ಸೋಮಣ್ಣ ಅವರು ಅಭಿವೃದ್ಧಿಯ ಹರಿಕಾರರಾಗಿದ್ದು, ಬೆಂಗಳೂರು ಮಾದರಿಯಲ್ಲಿ ವರುಣ ಕ್ಷೇತ್ರವನ್ನು ಅಭಿವೃದ್ಧಿಪಡಿಸುವ ಆಶಯ ಹೊಂದಿದ್ದಾರೆ. ಹಾಗಾಗಿ ನಾಯಕ ಸಮುದಾಯದವರೆಲ್ಲರೂ ಪರಿವಾರ, ನಾಯಕ ಸಮುದಾಯವನ್ನು ಪ.ವರ್ಗಕ್ಕೆ ಸೇರ್ಪಡೆ ಮಾಡಿದ ಬಿಜೆಪಿಗೆ ಮತ ಹಾಕುವ ಮೂಲಕ ಪಕ್ಷದ ಋಣ ತೀರಿಸುವ ಕೆಲಸ ಮಾಡಬೇಕಿದೆ ಎಂದರು.

ಕ್ಷೇತ್ರ ಬಿಜೆಪಿ ಅಧ್ಯಕ್ಷ ಕಲ್ಮಳ್ಳಿ ವಿಜಯಕುಮಾರ್, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ರಂಗಸಮುದ್ರ ಪಿಎಸಿಎಸ್ ಮಾಜಿ ಅಧ್ಯಕ್ಷ ವಾಸುದೇವ್, ವರಕೋಡು ಪ್ರಕಾಶ್, ಆಲಗೂಡು ಪಿಎಸಿಎಸ್ ಅಧ್ಯಕ್ಷ ಬಿ.ವೀರಭದ್ರಪ್ಪ, ಪ್ರಥಮ ದರ್ಜೆ ಗುತ್ತಿಗೆದಾರ ಜಿ.ಮರಳಿ, ಜಯಶಂಕರ್, ಮಹೇಶ್, ಸ್ವಾಮಿ, ಅಪ್ಪಣ್ಣ, ಮಹೇಶ್, ಮೈಮುಲ್ ನಿರ್ದೇಶಕ ಓಂಪ್ರಕಾಶ್, ಮೆಲ್ಲಹಳ್ಳಿ ಮಹದೇವಸ್ವಾಮಿ, ಸಿದ್ದೇಗೌಡ, ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಉಮರ್, ಕೆಂಪಯ್ಯನಹುಂಡಿ ಅಂದಾನಿ ಗೌಡ, ಲಕ್ಷ್ಮೀಶ, ಗ್ರಾಮಸ್ಥರು ಮತ್ತಿತರರಿದ್ದರು.

> ವಿ.ಸೋಮಣ್ಣನವರು ಮೈಸೂರು ಉಸ್ತುವಾರಿ ಸಚಿವರಾಗಿದ್ದಾಗ ಹಲವಾರು ಜನಪರ ಅಭಿವೃದ್ಧಿ ಯೋಜನೆಗಳನ್ನು ತಂದಿದ್ದರು. ಆ ಯೋಜನೆಗಳಿಂದ ನಮಗೆ ಈಗಲೂ ಅನುಕೂಲವಾಗುತ್ತಿದೆ. ಈ ಬಾರಿ ನಾವೆಲ್ಲರೂ ಬಿಜೆಪಿಗೆ ಬೆಂಬಲ ನೀಡುತ್ತೇವೆ.
> –ಕಾವೇರಮ್ಮ

> ಬೆಂಗಳೂರಿನ ಗೋವಿಂದರಾಜನಗರ ಕ್ಷೇತ್ರದಲ್ಲಿ ಸೋಮಣ್ಣ ಸಾಕಷ್ಟು ಅಭಿವೃದ್ಧಿ ಕೈಗೊಂಡಿದ್ದರು. ಅದಕ್ಕೆ ಅವರು ಕ್ಷೇತ್ರವನ್ನು ಬಿಟ್ಟು ಬರಬೇಕಾದಾಗ ಸಾವಿರಾರು ಹೆಣ್ಣು ಮಕ್ಕಳು ಕಣ್ಣೀರು ಹಾಕಿದ್ದರು. ಇದರಿಂದ ಗೊತ್ತಾಗುತ್ತೆ ಸೋಮಣ್ಣ ಎಷ್ಟು ಜನಪರ ವ್ಯಕ್ತಿ ಎಂದು. ಇಂಥವರು ನಮ್ಮ ಮೈಸೂರು ಜಿಲ್ಲಾ ಉಸ್ತುವಾರಿಯಾಗಿದ್ದರು. ಈಗ ಇಲ್ಲೇ ಶಾಸಕರಾದರೆ ನಮಗೆ ಹೆಚ್ಚು ಅನುಕೂಲವಾಗುತ್ತೆ.
> –ಪ್ರಕಾಶ್

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಪ್ರವೀಣ (ಕ): ಬೆ.10.30ಕ್ಕೆ, ಗುರುದೇವ್ ಹೊಯ್ಸಳ (ಕ): ಮ.1.05ಕ್ಕೆ, ದಸರಾ (ತೆ): ಮ.3.45ಕ್ಕೆ, ರಾವಣಾಸುರ (ತೆ): ಸಂ.6.55ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 2	ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಬೆ.11ಕ್ಕೆ, ಮ.1.05ಕ್ಕೆ, ಮ.3.10ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.5.10ಕ್ಕೆ, ರಾ.7.30ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ರಾಮಾಚಾರಿ 2.0 (ಕ): ಬೆ.10.45ಕ್ಕೆ, ಆಗಸ್ಟ್ 16 1947(ತ): ಮ.1.30ಕ್ಕೆ, ಪೆಂಟಗನ್ (ಕ): ಸಂ.4.20ಕ್ಕೆ, ಗುಮ್ರಾಹ್ (ಹಿಂ): ರಾ.7.30ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಗುರುದೇವ್ ಹೊಯ್ಸಳ (ಕ): ಬೆ.10.50ಕ್ಕೆ, ರಾ.7.40ಕ್ಕೆ, ರಾ.10.15ಕ್ಕೆ, ವೀರಂ (ಕ): ಮ.1.30ಕ್ಕೆ, ಸಂ.4.35ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಗುರುದೇವ್ ಹೊಯ್ಸಳ (ಕ): ಬೆ.10.20ಕ್ಕೆ, ವೀರಂ (ಕ): ಮ.1.05ಕ್ಕೆ, ರಾ.7.15ಕ್ಕೆ, ರಾವಣಾಸುರ (ತೆ): ಸಂ.4.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಬೆ.10.25ಕ್ಕೆ, ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಮ.12.45ಕ್ಕೆ, ಸಂ.5.40ಕ್ಕೆ, ರಾ.7.50ಕ್ಕೆ, ರಾಮಾಚಾರಿ 2.0(ಕ): ಮ.2.55ಕ್ಕೆ, ದಸರಾ (ತೆ): ರಾ.10ಕ್ಕೆ.
ಸ್ಕ್ರೀನ್ 3	ವೀರಂ (ಕ): ಬೆ.10.10ಕ್ಕೆ, ರಾವಣಾಸುರ (ತೆ): ಮ.1.25ಕ್ಕೆ, ಗುರುದೇವ ಹೊಯ್ಸಳ (ಕ): ಸಂ.4.20ಕ್ಕೆ, ರಾ.9.50ಕ್ಕೆ, ನಮ್ ನಾಣಿ ಮದುವೆ ಪ್ರಸಂಗ (ಕ): ರಾ.7.05ಕ್ಕೆ.
ಸ್ಕ್ರೀನ್ 4	ಪ್ರವೀಣ (ಕ): ಬೆ.11.10ಕ್ಕೆ, ಗುರುದೇವ ಹೊಯ್ಸಳ (ಕ): ಮ.1.45ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.4.30ಕ್ಕೆ, ರಾ.10.20ಕ್ಕೆ, ಪೆಂಟಗನ್ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ಏಜೆಂಟ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಘವೇಂದ್ರ ಸ್ಟೋರ್ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಸಿಕಾ ಬೈ ಕಿಸಿಕಿ ಜಾನ್ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ರಾಘು (ಕ)	4 ಪ್ರದರ್ಶನಗಳು
ಗಾಯಿತ್ರಿ	
ಪಿಎಸ್–2 (ತ)	4 ಪ್ರದರ್ಶನಗಳು
ರಾಜ್‌ಕಮಲ್	
ಪಟಾಣ್ (ಹಿ)	4 ಪ್ರದರ್ಶನಗಳು
ಸಂಗಂ	
ಏಜೆಂಟ್ (ತೆ)	4 ಪ್ರದರ್ಶನಗಳು
ಲಿಡೋ	
ಉಂಡೆನಾಮ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ರುದ್ರಂ (ತ)	4 ಪ್ರದರ್ಶನಗಳು
ಪ್ರಭಾ	
ರಾಘು (ಕ)	4 ಪ್ರದರ್ಶನಗಳು

ವರುಣ ಬಿಜೆಪಿ ಅಭ್ಯರ್ಥಿ ಸೋಮಣ್ಣ ಪ್ರಚಾರ ವೇಳೆ ಸಿದ್ದರಾಮನಹುಂಡಿ ಬಳಿ ಬಿಜೆಪಿ ಕಾರ್ಯಕರ್ತನ ಮೇಲೆ ಹಲ್ಲೆ

ಕಾಂಗ್ರೆಸ್ ಕಾರ್ಯಕರ್ತರಿಂದ ಹಲ್ಲೆ: ಬಿಜೆಪಿ



ಮೈಸೂರು, ಏ.27–ವರುಣ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಪ್ರಚಾರ ನಡೆಸುತ್ತಿದ್ದ ವೇಳೆ ಕ್ಷುಲ್ಲಕ ಕಾರಣಕ್ಕೆ ಘರ್ಷಣೆ ನಡೆದು ಬಿಜೆಪಿ ಕಾರ್ಯಕರ್ತನೊಬ್ಬ ಗಾಯಗೊಂಡಿರುವ ಬಗ್ಗೆ ವರದಿಯಾಗಿದೆ.

ಕೀಳನಪುರ ಗ್ರಾಮದ ನಾಗೇಶ್ ಗಾಯಗೊಂಡು, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಈತ ಪ್ರಚಾರಕ್ಕೆ ಕಾರಿನಲ್ಲಿ ಬರುತ್ತಿದ್ದ ವೇಳೆ ಸಿದ್ದರಾಮಯ್ಯನವರ ಸ್ವಗ್ರಾಮ ಸಿದ್ದರಾಮನ ಹುಂಡಿ ಬಳಿ ಅದೇ ಗ್ರಾಮದ ರೇವಣ್ಣ ಎಂಬಾತನ ಬೈಕ್‌ಗೆ ಕಾರು ಟಚ್ ಆದ ಹಿನ್ನೆಲೆಯಲ್ಲಿ ಇಬ್ಬರ ನಡುವೆ ಮಾತಿಗೆ ಮಾತು ಬೆಳೆದು, ಕೊನೆಗೆ ಕೈಗಳಿಂದ ಹೊಡೆದಾಡಿಕೊಂಡಿದ್ದಾರೆ. ಈ ವೇಳೆ ನಾಗೇಶ್‌ನ ಕೈಗೆ ಪೆಟ್ಟಾಗಿದೆ ಎಂದು ತಿಳಿದು ಬಂದಿದೆ. ಈ ಸಂಬಂಧ ನಾಗೇಶ್ ತಂದೆ ದೂರು ಸಲ್ಲಿಸಿದ್ದು, ಪ್ರಕರಣ ದಾಖಲಿಸಲು ಅನುಮತಿಗಾಗಿ ದೂರನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ.

ಅದೇ ವೇಳೆ ಬಿಜೆಪಿ ಜಿಲ್ಲಾ ಸಹ ವಕ್ತಾರ ಡಾ. ಕೆ.ವಸಂತ ಕುಮಾರ್ ಪತ್ರಿಕಾ ಪ್ರಕಟಣೆ ನೀಡಿದ್ದು, ಸಿದ್ದರಾಮನಹುಂಡಿಯಲ್ಲಿ ಪಕ್ಷದ ಅಭ್ಯರ್ಥಿ ವಿ.ಸೋಮಣ್ಣ ಪ್ರಚಾರ ನಡೆಸುತ್ತಿದ್ದ ವೇಳೆ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪುಟ್ಟಬುದ್ಧಿ ಅವರ ಅಣ್ಣನ ಮಗ ನಾಗೇಶ್ ಎಂಬಾತನ ಮೇಲೆ ಕಾಂಗ್ರೆಸ್ ಬೆಂಬಲಿಗರು ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿದ್ದಾರೆ.

ವರುಣದಲ್ಲಿ ಸಿದ್ದರಾಮಯ್ಯ ಗೆಲುವು ಖಚಿತ

ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ವಿಶ್ವಾಸ



ತಿ.ನರಸೀಪುರ, ಏ.27– ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಯಾರು ಏನೇ ಕುತಂತ್ರ ಮಾಡಿದರೂ ವರುಣದಲ್ಲಿ ಅವರ ಗೆಲುವು ಖಚಿತ ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ವರುಣ ಕ್ಷೇತ್ರ ವ್ಯಾಪ್ತಿಯ ಎಂ.ಸಿ.ಹುಂಡಿ ಗ್ರಾಮದ ಆದಿಜಾಂಬವ ಕಾಲೋನಿಯಲ್ಲಿ ಸಿದ್ದರಾಮಯ್ಯ ಪರ ಮತಯಾಚಿಸಿ ಮಾತನಾಡಿದ ಅವರು, ಕೋಟೆ ಶಿವಣ್ಣ ಸೇರಿದಂತೆ ಹಲವು ಮುಖಂಡರು ಆದಿಜಾಂಬವ ಮತಗಳನ್ನು ವಿಭಜನೆ ಮಾಡಲು ಹೊರಟಿದ್ದು ಅವರ ಪ್ರಯತ್ನಕ್ಕೆ ಯಶಸ್ಸು ಸಿಗುವುದಿಲ್ಲ. ಯಾರು ಏನೇ ಮಾಡಿದರೂ ಸಿದ್ದರಾಮಯ್ಯರಿಗೆ ಯಶಸ್ಸು ಖಚಿತ. ಬಿಜೆಪಿ ಸಿದ್ದರಾಮಯ್ಯ ವಿರುದ್ಧ ದ್ವೇಷದ ರಾಜಕಾರಣ ಮಾಡುತ್ತಿದೆ. ಪ್ರಧಾನಿ ಮೋದಿ ಸೇರಿದಂತೆ ಅಮಿತ್ ಶಾ, ಮುಖ್ಯಮಂತ್ರಿ ಬೊಮ್ಮಾಯಿ ಸೇರಿದಂತೆ ಎಲ್ಲರಿಗೂ ಸಿದ್ದರಾಮಯ್ಯ ಅವರನ್ನು ಸೋಲಿಸುವುದೇ ಟಾರ್ಗೆಟ್. ಹೀಗಾಗಿ ಅವರು ಏನೇ ಕುತಂತ್ರ, ಷಡ್ಯಂತ್ರ ಮಾಡಿದರೂ ಸಿದ್ದರಾಮಯ್ಯ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಲಿದ್ದಾರೆ. ಪ್ರಚಾರದ ವೇಳೆ ಎಲ್ಲಾ ಸಮುದಾಯದವರು ಸಿದ್ದರಾಮಯ್ಯ ಅವರನ್ನು ಬೆಂಬಲಿಸಲು ನಿರ್ಧರಿಸಿದ್ದು, ಅವರು ಯಾವುದೇ ಅನುಮಾನವಿಲ್ಲದೇ ಜಯ ಗಳಿಸಲಿದ್ದಾರೆ ಎಂದರು.

ಜಿಪಂ ಮಾಜಿ ಸದಸ್ಯೆ ಸುಧಾ ಮಹದೇವಯ್ಯ ಮಾತನಾಡಿ, ಕೋಟೆ ಶಿವಣ್ಣ ಅಥವಾ ಸಚಿವ ವಿ.ಸೋಮಣ್ಣ ಈ ಹಿಂದೆ ಕಾಂಗ್ರೆಸ್ ಪಕ್ಷದಲ್ಲೇ ಇದ್ದವರು. ಅವರಿಬ್ಬರೂ ಏನೇ ಕುತಂತ್ರ ಮಾಡಿದರೂ ವರುಣದಲ್ಲಿ ಅವರ ಆಟ ನಡೆಯಲ್ಲ. ಕ್ಷೇತ್ರದಲ್ಲಿ ಯಾರೇ ಬಂದು ಪ್ರಚಾರ ಮಾಡಿದರೂ ಸಿದ್ದರಾಮಯ್ಯರನ್ನು 50 ಸಾವಿರ ಮತಗಳ ಅಂತರದಿಂದ ಗೆಲ್ಲಿಸುವುದಾಗಿ ಮತದಾರರು ಭರವಸೆ ನೀಡಿದ್ದಾರೆ ಹಾಗಾಗಿ ಕೋಟೆ ಶಿವಣ್ಣ ಆದಿಜಾಂಬವರ ಸಭೆ ಕರೆದು ಸೋಮಣ್ಣರಿಗೆ ಮತ ಕೊಡಿಸುವ ಪ್ರಯತ್ನಕ್ಕೆ ಯಶಸ್ಸು ಸಿಗಲ್ಲ ಎಂದರು.

ಈ ವೇಳೆ ವಕೀಲ ಶಿವಪ್ರಸಾದ್, ಡಿಸಿಸಿ ವಕ್ತಾರ ಹುಣಸೂರು ಬಸವಣ್ಣ, ಚಿತ್ರನಟ ಮಹೇಶ್ ದೇವ್, ರಾಜಪ್ಪ, ಸಿದ್ದರಾಜು, ದಾಸಯ್ಯ, ಜಯರಾಮು, ಪ್ರಸನ್ನ, ಪುಟ್ಟಸ್ವಾಮಿ, ಚಿನ್ನಕಲ್ಲಯ್ಯ, ರಂಗಸ್ವಾಮಿ ಮಹದೇವ, ಸುರೇಶ, ಮಾದಪ್ಪ ಮತ್ತಿತರರಿದ್ದರು.

ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಇಪಿಎಫ್ ಕುಂದು–ಕೊರತೆ ಸಭೆ



ಮೈಸೂರು, ಏ.27–ಮೈಸೂರು ತಾಲೂಕು ಕಡಕೊಳದ ಕೈಗಾರಿಕಾ ಪ್ರದೇಶದಲ್ಲಿರುವ ಸಿರೇನ್ ಇಂಡಿಯಾ ಪ್ರೈ.ಲಿ.ನಲ್ಲಿ ಇಪಿಎಫ್‌ಓನ ಕುಂದು–ಕೊರತೆ ಸಭೆ ನಡೆಯಿತು.

ನಿಧಿ ಆಪ್ಕೆ ನಿಕಟ್ 2.0 ಅಡಿ ನಡೆದ ಕಾರ್ಯಕ್ರಮದಲ್ಲಿ ಸಿರೇನ್ ಇಂಡಿಯಾ ಕಂಪನಿಯ ಪ್ಲಾಂಟ್ ಜನರಲ್ ಮ್ಯಾನೇಜರ್ ಹುಜುನ್ ತಕಹಶಿ, ಜನರಲ್ ಮ್ಯಾನೇಜರ್ (ನಿರ್ವಹಣೆ) ಹಿಡಿಯೋಕು ಟೆರಸನಾ, ಎಜಿಎಂ ಪ್ರಸನಾಥ್, ಕಟ್ಕಿ ಕೈಗಾರಿಕಾ ಸಂಘದ ಗೌರವಾಧ್ಯಕ್ಷ ರಾಮಕೃಷ್ಣ ಗೌಡ, ಇಪಿಎಫ್ ಪ್ರಾದೇಶಿಕ ಕಚೇರಿಯಿಂದ ಜಿಲ್ಲಾ ನೋಡಲ್ ಅಧಿಕಾರಿ ಎಸ್.ನಾರಾಯಣ ರಾವ್, ವಿಭಾಗ ಮೇಲ್ವಿಚಾರಕರಾದ ಬಿ.ಸಿ.ಸಂದೀಪ್, ಜೆಟಿಓ ಸುಭಾಷ್ ಕುಮಾರ್ ಸಮಂಟೋ, ಎಸ್‌ಎಸ್‌ಎ ಡಿ.ಮನೋಜ್ ಕುಮಾರ್ ಅವರ ಸಮ್ಮುಖದಲ್ಲಿ ಉದ್ಯೋಗದಾತರು, ಉದ್ಯೋಗಿಗಳು ಮತ್ತು ಪಿಂಚಣಿದಾರರು ತಮ್ಮ ಕುಂದು–ಕೊರತೆಗಳನ್ನು ತಿಳಿಸಿ, ಪರಿಹಾರ ಕಂಡುಕೊಂಡರು.

ಕಾಂಗ್ರೆಸ್ ತೊರೆದ ಮುಖಂಡರು ಜೆಡಿಎಸ್ ಸೇರ್ಪಡೆ



ಬೆಟ್ಟದಪುರ, ಏ.27– ಪಿರಿಯಾಪಟ್ಟಣ ಒಕ್ಕಲಿಗ ಯುವ ವೇದಿಕೆ ಅಧ್ಯಕ್ಷ ಎಸ್.ಆರ್.ದಿನೇಶ್ ಹಾಗೂ ಬೆಂಬಲಿಗರು ಕಾಂಗ್ರೆಸ್ ತೊರೆದು ಶಾಸಕ ಕೆ.ಮಹದೇವ್ ನೇತೃತ್ವದಲ್ಲಿ ಗುರುವಾರ ಜೆಡಿಎಸ್‌ಗೆ ಸೇರ್ಪಡೆಗೊಂಡರು.

ಬಳಿಕ ಮಾತನಾಡಿದ ದಿನೇಶ್, ಕಳೆದ 25 ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದಿದ್ದೇನೆ. ಆದರೆ ಪ್ರಾಮಾಣಿಕವಾಗಿ ದುಡಿದವರಿಗೆ ಆ ಪಕ್ಷದಲ್ಲಿ ಬೆಲೆ ಇಲ್ಲ. ಕಾಂಗ್ರೆಸ್ ಮುಖಂಡರು ಒಕ್ಕಲಿಗ ಜನಾಂಗವನ್ನು ಕೇವಲ ಓಟ್ ಬ್ಯಾಂಕ್ ಆಗಿ ಬಳಸಿಕೊಳ್ಳುತ್ತಿದ್ದಾರೆ. 30 ವರ್ಷ ಶಾಸಕರಾಗಿದ್ದ ಕೆ. ವೆಂಕಟೇಶ್ ಅವರು ಒಕ್ಕಲಿಗ ಜನಾಂಗದ ಅಭಿವೃದ್ಧಿಗೆ ಶ್ರಮಿಸಲಿಲ್ಲ. ಒಕ್ಕಲಿಗರ ಅಭಿವೃದ್ಧಿ ಏನಿದ್ದರೂ ಜೆಡಿಎಸ್ ನಾಯಕ ಶಾಸಕ ಕೆ.ಮಹದೇವ್ ಅವರಿಂದ ಸಾಧ್ಯ. ಹೀಗಾಗಿ ಪಿರಿಯಾಪಟ್ಟಣ ತಾಲೂಕಿನ ಒಕ್ಕಲಿಗ ಸಮುದಾಯದವರು ಶಾಸಕ ಮಹದೇವ್ ಅವರನ್ನು ಬೆಂಬಲಿಸಬೇಕು ಎಂದರು.

ಕಾಂಗ್ರೆಸ್ ನಾಯಕರ ಧೋರಣೆಯಿಂದ ಬೇಸತ್ತು, ಶಾಸಕ ಕೆ.ಮಹದೇವ್ ಹಾಗೂ ಮನ್‌ಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ ಅವರ ಜನಪರ ಕಾರ್ಯ ಮೆಚ್ಚಿ ನನ್ನ ಬೆಂಬಲಿಗರೊಂದಿಗೆ ಜೆಡಿಎಸ್‌ಗೆ ಸೇರ್ಪಡೆಗೊಂಡಿದ್ದೇನೆ ಎಂದರು.

ಇದೇ ಶಾಸಕ ಕೆ.ಮಹದೇವ್ ಹಾಗೂ ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ ಅವರು ದಿನೇಶ್ ಹಾಗೂ ಅವರ ಬೆಂಬಲಿಗರನ್ನು ಪಕ್ಷಕ್ಕೆ ಆತ್ಮೀಯವಾಗಿ ಬರಮಾಡಿಕೊಂಡು ಒಕ್ಕಲಿಗ ಸಮುದಾಯದ ಅಭಿವೃದ್ಧಿಗೆ ಶ್ರಮಿಸುವುದಾಗಿ ತಿಳಿಸಿದರು.

ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ಅಣ್ಣಯ್ಯಶೆಟ್ಟಿ, ಶಾಸಕರ ಸಹೋದರ ಸುರೇಶ್, ಮುಖಂಡರಾದ ಗಗನ್, ಮಹೇಶ್, ಪ್ರವೀಣ್, ಗೋವಿಂದೇಗೌಡ, ನಿವೃತ್ತ ಪ್ರಾಂಶುಪಾಲ ರವಿಕುಮಾರ್, ನಿರಂಜನ್, ಕೆಂಪಣ್ಣ, ಕುಮಾರ್, ಸಂತೋಷ್, ಜಿಲ್ಲಾ ಬ್ಯಾಂಕ್ ನಿರ್ದೇಶಕ ರವಿ, ಜಿಪಂ ಮಾಜಿ ಸದಸ್ಯ ಚಂದ್ರೇಶ್, ತಾಪಂ ಮಾಜಿ ಅಧ್ಯಕ್ಷ ತಿಮ್ಮನಾಯಕ, ಸದಸ್ಯರಾದ ರಘುನಾಥ್, ಬೆಟ್ಟದಪುರ ಡೈರಿ ಅಧ್ಯಕ್ಷ ಶಿವು, ಜೆಡಿಎಸ್ ಮುಖಂಡ ರಾಜೇಂದ್ರ, ಡೈರಿ ಮಾಜಿ ಅಧ್ಯಕ್ಷ ಮಹದೇವಪ್ಪ ಸೇರಿದಂತೆ ಹಲವರಿದ್ದರು.

ಮತದಾರರ ತೀರ್ಪಿಗೆ ತಲೆ ಬಾಗುವೆ: ಹರ್ಷವರ್ಧನ್



ನಂಜನಗೂಡು, ಏ.27– ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲೂ ಅಭಿವೃದ್ಧಿ ಕೆಲಸ ಮಾಡಿರುವ ಬಗ್ಗೆ ಶ್ವೇತಪತ್ರ ಹೊರಡಿಸಿ ಚುನಾವಣೆ ಎದುರಿಸುತ್ತಿದ್ದೇನೆ. ಕೊನೆಗೆ ಮತದಾರರ ತೀರ್ಪಿಗೆ ತಲೆ ಬಾಗುತ್ತೇನೆ ಎಂದು ಶಾಸಕ ಬಿ.ಹರ್ಷವರ್ಧನ್ ಹೇಳಿದರು.

ತಾಲೂಕಿನ ದೇವರಸನಹಳ್ಳಿ, ಹೊಸೂರು, ಉಪ್ಪನಹಳ್ಳಿ, ಮಾಡ್ರಳ್ಳಿ, ಗುಣತಗಾಲ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದ ಅವರು, ನಂ.ಗೂಡನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಸ್ಯಾಟಲೈಟ್ ಟೌನ್ ಆಗಿ ನಿರ್ಮಿಸಬೇಕೆಂಬುದು ವಿ.ಶ್ರೀನಿವಾಸ ಪ್ರಸಾದ್ ಅವರ ಕನಸಾಗಿದ್ದು, ಅದನ್ನು ನನಸು ಮಾಡಲು ಈ ಬಾರಿ ಮತ್ತೊಮ್ಮೆ ಆಶೀರ್ವದಿಸುವಂತೆ ಅವರು ಮನವಿ ಮಾಡಿದರು. ಪ್ರಧಾನಿ ಮೋದಿ ಮೇ 6ರಂದು ನಂಜನಗೂಡಿಗೆ ಆಗಮಿಸಿ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಹ ಆಗಮಿಸಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡುವರು. ಅಭಿವೃದ್ಧಿ ಕೆಲಸಗಳಿಂದ ಜನರು ನನ್ನನ್ನು ಕೈ ಬಿಡುವುದಿಲ್ಲ ಎಂಬ ಅಚಲ ವಿಶ್ವಾಸವಿದ್ದು ಕ್ಷೇತ್ರದಲ್ಲಿ ಈ ಬಾರಿ ನನ್ನ ಗೆಲುವು ನಿಶ್ಚಿತ ಎಂದರು.

ಈ ವೇಳೆ ತಾಲೂಕು ಬಿಜೆಪಿ ಅಧ್ಯಕ್ಷ ಪಿ.ಮಹೇಶ್, ಬಿಜೆಪಿ ರಾಜ್ಯ ಮುಖಂಡ ಸುಬ್ಬಣ್ಣ, ಮಾಜಿ ಸದಸ್ಯ ಎಸ್.ಎಂ.ಕೆಂಪಣ್ಣ, ಮುಖಂಡರಾದ ಗುರುಸ್ವಾಮಿ, ಮಹದೇವ್, ಸುರೇಶ್, ಗೋವರ್ಧನ್, ಶ್ಯಾಮ್ ಪಟೇಲ್ ಸೇರಿದಂತೆ ಇತರರಿದ್ದರು.

ಶಾಸಕ ಅನಿಲ್ ಪರ ದರ್ಶನ್ ಧ್ರುವ ಪ್ರಚಾರ



ಹೆಚ್.ಡಿ.ಕೋಟೆ, ಏ.27– ರಾಜ್ಯ ಹಾಗೂ ಕೇಂದ್ರದಲ್ಲಿ ಅಧಿಕಾರದಲ್ಲಿರುವ ಕೋಮುವಾದಿ ಶಕ್ತಿಯನ್ನು ಮಟ್ಟಹಾಕಲು ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಬೇಕು ಎಂದು ನಂಜನಗೂಡು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ತಾಲೂಕಿನ ವಿವಿಧೆಡೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಅನಿಲ್ ಚಿಕ್ಕಮಾದು ಅವರ ಪರ ಪ್ರಚಾರ ನಡೆಸಿ ಮಾತನಾಡಿದ ಅವರು, ನನ್ನ ತಂದೆ ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಕೋಟೆ ಕ್ಷೇತ್ರದ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು. ಅವರು ಸಂಸದರಾಗಿದ್ದ ವೇಳೆ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದರು.

ನಮ್ಮ ತಂದೆಯ ಹಾದಿಯಲ್ಲೇ ನಡೆಯುತ್ತಿರುವ ಶಾಸಕ ಅನಿಲ್ ಚಿಕ್ಕಮಾದು ಅಭಿವೃದ್ಧಿ ಕಾರ್ಯಗಳನ್ನು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಕಳೆದ 5 ವರ್ಷಗಳಲ್ಲಿ ಸಾಕಷ್ಟು ಅನುದಾನ ತಂದು ಕ್ಷೇತ್ರವನ್ನು ಅಭಿವೃದ್ಧಿಗೊಳಿಸಿದ್ದಾರೆ. ರಾಜ್ಯದಲ್ಲಿ ಈ ಬಾರಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದು ಖಚಿತ. ಹೀಗಾಗಿ ಕ್ಷೇತ್ರ ಮತ್ತಷ್ಟು ಅಭಿವೃದ್ಧಿ ಹೊಂದಬೇಕಾದರೆ ಕ್ಷೇತ್ರದಲ್ಲಿ ಅನಿಲ್ ಚಿಕ್ಕಮಾದು ಅವರು ಮತ್ತೊಮ್ಮೆ ಗೆಲ್ಲುವುದು ಅನಿವಾರ್ಯ. ಹೀಗಾಗಿ ಈ ಬಾರಿ ಅನಿಲ್ ಅವರನ್ನು ಗೆಲ್ಲಿಸುವ ಮೂಲಕ ನಮ್ಮನ್ನು ಅಗಲಿದ ದಿ.ಆರ್.ಧ್ರುವನಾರಾಯಣ್ ಅವರ ಆತ್ಮಕ್ಕೆ ಶಾಂತಿ ನೀಡುವಂತೆ ಮನವಿ ಮಾಡಿದರು.

ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ನನ್ನ ಅಧಿಕಾರವಧಿಯಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದಂತೆ ಎಲ್ಲಾ ವರ್ಗದವರ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವುದರಿಂದ ಕ್ಷೇತ್ರವನ್ನು ಮತ್ತಷ್ಟು ಅಭಿವೃದ್ಧಿಗೊಳಿಸಲು ಮತ್ತೊಂದು ಅವಕಾಶ ಕಲ್ಪಿಸಿಕೊಡಬೇಕು ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನಾ ಶಾಸಕ ಅನಿಲ್ ಪರ ಚುನಾವಣಾ ಪ್ರಚಾರಕ್ಕೆ ಆಗಮಿಸಿದ ದರ್ಶನ್ ಅವರಿಗೆ ದಿ.ಆರ್.ಧ್ರುವನಾರಾಯಣ್ ಅಭಿಮಾನಿಗಳು ತಾಲೂಕಿನ ಕಂಚಮಳ್ಳಿ ಬಳಿ ಅದ್ಧೂರಿ ಸ್ವಾಗತ ಕೋರಿದರು. ಇದೇ ವೇಳೆ ದರ್ಶನ್, ಶಾಸಕ ಅನಿಲ್ ಜೊತೆ ತೆರೆದ ವಾಹನದಲ್ಲಿ ಮಹದೇವನಗರ, ಸಿದ್ದಯ್ಯನಹುಂಡಿ, ಕೊಹಳಾ, ಹಂಪಾಪುರ, ಹೊಮ್ಮರಗಳ್ಳಿ, ಕರಿಗಳ, ಕೋಳಗಾಲ, ಹೊಳೆಹುಂಡಿ, ಮಾದಪುರ, ಹೈರಿಗೆ, ಮಟಕೆರೆ, ಹ್ಯಾಂಡ್ ಪೋಸ್ಟ್, ಯರಹಳ್ಳಿ, ಕೊಲ್ಲೇಗೌಡನಹಳ್ಳಿ, ಶೀರನಹುಂಡಿ, ನೂರಲಕುಪ್ಪೆ, ಅಂತರಸಂತೆ, ಜಕ್ಕಹಳ್ಳಿ, ದೇವಲಪುರ, ತುಂಬಸೋಗೆ, ಸರಗೂರು ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮತಯಾಚಿಸಿದರು.

ಈ ವೇಳೆ ಪುರಸಭಾ ಸದಸ್ಯರಾದ ಹೆಚ್.ಸಿ.ನರಸಿಂಹಮೂರ್ತಿ, ಪ್ರೇಮ್, ನಂಜನಗೂಡು ಕೆಪಿಸಿಸಿ ಉಸ್ತುವಾರಿ ಸೋಮೇಶ್, ಜಿಪಂ ಮಾಜಿ ಸದಸ್ಯ ಹೆಚ್.ಸಿ.ಮಂಜುನಾಥ್, ಬಸವರಾಜು, ಬಸವರಾಜು, ಸಿರಾಜ್, ಸಣ್ಣ ಕುಮಾರ್, ನವೀನ್ ದಾಸ್, ಪ್ರದೀಪ್, ಜಯರಾಮ್, ಆನಂದ್, ಶಂಭುಲಿಂಗನಾಯಕ, ಕಾಳಿಂಗೇಗೌಡ, ಸುಬ್ರಹ್ಮಣ್ಯ, ಸತೀಶ್‌ಗೌಡ, ಗಣೇಶಾಚಾರಿ, ಸಿದ್ದರಾಮು, ಫಯಾಜ್, ನಯಾಜ್ ಇದ್ದರು.

ದಲಿತ ನಾಯಕನ ಹೆಸರೇಳಿ ಕಾಂಗ್ರೆಸ್ ಸುಳ್ಳು ಆಶ್ವಾಸನೆ

ವಿವಿಧ ಗ್ರಾಮಗಳಲ್ಲಿ ಪ್ರಚಾರ ನಡೆಸಿ ಸಾ.ರಾ.ಮಹೇಶ್ ಅಸಮಾಧಾನ



ಕೆ.ಆರ್.ನಗರ, ಏ.27– ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಮುಖ್ಯಮಂತ್ರಿ ಮಾಡದೆ ರಾಜ್ಯ ಮತ್ತು ದೇಶದಲ್ಲಿ ನೆಲ ಕಚ್ಚಿರುವ ಸಂದರ್ಭ ದಲಿತ ನಾಯಕನ ಹೆಸರೇಳಿಕೊಂಡು ಕಾಂಗ್ರೆಸ್ ಪಕ್ಷ ಸುಳ್ಳು ಆಶ್ವಾಸನೆ ಕೊಡುತ್ತಿರುವುದು ಬೇಸರ ತರಿಸಿದೆ ಎಂದು ಶಾಸಕ ಸಾ.ರಾ.ಮಹೇಶ್ ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕಿನ ಲಾಳಂದೇವನಹಳ್ಳಿಯಲ್ಲಿ ಪ್ರಚಾರ ನಡೆಸಿ ಮಾತನಾಡಿದ ಅವರು, ರಾಜ್ಯದ ಜನತೆ ಎರಡೂ ರಾಷ್ಟ್ರೀಯ ಪಕ್ಷಗಳಿಂದ ಬೇಸತ್ತು ರಾಜ್ಯದ ಉಳಿವಿಗಾಗಿ ಪ್ರಾದೇಶಿಕ ಪಕ್ಷ ಜೆಡಿಎಸ್ ಬೆಂಬಲಿಸುತ್ತಿದ್ದು, ಈ ಬಾರಿ ರಾಜ್ಯದಲ್ಲಿ ಸ್ವಂತ ಬಲದ ಮೇಲೆ ಜೆಡಿಎಸ್ ಅಧಿಕಾರ ಹಿಡಿಯಲಿದೆ ಎಂದರು.

ಈಗಾಗಲೇ ಬಿಜೆಪಿ ಮತ್ತು ಕಾಂಗ್ರೆಸ್ ಮುಖಂಡರು ಜೆಡಿಎಸ್ ಪರ ಒಲವು ತೋರಿದ್ದು ನುಡಿದಂತೆ ನಡೆಯುವ, ದಲಿತರ ಪರವಾಗಿ ಆಡಳಿತ ನಡೆಸುವ ರಾಜ್ಯದ ಪ್ರಾದೇಶಿಕ ಪಕ್ಷದ ಮುಖ್ಯಮಂತ್ರಿ ಅಭ್ಯರ್ಥಿ ಹೆಚ್.ಡಿ.ಕುಮಾರಸ್ವಾಮಿ ನಾಯಕತ್ವ ಒಪ್ಪಿ ಸಾಗರೋಪಾದಿಯಲ್ಲಿ ಜೆಡಿಎಸ್ ಪಕ್ಷ ಸೇರುತ್ತಿದ್ದಾರೆ ಎಂದರು.

ತಾಲೂಕಿನ ಒಂದು ಸಮುದಾಯ ಕಾಂಗ್ರೆಸ್ ಅಭ್ಯರ್ಥಿ ಪರವಾಗಿದ್ದು, ಅಭಿವೃದ್ಧಿಗಿಂತ ಜಾತಿ ಮತ್ತು ಅನುಕಂಪದ ಹೆಸರು ಹೇಳಿಕೊಂಡು ಆ ಅಭ್ಯರ್ಥಿ ಚುನಾವಣೆಯಲ್ಲಿ ಪ್ರಚಾರ ಮಾಡುತ್ತಿದ್ದಾರೆ. ಆದರೆ ನನಗೆ ನಂಬಿಕೆ ಇದೆ. ನನ್ನ ತಾಲೂಕಿನ ಜನತೆ ಬುದ್ಧಿವಂತರಾಗಿದ್ದು, ಅನುಕಂಪಕ್ಕಿಂತ ಅಭಿವೃದ್ಧಿ ಮುಖ್ಯ ಎಂಬುದನ್ನು ಚುನಾವಣೆಯಲ್ಲಿ ಸಾಬೀತು ಮಾಡಲಿದ್ದಾರೆ ಎಂದು ತಿಳಿಸಿದರು.

ವೀರಶೈವ ಲಿಂಗಾಯತ ಮುಖಂಡ ವಸಂತ ಕುಮಾರ್ ಮಾತನಾಡಿ, ಕಳೆದ 25 ವರ್ಷಗಳಿಂದ ತಾಲೂಕಿನ ವೀರಶೈವ ಸಮುದಾಯ ಜೆಡಿಎಸ್ ಪಕ್ಷ ಬೆಂಬಲಿಸುತ್ತಿದ್ದು, ಈ ಬಾರಿಯೂ ಮಾಜಿ ಸಚಿವರು, ಹಾಲಿ ಶಾಸಕ ಸಾ.ರಾ.ಮಹೇಶ್ ಅವರಿಗೆ ಅತಿ ಹೆಚ್ಚು ಮತಗಳನ್ನು ನೀಡುವ ಮೂಲಕ ಮತ್ತೊಮ್ಮೆ ಆಯ್ಕೆ ಮಾಡುತ್ತೇವೆ ಎಂದರು.

ವೀರಶೈವ ಮುಖ್ಯಮಂತ್ರಿಗಳು ಭ್ರಷ್ಟರು ಎಂಬ ಹೇಳಿಕೆ ನೀಡಿರುವ ವಿಪಕ್ಷ ನಾಯಕ ಸಿದ್ದರಾಮಯ್ಯ ಅವರ ಹೇಳಿಕೆ ಖಂಡಿಸದೇ ಪಕ್ಷ ಬೆಂಬಲಿಸುತ್ತೇವೆ ಎನ್ನುತ್ತಿರುವ ಕಾಂಗ್ರೆಸ್‌ನ ವೀರಶೈವ ಲಿಂಗಾಯತ ಮುಖಂಡರಿಗೆ ನಾಚಿಕೆಯಾಗಬೇಕು. ತಮ್ಮ ಬೇಳೆ ಬೇಯಿಸಿಕೊಳ್ಳಲು ಇಡೀ ಸಮುದಾಯವನ್ನು ಬಲಿಪಶು ಮಾಡುವಂತಹ ಕೆಲಸ ಮಾಡಬಾರದು. ತಾಲೂಕಿನ ಎಲ್ಲಾ ಜೆಡಿಎಸ್ ಪಕ್ಷದ ವೀರಶೈವ ಮುಖಂಡರು ನಾಳೆಯಿಂದಲೇ ಪ್ರತಿಯೊಬ್ಬ ವೀರಶೈವರ ಮನೆಗಳಿಗೆ ತೆರಳಿ ಶಾಸಕ ಸಾ.ರಾ.ಮಹೇಶ್ ಅವರ ಪರ ಮತಯಾಚನೆ ಮಾಡುವುದಾಗಿ ತಿಳಿಸಿದರು.

ಇದೇ ವೇಳೆ ಮೂಲೆಪೆಟ್ಲು, ವಡ್ಡರಹಳ್ಳಿ, ಮಾರ್ಚಹಳ್ಳಿ, ಸಾತಿಗ್ರಾಮ, ಹೊಸಹಳ್ಳಿ, ಹಂಗರಬಾಯನಹಳ್ಳಿ, ಬಸವಾಪಟ್ಟಣ, ಬಸವರಾಜಪುರ, ಕ್ರಿಶ್ಚಿಯನ್ ಕೊಪ್ಪಲು, ಡೋರ್ನಹಳ್ಳಿ ಗ್ರಾಮಗಳಲ್ಲಿ ಶಾಸಕರು ಪ್ರಚಾರ ನಡೆಸಿದರು.

ಈ ಸಂದರ್ಭ ತಾಲೂಕು ಜೆಡಿಎಸ್ ಅಧ್ಯಕ್ಷ ಕುಮಾರ್, ರಾಜ್ಯ ಕಾರ್ಯದರ್ಶಿ ಚಂದ್ರಶೇಖರ್, ಗ್ರಾಪಂ ಸದಸ್ಯರಾದ ಬಾಲಾಜಿ ಗಣೇಶ್, ದಾಕ್ಷಾಯಿಣಿ, ವಸಂತ ಶಂಕರ್, ಮುಖಂಡರಾದ ಗಣೇಶ್, ಮೂರ್ತಿ, ಮಧು, ಪ್ರಭಾಕರ್, ಪುಟ್ಟರಾಜು, ಕೆ.ಎಸ್.ರೇವಣ್ಣ, ಮಲ್ಲಪ್ಪ, ಮಹೇಶ್, ಹರೀಶ್, ರವಿ ಸೇರಿದಂತೆ ಇನ್ನಿತರರಿದ್ದರು.

ತಮಿಳು ನಾಡಗೀತೆ ನಿಲ್ಲಿಸಿ ಕನ್ನಡ ನಾಡಗೀತೆ ಹಾಕಿಸಿದ ಶಾಸಕ ಕೆ.ಎಸ್.ಈಶ್ವರಪ್ಪ

ಶಿವಮೊಗ್ಗ, ಏ.27– ಇಲ್ಲಿನ ಎನ್ ಇಎಸ್ ಮೈದಾನದಲ್ಲಿ ಗುರುವಾರ ಮಧ್ಯಾಹ್ನ ಮಾಜಿ ಐಪಿಎಸ್ ಅಧಿಕಾರಿ ಅಣ್ಣಾಮಲೈ ನೇತೃತ್ವದಲ್ಲಿ ಬಿಜೆಪಿಯಿಂದ ಆಯೋಜಿಸಿದ್ದ ತಮಿಳು ಬಾಂಧವರ ಸಮಾವೇಶದಲ್ಲಿ ತಮಿಳುನಾಡು ನಾಡಗೀತೆಯನ್ನು ಅರ್ಧಕ್ಕೆ ತಡೆದ ಶಾಸಕ ಕೆ.ಎಸ್.ಈಶ್ವರಪ್ಪ ಕರ್ನಾಟಕದ ನಾಡಗೀತೆ ಹಾಕಿಸಿದರು.

ಕರ್ನಾಟಕ ವಿಧಾನಸಭೆ ಚುನಾವಣೆ ಸಹ ಉಸ್ತುವಾರಿಯೂ ಆದ ತಮಿಳುನಾಡು ಬಿಜೆಪಿ ಘಟಕದ ಅಧ್ಯಕ್ಷ ಅಣ್ಣಾಮಲೈ ಅವರೊಂದಿಗೆ, ಶಿವಮೊಗ್ಗ ನಗರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಎನ್. ಚನ್ನಬಸಪ್ಪ (ಚೆನ್ನಿ) ಕೂಡ ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಸಮಾವೇಶ ಆರಂಭವಾಗುತ್ತಿದ್ದಂತೆಯೇ ಸಂಘಟಕರು ಈಗ ತಮಿಳು ನಾಡಗೀತೆ ಆರಂಭವಾಗಲಿದೆ. ಎಲ್ಲರೂ ಎದ್ದು ನಿಂತುಕೊಳ್ಳಿ ಎಂದು ಮನವಿ ಮಾಡಿದರು. ಆಗ ಸಮಾವೇಶದಲ್ಲಿ ನೆರೆದವರ ಜೊತೆ ವೇದಿಕೆಯಲ್ಲಿದ್ದ ಈಶ್ವರಪ್ಪ ಸೇರಿದಂತೆ ಗಣ್ಯರು ಎದ್ದು ನಿಂತರು.


ಧ್ವನಿವರ್ಧಕದಲ್ಲಿ ತಮಿಳುನಾಡು ನಾಡಗೀತೆ ಆರಂಭವಾಗುತ್ತಿದ್ದಂತೆಯೇ ಆಸನದ ಬಳಿಯಿಂದ ಡಯಾಸ್ ನತ್ತ ಬಂದ ಈಶ್ವರಪ್ಪ ನಾಡಗೀತೆ ನಿಲ್ಲಿಸುವಂತೆ ಸಂಘಟಕರಿಗೆ ಸೂಚಿಸಿದರು. ಕರ್ನಾಟಕದ ನಾಡಗೀತೆ ಹಾಕಿಸಿದರು. ನಂತರ ವೇದಿಕೆಯಲ್ಲಿದ್ದ ಗಣ್ಯರು ಕನ್ನಡದ ನಾಡಗೀತೆಗೆ ಗೌರವ ಸಲ್ಲಿಸಿದರು. ಕ್ಯಾಸೆಟ್‌ನಲ್ಲಿ ತಮಿಳು ನಾಡಗೀತೆ ಹಾಕುವುದು ಬೇಡ. ಬೇಕಿದ್ದರೆ ಇಲ್ಲಿರುವ ಯಾರಾದರೂ ತಮಿಳು ಹೆಣ್ಣುಮಕ್ಕಳು ಬಂದು ಹಾಡಲಿ ಎಂದು ಈಶ್ವರಪ್ಪ ಹೇಳಿದರೂ ಯಾರೂ ಮುಂದೆ ಬರಲಿಲ್ಲ. ನಂತರ ಕ್ಯಾಸೆಟ್ ಮೂಲಕ ಕನ್ನಡ ನಾಡಗೀತೆ ಬಿತ್ತರಿಸಲಾಯಿತು.

ಇಂದು ಕೆ.ಆರ್.ಕ್ಷೇತ್ರದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರಚಾರ



ಮೈಸೂರು, ಏ.27– ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶುಕ್ರವಾರ ಮೈಸೂರಿನ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಶ್ರೀವತ್ಸ ಪರ ಪ್ರಚಾರ ನಡೆಸಲಿದ್ದಾರೆ. ನವದೆಹಲಿಯಿಂದ ವಿಶೇಷ ವಿಮಾನದಲ್ಲಿ ಬೆಳಿಗ್ಗೆ 11.55ಕ್ಕೆ ಮೈಸೂರಿಗೆ ಆಗಮಿಸಲಿರುವ ಅವರು, ವಿವೇಕಾನಂದ ವೃತ್ತದಲ್ಲಿ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಚಾಮುಂಡಿಬೆಟ್ಟ ತಪ್ಪಲಿನ ಸುತ್ತೂರು ಶಾಖಾ ಮಠದಲ್ಲಿ ಶ್ರೀಗಳ ಭೇಟಿ ನಂತರ ಲಲಿತ ಮಹಲ್ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಶ್ರೀರಂಗಪಟ್ಟಣಕ್ಕೆ ಪ್ರಯಾಣಿಸಲಿದ್ದಾರೆ.









ಜಿ. ಲೋಕೇಶ್ ಕುಮಾರ್ ರವರು

2023ರ ವಿಧಾನಸಭಾ ಚುನಾವಣೆಯ ನರಸಿಂಹರಾಜ ಕ್ಷೇತ್ರದಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ನಾಮ ಪತ್ರ ಸಲ್ಲಿಸಿದ್ದಾರೆ. ಇವರ ಕೆಲವು ಪ್ರಕರಣಗಳು ವಿಚಾರಣೆ ಹಂತದಲ್ಲಿವೆ

(ಎ)	ಸಂಬಂಧ ಪಟ್ಟ ಪೊಲೀಸ್ ಠಾಣೆಯ ಹೆಸರು ಮತ್ತು ವಿಳಾಸದೊಂದಿಗೆ ಎಫ್.ಐ.ಆರ್.ಸಂಖ್ಯೆ	ಮಂಡಿ ಮೊಹಲ್ಲಾ ಸ್ಟೇಷನ್, ಮೈಸೂರು ಸಿ.ಸಿ.ನಂ.1752/2013	ದೇವರಾಜ ಪೊಲೀಸ್ ಠಾಣೆ, ಮೈಸೂರು ಸಿ.ಸಿ.ನಂ.281/2020	ಲಷ್ಕರ್ ಮೊಹಲ್ಲಾ ಮೈಸೂರು ಎಸ್.ಸಿ.ನಂ.207/2019
(ಬಿ)	ನ್ಯಾಯಾಲಯದ ಹೆಸರಿನೊಂದಿಗೆ ಪ್ರಕರಣದ ಸಂಖ್ಯೆ	ಪ್ರಿನ್ಸಿಪಲ್ ಸಿವಿಲ್ ಜಡ್ಜ್ ಅಂಡ್ ಜೆ.ಎಂ.ಎಫ್.ಸಿ ಮೈಸೂರು	4ನೇ ಜೆ.ಎಂ.ಎಫ್.ಸಿ ಮೈಸೂರು	7ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಮೈಸೂರು
(ಸಿ)	ಇದಕ್ಕೆ ಸಂಬಂಧಪಟ್ಟ ಅಧಿನಿಯಮಗಳು/ ಸಂಹಿತೆಗಳು ಪ್ರಕರಣಗಳು (ಪ್ರಕರಣದ ಸಂಖ್ಯೆಯನ್ನು ನೀಡಿರಿ) ಉದಾಹರಣೆಗೆ ಐಪಿಸಿಯ – ಪ್ರಕರಣ ಇತ್ಯಾದಿ)	143,144,147,148, 447,427,353, 504,114,149 of I.P.C	143,147,427,149 of I.P.C	341,323,447, 395 of I.P.C

ಸಹಿ/– ಜಿ.ಲೋಕೇಶ್‌ಕುಮಾರ್, ಪಕ್ಷೇತರ ಅಭ್ಯರ್ಥಿ ನರಸಿಂಹರಾಜ ವಿಧಾನಸಭಾಕ್ಷೇತ್ರ, ಮೈಸೂರು

PUBLIC NOTICE
TO WHOMSOEVER IT MAY CONCERN

My client has negotiated to enter into a scheme of joint development in respect of the immovable property situated in Sy No.87/5 (Old No.87/4) of Dattagalli Village, Kasaba Hobli, Mysuru Taluk, measuring an extent of 2 acres, out of total extent 2 acre 20 guntas which is more fully described in the **SCHEDULE** hereunder and hereinafter referred as **"SCHEDULE PROPERTY"** with one Sri.K.Raghavendra, aged 60 years, son of Sri.B.R.Krishnamurthy, residing at No.406, 14th Main, 6th Cross, Saraswathipuram, Mysore-560 009, (Adhar No.2439 9892 2748), who claims to be the absolute owner of the Schedule Property.

The aforesaid Sri.K.Raghavendra has represented to my client that he is the absolute owner of the Schedule Property being in the actual physical possession and enjoyment of the Schedule Property by exercising all the acts of absolute ownership and complete domain over the same by having clear, marketable and absolute right, title, interest and possession over the Schedule Property. He has further represented that the Schedule Property is free from all or any kind of charges, claims, encumbrances, Court Attachments, injunctions, Minor claims, or any sort of claims of whatsoever nature and there are no court cases or appeals pending in respect of the Schedule Property before any of the court of law and therefore there is no hindrance, impediment or obstacle for the proposed joint development project in respect of the Schedule Property.

Any person/persons claiming to have any sort of right, title, claim, interest, lien or charge over the Schedule Property or any part thereof or any other claims or objections for the proposed joint development agreement, may lodge their objections/claims along with supporting documents with the undersigned within 7 days from the date of publication of this public notice.

If no such objections/claims are received within the prescribed time, my client will proceed with joint development project and if any objections or claims is lodged beyond the prescribed period of time, it shall not be reckoned and it shall be deemed that all objections and claims by whosoever are waived.

SCHEDULE PROPERTY

All that piece and parcel of the immovable property situated in Sy No.87/5 (Old No.87/4) of Dattagalli Village, Kasaba Hobli, Mysuru Taluk, measuring an extent of 2 acres, out of total extent 2 acre 20 guntas and bounded on, **East by:** Lingumbudi Tank, **West by:** Private Property, **North by:** Private Property, **South by:** Road

Sd/- H.S.SOMNATH, Advocate,
No.GF-4, Ground Floor, "Sampurna Chambers", No. 13,
Vasavi Temple Road, V.V.Puram, Mob: +91 98452 76908
Bengaluru - 560 0004, Ph:080-43365303

Date: 24.04.2023

